ಬುಧವಾರ, ಆಗಸ್ಟ್ 21, 2024 | ಬೆಂಗಳೂರು | ₹ 7.00 | ಸಂಪುಟ 77 | ಸಂಚಿಕೆ 233 | ಪುಟ 16


• www.prajavani.net

prajavani.net prajavani prajavani prajavani

ಪ್ರಜಾ ವಾಣಿ

ಅತ್ಯಂತ ವಿಶ್ವಾಸಾರ್ಹ ಕನ್ನಡ ದಿನಪತ್ರಿಕೆ

ತಂತ್ರಜ್ಞಾನ
ನಮ್ಮ ಅಜ್ಞಾನವೇ ಡಿಜಿಟಲ್ ಪೇಮೆಂಟ್ ಮೋಸಗಾರರಿಗೆ ಬಂಡವಾಳ



ಆಳ-ಅಗಲ ಲಿಂಗ ಸಮಾನತೆ ಕನಸಿನ ಗಂಟು?

ನುಡಿಜಾತ್ರೆಗೆ 100 ಎಕರೆ ಜಾಗ ಗುರುತು 5A

ಹಸೀನಾ ಗಡೀಪಾರಿಗೆ ಮಿರ್ಜಾ ಮನವಿ 10

ಪುಟಾಣಿಗಳ ಮೇಲೆ ಲೈಂಗಿಕ ದೌರ್ಜನ್ಯ: ವ್ಯಾಪಕ ಆಕ್ರೋಶ 7

ಸೆನ್ಸೆಕ್ಸ್	ನಿಫ್ಟಿ	₹/$
80,802	24,698	83.78

'ಉಪದೇಶ' ಇದ್ದ ತೀರ್ಪು ವಜಾ

ನವದೆಹಲಿ (ಪಿಟಿಐ): 'ಬಾಲಕಿಯರು ಲೈಂಗಿಕ ಬಯಕೆಗಳನ್ನು ಹತ್ತಿಕ್ಕಿಕೊಳ್ಳಬೇಕು' ಎಂಬ 'ಆಕ್ಷೇಪಾರ್ಹ ಸಲಹೆ' ನೀಡಿ, ಲೈಂಗಿಕ ದೌರ್ಜನ್ಯ ಪ್ರಕರಣದ ಅಪರಾಧಿಯನ್ನು ಖುಲಾಸೆಗೊಳಿಸಿದ್ದ ಕಲ್ಕತ್ತ ಹೈಕೋರ್ಟ್‌ನ ಆದೇಶವನ್ನು 'ಸುಪ್ರೀಂ' ವಜಾಮಾಡಿದೆ. 5

ಇಂದು 'ಭಾರತ ಬಂದ್'ಗೆ ಕರೆ

ನವದೆಹಲಿ (ಪಿಟಿಐ): ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ದಲಿತ, ಆದಿವಾಸಿ ಸಂಘಟನೆಗಳು ಬುಧವಾರ ಭಾರತ ಬಂದ್‌ಗೆ ಕರೆ ನೀಡಿವೆ. 11

ಚಿನಕುರುಳಿ

ಪ್ರಕಾಶ್ ಶೆಟ್ಟಿ



ಅತ್ಯಾಚಾರ ಪ್ರಕರಣದ ತನಿಖೆಯ ವಸ್ತು ಸ್ಥಿತಿ ವರದಿ ಸಲ್ಲಿಸಲು ಸಿಬಿಐಗೆ ಸೂಚನೆ

ಸರ್ಕಾರಕ್ಕೆ 'ಸುಪ್ರೀಂ' ತರಾಟೆ

ಪ್ರಜಾವಾಣಿ ವಾರ್ತೆ/ಪಿಟಿಐ

ನವದೆಹಲಿ: ಕೋಲ್ಕತ್ತದಲ್ಲಿ ವೈದ್ಯ ವಿದ್ಯಾರ್ಥಿನಿಯ ಮೇಲೆ ನಡೆದ ಅತ್ಯಾಚಾರ ಹಾಗೂ ಆಕೆಯ ಹತ್ಯೆ 'ಭಯಾನಕ' ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಿಸಲು ವಿಳಂಬ ಮಾಡಿದ್ದಕ್ಕೆ ಹಾಗೂ ಸರ್ಕಾರಿ ಸ್ವಾಮ್ಯದ ಆರ್.ಜಿ. ಕರ್ ವೈದ್ಯಕೀಯ ಕಾಲೇಜು ಹಾಗೂ ಆಸ್ಪತ್ರೆಯಲ್ಲಿ ಕಿಡಿಗೇಡಿಗಳ ವಿಧ್ವಂಸಕ ಕೃತ್ಯವನ್ನು ತಡೆಯದೆ ಇದ್ದುದಕ್ಕೆ ಪಶ್ಚಿಮ ಬಂಗಾಳ ಸರ್ಕಾರವನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದೆ.

ಶಾಂತಿಯುತವಾಗಿ ಪ್ರತಿಭಟನೆ ನಡೆಸುವವರ ಮೇಲೆ 'ಸರ್ಕಾರದ ಶಕ್ತಿಯನ್ನು ತೋರಿಸಲು ಮುಂದಾಗಬೇಡಿ', ಅವರ ಜೊತೆ ಬಹಳ ಸೂಕ್ಷ್ಮವಾಗಿ ವರ್ತಿಸಬೇಕು ಎಂದು ಪಶ್ಚಿಮ ಬಂಗಾಳ ಸರ್ಕಾರಕ್ಕೆ ಕೋರ್ಟ್ ಮಂಗಳವಾರ ಕಿವಿಮಾತು ಹೇಳಿದೆ.

ವೈದ್ಯರು ಹಾಗೂ ಆರೋಗ್ಯ ಸೇವೆಗಳನ್ನು ಒದಗಿಸುವ ಇತರ ವೃತ್ತಿಪರರ ಸುರಕ್ಷತೆಗಾಗಿ ನಿಯಮಗಳನ್ನು ರೂಪಿಸಲು 10 ಮಂದಿ ಸದಸ್ಯರ ರಾಷ್ಟ್ರೀಯ ಕಾರ್ಯಪಡೆಯನ್ನು ಕೂಡ ಅದು ರಚಿಸಿದೆ. ಈ ಸಮಿತಿಯು ಮೂರು ವಾರಗಳಲ್ಲಿ ಮಧ್ಯಂತರ ವರದಿಯನ್ನು ಸಲ್ಲಿಸಬೇಕಿದೆ. ಅಂತಿಮ ವರದಿ ಸಲ್ಲಿಕೆಗೆ ಎರಡು ತಿಂಗಳ ಗಡುವು ನೀಡಲಾಗಿದೆ.

ನ್ಯಾಯಪೀಠ ಹೇಳಿದ ಮಾತು

- ಕೋಲ್ಕತ್ತದಲ್ಲಿ ನಡೆದಿರುವುದು ಭಯಾನಕವಾದ ಹತ್ಯೆ; ಅದು ವೈದ್ಯರ ಸುರಕ್ಷೆಗೆ ಸಂಬಂಧಿಸಿದಂತೆ ಪ್ರಶ್ನೆಗಳನ್ನು ಎತ್ತಿದೆ
- ದೇಶದಾದ್ಯಂತ, ವಿಶೇಷವಾಗಿ ಸರ್ಕಾರಿ ಆಸ್ಪತ್ರೆಗಳಲ್ಲಿ, ಸುರಕ್ಷಾ ಕ್ರಮಗಳು ಇಲ್ಲ. ಇದು ಕಳವಳಕಾರಿ
- ಪುರುಷ, ಮಹಿಳಾ ವೈದ್ಯರಿಗೆ, ವೈದ್ಯಕೀಯ ಸಿಬ್ಬಂದಿಗೆ ಪ್ರತ್ಯೇಕ ಶೌಚಾಲಯಗಳು ಇಲ್ಲ
- ಮಹಿಳೆಯರು ತಾವು ಕೆಲಸ ಮಾಡುವ ಸ್ಥಳದಲ್ಲಿ ಸುರಕ್ಷಿತವಾಗಿರಲು ಸಾಧ್ಯವಿಲ್ಲ ಎಂದಾದರೆ ನಾವು ಅವರಿಗೆ ಸಮಾನತೆಯನ್ನು ನಿರಾಕರಿಸುತ್ತಿದ್ದೇವೆ ಎಂದೇ ಅರ್ಥ
- ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿರುವವರು ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಅಭಿಪ್ರಾಯ ದಾಖಲಿಸುತ್ತಿರುವವರ ವಿರುದ್ಧ ಪಶ್ಚಿಮ ಬಂಗಾಳ ಸರ್ಕಾರವು ಕಠಿಣ ಕ್ರಮ ಜರುಗಿಸಬಾರದು
- ಪ್ರತಿಭಟನೆಯಲ್ಲಿ ತೊಡಗಿರುವ ವೈದ್ಯರು ಕರ್ತವ್ಯಕ್ಕೆ ಮರಳಬೇಕು. ಅವರ ಸುರಕ್ಷತೆಯು ಬಹಳ ಮಹತ್ವದ್ದು



ಹಿಂದಿನ ಪ್ರಾಂಶುಪಾಲರ ನಡೆಗೆ ಆಕ್ರೋಶ

ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಬಿಂಬಿಸಲು ಯತ್ನಿಸಿದ್ದಕ್ಕಾಗಿ, ಆಕೆಯ ಪಾಲಕರಿಗೆ ಮೃತದೇಹವನ್ನು ನೋಡಲು ಹಲವು ಗಂಟೆ ಬಿಡದೆ ಇದ್ದುದಕ್ಕಾಗಿ ಆರ್.ಜಿ. ಕರ್ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾಗಿದ್ದ ಡಾ. ಸಂದೀಪ್ ಘೋಷ್ ಅವರನ್ನು ಪೀಠವು ತೀವ್ರವಾಗಿ ಟೀಕಿಸಿದೆ.

'ಪ್ರಾಂಶುಪಾಲರು ಏನು ಮಾಡುತ್ತಿದ್ದರು? ಇದನ್ನು ಆತ್ಮಹತ್ಯೆ ಎಂದು ಬಿಂಬಿಸುವ ಯತ್ನ ಹಾಗೂ ಎಫ್‌ಐಆರ್ ದಾಖಲು ಮಾಡದೆ ಇದ್ದುದು ಏಕೆ? ಅಂತ್ಯಸಂಸ್ಕಾರ ನಡೆಸಲು ಮೃತದೇಹವನ್ನು ತಡ ರಾತ್ರಿಯಲ್ಲಿ ಹಸ್ತಾಂತರಿಸಲಾಯಿತು. ಮಾರನೇ ದಿನ ವೈದ್ಯರು ಪ್ರತಿಭಟನೆಗೆ ಮುಂದಾದರು, ಆಸ್ಪತ್ರೆಯ ಬಳಿ ಉದ್ರಿಕ್ತರು ಗುಂಪುಗೂಡಿದ್ದರು. ಆಸ್ಪತ್ರೆಯ ಮೇಲೆ ದಾಳಿ ನಡೆಯಿತು, ಪ್ರಮುಖವಾದ ಪರಿಕರಗಳನ್ನು ಹಾಳುಮಾಡಲಾಯಿತು' ಎಂದು ಪೀಠವು ಹೇಳಿತು.

11ನೇ ಪುಟ ನೋಡಿ

ವೈದ್ಯ ವಿದ್ಯಾರ್ಥಿನಿ ಮೇಲಿನ ಅತ್ಯಾಚಾರ ಹಾಗೂ ಹತ್ಯೆಯನ್ನು ಖಂಡಿಸಿ ದೇಶದಾದ್ಯಂತ ಪ್ರತಿಭಟನೆಗಳು ತೀವ್ರಗೊಳ್ಳುತ್ತಿರುವ ಹೊತ್ತಿನಲ್ಲಿ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಡಿ.ವೈ. ಚಂದ್ರಚೂಡ್ ನೇತೃತ್ವದ ತ್ರಿಸದಸ್ಯ ಪೀಠವು ಈ ತೀರ್ಮಾನ ಪ್ರಕಟಿಸಿದೆ. ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದೀವಾಲಾ ಮತ್ತು ಮನೋಜ್ ಮಿಶ್ರಾ ಅವರೂ ಈ ಪೀಠದಲ್ಲಿದ್ದಾರೆ.

ವಿದ್ಯಾರ್ಥಿನಿ ಮೇಲಿನ ಅತ್ಯಾಚಾರ ಹಾಗೂ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ವಯಂಪ್ರೇರಿತವಾಗಿ ದಾಖಲಿಸಿಕೊಂಡಿರುವ ಪ್ರಕರಣದ ವಿಚಾರಣೆಯನ್ನು ಈ ಪೀಠವು ನಡೆಸುತ್ತಿದೆ.

11ನೇ ಪುಟ ನೋಡಿ

ಹಣಕಾಸಿನ ಅವ್ಯವಹಾರ ಎಸ್‌ಐಟಿ ತನಿಖೆ ಆರಂಭ 11

ಖಾಸಗಿಯವರ ನೇಮಕ ಕೈಬಿಟ್ಟ ಕೇಂದ್ರ ಸರ್ಕಾರ

ನವದೆಹಲಿ (ಪಿಟಿಐ): ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳಲ್ಲಿನ ಉನ್ನತ ಹುದ್ದೆಗಳಿಗೆ ಖಾಸಗಿ ವಲಯದ ಪರಿಣತರನ್ನು 'ಲ್ಯಾಟರಲ್ ಎಂಟ್ರಿ' ಮೂಲಕ ನೇಮಕ ಮಾಡಿಕೊಳ್ಳುವ ಕುರಿತು ಹೊರಡಿಸಿದ್ದ ಜಾಹೀರಾತನ್ನು ಯುಪಿಎಸ್‌ಸಿ ಮಂಗಳವಾರ ವಾಪಸ್ ಪಡೆದುಕೊಂಡಿದೆ.

ಜಾಹೀರಾತು ರದ್ದುಗೊಳಿಸುವಂತೆ ಕೇಂದ್ರ ಸರ್ಕಾರವು, ಯುಪಿಎಸ್‌ಸಿಗೆ ಸೂಚಿಸಿತ್ತು. ಕೇಂದ್ರ ಸಿಬ್ಬಂದಿ ಇಲಾಖೆಯ ರಾಜ್ಯ ಸಚಿವ ಜಿತೇಂದ್ರ ಸಿಂಗ್, ಈ ಸಂಬಂಧ ಯುಪಿಎಸ್‌ಸಿ ಅಧ್ಯಕ್ಷೆ ಪ್ರೀತಿ ಸೂದನ್ ಅವರಿಗೆ ಪತ್ರ ಬರೆದು, ಹಿಂದುಳಿದ ಸಮುದಾಯದವರೂ ಸರ್ಕಾರಿ ಉದ್ಯೋಗಗಳಲ್ಲಿ ತಮ್ಮ ಪ್ರಾತಿನಿಧ್ಯ ಪಡೆಯಬೇಕಿರುವುದರಿಂದ 'ಲ್ಯಾಟರಲ್ ಎಂಟ್ರಿ' ನೇಮಕಾತಿ ಪ್ರಕ್ರಿಯೆಯನ್ನು ಕೈಬಿಡುವಂತೆ ಸೂಚಿಸಿದ್ದರು.

ಸಂವಿಧಾನದ ಶಕ್ತಿಯು 'ಸರ್ವಾಧಿಕಾರಿ ಆಡಳಿತದ ದುರಹಂಕಾರ'ವನ್ನು ಸೋಲಿಸಬಲ್ಲದು ಎಂಬುದನ್ನು ಇದು ತೋರಿಸಿಕೊಟ್ಟಿದೆ

ಮಲ್ಲಿಕಾರ್ಜುನ ಖರ್ಗೆ
ಎಐಸಿಸಿ ಅಧ್ಯಕ್ಷ

ಇನ್ನೊಂದು ಸುದ್ದಿ 5

ಕೆಕೆಆರ್‌ಡಿಬಿ ವಿವೇಚನಾ ಕೋಟಾ

ರಾಜ್ಯಪಾಲರಿಗೆ ₹250 ಕೋಟಿ

• ರಾಜೇಶ್ ರೈ ಚಟ್ಲ

ಬೆಂಗಳೂರು: ರಾಜ್ಯಪಾಲ ಥಾವರಚಂದ್ ಗೆಹಲೋತ್ ಅವರ ವಿವೇಚನೆಯಂತೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ವ್ಯಾಪ್ತಿಯ ವಿಶ್ವವಿದ್ಯಾಲಯಗಳಲ್ಲಿ ₹250 ಕೋಟಿ ವೆಚ್ಚ ಮಾಡುವ ಪ್ರಸ್ತಾವಕ್ಕೆ ರಾಜ್ಯ ಸರ್ಕಾರ ಅನುಮೋದನೆ ನೀಡಿದೆ.

ಕ್ರಿಯಾ ಯೋಜನೆ ತಯಾರಿಸಿ, ಯೋಜನೆ ಅನುಷ್ಠಾನಗೊಳಿಸಲು ರಾಜ್ಯಪಾಲರ ವಿವೇಚನಾ ಕೋಟಾವನ್ನು ಇದೇ ಮೊದಲ ಬಾರಿಗೆ ನೀಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಶಿಫಾರಸಿನಂತೆ ಈ ತೀರ್ಮಾನ ಕೈಗೊಳ್ಳಲಾಗಿದೆ.

ಮಂಡಳಿ ವ್ಯಾಪ್ತಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಕಲಬುರಗಿ, ಬೀದರ್, ಯಾದಗಿರಿ, ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಒಟ್ಟು 41 ವಿಧಾನಸಭಾ ಕ್ಷೇತ್ರಗಳಿವೆ. ಈ ಜಿಲ್ಲೆಗಳಲ್ಲಿ ಪ್ರಸಕ್ತ ಸಾಲಿನಲ್ಲಿ (2024–25) ₹5 ಸಾವಿರ ಕೋಟಿಗೆ ಕ್ರಿಯಾಯೋಜನೆ ರೂಪಿಸಲಾಗಿತ್ತು. ಆದರೆ, ಬಜೆಟ್‌ನಲ್ಲಿ ₹3 ಸಾವಿರ ಕೋಟಿ ಮಾತ್ರ ಒದಗಿಸಲಾಗಿದೆ. ಹಾಗಿದ್ದರೂ ಪೂರ್ಣ ₹5,000 ಕೋಟಿಗೆ ಕ್ರಿಯಾ ಯೋಜನೆ ರೂಪಿಸಲು ಸೂಚಿಸಲಾಗಿತ್ತು.

2024–25ನೇ ಸಾಲಿಗೆ ಕೆಕೆಆರ್‌ಡಿಬಿ ಕ್ರಿಯಾಯೋಜನೆ

₹5,000 ಕೋಟಿ* ಒಟ್ಟು ಅನುದಾನ
*(ಬಜೆಟ್‌ನಲ್ಲಿ ಮಂಜೂರು ಆಗಿರುವುದು ₹3,000 ಕೋಟಿ ಮಾತ್ರ)

₹3,750 ಕೋಟಿ ಮೈಕ್ರೊ, ಮ್ಯಾಕ್ರೊ ಯೋಜನೆಗೆ

₹1,000 ಕೋಟಿ 11 ಇಲಾಖೆಗಳಿಗೆ ಹಂಚಿಕೆ

₹250 ಕೋಟಿ ರಾಜ್ಯಪಾಲರ ವಿವೇಚನೆಗೆ ಮೊತ್ತ

ವಿವೇಚನಾ ಕೋಟಾ ಯಾರಿಗೆ ಎಷ್ಟು

ಕೋಟಾ	ಮೊತ್ತ (₹ ಕೋಟಿಗಳಲ್ಲಿ)
ಮುಖ್ಯಮಂತ್ರಿ	150
ಯೋಜನಾ ಸಚಿವ	150
ಕೆಕೆಆರ್‌ಡಿಬಿ ಅಧ್ಯಕ್ಷ	150
ಒಟ್ಟು	450

5Aನೇ ಪುಟ ನೋಡಿ

₹30 ಲಕ್ಷ ಮೌಲ್ಯದ ನಿಷೇಧಿತ ಇ–ಸಿಗರೇಟ್ ಜಪ್ತಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: ನಿಷೇಧಿತ ಇ–ಸಿಗರೇಟ್ ಮಾರಾಟ ಮಾಡುತ್ತಿದ್ದ ಮೂವರು ಆರೋಪಿಗಳನ್ನು ಗೋವಿಂದಪುರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಅಂಗಡಿ ಮಾಲೀಕ ಕೈಸರ್ ಪಾಷಾ(29), ಕಾರ್ಮಿಕರಾದ ರಬಿಲ್ ಷರೀಫ್(20) ಹಾಗೂ ಮೊಹಮ್ಮದ್ ಅದ್ನಾನ್ (20) ಬಂಧಿತರು.

ಬಂಧಿತರಿಂದ ವಿವಿಧ ಕಂಪನಿಗಳ 1,180 ಇ–ಸಿಗರೇಟ್ ಜಪ್ತಿ ಮಾಡಲಾಗಿದೆ. ಅದರ ಮೌಲ್ಯ ₹30 ಲಕ್ಷ ಎಂದು ಅಂದಾಜಿಸಲಾಗಿದೆ.

'ಕೈಸರ್ ಪಾಷಾ ತನ್ನ ಅಂಗಡಿಯಲ್ಲಿ ಇಬ್ಬರು ಕೆಲಸಗಾರರನ್ನು ನೇಮಿಸಿಕೊಂಡು ಇ–ಸಿಗರೇಟ್ ಮಾರಾಟ ಮಾಡುತ್ತಿದ್ದ. ಕಡಿಮೆ ಬೆಲೆಗೆ ಖರೀದಿಸಿ ಹೆಚ್ಚಿನ ಬೆಲೆಗೆ ನಿರ್ದಿಷ್ಟ ಗ್ರಾಹಕರಿಗೆ ಮಾರಾಟ ಮಾಡುತ್ತಿದ್ದ' ಎಂದು ಪೊಲೀಸರು ಹೇಳಿದರು.

ಹಲವು ಗಂಟೆ ವಾಹನ ಸಂಚಾರಕ್ಕೆ ತೊಂದರೆ • ಮರ ಬಿದ್ದು ಕಾರು ಜಖಂ

ಮೇಲ್ಸೇತುವೆಯಲ್ಲೂ ಮಳೆ ನೀರು

ಪ್ರಜಾವಾಣಿ ವಾರ್ತೆ

ಬೆಂಗಳೂರು: ಮಳೆನೀರು ರಸ್ತೆಯಲ್ಲೇ ನಿಂತಿದ್ದರಿಂದ ತುಮಕೂರು ರಸ್ತೆ ಹಾಗೂ ಹೆಬ್ಬಾಳದಿಂದ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆಯಲ್ಲಿ ಮಂಗಳವಾರ ಮಧ್ಯಾಹ್ನದಿಂದ ಸಂಜೆಯವರೆಗೂ ಸಂಚಾರ ದಟ್ಟಣೆ ಉಂಟಾಯಿತು.

ತುಮಕೂರು ರಸ್ತೆಯ ಮೇಲ್ಸೇತುವೆ ಮೇಲೆ ನೀರು ನಿಂತು ಹಲವು ಗಂಟೆ ವಾಹನ ಸಂಚಾರಕ್ಕೆ ತೊಂದರೆಯಾಯಿತು. ಜಾಲಹಳ್ಳಿ ನಮ್ಮ ಮೆಟ್ರೊ ಸ್ಟೇಷನ್ ಸಮೀಪ ಮೇಲ್ಸೇತುವೆಯಲ್ಲಿ ಒಂದೆರಡು ಅಡಿ ನೀರು ನಿಂತಿತ್ತು.

ಹೆಬ್ಬಾಳ ಜಂಕ್ಷನ್, ಕೆಂಪಾಪುರ, ವೀರಣ್ಣಪಾಳ್ಯ ಜಂಕ್ಷನ್ ಸುತ್ತಮುತ್ತಲ ರಸ್ತೆಗಳಲ್ಲಿ ಮಳೆ ನೀರು ನಿಂತು ಸಂಚಾರ ಅಸ್ತವ್ಯಸ್ತವಾಯಿತು.

ಬಾಗಲಗುಂಟೆಯಲ್ಲಿ 5 ಸೆಂ.ಮೀ, ಚೊಕ್ಕಸಂದ್ರದಲ್ಲಿ 4.3 ಸೆಂ.ಮೀ, ಶೆಟ್ಟಿಹಳ್ಳಿಯಲ್ಲಿ 2.8 ಸೆಂ.ಮೀ, ಪೀಣ್ಯ ಕೈಗಾರಿಕೆ ಪ್ರದೇಶದಲ್ಲಿ 2.7 ಸೆಂ.ಮೀ, ದೊಡ್ಡಬಿದರಕಲ್ಲಿನಲ್ಲಿ 2.4 ಸೆಂ.ಮೀ, ಕೊಡಿಗೆಹಳ್ಳಿ, ನಂದಿನಿ ಲೇಔಟ್‌ನಲ್ಲಿ ತಲಾ 2.3 ಸೆಂ.ಮೀ, ನಾಗಪುರದಲ್ಲಿ 1.7 ಸೆಂ.ಮೀ, ಹೇರೊಹಳ್ಳಿಯಲ್ಲಿ 1.2 ಸೆಂ.ಮೀ ಹಾಗೂ ರಾಜಾಜಿನಗರದ ಸುತ್ತಮುತ್ತ 1 ಸೆಂ.ಮೀ ಮಳೆಯಾಯಿತು.

ಸದಾಶಿವನಗರ ಪೊಲೀಸ್ ಠಾಣೆ ಸಮೀಪ ಬೃಹತ್ ಮರ ಬಿದ್ದಿದ್ದರಿಂದ ಕಾರು ಜಖಂಗೊಂಡಿತು.

ಕ್ರಮ: 'ನಗರದಲ್ಲಿ 23 ಸ್ಥಳಗಳಲ್ಲಿ ಮಳೆ ನೀರು ನಿಂತು ಸಂಚಾರಕ್ಕೆ ತೊಂದರೆಯಾಗುತ್ತಿದೆ ಎಂದು ಸಂಚಾರ ಪೊಲೀಸರು ಮಾಹಿತಿ ನೀಡಿದ್ದಾರೆ. ಆ ಸ್ಥಳಗಳನ್ನು ಸ್ವಚ್ಛ ಮಾಡಲಾಗಿದೆ' ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸುದ್ದಿಗಾರರಿಗೆ ತಿಳಿಸಿದರು.

'ಜಲಮಂಡಳಿ, ಬಿಎಂಆರ್‌ಸಿಎಲ್, ಬಿಡಿಎ ಕಾಮಗಾರಿ ಕೈಗೊಂಡಿರುವ ಸ್ಥಳಗಳಲ್ಲಿ ಮಳೆ ನೀರು ನಿಲ್ಲುತ್ತಿದ್ದು, ನೀರು ಹರಿವಿಗೆ ಸ್ಥಳ ಮಾಡಿಕೊಡಲು ಅವರಿಗೆ ಸೂಚಿಸಲಾಗಿದೆ. ಸೆಪ್ಟೆಂಬರ್ ಅಂತ್ಯದವರೆಗೂ ನಗರದಲ್ಲಿ ಹೆಚ್ಚಿನ ಮಳೆಯಾಗಲಿದ್ದು, ಎಲ್ಲ ರೀತಿಯ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ' ಎಂದು ಹೇಳಿದರು.



ಜಾಲಹಳ್ಳಿ 'ನಮ್ಮ ಮೆಟ್ರೊ ಸ್ಟೇಷನ್' ಸಮೀಪದ ಮೇಲ್ಸೇತುವೆಯಲ್ಲಿ ನಿಂತ ಮಳೆನೀರಿನಲ್ಲೇ ವಾಹನಗಳು ಸಾಗಿದವು

ಪ್ರೇಮ ವೈಫಲ್ಯದಿಂದ ನೊಂದು ಆತ್ಮಹತ್ಯೆ ಶಂಕೆ

ಹೀಲಿಯಂ ಅನಿಲ ಸೇವಿಸಿ ಟೆಕಿ ಆತ್ಮಹತ್ಯೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಹೀಲಿಯಂ ಅನಿಲ ಸೇವಿಸಿ ಸಾಫ್ಟ್‌ವೇರ್ ಎಂಜಿನಿಯರ್ ಒಬ್ಬರು ಮಂಗಳವಾರ ಆತ್ಮಹತ್ಯೆ ಮಾಡಿಕೊಂಡಿದ್ದು, ಎಲೆಕ್ಟ್ರಾನಿಕ್ ಸಿಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಹಾಸನ ಜಿಲ್ಲೆಯ ಸಕಲೇಶಪುರದ ನಿವಾಸಿ ಯಾಗ್ನಿಕ್(24) ಆತ್ಮಹತ್ಯೆ ಮಾಡಿಕೊಂಡವರು.

ಮೊಬೈಲ್ ಪಾಸ್‌ವರ್ಡ್ ಲಾಕ್ ಆಗಿದ್ದು, ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ(ಎಫ್‌ಎಸ್‌ಎಲ್) ರವಾನೆ ಮಾಡಲಾಗಿದೆ. ಲಾಕ್ ತೆಗೆದು ಪರಿಶೀಲಿಸಿದ ಬಳಿಕ ಆತ್ಮಹತ್ಯೆಗೆ ಕಾರಣ ಗೊತ್ತಾಗಲಿದೆ ಎಂದು ಪೊಲೀಸರು ಹೇಳಿದರು.

ಯಾಗ್ನಿಕ್ ಅವರು ವಿಪ್ರೊ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು. ಮನೆಯಿಂದಲೇ ಕೆಲಸ ಮಾಡುವ ಅವಕಾಶವಿದ್ದ ಕಾರಣಕ್ಕೆ ಕೆಲವು ತಿಂಗಳಿಂದ ಸಕಲೇಶಪುರದಲ್ಲೇ ಇದ್ದರು. ಈ ಮಧ್ಯೆ ಎಂ.ಟೆಕ್ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದರು. ಪರೀಕ್ಷೆ ನಿಮಿತ್ತ ಶುಕ್ರವಾರ ನಗರಕ್ಕೆ ಬಂದಿದ್ದರು. ನೀಲಾದ್ರಿ ರಸ್ತೆಯಲ್ಲಿರುವ ರಾಯಲ್ ಇನ್ ಹೋಟೆಲ್‌ನಲ್ಲಿ ಕೊಠಡಿ ಪಡೆದುಕೊಂಡಿದ್ದರು. ಮಂಗಳವಾರ ಬೆಳಿಗ್ಗೆ 11 ಗಂಟೆಗೆ ಯಾಗ್ನಿಕ್ ಕೊಠಡಿ ಖಾಲಿ ಮಾಡಬೇಕಿತ್ತು. ಆದರೆ, ಮಧ್ಯಾಹ್ನವಾದರೂ ಬಾಗಿಲು ತೆರೆದಿರಲಿಲ್ಲ. ಇದರಿಂದ ಅನುಮಾನಗೊಂಡ ಹೋಟೆಲ್ ಸಿಬ್ಬಂದಿ ಎಷ್ಟು ಕರೆದರೂ ಬಾಗಿಲು ತೆರವು ಮಾಡಿರಲಿಲ್ಲ. ಬಳಿಕ ಮಾಸ್ಟರ್ ಕೀ ಬಳಸಿ ಕೋಣೆ ತೆರೆದಾಗ ಆತ್ಮಹತ್ಯೆ ಮಾಡಿಕೊಂಡಿರುವುದು ಗೊತ್ತಾಗಿದೆ.



ಯಾಗ್ನಿಕ್

ಎರಡು ದಿನಗಳ ಹಿಂದೆ ಸ್ನೇಹಿತನ ಮನೆಗೆ ಹೋಗಿದ್ದ ಯಾಗ್ನಿಕ್, ಚಾರಣಕ್ಕೆ ಹೋಗಬೇಕೆಂದು ಸುಳ್ಳು ಹೇಳಿ ಸುಮಾರು ಮೂರುವರೆ ಅಡಿ ಉದ್ದದ ಬ್ಯಾಗ್ ಪಡೆದುಕೊಂಡಿದ್ದರು. ಅಲ್ಲಿಂದ ಪೀಣ್ಯಕ್ಕೆ ತೆರಳಿ ಅಲ್ಲಿ ಹೀಲಿಯಂ ಅನಿಲ ತುಂಬಿದ ಸಿಲಿಂಡರ್ ಖರೀದಿಸಿ ಕೊಠಡಿಗೆ ಬಂದಿದ್ದರು. ದೊಡ್ಡದಾದ ಬ್ಯಾಗ್ ಅನ್ನು ತೆಗೆದುಕೊಂಡು ತೆರಳುತ್ತಿರುವ ದೃಶ್ಯ ಹೋಟೆಲ್‌ನ ಎದುರು ಅಳವಡಿಕೆ ಮಾಡಿರುವ ಸಿ.ಸಿ.ಟಿ.ವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ ಎಂದು ಮೂಲಗಳು ತಿಳಿಸಿವೆ.

ಯಾಗ್ನಿಕ್ ಅವರು ಹೀಲಿಯಂ ಅನಿಲ ತುಂಬಿದ ಸಿಲಿಂಡರ್‌ಗೆ ಸಂಪರ್ಕಿಸಿದ್ದ ಪೈಪ್ ಅನ್ನು ತನ್ನ ಬಾಯಿಗೆ ಇಟ್ಟುಕೊಂಡಿದ್ದು, ಪ್ಲಾಸ್ಟಿಕ್ ಸುತ್ತಿಕೊಂಡಿದ್ದರು. ಅಲ್ಲದೇ ಸ್ವಲ್ಪವೂ ಅನಿಲ ಸೋರಿಕೆ ಆಗದಂತೆ ಟೇಪ್ ಸಹ ಸುತ್ತಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಹೀಲಿಯಂ ದೇಹದ ಒಳಗೆ ಹೋಗುತ್ತಿದ್ದಂತೆ ಉಸಿರಾಟದ ಸಮಸ್ಯೆ ಉಂಟಾಗಿ ಮೃತಪಟ್ಟಿದ್ದಾರೆ ಎಂಬುದು ಪ್ರಾಥಮಿಕ ತನಿಖೆಯಿಂದ ಗೊತ್ತಾಗಿದೆ ಎಂದು ಪೊಲೀಸರು ಹೇಳಿದರು.

ಮೃತ ಯುವಕ ಯುವತಿಯೊಬ್ಬಳನ್ನು ಪ್ರೀತಿಸುತ್ತಿದ್ದು, ಪ್ರೇಮ ವೈಫಲ್ಯದಿಂದ ಅವರು ನೊಂದಿದ್ದರು ಎನ್ನಲಾಗಿದೆ ಎಂದು ತನಿಖಾ ಮೂಲಗಳು ತಿಳಿಸಿವೆ.

ನೀಟ್, ಸಿಇಟಿ ಸೀಟು ಹಂಚಿಕೆ ಫಲಿತಾಂಶ ಸೆ. 1ಕ್ಕೆ

ಬೆಂಗಳೂರು: ಮೊದಲ ಸುತ್ತಿನ ವೈದ್ಯಕೀಯ, ದಂತ ವೈದ್ಯಕೀಯ, ಆಯುಷ್ ಕೋರ್ಸ್‌ಗಳ ಪ್ರವೇಶಕ್ಕೆ ಆಪ್ಷನ್‌ಗಳನ್ನು (ಆಯ್ಕೆ/ಇಚ್ಛೆ) ದಾಖಲಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ವೆಬ್ ಸೈಟ್‌ನಲ್ಲಿ ಪೋರ್ಟಲ್ ತೆರೆದಿದೆ.

ಆಗಸ್ಟ್ 22ರಂದು ಬೆಳಿಗ್ಗೆ 10ರವರೆಗೆ ತಮಗೆ ಇಚ್ಛೆ ಇರುವ ಕಾಲೇಜು ಮತ್ತು ಕೋರ್ಸ್‌ಗಳನ್ನು ಅಭ್ಯರ್ಥಿಗಳು ಆಯ್ಕೆ ಮಾಡಿಕೊಳ್ಳಬಹುದು. ಇದೇ ಮೊದಲ ಬಾರಿಗೆ ಅಭ್ಯರ್ಥಿಗಳ ನೋಂದಾಯಿತ ಮೊಬೈಲ್‌ಗೆ ವಾಟ್ಸ್‌ಆ್ಯಪ್ ಸಂದೇಶ ರವಾನಿಸುವ ವ್ಯವಸ್ಥೆ ಆರಂಭಿಸಲಾಗಿದೆ ಎಂದು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ ಎಂಜಿನಿಯರಿಂಗ್ ಹಾಗೂ ಇತರೆ ಕೋರ್ಸುಗಳಿಗೂ ಆಪ್ಷನ್‌ಗಳನ್ನು ದಾಖಲಿಸಲು ಅವಕಾಶ ಇರಲಿದೆ ಎಂದು ಅವರು ವಿವರಿಸಿದ್ದಾರೆ.

ಆಗಸ್ಟ್ 25ರ ರಾತ್ರಿ 8ಕ್ಕೆ ಎರಡನೇ ಅಣಕು ಸೀಟು ಹಂಚಿಕೆಯ ಫಲಿತಾಂಶ (ಯುಜಿ ಸಿಇಟಿ/ನೀಟ್) ಪ್ರಕಟಿಸಲಾಗುವುದು. 27ರಂದು ಬೆಳಿಗ್ಗೆ 11ರವರೆಗೆ ಇಚ್ಛೆಗಳನ್ನು ಬದಲಿಸಿಕೊಳ್ಳಬಹುದು. ಸೆ. 1ರಂದು ಸಂಜೆ 6ಕ್ಕೆ ನೈಜ ಸೀಟು ಹಂಚಿಕೆಯ ಫಲಿತಾಂಶ ಪ್ರಕಟಿಸಲಾಗುವುದು ಎಂದು ಅವರು ತಿಳಿಸಿದ್ದಾರೆ. ವೆಬ್ ಸೈಟ್‌ನಲ್ಲಿ ಪ್ರಕಟಿಸಲಾದ ಸೀಟ್ ಮ್ಯಾಟ್ರಿಕ್ಸ್ ಪರಿಶೀಲಿಸಿ ಆಪ್ಷನ್‌ಗಳನ್ನು ದಾಖಲಿಸುವ ಸಮಯದಲ್ಲಿ ಆದ್ಯತಾ ಕ್ರಮಗಳನ್ನು ಅನುಸರಿಸಬೇಕು. ಕಾಲೇಜು ಶುಲ್ಕದ ಮಾಹಿತಿ ಕೂಡ ನೀಡಲಾಗಿದ್ದು, ಅದನ್ನೂ ಗಮನಿಸಿಯೇ ಕಾಲೇಜುಗಳನ್ನು ಆಯ್ಕೆ ಮಾಡಿಕೊಳ್ಳುವಂತೆ ತಿಳಿಸಿದ್ದಾರೆ.

‘ಕೆರೆ ಸಂರಕ್ಷಣೆಗೆ ನಿರ್ಲಕ್ಷ್ಯ ವಹಿಸಿದರೆ ಕ್ರಮ’

ಕರ್ತವ್ಯ ಪಾಲಿಸದ ಅಧಿಕಾರಿಗಳಿಗೆ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಎಚ್ಚರಿಕೆ • ಒತ್ತುವರಿ ತೆರವಿಗೆ ಸೂಚನೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ‘ಕೆರೆಗಳ ಸಂರಕ್ಷಣೆ ಸಂಬಂಧ ಕರ್ತವ್ಯ ಪಾಲಿಸದ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ತೆಗೆದುಕೊಳ್ಳುತ್ತೇವೆ’ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಎಚ್ಚರಿಕೆ ನೀಡಿದರು.

ಕೆರೆಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಸಂಬಂಧ ದಾಖಲಿಸಿಕೊಂಡಿರುವ ಸ್ವಯಂಪ್ರೇರಿತ ಪ್ರಕರಣದ ವಿಚಾರಣೆಯ ಭಾಗವಾಗಿ ಲೋಕಾಯುಕ್ತರು, ಉಪ ಲೋಕಾಯುಕ್ತ ನ್ಯಾಯಮೂರ್ತಿಗಳಾದ ಕೆ.ಎನ್.ಫಣೀಂದ್ರ ಮತ್ತು ಬಿ.ವೀರಪ್ಪ ಅವರು ನಗರದ ವಿಭೂತಿಕೆರೆ ಮತ್ತು ದೊಡ್ಡನೆಕ್ಕುಂದಿ ಕೆರೆಗಳಿಗೆ ಮಂಗಳವಾರ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಪರಿಶೀಲನೆ ವೇಳೆ ಬಿಬಿಎಂಪಿ, ಮಾಲಿನ್ಯ ನಿಯಂತ್ರಣ ಮಂಡಳಿ, ಕೆರೆ ಅಭಿವೃದ್ಧಿ ಪ್ರಾಧಿಕಾರ ಮತ್ತು ಅರಣ್ಯ ಇಲಾಖೆಯ ಅಧಿಕಾರಿಗಳು ಹಾಜರಿದ್ದರು. ವಿಭೂತಿಕೆರೆಯಲ್ಲಿ ನೀರು ಸಂಗ್ರಹವಾಗದೇ ಇರುವುದನ್ನು ಗಮನಿಸಿದ ಲೋಕಾಯುಕ್ತರು, ಆ ಬಗ್ಗೆ ಅಧಿಕಾರಿಗಳನ್ನು ಪ್ರಶ್ನಿಸಿದರು. ‘ಮಳೆ ಕೊರತೆಯಿಂದ ನೀರು ಸಂಗ್ರಹವಾಗಿಲ್ಲ’ ಎಂದು ಅಧಿಕಾರಿಗಳು ಉತ್ತರಿಸಿದರು.

ಆದರೆ ಸ್ಥಳೀಯರು, ‘ಕೆರೆಗೆ ನೀರು ಹರಿದುಬರುವ ರಾಜಕಾಲುವೆ ಮತ್ತು ಮಳೆ ನೀರಿನ ಕಾಲುವೆಗಳು ಮುಚ್ಚಿಹೋಗಿವೆ. ನೀರು ಬಂದರೆ ಸುತ್ತ ಮುತ್ತಲಿನ ಕೊಳವೆಬಾವಿಗಳಿಗೆ ನೀರು ಬರುತ್ತದೆ. ಇದರಿಂದ ಟ್ಯಾಂಕರ್ ನೀರು ವ್ಯವಹಾರ ಮಾಡುವವರಿಗೆ ನಷ್ಟವಾಗುತ್ತದೆ. ಅವರ ಪ್ರಭಾವದಿಂದ ಒತ್ತುವರಿಯನ್ನು ಹಾಗೇ ಬಿಡಲಾಗಿದೆ’ ಎಂದು ಲೋಕಾಯುಕ್ತರಿಗೆ ಮಾಹಿತಿ ನೀಡಿದರು.

ಕಾಲುವೆಗಳು ಮುಚ್ಚಿಹೋಗಿರುವುದು ಮತ್ತು ಕೆರೆಯ ಅಂಗಳದಲ್ಲಿ ಕಟ್ಟಡಗಳು ನಿರ್ಮಾಣವಾಗಿರುವುದನ್ನು ಕಂಡ ಲೋಕಾಯುಕ್ತರು, ‘ಕೆರೆಯ ಜಾಗ ಎಷ್ಟು ಒತ್ತುವರಿಯಾಗಿದೆ ಎಂಬುದನ್ನು ಪತ್ತೆ ಮಾಡಲು ಭೂಮಾಪನ ನಡೆಸಿ, 20 ದಿನಗಳಲ್ಲಿ ವರದಿ ನೀಡಿ’ ಎಂದು ಭೂ ದಾಖಲೆಗಳ ಸಹಾಯಕ ನಿರ್ದೇಶಕರಿಗೆ ಸೂಚನೆ ನೀಡಿದರು.

‘ಕೆರೆಯ ಅಂಗಳದಲ್ಲಿ ನಿರ್ಮಿಸಲಾಗಿರುವ ಕಟ್ಟಡಗಳನ್ನು ಒಡೆದುಹಾಕಲು ತಕ್ಷಣವೇ ಕ್ರಮ ತೆಗೆದುಕೊಳ್ಳಿ. ಎಲ್ಲ ಒತ್ತುವರಿಯನ್ನು ಒಂದು ತಿಂಗಳ ಒಳಗೆ ತೆರವು ಮಾಡಿ’ ಎಂದು ಬಿಬಿಎಂಪಿ ಅಧಿಕಾರಿಗಳಿಗೆ ಸೂಚಿಸಿದರು. ಕೆರೆ ಪ್ರದೇಶದಲ್ಲಿ ಭದ್ರತೆ ಇಲ್ಲ ಎಂದು ಸಾರ್ವಜನಿಕರು ದೂರಿದಾಗ, ಬೆಳಿಗ್ಗೆ ಮತ್ತು ಸಂಜೆ ಗಸ್ತು ಹಾಕುವಂತೆ ಪೊಲೀಸ್ ಅಧಿಕಾರಿಗಳಿಗೆ ಹೇಳಿದರು.

ದೊಡ್ಡನೆಕ್ಕುಂದಿ ಕೆರೆಯ ಅಭಿವೃದ್ಧಿಗೆ ₹14 ಕೋಟಿ ಬಿಡುಗಡೆಯಾಗಿದ್ದು, ಹಣವನ್ನು ಯಾವ ಕೆಲಸಗಳಿಗೆ ವೆಚ್ಚ ಮಾಡಲಾಗಿದೆ ಎಂಬುದರ ವಿವರ ಸಲ್ಲಿಸುವಂತೆ ಕಾರ್ಯನಿರ್ವಾಹಕ ಎಂಜಿನಿಯರ್‌ಗೆ ಲೋಕಾಯುಕ್ತರು ಸೂಚಿಸಿದರು.

ಕೆರೆಯ ಸುಮಾರು 2 ಎಕರೆ 6 ಗುಂಟೆ ಒತ್ತುವರಿಯಾಗಿದೆಯೆಂದು ಅಧಿಕಾರಿಗಳು ಮಾಹಿತಿ ನೀಡಿದಾಗ, ಒತ್ತುವರಿ ತೆರವಿಗೆ ತಕ್ಷಣವೇ ಕ್ರಮ ತೆಗೆದುಕೊಳ್ಳಿ ಎಂದರು.

ಮುಖ್ಯಾಂಶಗಳು

- ವಿಭೂತಿಕೆರೆ ಅಂಗಳಕ್ಕೆ ವಾರದಲ್ಲಿ ಬೇಲಿ ಹಾಕಲು ನಿರ್ದೇಶನ
- ದೊಡ್ಡನೆಕ್ಕುಂದಿ ಕೆರೆ ಅಂಗಳದಲ್ಲಿ ಗಿಡ ನೆಟ್ಟು, ಪೋಷಿಸಲು ಸೂಚನೆ
- ಸ್ಥಳಕ್ಕೆ ಬಾರದ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮದ ಎಚ್ಚರಿಕೆ



ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ, ಉಪ ಲೋಕಾಯುಕ್ತ ನ್ಯಾಯಮೂರ್ತಿಗಳಾದ ಕೆ.ಎನ್.ಫಣೀಂದ್ರ ಮತ್ತು ಬಿ.ವೀರಪ್ಪ ಅವರು ಕೆರೆ ಜಮೀನು ಒತ್ತುವರಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು

ಪೂರಕ ದಾಖಲೆ ಸಲ್ಲಿಸಲು ಇದೇ 26 ಕೊನೆ ದಿನ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕಂದಾಯ ಇಲಾಖೆಯ ಗ್ರಾಮ ಆಡಳಿತಾಧಿಕಾರಿ ಹುದ್ದೆಗೆ ಸಲ್ಲಿಸಿರುವ ಅರ್ಜಿ ಅಂಗೀಕೃತವಾಗದ ಅಭ್ಯರ್ಥಿಗಳು ಇದೇ 26ರೊಳಗೆ ಪೂರಕ ದಾಖಲೆಗಳನ್ನು ಸಲ್ಲಿಸಬೇಕು ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆಇಎ) ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ.

‘ಪ್ರಾಧಿಕಾರವು ಪೂರಕ ದಾಖಲೆಗಳನ್ನು ಪರಿಗಣಿಸಿ ಅರ್ಜಿಗಳನ್ನು ದೃಢೀಕರಿಸಲಿದೆ. ಅರ್ಜಿದಾರರು ತಮ್ಮ ಅರ್ಜಿ ಸ್ಥಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಲಿಂಕ್ ಮೂಲಕ ಪರಿಶೀಲಿಸಬಹುದು’ ಎಂದರು.

ಕಡ್ಡಾಯ ಕನ್ನಡ ಪರೀಕ್ಷೆ: ಈ ಹುದ್ದೆಗೆ ಅರ್ಜಿ ಸಲ್ಲಿಸಿರುವ ಎಲ್ಲ ಅಭ್ಯರ್ಥಿಗಳು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಗೆ ಹಾಜರಾಗಲೇಬೇಕು. ಸೆಪ್ಟೆಂಬರ್ 29ರಂದು ಕಡ್ಡಾಯ ಕನ್ನಡ ಪರೀಕ್ಷೆ ನಡೆಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2021ರ ಅನ್ವಯ, ಕನ್ನಡ ಭಾಷಾ ಪರೀಕ್ಷೆಯಲ್ಲಿ 150 ಅಂಕಗಳಿಗೆ ಕನಿಷ್ಠ 50 ಅಂಕಗಳನ್ನು ಗಳಿಸಬೇಕು. ಈ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳಿಗೆ ಮಾತ್ರ ಅಕ್ಟೋಬರ್ 27ರಂದು ಪತ್ರಿಕೆ- 1 ಮತ್ತು ಪತ್ರಿಕೆ-2 ಅವುಗಳನ್ನು ಒಳಗೊಂಡ ಸ್ಪರ್ಧಾತ್ಮಕ ಪರೀಕ್ಷೆಗೆ ಅವಕಾಶ ನೀಡಲಾಗುತ್ತದೆ ಎಂದೂ ಪ್ರಸನ್ನ ವಿವರಿಸಿದ್ದಾರೆ.

ಒಳ ಮೀಸಲಾತಿ: ಒಗ್ಗಟ್ಟಿಗೆ ಸಹಮತ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಕುರಿತು ಸುಪ್ರೀಂ ಕೋರ್ಟ್ ಇತ್ತೀಚೆಗೆ ನೀಡಿರುವ ತೀರ್ಪು ಜಾರಿಗೆ ಸಂಬಂಧಿಸಿದಂತೆ ರಾಜ್ಯದಾದ್ಯಂತ ಪರಿಶಿಷ್ಟ ಸಮುದಾಯದ ಎಲ್ಲ ವರ್ಗಗಳ ಜನರಲ್ಲಿ ಸಹಮತ ಮೂಡಿಸಲು ಕಾಂಗ್ರೆಸ್ ಶಾಸಕ ಪಿ.ಎಂ. ನರೇಂದ್ರಸ್ವಾಮಿ ನೇತೃತ್ವದಲ್ಲಿ ಪ್ರಮುಖರ ಸಭೆ ಮಂಗಳವಾರ ನಡೆಯಿತು.

ಶಾಸಕರ ಭವನದಲ್ಲಿ ನಡೆದ ಈ ಪೂರ್ವಭಾವಿ ಸಭೆಯಲ್ಲಿ, ಪರಿಶಿಷ್ಟ ಜಾತಿಯಲ್ಲಿರುವ ಎಲ್ಲ ಸಮುದಾಯಗಳನ್ನು ಒಂದೇ ಸೂರಿನಡಿ ತಂದು ಒಟ್ಟಾಭಿಪ್ರಾಯ ಮೂಡಿಸುವ ಕುರಿತು ಚರ್ಚೆ ನಡೆಯಿತು. ಪರಿಶಿಷ್ಟ ಸಮುದಾಯದಲ್ಲಿ ಒಗ್ಗಟ್ಟು ಪುನರ್ ನಿರ್ಮಾಣದ ದೃಷ್ಟಿಯಿಂದ ಇದು ಅತ್ಯಂತ ಮಹತ್ವದ ಆರಂಭ ಎಂದು ಸಭೆಯಲ್ಲಿ ಭಾಗವಹಿಸಿದ ಎಲ್ಲ ನಾಯಕರು ಅಭಿಪ್ರಾಯ ವ್ಯಕ್ತಪಡಿಸಿದರು.

ವಿಧಾನ ಪರಿಷತ್ ಕಾಂಗ್ರೆಸ್ ಸದಸ್ಯ ಎಚ್.ಪಿ. ಸುಧಾಮ್ ದಾಸ್, ದಲಿತ ಮುಖಂಡರಾದ ಬಿ. ಗೋಪಾಲ್, ಮಾವಳ್ಳಿ ಶಂಕರ್, ಬಸವರಾಜ್ ಕೌತಾಳ್, ಗಡ್ಡೆಮ್ ವೆಂಕಟೇಶ್, ಹೆಣ್ಣೂರ್ ಶ್ರೀನಿವಾಸ್ ಮತ್ತು ವಿವಿಧ ದಲಿತ ಸಮುದಾಯಗಳ ಪ್ರತಿನಿಧಿಗಳು ಈ ಸಭೆಯಲ್ಲಿ ಭಾಗವಹಿಸಿದರು.

ಮತದಾರರ ಪಟ್ಟಿ: ಅ.29ಕ್ಕೆ ಕರಡು, 2025ರ ಜ.6ರಂದು ಅಂತಿಮ ಪಟ್ಟಿ

‘ಆ್ಯಪ್’ ಮೂಲಕ ಪರಿಷ್ಕರಣೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಆರಂಭವಾಗಿದ್ದು, ಈ ಬಾರಿ ‘ಆ್ಯಪ್’ ಮೂಲಕವೇ ಮಾಹಿತಿಗಳನ್ನು ದಾಖಲಿಸಲಾಗುತ್ತದೆ.

ಕೇಂದ್ರ ಚುನಾವಣೆ ಆಯೋಗದ ಸೂಚನೆಯಂತೆ ‘ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ–2025’ ಆಗಸ್ಟ್ 20ರಿಂದ ಆರಂಭವಾಗಿದ್ದು, ಅಕ್ಟೋಬರ್ 29ರಂದು ಕರಡು ಪಟ್ಟಿ ಪ್ರಕಟಿಸಲಾಗುತ್ತದೆ. 2025ರ ಜನವರಿ 6ರಂದು ಮತದಾರರ ಅಂತಿಮ ಪಟ್ಟಿ ಪ್ರಕಟವಾಗಲಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸುದ್ದಿಗಾರರಿಗೆ ಮಂಗಳವಾರ ತಿಳಿಸಿದರು.

ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ, ಮತದಾರರ ಮಾಹಿತಿ ಪಡೆದುಕೊಳ್ಳಲಿದ್ದಾರೆ. ಹೊಸದಾಗಿ ಮನೆಗಳು ನಿರ್ಮಾಣವಾಗಿದ್ದರೆ, ಬೇರೆಡೆಯಿಂದ ಬಂದಿದ್ದರೆ ಪಟ್ಟಿಗೆ ಸೇರಿಸಲಾಗುತ್ತದೆ. ಮನೆ ಬದಲಾಯಿಸಿದವರು, ಮರಣ ಹೊಂದಿದವರ ಹೆಸರನ್ನು ಪಟ್ಟಿಯಿಂದ ತೆಗೆದುಹಾಕಲು ಈ ಬಾರಿ ಕ್ರಮ ಕೈಗೊಳ್ಳಲಾಗುತ್ತದೆ. ಈ ಪಟ್ಟಿಯಲ್ಲಿರುವ 4.13 ಲಕ್ಷ ಮತದಾರರು ಅಸ್ತಿತ್ವದಲ್ಲಿಲ್ಲ ಎಂಬ ಅಂದಾಜಿದ್ದು, ಅದನ್ನು ಪರಿಶೀಲಿಸಿ, ನಿಯಮಗಳಂತೆ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಮತಗಟ್ಟೆಗಳು ಮತದಾರರ ನಿವಾಸದ ಸಮೀಪವೇ ಇರುವಂತೆ ಹಾಗೂ ಒಂದು ಕುಟುಂಬ ಅಥವಾ ಕಟ್ಟಡದ ಜನರಿಗೆ ಒಂದೇ ಮತಗಟ್ಟೆಯಲ್ಲಿ ಮತದಾನದ ವ್ಯವಸ್ಥೆ ಇರುವಂತೆ ಪರಿಷ್ಕರಣೆ ಮಾಡಲಾಗುತ್ತದೆ. ಒಂಬತ್ತು ಸಾವಿರ ಮತಗಟ್ಟೆ ಅಧಿಕಾರಿಗಳಿದ್ದು, ಅವರ ಚಿತ್ರ ಮೊಬೈಲ್ ಸಂಖ್ಯೆಗಳನ್ನು ಬಿಬಿಎಂಪಿ ವೆಬ್‌ಸೈಟ್‌ನಲ್ಲಿ ಪ್ರಕಟ ಮಾಡಲಾಗಿದೆ. ಕೆಲವು ಬದಲಾವಣೆಗಳಿದ್ದು, ಶೀಘ್ರವೇ ಸರಿಪಡಿಸಲಾಗುತ್ತದೆ ಎಂದು ತಿಳಿಸಿದರು.

ರಾಜಕೀಯ ಪಕ್ಷಗಳ ಮತಗಟ್ಟೆ ಏಜೆಂಟ್‌ಗಳು ಮತದಾರರ ಪಟ್ಟಿ ಪರಿಷ್ಕರಣೆ, ಹೊಸದಾಗಿ ಸೇರ್ಪಡೆ, ಆಧಾರ್ ಜೋಡಣೆಗೆ ಮತಗಟ್ಟೆ ಅಧಿಕಾರಿಗಳೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಕೊಳ್ಳಲಾಗಿದೆ. ಅವರೆಲ್ಲರ ಸಹಕಾರದೊಂದಿಗೆ ಮತದಾರರ ಪಟ್ಟಿ ಪರಿಷ್ಕರಣೆ ನಡೆಯಲಿದೆ ಎಂದು ತುಷಾರ್ ಗಿರಿನಾಥ್ ಮಾಹಿತಿ ನೀಡಿದರು.

ಚುನಾವಣಾ ವಿಭಾಗದ ವಿಶೇಷ ಆಯುಕ್ತ ಆರ್. ಸೆಲ್ವಮಣಿ, ಜಿಲ್ಲಾ ಹೆಚ್ಚುವರಿ ಚುನಾವಣಾಧಿಕಾರಿಗಳಾದ ಸ್ನೇಹಲ್, ದಯಾನಂದ್, ಅವಿನಾಶ್ ಮೆನನ್ ರಾಜೇಂದ್ರನ್, ಚುನಾವಣಾ ವಿಭಾಗದ ಸಹಾಯಕ ಆಯುಕ್ತ ಶರಣಪ್ಪ ಉಪಸ್ಥಿತರಿದ್ದರು.

‘ನಕಲು ಎಪಿಕ್’ ರದ್ದು: ತುಷಾರ್ ಗಿರಿನಾಥ್

ಒಬ್ಬ ವ್ಯಕ್ತಿಯ ಹೆಸರು ಒಂದಕ್ಕಿಂತ ಹೆಚ್ಚಿನ ಸ್ಥಳಗಳಲ್ಲಿ ಮತದಾರರ ಪಟ್ಟಿಯಲ್ಲಿದ್ದರೆ, ಅದನ್ನು ತೆಗೆಯಲಾಗುತ್ತದೆ. ರಾಜ್ಯದಲ್ಲಿ ಒಬ್ಬ ವ್ಯಕ್ತಿ ಒಂದೇ ಮತದಾರರ ಚೀಟಿ (ಎಪಿಕ್) ಹೊಂದಿರುವಂತೆ ಈ ಬಾರಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದರು.

ವ್ಯಕ್ತಿಯ ಚಿತ್ರವಲ್ಲದೆ ಎಪಿಕ್‌ನಲ್ಲಿರುವ ಮಾಹಿತಿಗಳನ್ನು ಹೋಲಿಕೆ ಮಾಡಿ ‘ನಕಲು ಎಪಿಕ್’ ಅನ್ನು ರದ್ದುಗೊಳಿಸಲಾಗುತ್ತದೆ. ರಾಜ್ಯದ ಎಲ್ಲ ವಿಧಾನಸಭೆ ಕ್ಷೇತ್ರಗಳ ಮತದಾರರ ಮಾಹಿತಿಗಳನ್ನೂ ಹೋಲಿಕೆ ಮಾಡಲು ಕೇಂದ್ರ ಚುನಾವಣೆ ಆಯೋಗ ತಿಳಿಸಿದೆ. ಆಯೋಗದಿಂದ ಸಮಗ್ರ ಪಟ್ಟಿ ಲಭ್ಯವಾದ ನಂತರ ತಂತ್ರಾಂಶದ ಸಹಾಯದಿಂದ ‘ನಕಲು ಎಪಿಕ್’ ರದ್ದುಗೊಳಿಸುವ ಪ್ರಕ್ರಿಯೆಯೂ ಆರಂಭವಾಗಲಿದೆ ಎಂದು ಮಾಹಿತಿ ನೀಡಿದರು.

ನಾಲ್ಕು ಬಾರಿ ಪಟ್ಟಿ ಪ್ರಕಟ

ಅರ್ಹ ಮತದಾರರು ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಲು ಅನುವಾಗಲು ವರ್ಷದಲ್ಲಿ ನಾಲ್ಕು ಬಾರಿ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ. ಇದರಿಂದ 18 ವರ್ಷ ತುಂಬಿದ ಅರ್ಹ ಮತದಾರರಿಗೆ ಹೆಚ್ಚು ಅನುಕೂಲವಾಗುತ್ತದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಹೇಳಿದರು.

ಜನವರಿ, ಏಪ್ರಿಲ್, ಜುಲೈ, ಅಕ್ಟೋಬರ್‌ನ ಮೊದಲ ದಿನವನ್ನು ಅರ್ಹತಾ ದಿನಾಂಕ ಎಂದು ನಿಗದಿಪಡಿಸಲಾಗಿದೆ. ‘ವೋಟರ್ ಹೆಲ್ಪ್ ಲೈನ್’ ಆ್ಯಪ್, ವೋಟರ್ ಸರ್ವೀಸ್ ಪೋರ್ಟಲ್‌ಗಳಲ್ಲೂ ನೋಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದರು.

ಕೆಎಚ್‌ಐಆರ್ ಸಿಟಿ: ಮೊದಲ ಹಂತಕ್ಕೆ ಶೀಘ್ರ ಚಾಲನೆ: ಸಚಿವ

ಪ್ರಜಾವಾಣಿ ವಾರ್ತೆ

ಬೆಂಗಳೂರು: ‘ಕೆಂಪೇಗೌಡ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪ ‘ನಾಲೆಡ್ಜ್, ಹೆಲ್ತ್ ಇನ್ನೋವೇಶನ್ ಮತ್ತು ರೀಸರ್ಚ್ ಸಿಟಿ’ (ಕೆಎಚ್‌ಐಆರ್ ಸಿಟಿ) ಸಿಟಿ ಎರಡು ಸಾವಿರ ಎಕರೆ ಜಾಗದಲ್ಲಿ ತಲೆ ಎತ್ತಲಿದ್ದು, 500 ಎಕರೆಯ ಮೊದಲ ಹಂತದ ಯೋಜನೆಗೆ ಸದ್ಯದಲ್ಲೇ ಮುಖ್ಯಮಂತ್ರಿ ಚಾಲನೆ ನೀಡಲಿದ್ದಾರೆ’ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಹೇಳಿದರು.

ಕೆಎಚ್‌ಐಆರ್ ಸಿಟಿ ಸಲಹಾ ಸಮಿತಿಯ ಮೊದಲ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಲ್ಲ ಸದಸ್ಯರ ಸಹಕಾರವನ್ನು ಕೋರಿದರು.

ಸಲಹಾ ಮಂಡಳಿಯ ಸದಸ್ಯರಿಗೆ ಭೂಮಿಪುತ್ರ ಸಂಸ್ಥೆಯು ನಿರ್ಮಿಸಿರುವ ಯೋಜನೆಯ ಪ್ರಾತ್ಯಕ್ಷಿಕೆ ತೋರಿಸಲಾಯಿತು. ಜತೆಗೆ, ಯೋಜನೆಗೆ ಸಂಬಂಧಿಸಿದಂತೆ ಸಲಹೆ ಸೂಚನೆಗಳನ್ನು ಆಲಿಸಲಾಯಿತು. ಸಭೆಯಲ್ಲಿ ವರ್ಚುಯಲ್ ಆಗಿ ಭಾಗವಹಿಸಿದ್ದ ಸಮಿತಿಯ ಸದಸ್ಯರು, ದೊಡ್ಡಬಳ್ಳಾಪುರ- ದಾಬಸ್ ಪೇಟೆ ಮಧ್ಯದಲ್ಲಿ ನಿರ್ಮಾಣವಾಗಲಿರುವ ಕೆಎಚ್‌ಐಆರ್ ಸಿಟಿಯ ಪರಿಕಲ್ಪನೆ ಅತ್ಯದ್ಭುತವಾಗಿದ್ದು ಬೆಂಗಳೂರಿನ ಬೆಳವಣಿಗೆಗೆ ಅತ್ಯಗತ್ಯವಾಗಿದೆ ಎಂದರು.



ಎಂ.ಬಿ.ಪಾಟೀಲ

‘ಇದೊಂದು ಅಸಾಂಪ್ರದಾಯಿಕ ಯೋಜನೆ. ಇದು ಬೆಂಗಳೂರು ನಗರದ ಆರ್ಥಿಕತೆಯನ್ನು ಇನ್ನೊಂದು ಎತ್ತರಕ್ಕೆ ಕೊಂಡೊಯ್ಯಲಿದೆ. ಸಲಹಾ ಸಮಿತಿಯ ಸದಸ್ಯರು ನೀಡಿರುವ ಸಲಹೆಗಳನ್ನು ಗಂಭೀರವಾಗಿ ಪರಿಗಣಿಸ ಲಾಗುವುದು’ ಎಂದು ಪಾಟೀಲ ವಿವರಿಸಿದರು.

ಸಲಹಾ ಮಂಡಳಿ ಸದಸ್ಯರಾದ ನಾರಾಯಣ ಹೃದ್ರೋಗ ಸಂಸ್ಥೆ ಅಧ್ಯಕ್ಷ ಡಾ. ದೇವಿಶೆಟ್ಟಿ, ಬಯೊಕಾನ್ ಅಧ್ಯಕ್ಷೆ ಕಿರಣ್ ಮಜುಂದಾರ್ ಷಾ, ಇನ್ಫೋಸಿಸ್ ಆಡಳಿತ ಮಂಡಳಿ ಸದಸ್ಯ ಮೋಹನದಾಸ್ ಪೈ, ಹೃದ್ರೋಗ ತಜ್ಞ ಡಾ.ವಿವೇಕ್ ಜವಳಿ, ಆ್ಯಕ್ಸಲ್ ಪಾಲುದಾರ ಪ್ರಶಾಂತ್ ಪ್ರಕಾಶ್, ಅಮೆರಿಕಾದ ಬೋಸ್ಟನ್ ವಿಶ್ವವಿದ್ಯಾನಿಲಯದ ಆಡಳಿತ ಮಂಡಳಿ ಟ್ರಸ್ಟಿ ರಾಂಚ್ ಕಿಂಬಾಲ್, ವೆಕ್ಸ್ ಫೋರ್ಡ್ ಸೈನ್ಸ್ ಆ್ಯಂಡ್ ಟೆಕ್ನಾಲಜಿ ಸಂಸ್ಥೆ ಕಾರ್ಯನಿರ್ವಾಹಕ ಉಪಾಧ್ಯಕ್ಷ ಥಾಮಸ್ ಓಶ ಮತ್ತು ಆಸ್ಟಿನ್‌ನ ನಾವೀನ್ಯತೆ ಮತ್ತು ಉದ್ಯಮಶೀಲತೆ ವಿಭಾಗದ ಡೀನ್ ಸ್ಟೀಫನ್ ಎಕ್ಕರ್ ಅವರು ವರ್ಚುಯಲ್ ಆಗಿ ಸಭೆಯಲ್ಲಿ ಪಾಲ್ಗೊಂಡಿದ್ದರು.

ರಾಜಧನ ಹಿಂಬಾಕಿ ಪಡೆಯಲು ಆಗ್ರಹಿಸಿ ಸಿ.ಎಂ.ಗೆ ಪತ್ರ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಜಾರ್ಖಂಡ್ ಮಾದರಿಯಲ್ಲಿ ಕೇಂದ್ರ ಸರ್ಕಾರದಿಂದ ಖನಿಜ ಸಮೃದ್ಧ ಜಮೀನುಗಳ ಮೇಲಿನ ರಾಜಧನದ ಹಿಂದಿನ ಬಾಕಿ ಪಡೆಯುವಂತೆ ಒತ್ತಾಯಿಸಿ ಆಮ್ ಆದ್ಮಿ ಪಾರ್ಟಿ ರಾಜ್ಯ ಘಟಕದ ಅಧ್ಯಕ್ಷ ‘ಮುಖ್ಯಮಂತ್ರಿ’ ಚಂದ್ರು ಅವರು ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ.

ರಾಜಧನದ ಹಿಂದಿನ ಬಾಕಿಯನ್ನು ವಸೂಲಿ ಮಾಡಲು ಸುಪ್ರೀಂ ಕೋರ್ಟ್ ರಾಜ್ಯಗಳಿಗೆ ಅನುಮತಿ ನೀಡಿರುವುದು ಕರ್ನಾಟಕದ ಪಾಲಿಗೆ ವರದಾನವಾಗಿದೆ. ಇದರಿಂದ ರಾಜ್ಯಕ್ಕೆ ಭಾರಿ ಮೊತ್ತದ ಬಾಕಿ ರಾಜಧನ ಸಿಗಲಿದೆ. ಈ ಬಾಕಿ ಹಣವನ್ನು ಪಡೆಯುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ರಮ ತೆಗೆದುಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಕೋರ್ಟ್ ತೀರ್ಪಿನ ನಂತರ ಜಾರ್ಖಂಡ್‌ಗೆ ₹ 1.36 ಲಕ್ಷ ಕೋಟಿ ಬಾಕಿ ಬರಲಿದೆ. ಈ ಹಣದಲ್ಲಿ ಜಾರ್ಖಂಡ್ ಅಭಿವೃದ್ಧಿ ಹಾಗೂ ರಾಜ್ಯದ ಕಲ್ಯಾಣಕ್ಕೆ ವಿನಿಯೋಗಿಸುವುದಾಗಿ ಅಲ್ಲಿನ ಮುಖ್ಯಮಂತ್ರಿ ಹೇಮಂತ್ ಸೊರೇನ್ ಹೇಳಿದ್ದಾರೆ. ಇದೇ ಮಾದರಿಯಲ್ಲಿ ಕರ್ನಾಟಕದ ಪಾಲಿಗೆ ಬರಬೇಕಿರುವ ಮೊತ್ತವನ್ನು ಕೇಂದ್ರದಿಂದ ಪಡೆಯಬೇಕು ಎಂದು ಹೇಳಿದ್ದಾರೆ.

‘ಹನಿಗವನ ಸಾಹಿತ್ಯ ಪ್ರಶಸ್ತಿ’ ಪ್ರದಾನ



ಸುಶೀಲಾ ಸೋಮಶೇಖರ್ ಅವರಿಗೆ ‘ಜರಗನಹಳ್ಳಿ ಶಿವಶಂಕರ್ ಹನಿಗವನ ಸಾಹಿತ್ಯ ಪ್ರಶಸ್ತಿ’ ಪ್ರದಾನ ಮಾಡಲಾಯಿತು. ಕರ್ನಾಟಕ ವಿಕಾಸ ರಂಗದ ಅಧ್ಯಕ್ಷ ವ.ಚ. ಚನ್ನೇಗೌಡ, ವಿಧಾನ ಪರಿಷತ್ ಸದಸ್ಯ ಚಿದಾನಂದಗೌಡ, ಪುರುಷೋತ್ತಮರಾಜು, ಕನ್ನಡಪರ ಚಿಂತಕ ರಾ.ನಂ.ಚಂದ್ರಶೇಖರ್ ಉಪಸ್ಥಿತರಿದ್ದರು —ಪ್ರಜಾವಾಣಿ ಚಿತ್ರ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕರ್ನಾಟಕ ವಿಕಾಸ ರಂಗವು ನಗರದಲ್ಲಿ ಮಂಗಳವಾರ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಲೇಖಕಿ ಸುಶೀಲಾ ಸೋಮಶೇಖರ್ ಅವರಿಗೆ ‘ಜರಗನಹಳ್ಳಿ ಶಿವಶಂಕರ್ ಹನಿಗವನ ಸಾಹಿತ್ಯ ಪ್ರಶಸ್ತಿ’ ಪ್ರದಾನ ಮಾಡಲಾಯಿತು.

ಪ್ರಶಸ್ತಿಯು ₹5 ಸಾವಿರ ನಗದು ಒಳಗೊಂಡಿದೆ. ಚುಟುಕು ಕವಿ ಜರಗನಹಳ್ಳಿ ಶಿವಶಂಕರ್ ಸ್ಮರಣಾರ್ಥ ಈ ಪ್ರಶಸ್ತಿ ನೀಡಲಾಗುತ್ತಿದೆ. ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಜಾನಪದ ವಿದ್ವಾಂಸ ಹಿ.ಚಿ.ಬೋರಲಿಂಗಯ್ಯ, ‘ಕವಿಯಾದವನಿಗೆ ಬರವಣಿಗೆ ಜತೆಗೆ ಅನುಭವವೂ ಮುಖ್ಯ. ಕೆಲ ಸಾಲುಗಳಲ್ಲಿಯೇ ವಿಶಾಲ ಅರ್ಥ ನೀಡುವುದು ಹನಿಗವನದ ವಿಶೇಷ. ಕವಿತೆಗಳು ನಮ್ಮ ಕಣ್ಣು ತೆರೆಸಿ, ಜೀವನಾನುಭವವನ್ನು ತೆರೆದಿಡುತ್ತವೆ. ಕನ್ನಡ ಸಾಹಿತ್ಯ ಪರಂಪರೆಯಲ್ಲಿ ಚುಟುಕು ಸಾಹಿತ್ಯಕ್ಕೆ ಹೊಸ ರೂಪ ಕೊಟ್ಟವರು ಜರಗನಹಳ್ಳಿ ಶಿವಶಂಕರ್’ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸುಶೀಲಾ ಸೋಮಶೇಖರ್, ‘ಜರಗನಹಳ್ಳಿ ಅವರ ಹೆಸರಿನಲ್ಲಿ ನೀಡುವ ಪ್ರಶಸ್ತಿ ಲಭಿಸಿರುವುದು ಸಂತೋಷವನ್ನುಂಟು ಮಾಡಿದೆ. ತವರುಮನೆಗೆ ಹೋದಾಗ ಅರಿಶಿಣ–ಕುಂಕುಮ ನೀಡುವಂತೆ, ಶಿವಶಂಕರ್ ಅವರು ಪುಸ್ತಕಗಳನ್ನು ನೀಡುತ್ತಿದ್ದರು’ ಎಂದರು.

ಎಬಿಸಿ ಕಾರ್ಯಕ್ರಮ ಸ್ಥಗಿತಕ್ಕೆ ಆಗ್ರಹ

ಪ್ರಜಾವಾಣಿ ವಾರ್ತೆ

ಬೆಂಗಳೂರು: ‘ಅಧಿಕಾರಿಗಳ ನಿರ್ಲಕ್ಷ್ಯದಿಂದ ಹಾದಿತಪ್ಪಿರುವ ಬೀದಿ ನಾಯಿಗಳ ಸಂತಾನಶಕ್ತಿಹರಣ ಶಸ್ತ್ರಚಿಕಿತ್ಸೆ (ಎಬಿಸಿ) ಕಾರ್ಯಕ್ರಮವನ್ನು ಸ್ಥಗಿತಗೊಳಿಸಬೇಕು’ ಎಂದು ಆ್ಯಕ್ಷನ್ ಫಾರ್ ಅನಿಮಲ್ ಜಸ್ಟೀಸ್ (ಎಎಫ್‌ಎಜೆ) ಆಗ್ರಹಿಸಿದೆ.

ಬಿಬಿಎಂಪಿ ಮುಖ್ಯ ಆಯುಕ್ತರಿಗೆ ಮಂಗಳವಾರ ಮನವಿ ಸಲ್ಲಿಸಿರುವ ಎಎಫ್‌ಎಜೆ ಸದಸ್ಯರು, ‘ಭಾರತೀಯ ಪಶು ಕಲ್ಯಾಣ ಮಂಡಳಿಯ ಎಲ್ಲ ನಿಯಮಗಳನ್ನು ಉಲ್ಲಂಘಿಸಲಾಗುತ್ತಿದೆ. ಹಲವು ಅಧಿಕಾರಿಗಳು ದಶಕದಿಂದ ಎಬಿಸಿ ಕಾರ್ಯಕ್ರಮದಲ್ಲೇ ಇದ್ದಾರೆ. ಪ್ರತಿವರ್ಷ ಇಲ್ಲೇ ಉಳಿದುಕೊಳ್ಳಲು ಪ್ರಭಾವ ಬಳಸುತ್ತಿರುವ ಕಾರಣ ಎಬಿಸಿ ಕಾರ್ಯಕ್ರಮ ಹಾದಿತಪ್ಪಿದೆ. ಬೀದಿ ನಾಯಿಗಳು ಅನಾರೋಗ್ಯಕ್ಕೆ ತುತ್ತಾಗಿ ಸಾಯುತ್ತಿವೆ’ ಎಂದು ಸಂಘದ ಸದಸ್ಯರು ದೂರಿದರು.

‘ಎಬಿಸಿ ಕಾರ್ಯಕ್ರಮದಲ್ಲಾಗಿರುವ ಲೋಪಗಳ ಕುರಿತು ತನಿಖೆ ನಡೆಸಿ, ಶಿಸ್ತುಕ್ರಮ ಕೈಗೊಳ್ಳಬೇಕು’ ಎಂದರು.

ಎಎಫ್‌ಎಜೆ ಸದಸ್ಯರಾದ ಅರುಣ್ ಪ್ರಸಾದ್, ಸುಜಯಾ ಜಗದೀಶ್, ಡಾ. ಮಿಟ್ಟೂರು ಎನ್. ಜಗದೀಶ್, ರವಿ ನಾರಾಯಣ್, ನೆವಿನಾ ಕಮತಿ, ಸುಜಾತಾ ಪ್ರಸನ್ನ, ವರುಣ ವರ್ಮಾ, ಸರೋಜಾ ದಿಲೀಪನ್, ರಿಚಾ ಜಟಾಲೆ, ಸ್ಮಿತಾ ಅವರು ಉಪಸ್ಥಿತರಿದ್ದರು.

ನಗರದಲ್ಲಿ ಇಂದು

ಕನಕಾಭಿಷೇಕ, ರಾಘವೇಂದ್ರ ಸದ್ಭಾವನಾ ಪ್ರಶಸ್ತಿ ಪ್ರದಾನ: ಮುಖ್ಯ ಅತಿಥಿ: ರಾಜೇಂದ್ರ ಬಾದಾಮಿಕರ, ಮಹೇಶ ಜೋಶಿ, ಅಧ್ಯಕ್ಷತೆ: ಎಚ್.ಎಲ್.ಎನ್. ರಾವ್, ಪ್ರಶಸ್ತಿ ಪುರಸ್ಕೃತರು: ಬಿ.ಕೆ. ಅರುಣ್, ಶ್ರೀಲಕ್ಷ್ಮೀ, ರಮೇಶ್ ಭಟ್, ಅನಿರುದ್ಧ, ಶಶಿಧರ್ ಕೋಟೆ, ಸುರೇಖಾ, ಸೂರಿ ಮಿರಾಡೆ, ವಿಜಯ ಗುರೂಜಿ, ಆಯೋಜನೆ: ಶ್ರೀ ರಾಘವೇಂದ್ರ ಸ್ವಾಮಿಗಳ 353ನೇ ಆರಾಧನಾ ಮಹೋತ್ಸವ, ಸ್ಥಳ: ಕೋದಂಡರಾಮ ವಿದ್ಯಾರ್ಥಿ ಸೇವಾ ಸಂಘ, ರಿಸರ್ವಾಯರ್ ಸ್ಟ್ರೀಟ್, ಕುಮಾರಪಾರ್ಕ್ ಪಶ್ಚಿಮ, ಬೆಳಿಗ್ಗೆ 9

ಪುಸ್ತಕಗಳ ಪ್ರದರ್ಶನ ಮತ್ತು ಮಾರಾಟ: ಉದ್ಘಾಟನೆ: ನ್ಯಾ.ಎನ್. ವಿ. ಅಂಜಾರಿಯಾ, ಅಧ್ಯಕ್ಷತೆ: ಕೆ.ಜಿ. ರಾಘವನ್, ಮುಖ್ಯ ಅತಿಥಿ: ವಿವೇಕ್ ಸುಬ್ಬಾರೆಡ್ಡಿ, ಆಯೋಜನೆ: ವಕೀಲರ ಸಂಘ, ಭಾರತೀಯ ವಿದ್ಯಾಭವನ, ಸ್ಥಳ: ಹೈಕೋರ್ಟ್ ಸಭಾಂಗಣ 2, ಬೆಳಿಗ್ಗೆ 10

ಪ್ರಥಮ ವಾರ್ಷಿಕ ಘಟಿಕೋತ್ಸವ: ಅಧ್ಯಕ್ಷತೆ: ಥಾವರಚಂದ್ ಗೆಹಲೋತ್, ಘಟಿಕೋತ್ಸವ ಭಾಷಣ: ಪ್ರೊ. ಮಾಮಿದಾಳ ಜಗದೀಶ್ ಕುಮಾರ್, ಉಪಸ್ಥಿತಿ: ಎಂ.ಸಿ. ಸುಧಾಕರ್, ಪ್ರೊ. ಶ್ರೀನಿವಾಸ ಎಸ್. ಬಳ್ಳಿ, ಆಯೋಜನೆ: ನೃಪತುಂಗ ವಿಶ್ವವಿದ್ಯಾಲಯ, ಸ್ಥಳ: ಜ್ಞಾನಜ್ಯೋತಿ ಸಭಾಂಗಣ, ಅರಮನೆ ರಸ್ತೆ, ಬೆಳಿಗ್ಗೆ 11

‘ನವ ಯುಗದ ವಿಶ್ವವಿದ್ಯಾಲಯಗಳ ನಿರ್ಮಾಣ’ ವಿಷಯದ ಬಗ್ಗೆ ಉಪನ್ಯಾಸ: ಮಾಮಿದಾಳ ಜಗದೇಶ್ ಕುಮಾರ್, ಆಯೋಜನೆ: ಸೆಂಟರ್ ಫಾರ್ ಎಜುಕೇಶನಲ್ ಎಕ್ಸಲೆನ್ಸ್ ಆ್ಯಂಡ್ ಡೆವಲಪ್‌ಮೆಂಟ್, ಸ್ಥಳ: ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್‌ಕೆಸಿಸಿಐ), ಕೆ.ಜಿ. ರಸ್ತೆ, ಮಧ್ಯಾಹ್ನ 2

ಸ್ವಾತಂತ್ರ್ಯ ದಿನಾಚರಣೆ ಹಾಗೂ ‘ಡಾ. ಜೀವರಾಜ್ ಆಳ್ವ ದತ್ತಿನಿಧಿ ಸ್ಪರ್ಧೆ’ಗಳ ಬಹುಮಾನ ವಿತರಣಾ ಸಮಾರಂಭ: ಉದ್ಘಾಟನೆ: ಎಲ್. ಹನುಮಂತಯ್ಯ, ಅಧ್ಯಕ್ಷತೆ: ಕೆ. ಮೋಹನದೇವ್ ಆಳ್ವ, ಮುಖ್ಯ ಅತಿಥಿಗಳು: ಸುನಂದ ರು. ಬಸಪ್ಪ, ರು. ಬಸಪ್ಪ, ಆಯೋಜನೆ ಹಾಗೂ ಸ್ಥಳ: ಅಖಿಲ ಕರ್ನಾಟಕ ಮಕ್ಕಳ ಕೂಟದ ಆವರಣ, ಕೋಟೆ, ಮಧ್ಯಾಹ್ನ 3.30


ಸ್ವಾತಂತ್ರ್ಯೋತ್ಸವ ಸಂಭ್ರಮಾಚರಣೆ ಪ್ರಯುಕ್ತ ‘ಅಗ್ನಿಶಿಖೆ’ ನಾಟಕ ಪ್ರದರ್ಶನ: ಆಯೋಜನೆ: ರಂಗ ಸೇತುವೆ ಟ್ರಸ್ಟ್, ಸ್ಥಳ: ನಯನ ಸಭಾಂಗಣ, ಜೆ.ಸಿ. ರಸ್ತೆ, ಸಂಜೆ 5.30

ಹರಿನಾಮ ಸಂಕೀರ್ತನೆ: ಸುಷ್ಮಾ ಶ್ರೇಯಸ್ ಮತ್ತು ಸಂಗಡಿಗರು, ಆಯೋಜನೆ ಹಾಗೂ ಸ್ಥಳ: ವಜ್ರಕ್ಷೇತ್ರ ಅಭಯ ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನ, #152/1, 7ನೆ ಮುಖ್ಯರಸ್ತೆ, 7ನೆ ಅಡ್ಡರಸ್ತೆ, 3ನೆ ಬ್ಲಾಕ್, ತ್ಯಾಗರಾಜನಗರ, ಸಂಜೆ 6.30

ಹರಿದಾಸ ವಾಣಿ: ರೂಪಾ ಪ್ರಭಂಜನ, ರಮ್ಯಾ ಸುಧೀರ್ ಮತ್ತು ಸಂಗಡಿಗರು, ಆಯೋಜನೆ ಹಾಗೂ ಸ್ಥಳ: ರಾಘವೇಂದ್ರ ಸ್ವಾಮಿಗಳ ಮಠ, 10ನೇ ಮುಖ್ಯರಸ್ತೆ, 6ನೇ ಅಡ್ಡರಸ್ತೆ, ಪ್ರಕಾಶನಗರ, ಸಂಜೆ 6.30

ದಾಸರ ಪದಗಳ ಗಾಯನ: ಭವಾನಿ ಎಂ. ರಾವ್ ಮತ್ತು ಸಂಗಡಿಗರು, ಆಯೋಜನೆ ಹಾಗೂ ಸ್ಥಳ: ವ್ಯಾಸರಾಜ ಮಠ (ಸೋಸಲೆ), 5ನೆ ಮುಖ್ಯರಸ್ತೆ, ಸುಬ್ರಹ್ಮಣ್ಯನಗರ, ರಾಜಾಜಿನಗರ 2ನೆ ಹಂತ, ಸಂಜೆ 7

ವಿಶ್ವೇಶ್ವರ ಭಟ್ ಅವರ ‘ಸಿಂಗಾಪುರ ಕೆಲವು ಟಿಪ್ಪಣಿಗಳು’, ಡಿ.ವಿ. ಗುರುಪ್ರಸಾದ್ ಅವರ ‘ಪಾಕಿಸ್ತಾನದ ಐ.ಎಸ್.ಐ’ ಹಾಗೂ ಎಚ್. ಡುಂಡಿರಾಜ್ ಅವರ ‘ಒಲವಿನ ಒಲಂಪಿಕ್ಸ್’ ಪುಸ್ತಕ ಬಿಡುಗಡೆ: ಮಲ್ಲೇಪುರಂ ಜಿ. ವೆಂಕಟೇಶ್, ಪುಸ್ತಕದ ಬಗ್ಗೆ ಮಾತು: ಜಗದೀಶ ಶರ್ಮಾ ಸಂಪ, ಉಪಸ್ಥಿತಿ: ನಿತಿನ್ ಷಾ, ಆಯೋಜನೆ ಹಾಗೂ ಸ್ಥಳ: ಸಪ್ನ ಬುಕ್ ಹೌಸ್, ಗಾಂಧಿನಗರ, ಸಂಜೆ 5



ಮಲ್ಲೇಪುರಂ ಜಿ. ವೆಂಕಟೇಶ್

ಸಾಹಿತ್ಯ, ಸಾಂಸ್ಕೃತಿಕ ಸೇರಿ ವಿವಿಧ ಪ್ರಕಾರಗಳ ಕಾರ್ಯಕ್ರಮಗಳ ಆಮಂತ್ರಣ ಪತ್ರಿಕೆಗಳನ್ನು ‘ನಗರದಲ್ಲಿ ಇಂದು’ ಅಂಕಣದಲ್ಲಿ ಪ್ರಕಟಿಸಲು ಈ ಕೆಳಗಿನ ಇ–ಮೇಲ್‌ಗೆ (ಸಂಜೆ 6 ಗಂಟೆ ಒಳಗೆ) ಕಳುಹಿಸಿ nagaradalli_indu@prajavani.co.in

ಅನುಮತಿ ವಿಳಂಬ ಮಾಡುತ್ತಿರುವುದು ರಾಜ್ಯಪಾಲರ ತಾರತಮ್ಯ ನೀತಿಗೆ ದ್ಯೋತಕ: ಸಿದ್ದರಾಮಯ್ಯ ಟೀಕೆ

ಎಚ್‌ಡಿಕೆ ವಿರುದ್ಧ ತನಿಖೆ: ವಿಳಂಬ ಏಕೆ?

ಪ್ರಜಾವಾಣಿ ವಾರ್ತೆ



ಸಿದ್ದರಾಮಯ್ಯ

ಬೆಂಗಳೂರು: 'ನಿಯಮ ಉಲ್ಲಂಘಿಸಿ ಸಾಯಿ ವೆಂಕಟೇಶ್ವರ ಮಿನರಲ್ಸ್ ಕಂಪನಿಗೆ ಗಣಿ ಗುತ್ತಿಗೆ ಮಂಜೂರು ಮಾಡಿರುವ ಆರೋಪದಲ್ಲಿ ಎಚ್‌.ಡಿ. ಕುಮಾರಸ್ವಾಮಿ ವಿರುದ್ಧ ಆರೋಪ ಪಟ್ಟಿ ಸಲ್ಲಿಸಲು ಅನುಮತಿ ನೀಡದ ರಾಜ್ಯಪಾಲರು, ನನ್ನ ವಿರುದ್ಧ ಟಿ.ಜೆ.ಅಬ್ರಾಹಂ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿದ ತಕ್ಷಣ ಅನುಮತಿ ನೀಡಿದ್ದಾರೆ. ಇಂತಹ ತಾರತಮ್ಯ ಏಕೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ಸುದ್ದಿಗಾರರ ಜೊತೆ ಮಾತನಾಡಿದ ಅವರು, 'ನನ್ನ ವಿರುದ್ಧ ತನಿಖೆಗೆ ಅನುಮತಿ ನೀಡುವ ಮೂಲಕ ರಾಜ್ಯಪಾಲರು ತಾರತಮ್ಯ ಎಸಗಿದ್ದಾರೆ. ಅವರು ರಾಷ್ಟ್ರಪತಿಯ ಪ್ರತಿನಿಧಿಯಾಗಿ ಕೆಲಸ ಮಾಡಬೇಕೇ ಹೊರತು, ಕೇಂದ್ರ ಸರ್ಕಾರದ ಪ್ರತಿನಿಧಿಯಾಗಿ ಅಲ್ಲ' ಎಂದರು.

ಕುಮಾರಸ್ವಾಮಿ ವಿರುದ್ಧ ಆರೋಪ ಪಟ್ಟಿ ಸಲ್ಲಿಸಲು ಅನುಮತಿ ಕೋರಿ ರಾಜ್ಯಪಾಲರಿಗೆ ಲೋಕಾಯುಕ್ತ ಕಚೇರಿಯಿಂದ ಮತ್ತೊಮ್ಮೆ ಮನವಿ ಮಾಡಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, '2023ರ ನ. 23ರಂದು ಲೋಕಾಯುಕ್ತದವರು ಅನುಮತಿ ಕೋರಿದ್ದರು. ಆದರೆ, ರಾಜ್ಯಪಾಲರು ಯಾವುದೇ ನಿರ್ಣಯ ಕೈಗೊಳ್ಳದ ಕಾರಣ ಮತ್ತೊಮ್ಮೆ ಅನುಮತಿ ಕೋರಿದ್ದಾರೆ' ಎಂದರು.

'ರಾಜ್ಯಪಾಲರನ್ನು ನಿಂದಿಸಲಾಗಿದೆ' ಎಂದು ಕಾಂಗ್ರೆಸ್ ವಿರುದ್ಧ ಬಿಜೆಪಿ ಪ್ರತಿಭಟನೆ ಹಮ್ಮಿಕೊಂಡಿರುವ ಬಗ್ಗೆ ಕೇಳಿದ ಪ್ರಶ್ನೆಗೆ, 'ರಾಜ್ಯಪಾಲರ ಹುದ್ದೆ ಸಂವಿಧಾನಾತ್ಮಕವಾಗಿದ್ದು, ಅವರ ಮೇಲೆ ಗೌರವವಿದೆ. ಆದರೆ, ಅವರು ತಾರತಮ್ಯ ಧೋರಣೆ ಅನುಸರಿಸಬಾರದು' ಎಂದು ಹೇಳಿದರು.

ಕೇಂದ್ರ ಮಂತ್ರಿಯಾಗಿ ಮುಂದುವರಿಯಬಹುದೇ?: ಕೆಪಿಸಿಸಿ ಕಚೇರಿಯಲ್ಲಿ ಮಾತನಾಡಿದ ಮುಖ್ಯಮಂತ್ರಿಯ ಕಾನೂನು ಸಲಹೆಗಾರ ಎ.ಎಸ್. ಪೊನ್ನಣ್ಣ, 'ಕುಮಾರಸ್ವಾಮಿ ವಿರುದ್ಧ ಗಂಭೀರ ಆರೋಪಗಳಿವೆ. ಆರೋಪ ಪಟ್ಟಿ ಸಲ್ಲಿಸಲು ರಾಜ್ಯಪಾಲರಿಂದ ಲೋಕಾಯುಕ್ತ ಮತ್ತೊಮ್ಮೆ ಅನುಮತಿ ಕೇಳಿದೆ. ಆದರೆ, ಕುಮಾರಸ್ವಾಮಿ ತಿರುಚಿ ಮಾತನಾಡುತ್ತಿದ್ದಾರೆ. ಅವರ ಮೇಲಿನ ಆರೋಪ ಲೋಕಾಯುಕ್ತದ ಚಾರ್ಜ್‌ಶೀಟ್ ನಲ್ಲಿದೆ. ಅಂಥವರು ಕೇಂದ್ರ ಮಂತ್ರಿಯಾಗಿ ಮುಂದುವರಿಯಬಹುದೇ' ಎಂದು ಪ್ರಶ್ನಿಸಿದರು.

ವಿಧಾನ ಪರಿಷತ್ ಸರ್ಕಾರದ ಮುಖ್ಯ ಸಚೇತಕ ಸಲೀಂ ಅಹಮದ್, 'ಕುಮಾರಸ್ವಾಮಿ ಪ್ರಕರಣದಲ್ಲಿ ಅನುಮತಿ ನೀಡದ ರಾಜ್ಯಪಾಲರು, ಮುಖ್ಯಮಂತ್ರಿ ವಿರುದ್ಧ ತಕ್ಷಣ ಅನುಮತಿ ನೀಡಿದ್ದಾರೆ. ರಾಜ್ಯಪಾಲರು ರಾಜಕೀಯ ಮಾಡಬಾರದು. ಕಾನೂನು ಪ್ರಕಾರವೇ ನಡೆದುಕೊಳ್ಳಬೇಕು' ಎಂದರು.

'ಸಿದ್ದರಾಮಯ್ಯಗೆ ತೊಂದರೆಯಾದರೆ ತೆಲಂಗಾಣ ಸರ್ಕಾರಕ್ಕೂ ಕಂಟಕ'



ಸತೀಶ್ ಜಾರಕಿಹೊಳಿ

ಬೆಂಗಳೂರು: 'ಮುಖ್ಯಮಂತ್ರಿ ಸ್ಥಾನದಿಂದ ಸಿದ್ದರಾಮಯ್ಯ ಅವರ ಬದಲಾವಣೆ ಸಾಧ್ಯವೇ ಇಲ್ಲ. ನೂರಕ್ಕೆ ನೂರು ಅವರೇ ಮುಂದುವರೆಯುತ್ತಾರೆ' ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.


ಸುದ್ದಿಗಾರರ ಜೊತೆ ಮಂಗಳವಾರ ಮಾತನಾಡಿದ ಅವರು, 'ರಾಜ್ಯದಲ್ಲಿ ಸಿದ್ದರಾಮಯ್ಯ ಅವರಿಗೆ ಏನಾದರೂ ತೊಂದರೆಯಾದರೆ, ತೆಲಂಗಾಣ ಸರ್ಕಾರವೂ ಪತನವಾಗಲಿದೆ' ಎಂದರು.

'ಸಿದ್ದರಾಮಯ್ಯ ಅವರನ್ನು ಕುಗ್ಗಿಸಿದರೆ ಸರ್ಕಾರವನ್ನು ಬೀಳಿಸಬಹುದೆಂಬ ಲೆಕ್ಕಾಚಾರದಲ್ಲಿ ಬಿಜೆಪಿ – ಜೆಡಿಎಸ್‌ನವರು ಇದ್ದಾರೆ. ಈ ಕೆಲಸದಲ್ಲಿ ಯಶಸ್ವಿಯಾದರೆ ಅವರು ತೆಲಂಗಾಣ ಕಾಂಗ್ರೆಸ್ ಸರ್ಕಾರವನ್ನು ತೆಗೆಯಲು ಪ್ರಯತ್ನಿಸಲಿದ್ದಾರೆ. ಹೀಗಾಗಿ, ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಪತನಗೊಳಿಸಲು ಬಿಜೆಪಿಯವರಿಗೆ ಅವಕಾಶ ನೀಡಬಾರದು. ಈ ಕಾರಣಕ್ಕೆ ಸಿದ್ದರಾಮಯ್ಯ ಪರ ಹೈಕಮಾಂಡ್ ಮತ್ತಷ್ಟು ಬಲವಾಗಿ ನಿಲ್ಲಬೇಕು' ಎಂದರು.

'ಸಿದ್ದರಾಮಯ್ಯ ಅವರ ಮೇಲಿನ ಯಾವುದೇ ಆರೋಪ ಸಾಬೀತಾಗಿಲ್ಲ. ಆದರೂ ಅವರನ್ನು ಬಿಜೆಪಿ ಗುರಿ ಮಾಡಿದೆ. ಮುಡಾ ಪ್ರಕರಣದಲ್ಲಿ ನಾವು ಕಾನೂನು ಮತ್ತು ರಾಜಕೀಯ ಹೋರಾಟ ಮಾಡುತ್ತೇವೆ' ಎಂದೂ ಹೇಳಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜೊತೆ ಸೋಮವಾರ ರಾತ್ರಿ ರಹಸ್ಯ ಮಾತುಕತೆ ನಡೆಸಿದ ಕುರಿತು ಕೇಳಿದ ಪ್ರಶ್ನೆಗೆ, 'ಅವರು ನಮ್ಮ ಪಕ್ಷದ ಮುಖ್ಯಸ್ಥರು. ಚಿಕ್ಕೋಡಿ, ಬೆಳಗಾವಿ, ಬೆಳಗಾವಿ ಗ್ರಾಮಾಂತರ ಜಿಲ್ಲೆಗೆ ಪಕ್ಷದ ಅಧ್ಯಕ್ಷರನ್ನು ನೇಮಕ ಮಾಡಬೇಕಿದೆ. ಹೊಸ ಅಧ್ಯಕ್ಷರ ಪಟ್ಟಿ ಕಳುಹಿಸುವಂತೆ ಅವರು ಹೇಳಿದ್ದರು. ಆ ಬಗ್ಗೆ ಚರ್ಚಿಸಲು ಅವರನ್ನು ಭೇಟಿ ಮಾಡಿದ್ದೆ' ಎಂದರು.

ರಾಜ್ಯಪಾಲರಿಂದ ಬಿಜೆಪಿ ಅಧ್ಯಕ್ಷರಂತೆ ಕೆಲಸ: ಹರಿಪ್ರಸಾದ್



ಬಿ.ಕೆ. ಹರಿಪ್ರಸಾದ್

ಮಂಗಳೂರು: ಪ್ರಸ್ತುತ ರಾಜಕೀಯ ಬೆಳವಣಿಗೆಗಳನ್ನು ಗಮನಿಸಿದರೆ ರಾಜ್ಯಪಾಲರು ಬಿಜೆಪಿ ಅಧ್ಯಕ್ಷರಂತೆ ಕೆಲಸ ಮಾಡುತ್ತಿದ್ದಾರೆ ಅನ್ನಿಸುತ್ತಿದೆ ಎಂದು ಕಾಂಗ್ರೆಸ್ ಮುಖಂಡ ಬಿ.ಕೆ. ಹರಿಪ್ರಸಾದ್ ಮಂಗಳವಾರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರು ರಾಜಭವನವನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ. ಈ ಹಿಂದೆ ಬಿಜೆಪಿ ಆಪರೇಷನ್ ಕಮಲದ ಮೂಲಕ ಸರ್ಕಾರ ಕೆಡವಿತ್ತು. ಈಗ ಇನ್ನೊಂದು ರೀತಿಯ ವಾಮಮಾರ್ಗದ ಮೂಲಕ ಸರ್ಕಾರ ಅಸ್ಥಿರಗೊಳಿಸಲು ಪ್ರಯತ್ನಿಸುತ್ತಿದೆ ಎಂದು ದೂರಿದರು.

'ಸಿದ್ದರಾಮಯ್ಯ ಮೇಲೆ ಮಾಡುತ್ತಿರುವ ಆರೋಪ ಕಪೋಲಕಲ್ಪಿತವಾಗಿದೆ. ಬಿ.ಎಸ್.ಯಡಿಯೂರಪ್ಪ ಪ್ರಕರಣಕ್ಕೂ ಸಿದ್ದರಾಮಯ್ಯ ಪ್ರಕರಣಕ್ಕೂ ತುಂಬಾ ವ್ಯತ್ಯಾಸ ಇದೆ. ಸಿದ್ದರಾಮಯ್ಯ ಅಧಿಕಾರ ದುರುಪಯೋಗ ಪಡಿಸಿಕೊಂಡಿಲ್ಲ. ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದಾಗ ₹20 ಕೋಟಿ ಮೊತ್ತವನ್ನು ಚೆಕ್ ರೂಪದಲ್ಲಿ ಪಡೆದಿದ್ದರು. ಅದು ನ್ಯಾಯಾಲಯದಲ್ಲಿ ಸಾಬೀತಾಗಿತ್ತು. ಇಂದಿನ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಗಡಿಪಾರು ಮಾಡಿದ್ದನ್ನು ಸುಪ್ರೀಂ ಕೋರ್ಟ್ ಎತ್ತಿ ಹಿಡಿದಿತ್ತು. ಅದನ್ನು ನಾವು ಪ್ರಶ್ನಿಸಿದರೆ ಅವರು ಅಧಿಕಾರದಲ್ಲಿ ಮುಂದುವರಿಯುತ್ತಾರೆಯೇ' ಎಂದು ಪ್ರಶ್ನಿಸಿದರು. 'ರಾಜ್ಯಪಾಲರು ಹಿಂದೆ ರಾಜಕಾರಣಿ ಆಗಿದ್ದವರು, ಅವರನ್ನು ನಾನು ಹತ್ತಿರದಿಂದ ಬಲ್ಲೆ. ಬಿಜೆಪಿಯವರಿಗೆ ದಲಿತರ ಮೇಲೆ ಪ್ರೀತಿ ಇದ್ದರೆ ಸಂವಿಧಾನ ಬದಲಾವಣೆ ಬಗ್ಗೆ ಯಾಕೆ ಮಾತನಾಡುತ್ತಿದ್ದರು? ಸಾಂವಿಧಾನಿಕ ಹುದ್ದೆಯಲ್ಲಿದ್ದವರ ಬಗ್ಗೆ ನಾವು ಮಾತನಾಡುವುದು ಸರಿಯಲ್ಲ, ಕಾನೂನು ಹೋರಾಟ ಮಾಡುತ್ತೇವೆ' ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಕಾಂಗ್ರೆಸ್ ಸರ್ಕಾರ ಹತ್ತು ವರ್ಷ ಇರಲಿದೆ: ಡಿಕೆಶಿ

ಕಲಬುರಗಿ: 'ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಎಲ್ಲರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಪರವಾಗಿ ನಿಂತಿದ್ದೇವೆ' ಎಂದು ಪುನರುಚ್ಚರಿಸಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಐದು ವರ್ಷ ಸಿದ್ದರಾಮಯ್ಯ ಅವರೇ ಸಿ.ಎಂ. ಆಗಿರುತ್ತಾರೆಯೇ ಎಂಬ ಮಾಧ್ಯಮದವರ ಪ್ರಶ್ನೆಗೆ, 'ಹತ್ತು ವರ್ಷ ನಮ್ಮ ಸರ್ಕಾರವೇ ಇರಲಿದೆ' ಎಂದು ಚುಟುಕಾಗಿ ಪ್ರತಿಕ್ರಿಯಿಸಿದರು.

ಇಲ್ಲಿ ಮಂಗಳವಾರ ಮಾತನಾಡಿದ ಅವರು, 'ಶಾಸಕಾಂಗ ಸಭೆಯ ಬಳಿಕ ಮುಖ್ಯಮಂತ್ರಿಗಳು ದೆಹಲಿಗೆ ತೆರಳುವರು. ಅಲ್ಲಿನ ನಾಯಕರಿಗೆ 'ಮುಡಾ' ಪ್ರಕರಣದ ಸಂಪೂರ್ಣ ಮಾಹಿತಿ ನೀಡಲಿದ್ದು, ಇದರಲ್ಲಿ ಯಾವುದೇ ವಿಶೇಷ ಅರ್ಥವಿಲ್ಲ' ಎಂದರು.

ರಾಜ್ಯಪಾಲರನ್ನು ಟೀಕಿಸಿದವರ ವಿರುದ್ಧ ಪ್ರಕರಣ ದಾಖಲಿಸಬೇಕೆಂಬ ಬಿಜೆಪಿಗರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, 'ಅವರನ್ನು ಹೊಸದಾಗಿ ಕಟ್ಟಿಸಿದ ಆಸ್ಪತ್ರೆಗೆ ಸೇರಿಸೋಣ. ರಾಜ್ಯಪಾಲರನ್ನು ಸಂವಿಧಾನದ ಹುದ್ದೆ ಮೇಲೆ ಕೂರಿಸಿದ್ದು ಜಾತಿಯ ಮೇಲಲ್ಲ' ಎಂದು ಸ್ಪಷ್ಟಪಡಿಸಿದರು.



ಡಿ.ಕೆ. ಶಿವಕುಮಾರ್

ಫೆಲೋಶಿಪ್ ಯೋಜನೆ ಉದ್ಘಾಟಿಸಿ ಮಾತನಾಡಿದ ಡಿಸಿಎಂ, 'ಮಹಾತ್ಮ ಗಾಂಧಿ, ಇಂದಿರಾ ಗಾಂಧಿ ಮತ್ತು ರಾಜೀವ್ ಗಾಂಧಿ ಅವರು ಕುಳಿತಿದ್ದಂತಹ ಸ್ಥಾನದಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರನ್ನು ಕೂರಿಸಿದ ಶಕ್ತಿ ಇಲ್ಲಿನ ನೆಲಕ್ಕಿದೆ. ಇಂತಹ ಪ್ರಬುದ್ಧ ನಾಯಕನನ್ನು ಕೊಟ್ಟಿದ್ದಕ್ಕೆ ನಿಮಗೆ ನಮಸ್ಕರಿಸಲು ಬಂದಿದ್ದೇನೆ' ಎಂದು ಖರ್ಗೆ ನಾಯಕತ್ವವನ್ನು ಹೊಗಳಿದರು.



ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಗೋವಿಂದ ಕಾರಜೋಳ ನೇತೃತ್ವದ ಬಿಜೆಪಿ ನಿಯೋಗವು, ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಮೋಹನ್ ಅವರನ್ನು ಭೇಟಿ ಮಾಡಿ ಕಾಂಗ್ರೆಸ್ ನಾಯಕರ ವಿರುದ್ಧ ದೂರು ಸಲ್ಲಿಸಿತು. ಶಾಸಕ ಅವಿನಾಶ್ ಜಾಧವ್, ಬಿಜೆಪಿ ಎಸ್‌ಸಿ ಮೋರ್ಚಾ ಅಧ್ಯಕ್ಷ ಸಿಮೆಂಟ್ ಮಂಜುನಾಥ್, ಎಸ್‌ಟಿ ಮೋರ್ಚಾ ರಾಜ್ಯ ಅಧ್ಯಕ್ಷ ಬಂಗಾರು ಹನುಮಂತು, ಮಾಜಿ ಸಂಸದ ಮುನಿಸ್ವಾಮಿ ಜತೆಗಿದ್ದರು

ಜಾತಿನಿಂದನೆ ಪ್ರಕರಣ ದಾಖಲಿಸಲು ಆಗ್ರಹ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕಾಂಗ್ರೆಸ್ ಪ್ರತಿಭಟನೆ ವೇಳೆ ರಾಜ್ಯಪಾಲರನ್ನು ವೈಯಕ್ತಿಕವಾಗಿ ನಿಂದಿಸಿದ, ಅವರ ಚಿತ್ರಕ್ಕೆ ಚಪ್ಪಲಿಯಲ್ಲಿ ಹೊಡೆದು, ಸುಟ್ಟಿರುವ ಪ್ರಕರಣದಲ್ಲಿ ವಿಧಾನಪರಿಷತ್ ಸದಸ್ಯ ಐವನ್ ಡಿಸೋಜ, ಸಚಿವರಾದ ಕೃಷ್ಣ ಬೈರೇಗೌಡ, ಜಮೀರ್ ಅಹಮದ್ ಖಾನ್, ದಿನೇಶ್ ಗುಂಡೂರಾವ್ ಮತ್ತಿತರರ ವಿರುದ್ಧ ಪೊಲೀಸರು ಸ್ವಯಂಪ್ರೇರಿತರಾಗಿ ಜಾತಿ ನಿಂದನೆ ಪ್ರಕರಣ ದಾಖಲಿಸಬೇಕು ಎಂದು ಮೇಲ್ಮನೆಯ ವಿರೋಧಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮತ್ತು ಸಂಸದ ಗೋವಿಂದ ಕಾರಜೋಳ ಒತ್ತಾಯಿಸಿದ್ದಾರೆ.

ಪೊಲೀಸರು ಸ್ವಯಂಪ್ರೇರಿತರಾಗಿ ಜಾತಿ ನಿಂದನೆ ಪ್ರಕರಣ ದಾಖಲಿಸದಿದ್ದರೆ ಕಾನೂನು ಹೋರಾಟದ ಜತೆಗೆ, ರಾಷ್ಟ್ರಪತಿಯವರಿಗೆ ದೂರು ನೀಡಲಾಗುವುದು ಎಂದು ಅವರು ಮಂಗಳವಾರ ಜಂಟಿ ಸುದ್ದಿಗೋಷ್ಠಿಯಲ್ಲಿ ಹೇಳಿದರು.

ರಾಜ್ಯಪಾಲ ಥಾವರಚಂದ್ ಗೆಹಲೋತ್ ಪರಿಶಿಷ್ಟ ಸಮುದಾಯಕ್ಕೆ ಸೇರಿದವರು. ಅವರನ್ನು 'ನಾಲಾಯಕ್' ಎಂದು ಏಕವಚನ ಪ್ರಯೋಗ ಮಾಡಿದ್ದೂ ಅಲ್ಲದೆ, ಕೆಟ್ಟ ಪದಗಳಿಂದ ನಿಂದಿಸಿದ್ದಾರೆ. ರಾಜಭವನದಿಂದ ಗೆಹಲೋತ್ ಅವರನ್ನು ಓಡಿಸುವುದಾಗಿ ಹೇಳಿದ್ದಾರೆ. ಇಷ್ಟೆಲ್ಲ ತಮ್ಮ ಮುಂದೆಯೇ ನಡೆದರೂ ಪೊಲೀಸರು ಮೌನ ವಹಿಸಿದ್ದಾರೆ. ತಕ್ಷಣವೇ ಅವರನ್ನೆಲ್ಲ ಬಂಧಿಸಬೇಕಿತ್ತು ಎಂದು ನಾರಾಯಣಸ್ವಾಮಿ ಹೇಳಿದರು.

ಐವನ್ ಡಿಸೋಜ 'ದೇಶದ್ರೋಹಿ': ಸಂಸದ ಗೋವಿಂದ ಕಾರಜೋಳ ಮಾತನಾಡಿ, ಬಾಂಗ್ಲಾದೇಶದ ಮಾದರಿಯಲ್ಲಿ ರಾಜಭವನಕ್ಕೆ ನುಗ್ಗಿ ರಾಜ್ಯಪಾಲರನ್ನು ಓಡಿಸುವುದಾಗಿ ಐವನ್ ಡಿಸೋಜ ಹೇಳಿದ್ದಾರೆ. ಬಾಂಗ್ಲಾದಲ್ಲಿ ಪಾಕಿಸ್ತಾನಿ ಭಯೋತ್ಪಾದಕರು ವಿದ್ಯಾರ್ಥಿಗಳ ಪ್ರತಿಭಟನೆಯಲ್ಲಿ ಸೇರಿ ಅಲ್ಲಿನ ಪ್ರಧಾನಿಯನ್ನು ಓಡಿಸಿದರು. ಇಲ್ಲಿ ಐವನ್ ಡಿಸೋಜಗೆ ಪಾಕಿಸ್ತಾನದ ಭಯೋತ್ಪಾದಕರ ನಂಟು ಇದೆಯೇ? ದಂಗೆಗೆ ಪ್ರಚೋದನೆ ನೀಡುವುದು ದೇಶದ್ರೋಹಿ ಕೃತ್ಯ ಆಗುತ್ತದೆ. ಆದ್ದರಿಂದ, ಡಿಸೋಜ ಅವರಿಗೆ 'ದೇಶದ್ರೋಹಿ' ಪಟ್ಟ ಕಟ್ಟಿ ವಿಧಾನಪರಿಷತ್ ಸದಸ್ಯತ್ವದಿಂದ ಕಿತ್ತುಹಾಕಬೇಕು ಎಂದು ಒತ್ತಾಯಿಸಿದರು.

ಮುಡಾ ಅಧ್ಯಕ್ಷರ ವಿರುದ್ಧ ಸ್ವಪಕ್ಷೀಯರಿಂದಲೇ ವಾಗ್ದಾಳಿ

ಪ್ರಜಾವಾಣಿ ವಾರ್ತೆ

ಜಯಪುರ (ಮೈಸೂರು): ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ. ಮರೀಗೌಡ ವಿರುದ್ಧ ಸ್ವಪಕ್ಷೀಯರಾದ ಕಾಂಗ್ರೆಸ್ ಮುಖಂಡರೇ ಬಹಿರಂಗವಾಗಿ ಅಸಮಾಧಾನ ಹೊರಹಾಕಿದ್ದು, ಏಕವಚನದಲ್ಲಿ ವಾಗ್ದಾಳಿ ನಡೆಸಿದ್ದಾರೆ.

ಇಲ್ಲಿನ ಮಾವಿನಹಳ್ಳಿ ತೋಟದ ಮನೆಯಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿದ ಕಾಂಗ್ರೆಸ್ ಮುಖಂಡ, ಸಿದ್ದರಾಮಯ್ಯ ಆಪ್ತ ಸಿದ್ದೇಗೌಡ 'ಮುಡಾದ ಗೊಂದಲಕ್ಕೆ ಅಧ್ಯಕ್ಷ ಕೆ.ಮರೀಗೌಡನೇ ಕಾರಣ. ಮುಖ್ಯಮಂತ್ರಿ ಸಿದ್ದರಾಮಯ್ಯ ಗಮನಕ್ಕೆ ತರದೆಯೇ ಪತ್ರ ವ್ಯವಹಾರ ನಡೆಸಿದ್ದೇ ಇಷ್ಟೆಲ್ಲ ರಾದ್ಧಾಂತಕ್ಕೆ ಕಾರಣ' ಎಂದು ಆರೋಪಿಸಿದರು.

'ಮುಖ್ಯಮಂತ್ರಿ ರಾಜಕೀಯ ಜೀವನಕ್ಕೆ ಮರೀಗೌಡನೇ ಕಪ್ಪುಚುಕ್ಕೆಯಾಗಿದ್ದಾನೆ. ಮುಡಾ ನಿವೇಶನದಲ್ಲಿ ಹಲವು ರಾಜಕಾರಣಿಗಳು ಫಲಾನುಭವಿಗಳಿದ್ದಾರೆ. ಅಕ್ರಮವಾಗಿ ನಿವೇಶನ ಪಡೆದವರ ಮೇಲೆ ಕ್ರಮವಾಗಲಿ. ಆದರೆ, ಸಿದ್ದರಾಮಯ್ಯ ಅವರ ವಿರುದ್ಧ ಆಧಾರ ರಹಿತ ಆರೋಪ ಮಾಡಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಸರಿಯಲ್ಲ. ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿರುವುದು ವಿರೋಧ ಪಕ್ಷದವರಿಗೆ ಸಹಿಸಲಾಗದೆ ಪಿತೂರಿ ನಡೆಸುತ್ತಿದ್ದಾರೆ' ಎಂದರು.

ಮುಡಾ ಹಗರಣವಲ್ಲ; ತಪ್ಪಾಗಿದ್ದರೆ ಎಲ್ಲ ಪಕ್ಷದವರೂ ಹೊಣೆ

ಸಮಿತಿಯಲ್ಲಿ ಮೂರೂ ಪಕ್ಷದ ಶಾಸಕರಿದ್ದಾರೆ • ಅಧಿಕಾರಿಗಳದ್ದೇ ಎಲ್ಲ ತೀರ್ಮಾನ– ಮಾಜಿ ಅಧ್ಯಕ್ಷ ಎಚ್‌.ವಿ. ರಾಜೀವ್

• ಆರ್.ಜಿತೇಂದ್ರ

ಪ್ರಜಾವಾಣಿ ಸಂದರ್ಶನ


ಮೈಸೂರು: 'ವಿರೋಧ ಪಕ್ಷಗಳು ಆರೋಪಿಸುವಂತೆ ಮುಡಾದಲ್ಲಿ 'ಹಗರಣ' ನಡೆದಿಲ್ಲ. ಅಧ್ಯಕ್ಷರು ಏಕಪಕ್ಷೀಯವಾಗಿ ನಿರ್ಣಯ ಕೈಗೊಳ್ಳಲು ಆಗದು. ಸಮಿತಿಯಲ್ಲಿ ಮೂರು ಪಕ್ಷಗಳ ಶಾಸಕರಿದ್ದು, ಹಾಗೊಂದು ವೇಳೆ ಲೋಪವಾಗಿದ್ದರೆ ಅದಕ್ಕೆ ಎಲ್ಲರೂ ಹೊಣೆ'

ಇದು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಚ್‌.ವಿ. ರಾಜೀವ್ ಅವರ ಪ್ರತಿಪಾದನೆ.

ಈ ಹಿಂದೆ ಬಿಜೆಪಿ ಸರ್ಕಾರದಲ್ಲಿ ಅವರು ಮುಡಾ ಅಧ್ಯಕ್ಷರಾಗಿದ್ದಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿಗೆ 50;50 ನಿಯಮದಡಿ 14 ನಿವೇಶನಗಳ ಹಂಚಿಕೆಯಾಗಿತ್ತು. ಅವರು ಈಗ ಕಾಂಗ್ರೆಸ್‌ನಲ್ಲಿದ್ದಾರೆ.

ಮುಡಾದಲ್ಲಿ ನಿವೇಶನಗಳ ಹಂಚಿಕೆ ಹಾಗೂ ಅದರ ಸಾಧಕ–ಬಾಧಕಗಳ ಕುರಿತು ಅವರೊಂದಿಗೆ 'ಪ್ರಜಾವಾಣಿ' ನಡೆಸಿದ ಮಾತುಕತೆ ಇಲ್ಲಿದೆ.

ಸಿ.ಎಂ ಪತ್ನಿಗೆ ವಿಜಯನಗರದಲ್ಲೇ ನಿವೇಶನ ಏಕೆ?



ರಾಜೀವ್

2020ರಲ್ಲಿ ಕೈಗೊಳ್ಳಲಾದ ಸಭೆಯ ನಿರ್ಣಯದಂತೆ, ಇತರ ಸಂತ್ರಸ್ತರಂತೆಯೇ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರಿಗೂ 50:50 ಅನುಪಾತದ ಅಡಿ ಬದಲಿ ನಿವೇಶನಗಳ ಹಂಚಿಕೆಯಾಗಿದೆ. ಅದರಲ್ಲಿ ಯಾರೂ ಪ್ರಭಾವ ಬೀರುವ ಪ್ರಶ್ನೆಯೇ ಇಲ್ಲ. ಪಾರ್ವತಿ ಅವರು ಕಾನೂನಾತ್ಮಕವಾಗಿಯೇ ಬದಲಿ ನಿವೇಶನ ಪಡೆದಿದ್ದಾರೆ. ಸಮಾನಾಂತರ ಬಡಾವಣೆಯಲ್ಲಿ ನಿವೇಶನಗಳು ಲಭ್ಯವಿಲ್ಲ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದರು. ಹೀಗಾಗಿ ಲಭ್ಯ ಇರುವ ಕಡೆ ಬದಲಿ ನಿವೇಶನ ಕೊಡಲಾಗಿದೆ.

ನಾನು ಕಾಂಗ್ರೆಸ್‌ಗೆ ಸೇರುವ ಮುನ್ನ, ಸಿದ್ದರಾಮಯ್ಯ ಜೊತೆಗೆ ವಿರೋಧ ಪಕ್ಷದವರಂತೆ ಇದ್ದೆ. ಅವರೊಂದಿಗೆ ಸಂಪರ್ಕವೂ ಇರಲಿಲ್ಲ. ಕಳೆದ ಚುನಾವಣೆ ಸಂದರ್ಭದಲ್ಲಿ ಪಕ್ಷ ಸೇರುವಂತೆ ಅವರು ಆಹ್ವಾನ ನೀಡಿದ್ದರು. ನಂತರದಲ್ಲಷ್ಟೇ ಅವರೊಟ್ಟಿಗೆ ಸಂಪರ್ಕದಲ್ಲಿದ್ದೇನೆ.

• **ಪ್ರಕರಣದಲ್ಲಿ ನಿಮ್ಮ ಪಾತ್ರವೂ ಇದ್ದು, ನಿಮ್ಮನ್ನು ಬಂಧಿಸಬೇಕು ಎಂದು ಬಿಜೆಪಿ–ಜೆಡಿಎಸ್ ನಾಯಕರು ಒತ್ತಾಯಿಸಿದ್ದಾರಲ್ಲಾ?**

ರಾಜೀವ್: ಯಾರೋ ಒಬ್ಬರು ಬಂಧಿಸಿ ಎಂದ ಮಾತ್ರಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಬಂಧಿಸಲು ಸಾಧ್ಯವೇ? ಕಾನೂನು ಉಲ್ಲಂಘಿಸಿದ್ದರೆ ಮಾತ್ರ ಬಂಧಿಸಲು ಸಾಧ್ಯ. ನಾನು ಬಿಜೆಪಿಯಲ್ಲಿದ್ದಾಗ ಆಗದ ತಪ್ಪು ಈಗ ಆಗಿದೆಯೇ? ಪಕ್ಷ ಬದಲಿಸಿದ ಮಾತ್ರಕ್ಕೆ ಕಾನೂನು ಬದಲಾಗುವುದಿಲ್ಲ.

ಮುಡಾ ಸಮಿತಿಯಲ್ಲಿ ಬಿಜೆಪಿ, ಜೆಡಿಎಸ್, ಕಾಂಗ್ರೆಸ್ ಮೂರು ಪಕ್ಷಗಳ ಶಾಸಕರು ಸದಸ್ಯರಾಗಿದ್ದಾರೆ. ತಪ್ಪು ನಡೆದಿದೆ ಎಂದಾದರೆ ಅಂದೇ ಯಾಕೆ ಯಾರೂ ನನ್ನನ್ನು ಪ್ರಶ್ನಿಸಲಿಲ್ಲ. ಮೇಲಾಗಿ ಅಧ್ಯಕ್ಷರಿಗೆ ಯಾವುದೇ ನಿರ್ಣಯ ಕೈಗೊಳ್ಳುವ ಅಧಿಕಾರವೂ ಇಲ್ಲ.

• **ಹಾಗಿದ್ದರೆ ಮುಡಾದಲ್ಲಿ ಹಗರಣವೇ ನಡೆದಿಲ್ಲವೇ? ನಿವೇಶನಗಳು ಅಕ್ರಮವಾಗಿ ಹಂಚಿಕೆ ಆಗಿರುವುದನ್ನು ಒಪ್ಪುತ್ತೀರೋ, ಇಲ್ಲವೋ?**

ರಾಜೀವ್: ಬಿಜೆಪಿ–ಜೆಡಿಎಸ್ ಆರೋಪಿಸುವಂತೆ ಯಾವ ಹಗರಣವೂ ನಡೆದಿಲ್ಲ. ಕೆಲವು ಅಧಿಕಾರಿಗಳು ದುರ್ಬಳಕೆ ಮಾಡಿಕೊಂಡು ಅಕ್ರಮವಾಗಿ ನಿವೇಶನ ನೀಡಿರಬಹುದು. ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಿ.

• **ಮುಡಾದಲ್ಲಿ 50:50 ಅನುಪಾತದಲ್ಲಿ ನಿವೇಶನಗಳ ಹಂಚಿಕೆ ಕಾನೂನುಬದ್ಧವಾಗಿ ನಡೆದಿದೆಯೇ?**

ರಾಜೀವ್: ಖಂಡಿತ. 2020ರ ಸೆಪ್ಟೆಂಬರ್ 20ರಂದು ನಡೆದ ಸಭೆಗೆ ಅಧಿಕಾರಿಗಳು ಈ ಪ್ರಸ್ತಾವ ಮಂಡಿಸಿದ್ದರು. ಭೂ ಸ್ವಾಧೀನವಾಗದೆಯೇ ಬಡಾವಣೆ ನಿರ್ಮಿಸಿದ ಪ್ರಕರಣಗಳಲ್ಲಿ ಸಂತ್ರಸ್ತರಿಗೆ ಪರಿಹಾರ ನೀಡಬೇಕಿತ್ತು. 2013ರ ಭೂಸ್ವಾಧೀನ ಕಾಯ್ದೆ ಅಡಿ ಪರಿಹಾರ ನೀಡಬೇಕಿದ್ದರೆ ಕೋಟ್ಯಂತರ ರೂಪಾಯಿ ಬೇಕಿತ್ತು. ಮುಡಾ ಅಷ್ಟು ಶಕ್ತವಲ್ಲದ ಕಾರಣ ಬದಲಿ ನಿವೇಶನಗಳ ಹಂಚಿಕೆಗೆ ನಿರ್ಣಯಿಸಲಾಯಿತು. ಎಲ್ಲರೂ ಒಪ್ಪಿಯೇ ನಿರ್ಣಯಿಸಿದೆವು.

• **ಮುಡಾದಲ್ಲಿ ಮಂಜೂರಾತಿ ಪತ್ರಗಳ ಬಳಕೆಯಲ್ಲಿ (ಸೆಕ್ಯುರಿಟಿ ಬಾಂಡ್ ಶೀಟ್) ಅಕ್ರಮ ನಡೆದಿರುವುದನ್ನು ದಾಖಲೆಗಳೇ ಹೇಳುತ್ತಿವೆ. ಈ ಬಗ್ಗೆ ಏನು ಹೇಳುತ್ತೀರಿ?**

ರಾಜೀವ್: ಇದು ಆಡಳಿತಾತ್ಮಕ ವಿಚಾರ. ಅಧಿಕಾರಿಗಳೇ ಎಲ್ಲವನ್ನೂ ಕೈಗೊಳ್ಳುತ್ತಾರೆ. ತನಿಖೆ ನಡೆಸಿ ತಪ್ಪಿತಸ್ಥರ ಮೇಲೆ ಕ್ರಮ ಜರುಗಿಸಲಿ.



ಜಲರಥೋತ್ಸವ ಸಿದ್ಧಾರೂಢರ 95ನೇ ಪುಣ್ಯಾರಾಧನೆ ಅಂಗವಾಗಿ ಹುಬ್ಬಳ್ಳಿ ಸಿದ್ಧಾರೂಢಮಠದಲ್ಲಿ ಮಂಗಳವಾರ ಶ್ರೀಮಠದ ಕೆರೆಯಲ್ಲಿ ಸಿದ್ಧಾರೂಢ ಜಲರಥೋತ್ಸವ ನಡೆಯಿತು -ಪ್ರಜಾವಾಣಿ ಚಿತ್ರ/ ಗೋವಿಂದರಾಜ ಜವಳಿ

ಭೂ ಸುಧಾರಣೆ ಕಾಯ್ದೆಗೆ ತಿದ್ದುಪಡಿ: ಸಿ.ಎಂ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಮೇಲ್ಮನೆಯಲ್ಲಿ ನಾವು (ಕಾಂಗ್ರೆಸ್) ಬಹುಮತ ಪಡೆದ ನಂತರ ಭೂ ಸುಧಾರಣಾ ಕಾಯ್ದೆಗೆ ಮತ್ತೆ ತಿದ್ದುಪಡಿ ತಂದು ಕೃಷಿಕರ ಜಮೀನುಗಳು ಉದ್ಯಮಿಗಳ ಪಾಲಾಗುತ್ತಿರುವುದಕ್ಕೆ ಕಡಿವಾಣ ಹಾಕುತ್ತೇವೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮಂಗಳವಾರ ಆಯೋಜಿಸಿದ್ದ ಡಿ.ದೇವರಾಜ ಅರಸು ಅವರ 109ನೇ ಜನ್ಮ ದಿನಾಚರಣೆ ಸಮಾರಂಭದಲ್ಲಿ ಮಾತನಾಡಿದ ಅವರು, 'ದೇವರಾಜ ಅರಸು ಅವರು ಕೃಷಿಕರ ಅನುಕೂಲಕ್ಕಾಗಿ 'ಉಳುವವನೇ ಹೊಲದೊಡೆಯ' ಎಂದು ಭೂ ಸುಧಾರಣೆ ಕಾಯ್ದೆಗೆ ತಿದ್ದುಪಡಿ ಮಾಡಿದರು. ಆದರೆ, ಬಿಜೆಪಿ ಸರ್ಕಾರ ಅದಕ್ಕೆ ತಿದ್ದುಪಡಿ ತಂದ ಪರಿಣಾಮ ಉದ್ಯಮಿಗಳೂ ಕೃಷಿಕರ ಭೂಮಿ ಪಡೆಯುವಂತಾಗಿದೆ' ಎಂದರು.



ಎಸ್‌.ಕೆ. ಕಾಂತಾ ಅವರಿಗೆ 'ಡಿ. ದೇವರಾಜ ಅರಸು' ಪ್ರಶಸ್ತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರದಾನ ಮಾಡಿದರು. ಸಚಿವರಾದ ಶಿವರಾಜ ತಂಗಡಗಿ, ಎಚ್‌ಸಿ. ಮಹದೇವಪ್ಪ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಶಾಸಕ ರಿಜ್ವಾನ್ ಅರ್ಷದ್ ಇದ್ದರು —ಪ್ರಜಾವಾಣಿ ಚಿತ್ರ

'ವಿಧಾನ ಪರಿಷತ್‌ನಲ್ಲಿ ನಮ್ಮ ಪಕ್ಷ ಬಹುಮತ ಪಡೆದ ತಕ್ಷಣ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರ ಭೂಮಿಯ ಹಕ್ಕು ಖಾತ್ರಿಪಡಿಸಲು '79 ಎ' ಮತ್ತು 'ಬಿ' ಗೆ ಮಾಡಿರುವ ತಿದ್ದುಪಡಿಯನ್ನು ಮತ್ತೆ ಸರಿಪಡಿಸಲಾಗುವುದು' ಎಂದರು.

'ಪ್ರತಿಯೊಬ್ಬರಿಗೂ ಶಿಕ್ಷಣ ಹಾಗೂ ಆರ್ಥಿಕ ಸ್ವಾತಂತ್ರ್ಯ ಸಿಕ್ಕಿದರೆ ಮಾತ್ರ ಜಾತಿ ವ್ಯವಸ್ಥೆ ಹೋಗಬಹುದು. ಅದಕ್ಕಾಗಿಯೇ ಅರಸು ಅವರು ದಲಿತರು, ಮಹಿಳೆಯರು, ರೈತರು, ಅಲ್ಪಸಂಖ್ಯಾತರ ಶಿಕ್ಷಣಕ್ಕೆ ಒತ್ತು ನೀಡಿದರು. ಮಲ ಹೊರುವ ಪದ್ಧತಿ ಸೇರಿದಂತೆ ಅನೇಕ ಅನಿಷ್ಟ ಪದ್ಧತಿಗಳನ್ನು ನಿರ್ಮೂಲನೆ ಮಾಡಿದರು. ಹಿಂದುಳಿದವರನ್ನು ತುಳಿಯಲು ಈಗಲೂ ನಿರಂತರ ಹುನ್ನಾರಗಳು ನಡೆಯುತ್ತಿವೆ. ನಾನು ಮುಖ್ಯಮಂತ್ರಿಯಾದ ಮೇಲೆ ಬಡವರಿಗೆ ಮಹಿಳೆಯರಿಗೆ, ರೈತರಿಗೆ ಅನೇಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದೇವೆ. ಆದರೆ, ಬದಲಾವಣೆ ಬಯಸದ, ಬಡವರ ವಿರೋಧಿ ಪಟ್ಟಭದ್ರರು ಇದನ್ನು ವಿರೋಧಿಸುತ್ತಿದಾರೆ' ಎಂದರು.

'ಮರಣೋತ್ತರ ಭಾರತರತ್ನ'ಕ್ಕೆ ಶಿಫಾರಸು

'ಅರಸು ಅವರ ಜೀವನ ಸಾಧನೆ ಪರಿಗಣಿಸಿ ಅವರಿಗೆ ಕೇಂದ್ರ ಸರ್ಕಾರ 'ಮರಣೋತ್ತರ ಭಾರತ ರತ್ನ' ನೀಡಬೇಕೆಂದು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಲಾಗುವುದು. ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಗೆ 'ದೇವರಾಜ ಅರಸು ಎಲೆಕ್ಟ್ರಾನಿಕ್ ಸಿಟಿ' ಎಂದು ನಾಮಕರಣ ಮಾಡಲಾಗುವುದು' ಎಂದು ಸಿದ್ದರಾಮಯ್ಯ ಹೇಳಿದರು.

'ಕಾರ್ಮಿಕ ನಿಧಿಗೆ ₹5 ಲಕ್ಷ'

'ಪ್ರಶಸ್ತಿ ಮೊತ್ತ ₹ 5 ಲಕ್ಷವನ್ನು ಅಸಂಘಟಿತ ವಲಯದ ಕಾರ್ಮಿಕ ನಿಧಿಗೆ ಬಳಸಲು ಮನವಿ ಮಾಡುತ್ತೇನೆ' ಎಂದು ಡಿ.ದೇವರಾಜ ಅರಸು ಪ್ರಶಸ್ತಿ ಪುರಸ್ಕೃತ ಎಸ್‌.ಕೆ. ಕಾಂತಾ ಹೇಳಿದರು.

ಒಂದು ತಿಂಗಳಲ್ಲಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ದಿನೇಶ್ ಗುಂಡೂರಾವ್ ಸೂಚನೆ

ವೈದ್ಯರ ಸುರಕ್ಷತೆಗೆ ಕಾರ್ಯಪಡೆ: ಸಚಿವ

ಪ್ರಜಾವಾಣಿ ವಾರ್ತೆ



ಬೆಂಗಳೂರು: ರಾಜ್ಯದಲ್ಲಿ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿಗೆ ರಕ್ಷಣೆ ನೀಡುವ ಉದ್ದೇಶದಿಂದ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ವರದಿ ಪಡೆಯಲು ಕಾರ್ಯಪಡೆಯೊಂದನ್ನು ರಚಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣಗಳ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಕೊಲ್ಕತ್ತಾ ಟ್ರೈನಿ ವೈದ್ಯೆಯ ಮೇಲೆ ನಡೆದ ಅತ್ಯಾಚಾರ ಮತ್ತು ಹತ್ಯೆಯ ಘಟನೆಯ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ವೈದ್ಯಕೀಯ ಸಂಘಟನೆಗಳ ಪ್ರತಿನಿಧಿಗಳು ಮತ್ತು ಆರೋಗ್ಯ ಇಲಾಖೆ ಅಧಿಕಾರಿಗಳ ಜತೆ ಮಂಗಳವಾರ ಸಭೆ ನಡೆಸಿದ ಅವರು ಸುದ್ದಿಗಾರರ ಜತೆ ಮಾತನಾಡಿದರು.

ವೈದ್ಯರು, ವೈದ್ಯಕೀಯ ಸಿಬ್ಬಂದಿ ಆಸ್ಪತ್ರೆಗಳ ಮೇಲೆ ದಾಳಿ ಮಾಡಿ ಹಿಂಸಾಚಾರ ತಡೆಯುವ ಉದ್ದೇಶದಿಂದ ಹೊಸ ಕಾಯ್ದೆ ಜಾರಿ ಮಾಡಲಾಗುವುದು. ಇದಕ್ಕಾಗಿ ಈಗಾಗಲೇ ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕಾನೂನು (ತಿದ್ದುಪಡಿ) ಮಸೂದೆಗೆ ರಾಜ್ಯಪಾಲರು ಸೋಮವಾರ ಒಪ್ಪಿಗೆ ನೀಡಿದ್ದಾರೆ ಎಂದರು.

'ಹೊಸ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿ ಮಾಡಲಾಗುವುದು. ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿ ವಿರುದ್ಧ ಅಗೌರವ ತೋರಿದರೆ, ಕೆಟ್ಟದಾಗಿ ಮಾತನಾಡಿದರೆ ಮತ್ತು ಹಿಂಸಾಚಾರ ನಡೆಸಿದರೆ ಕಠಿಣ ಶಿಕ್ಷೆಗೆ ಗುರಿಪಡಿಸಲಾಗುವುದು. ಇದು ಜಾಮೀನುರಹಿತ ಅಪರಾಧ. 3 ರಿಂದ 7 ವರ್ಷದವರೆಗೆ ಜೈಲು ಶಿಕ್ಷೆಯನ್ನೂ ವಿಧಿಸಬಹುದು. ಸಾಮಾಜಿಕ ಜಾಲತಾಣಗಳನ್ನು ದುರ್ಬಳಕೆ ಮಾಡಿಕೊಂಡರೂ ಜಾಮೀನುರಹಿತ ಅಪರಾಧವಾಗುತ್ತದೆ' ಎಂದರು.

ಇದಕ್ಕೆ ಸಂಬಂಧಿಸಿದ ಪ್ರಕರಣಗಳನ್ನು ಬೇಗನೆ ಇತ್ಯರ್ಥಗೊಳಿಸಲು ತ್ವರಿತ ನ್ಯಾಯಾಲಯ ಸ್ಥಾಪಿಸಬೇಕು ಎಂಬ ಸಲಹೆಯೂ ಇದೆ ಎಂದು ಹೇಳಿದರು.

'ಕೊಲ್ಕತ್ತಾದ ಘಟನೆ ಇಡೀ ದೇಶವನ್ನೇ ಬೆಚ್ಚಿಬೀಳಿಸಿದೆ. ವೈದ್ಯ ಸಮೂಹ ಮಾತ್ರವಲ್ಲ, ಎಲ್ಲರಲ್ಲೂ ಅಭದ್ರತೆ ಮತ್ತು ಭಯದ ವಾತಾವರಣ ಮೂಡಿಸಿದೆ. ವೈದ್ಯಕೀಯ ಕ್ಷೇತ್ರದಲ್ಲಿ ಶೇ 50ಕ್ಕೂ ಹೆಚ್ಚು ಮಂದಿ ಮಹಿಳೆಯರೇ ಇದ್ದಾರೆ. ಇವರು ಅಸುರಕ್ಷಿತ ಮತ್ತು ಭಯದ ವಾತಾವರಣದಲ್ಲಿ ಮಾಡಬೇಕಾಗಿದೆ' ಎಂದರು.

ರಾಜ್ಯದಲ್ಲಿ ಹೊಸ ಕಾಯ್ದೆಯಿಂದ ವೈದ್ಯಕೀಯ ಸಮುದಾಯಕ್ಕೆ ಹೆಚ್ಚಿನ ಸುರಕ್ಷತೆ ಸಿಗಲಿದೆ. ವೈದ್ಯರು ಮತ್ತು ವೈದ್ಯಕೀಯ ಸಮುದಾಯವನ್ನು ಗೌರವದಿಂದ ಕಾಣುವ ಬಗ್ಗೆ ಸಮಾಜದಲ್ಲಿ ಜಾಗೃತಿ ಮೂಡಿಸಬೇಕಾಗಿದೆ ಎಂದೂ ಹೇಳಿದರು.

ಆರೋಗ್ಯ ಸಿಬ್ಬಂದಿ ಸುರಕ್ಷತೆಗೆ ಕಾಯ್ದೆಯ ಕವಚ

- ವೈದ್ಯ ಅಥವಾ ವೈದ್ಯಕೀಯ ಸಿಬ್ಬಂದಿಯನ್ನು ಉದ್ದೇಶ ಪೂರ್ವಕವಾಗಿ ಅವಮಾನಿಸುವುದು. ಅವರನ್ನು ನೇರವಾಗಿ ಅಥವಾ ಸಾಮಾಜಿಕ ಮಾಧ್ಯಮದ ಮೂಲಕ ಅಥವಾ ಅನಧಿಕೃತ ವಿಡಿಯೊ ರೆಕಾರ್ಡ್ ಮಾಡಿಕೊಳ್ಳುವುದು, ಛಾಯಾಚಿತ್ರಗಳನ್ನು ತೆಗೆದುಕೊಂಡು ಅವಮಾನಿಸುವುದು, ಹಿಂಸಿಸುವುದು ಮತ್ತು ಅಗೌರವಿಸುವುದನ್ನು ನಿಷೇಧಿಸಲಾಗಿದೆ.
- ಅಪರಾಧ ಎಸಗಿದವರಿಗೆ 3 ವರ್ಷಗಳಿಗೆ ಕಡಿಮೆ ಇಲ್ಲದೆ 7 ವರ್ಷದವರೆಗೆ ಜೈಲು ಶಿಕ್ಷೆ ವಿಧಿಸಬಹುದು.
- ₹20 ಸಾವಿರದಿಂದ ₹2 ಲಕ್ಷದವರೆಗೆ ದಂಡ ವಿಧಿಸಬಹುದು.
- ವೈದ್ಯೋಪಚಾರ ಸಂಸ್ಥೆಯನ್ನು(ಆಸ್ಪತ್ರೆ, ಕ್ಲಿನಿಕ್, ನರ್ಸಿಂಗ್ ಹೋಂ ಇತ್ಯಾದಿ) ಅವಮಾನಿಸುವುದನ್ನೂ ನಿಷೇಧಿಸಲಾಗಿದೆ.
- ವೈದ್ಯರು ಮತ್ತು ಆಸ್ಪತ್ರೆಗಳ ಮೇಲಿನ ದಾಳಿಯಂತಹ ಅಪರಾಧಕ್ಕೆ ಪ್ರಚೋದನೆ ನೀಡುವ ಯಾವುದೇ ವ್ಯಕ್ತಿಗೂ ಮೇಲೆ ಸೂಚಿಸಿದ ಶಿಕ್ಷೆಗಳು ಅನ್ವಯವಾಗಲಿದೆ.
- ಈ ಅಧಿನಿಯಮದ ಅಡಿ ನೋಂದಣಿಯಾದ ಯಾವುದೇ ಪ್ರಕರಣವನ್ನು ಇನ್‌ಸ್ಪೆಕ್ಟರ್ ದರ್ಜೆಗಿಂತ ಕಡಿಮೆ ಇಲ್ಲದ ಪೊಲೀಸ್ ಅಧಿಕಾರಿಯಿಂದ ತನಿಖೆ ಮಾಡಿಸಲಾಗುವುದು. ಈ ಪ್ರಕರಣಗಳ ತನಿಖೆಯನ್ನು ಎಫ್‌ಐಆರ್ ದಾಖಲಾದ ದಿನಾಂಕದಿಂದ 60 ದಿನಗಳ ಅವಧಿಯಲ್ಲಿ ಪೂರ್ಣಗೊಳಿಸಬೇಕು.
- ಆಸ್ಪತ್ರೆಗಳು ಮತ್ತು ವೈದ್ಯಕೀಯ ಸಂಸ್ಥೆಗಳಲ್ಲಿ ಸಾಕಷ್ಟು ಭದ್ರತಾ ಸಿಬ್ಬಂದಿ ನಿಯೋಜಿಸಬೇಕು. ಸಿಸಿಟಿವಿ ಕ್ಯಾಮೆರಾಗಳು, ಸುರಕ್ಷತಾ ಮತ್ತು ಭದ್ರತಾ ಸಾಧನಗಳನ್ನು ಅಳವಡಿಸಬೇಕು. ನಿಯಂತ್ರಣ ಕೊಠಡಿಗಳು ಮತ್ತು ಮುನ್ನೆಚ್ಚರಿಕೆ ವ್ಯವಸ್ಥೆ ಮಾಡಬೇಕು.
- ವೈದ್ಯರು, ಆರೋಗ್ಯ ಕ್ಷೇತ್ರದ ವೃತ್ತಿನಿರತರು, ವೈದ್ಯಕೀಯ ವಿದ್ಯಾರ್ಥಿಗಳು, ಪೊಲೀಸರು ಮುಂತಾದವರನ್ನು ಸಂರಕ್ಷಿಸುವ ವಿಧಾನದ ಬಗ್ಗೆ ಶಿಷ್ಟಾಚಾರಗಳನ್ನು ರೂಪಿಸಬೇಕು.

ಹೈಕೋರ್ಟ್‌ಗೆ ರಾಜ್ಯ ಸರ್ಕಾರದ ಮಾಹಿತಿ; ಸೆ.5ಕ್ಕೆ ವಿಚಾರಣೆ ಮುಂದೂಡಿಕೆ

ಮನೆ ಊಟ: ದರ್ಶನ್ ಅರ್ಜಿ ತಿರಸ್ಕೃತ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಚಿತ್ರದುರ್ಗದ ರೇಣುಕ ಸ್ವಾಮಿ ಕೊಲೆ ಪ್ರಕರಣದ ಆರೋಪಿಯಾಗಿ ವಿಚಾರಣಾಧೀನ ಕೈದಿಯಾಗಿರುವ ನಟ ದರ್ಶನ್ ಮನೆಯಿಂದ ಊಟ ಪಡೆಯಲು ಅನುಮತಿ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ತಿರಸ್ಕರಿಸಲಾಗಿದೆ' ಎಂದು ರಾಜ್ಯ ಸರ್ಕಾರ, ಹೈಕೋರ್ಟ್‌ಗೆ ತಿಳಿಸಿದೆ.

ಈ ಸಂಬಂಧ ನಟ ದರ್ಶನ್ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಸರ್ಕಾರದ ಪರ ರಾಜ್ಯ ಪ್ರಾಸಿಕ್ಯೂಟರ್–1 ಬಿ.ಎ..ಬೆಳ್ಳಿಯಪ್ಪ, 'ಮನೆಯಿಂದ ಊಟ,

ಹೈಕೋರ್ಟ್ ಸುದ್ದಿ



ದರ್ಶನ್

ಹಾಸಿಗೆ ಹಾಗೂ ಪುಸ್ತಕಗಳನ್ನು ತರಿಸಿಕೊಳ್ಳಲು ಅನುಮತಿ ಕೋರಿ ದರ್ಶನ್ ಸಲ್ಲಿಸಿದ್ದ ಅರ್ಜಿಯನ್ನು ರಾಜ್ಯ ಸರ್ಕಾರ ಇದೇ 14ರಂದು ತಿರಸ್ಕರಿಸಿದೆ. ಈ ವಿಷಯವನ್ನು ಅಂದೇ ದರ್ಶನ್ ಗಮನಕ್ಕೆ ತರಲಾಗಿದೆ' ಎಂದು ನ್ಯಾಯಪೀಠಕ್ಕೆ ವಿವರಿಸಿದರು.

ಇದಕ್ಕೆ ಪ್ರತಿಯಾಗಿ ದರ್ಶನ್ ಪರ ಹಾಜರಿದ್ದ ಹೈಕೋರ್ಟ್ ವಕೀಲೆ ಸಂಜೀವಿನಿ ಪಿ.ನಾವದಗಿ, 'ಸರ್ಕಾರದ ಆದೇಶದ ಪ್ರತಿ ನಮಗೆ ಈವರೆಗೂ ತಲುಪಿಲ್ಲ. ಆದೇಶವನ್ನು ಪರಿಶೀಲಿಸಿ ವಾದ ಮಂಡಿಸಲಾಗುವುದು. ಅದಕ್ಕಾಗಿ ಕಾಲಾವಕಾಶ ನೀಡಬೇಕು' ಎಂದು ಕೋರಿದರು. ಇದಕ್ಕೆ ಸಮ್ಮತಿಸಿದ ನ್ಯಾಯಪೀಠ ವಿಚಾರಣೆಯನ್ನು ಸೆ. 5ಕ್ಕೆ ಮುಂದೂಡಿತು. ಪ್ರಕರಣದ ವಿಶೇಷ ಪ್ರಾಸಿಕ್ಯೂಟರ್ ಪಿ.ಪ್ರಸನ್ನ ಕುಮಾರ್ ಹಾಜರಿದ್ದರು.

ಸರ್ಕಾರದ ಆದೇಶದಲ್ಲೇನಿದೆ?: 'ದರ್ಶನ್‌ಗೆ ಫುಡ್ ಪಾಯಿಸನ್ ಆಗಿಲ್ಲ. ಅವರು ಮೂಳೆ ಮತ್ತು ವೈರಲ್ ಜ್ವರದಿಂದ ಬಳಲುತ್ತಿದ್ದರು. ಆ ಸಮಸ್ಯೆಗೆ ಈಗಾಗಲೇ ಚಿಕಿತ್ಸೆ ನೀಡಲಾಗಿದೆ. ಇದನ್ನು ಬಿಟ್ಟು ದೊಡ್ಡ ಆರೋಗ್ಯ ಸಮಸ್ಯೆಗಳಿಲ್ಲ. ಔಷಧಿ ಮತ್ತು ಪೌಷ್ಟಿಕ ಆಹಾರ ಸೇವಿಸಲು ದರ್ಶನ್‌ಗೆ ವೈದ್ಯರು ಸಲಹೆ ನೀಡಿದ್ದಾರೆ. ಜತೆಗೆ, ಬೆನ್ನು ನೋವು ಮತ್ತು ಮುಂಗೈಗಳ ಚಿಕಿತ್ಸೆಗಾಗಿ ಸೂಕ್ತ ವೈದ್ಯಕೀಯ ಸೌಲಭ್ಯ ಒದಗಿಸಲಾಗಿದೆ. ಸದ್ಯ ಯಾವುದೇ ಪೌಷ್ಟಿಕಾಂಶದ ಕೊರತೆಯೂ ಇಲ್ಲ. ದರ್ಶನ್‌ಗೆ ಮನೆ ಊಟ ಅಗತ್ಯ ಎಂದು ವೈದ್ಯರು ಹೇಳಿಲ್ಲ. ಆದ್ದರಿಂದ, ಅವರ ಅರ್ಜಿ ತಿರಸ್ಕರಿಸಲಾಗಿದೆ' ಎಂದು ಸರ್ಕಾರ ಆದೇಶದಲ್ಲಿ ತಿಳಿಸಿದೆ.

'ಮನೆಯಿಂದ ಊಟ, ಹಾಸಿಗೆ ಮತ್ತು ಪುಸ್ತಕ ಪಡೆಯಲು ಅನುಮತಿ ನೀಡುವಂತೆ ರಾಜ್ಯ ಸರ್ಕಾರ ಹಾಗೂ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಅಧೀಕ್ಷಕರಿಗೆ ನಿರ್ದೇಶಿಸಬೇಕು' ಎಂದು ಕೋರಿ ದರ್ಶನ್ ಈ ರಿಟ್ ಅರ್ಜಿ ಸಲ್ಲಿಸಿದ್ದಾರೆ.


ಕೃಷ್ಣನಾಯಕ್ ವಿರುದ್ಧದ ವಿಚಾರಣೆಗೆ ತಡೆ

ಕಾರ್ಕಳದ ಉಮಿಕಲ್ ಬೆಟ್ಟದ ಪರಶುರಾಮ ಪ್ರತಿಮೆ ವಿವಾದ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕಿನ ಉಮಿಕಲ್ ಬೆಟ್ಟದ ಮೇಲೆ ಪರಶುರಾಮನ ಕಂಚಿನ ಪ್ರತಿಮೆ ನಿರ್ಮಾಣ ಕಾಮಗಾರಿಯಲ್ಲಿ ಅಕ್ರಮ ಎಸಗಿದ್ದಾರೆ' ಎಂದು ಆರೋಪಿಸಿ ಶಿಲ್ಪ ಕಲಾವಿದ ಹಾಗೂ 'ಕ್ರಿಷ್ ಆರ್ಟ್ ವರ್ಲ್ಡ್' ಮುಖ್ಯಸ್ಥ ಕೃಷ್ಣ ನಾಯಕ್ ವಿರುದ್ಧ ದಾಖಲಾಗಿರುವ ಕ್ರಿಮಿನಲ್ ಪ್ರಕರಣಕ್ಕೆ ಹೈಕೋರ್ಟ್ ಮಧ್ಯಂತರ ತಡೆ ನೀಡಿದೆ.

'ನನ್ನ ವಿರುದ್ಧ ಕಾರ್ಕಳ ಟೌನ್ ಪೊಲೀಸರು ದಾಖಲಿಸಿರುವ ಎಫ್ಐಆರ್ ಹಾಗೂ ಕಾರ್ಕಳ ಜೆಎಂಎಫ್‌ಸಿ ನ್ಯಾಯಾಲಯದಲ್ಲಿನ ನ್ಯಾಯಿಕ ವಿಚಾರಣೆ ರದ್ದುಪಡಿಸಬೇಕು' ಎಂದು ಕೋರಿ ಬೆಂಗಳೂರಿನ ವಿಶ್ವೇಶ್ವರಯ್ಯ ಲೇ ಔಟ್ ನಿವಾಸಿಯಾದ ಕೃಷ್ಣ ನಾಯಕ್ ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು.



ವಿಚಾರಣೆ ವೇಳೆ ಅರ್ಜಿದಾರರ ಪರ ಹಿರಿಯ ವಕೀಲ ಎಂ.ಅರುಣ್ ಶ್ಯಾಮ್, 'ಪ್ರಕರಣದ ತನಿಖೆಗೆ ಸರ್ಕಾರ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ತನಿಖಾ ಆಯೋಗವೊಂದನ್ನು ರಚಿಸಿದೆ. ಅಂತೆಯೇ, ಪ್ರಕರಣವನ್ನು ಸಿಐಡಿಗೂ ವಹಿಸಿದೆ. ಇದಕ್ಕೆ ನ್ಯಾಯಾಲಯದಲ್ಲಿ ತಡೆ ಇದೆ. ಏತನ್ಮಧ್ಯೆ, ಖಾಸಗಿ ದೂರೊಂದನ್ನೂ ಇದೇ ವಿಷಯಕ್ಕೆ ಸಂಬಂಧಿಸಿದಂತೆ ದಾಖಲಿಸಲಾಗಿದೆ. ಸರ್ಕಾರ ಒಟ್ಟು ಮೂರು ಬಗೆಯಲ್ಲಿ ಈ ಪ್ರಕರಣದ ತನಿಖೆ ನಡೆಸುತ್ತಿದೆ' ಎಂದು ದೂರಿದರು.

'ಅರ್ಜಿದಾರರು ನಿರ್ಮಿತಿ ಕೇಂದ್ರದ ಕಾರ್ಯಾದೇಶದಂತೆ ತಮ್ಮ ಕೆಲಸ ನಿರ್ವಹಿಸುತ್ತಿದ್ದಾರೆ. ಆದರೆ, ಕಾನೂನು ತೊಡಕುಗಳನ್ನು ಸೃಷ್ಟಿಸಿ ಕಾಮಗಾರಿ ಪೂರ್ಣಗೊಳಿಸಲು ನಿರಂತರವಾಗಿ ಅಡ್ಡಿಪಡಿಸಲಾಗುತ್ತಿದೆ. ಹೀಗಾಗಿ, ಪ್ರಕರಣ ರದ್ದುಪಡಿಸಬೇಕು ಮತ್ತು ಕಾಮಗಾರಿ ಮುಂದುವರಿಸಲು ನಿರ್ಮಿತಿ ಕೇಂದ್ರಕ್ಕೆ ಅನುಮತಿ ನೀಡಬೇಕು' ಎಂದು ಮನವಿ ಮಾಡಿದರು.

ಇದಕ್ಕೆ ಫಿರ್ಯಾದುದಾರರ ಪರ ವಕೀಲರು, 'ಪರಶುರಾಮ ಪ್ರತಿಮೆಯ ಗುಣಮಟ್ಟ, ಅದರ ಸ್ಥಾಪನೆ ನಮಗೆ ಮುಖ್ಯವಲ್ಲ. ನಮ್ಮ ಮನವಿ ಏನಿದ್ದರೂ, ಜಿಎಸ್‌ಟಿ ವಂಚನೆ ಮತ್ತು ಅರ್ಜಿದಾರರ ಖಾತೆಯಿಂದ ನಿರ್ಮಿತಿ ಕೇಂದ್ರದ ಖಾತೆಗೆ ಅಕ್ರಮವಾಗಿ ಹಣ ವರ್ಗಾವಣೆ ಆಗಿರುವುದರ ಬಗ್ಗೆ ಮಾತ್ರ' ಎಂದು ಸಮಜಾಯಿಷಿ ನೀಡಿದರು.

ವಾದ-ಪ್ರತಿವಾದ ಆಲಿಸಿ ದಾಖಲೆಗಳನ್ನು ಪರಿಶೀಲಿಸಿದ ನ್ಯಾಯಪೀಠ, ಅರ್ಜಿದಾರರ ವಿರುದ್ಧದ ಪ್ರಕರಣಕ್ಕೆ ಮಧ್ಯಂತರ ತಡೆ ನೀಡಿ ವಿಚಾರಣೆಯನ್ನು ಸೆಪ್ಟೆಂಬರ್ 10ಕ್ಕೆ ಮುಂದೂಡಿತು.

ವೈದ್ಯಕೀಯ ಸೀಟು ವಿವಾದ: ಏಕಸದಸ್ಯ ಪೀಠದ ಆದೇಶಕ್ಕೆ ತಡೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ರಾಜ್ಯದ 17 ಖಾಸಗಿ ವೈದ್ಯಕೀಯ ಕಾಲೇಜುಗಳು ತಮ್ಮ ಮ್ಯಾನೇಜ್‌ಮೆಂಟ್ ಮತ್ತು ಎನ್‌ಆರ್‌ಐ ಕೋಟಾದ 212 ಸೀಟುಗಳನ್ನು ಸರ್ಕಾರಿ ಕೋಟಾಕ್ಕೆ ಒಪ್ಪಿಸಬೇಕು' ಎಂಬ ಏಕಸದಸ್ಯ ನ್ಯಾಯಪೀಠದ ಆದೇಶಕ್ಕೆ ಹೈಕೋರ್ಟ್‌ನ ವಿಭಾಗೀಯ ನ್ಯಾಯಪೀಠ ಮಧ್ಯಂತರ ತಡೆ ನೀಡಿದೆ.

ಈ ಸಂಬಂಧ ಬೆಂಗಳೂರಿನ ವೈದೇಹಿ ವೈದ್ಯಕೀಯ ವಿಜ್ಞಾನಗಳು ಮತ್ತು ಸಂಶೋಧನಾ ಸಂಸ್ಥೆ ಸೇರಿದಂತೆ ಹಲವು ವೈದ್ಯಕೀಯ ಕಾಲೇಜುಗಳು ಸಲ್ಲಿಸಿದ್ದ ಮೇಲ್ಮನವಿಯನ್ನು ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ನೇತೃತ್ವದ ವಿಭಾಗೀಯ ನ್ಯಾಯಪೀಠ ವಿಚಾರಣೆ ನಡೆಸಿ, 'ಈ ಮಧ್ಯಂತರ ಆದೇಶವು ನ್ಯಾಯಾಲಯದ ಅಂತಿಮ ತೀರ್ಪಿಗೆ ಒಳಪಡುತ್ತದೆ' ಎಂದು ಸ್ಪಷ್ಟಪಡಿಸಿದೆ.

ಪ್ರಕರಣವೇನು?: 'ವಿಶ್ವವಿದ್ಯಾಲಯ ಅನುದಾನ ಆಯೋಗ (ಯುಜಿಸಿ) ಮತ್ತು ರಾಷ್ಟ್ರೀಯ ವೈದ್ಯಕೀಯ ಆಯೋಗಗಳ (ಎನ್‌ಎಂಸಿ) ನಿಯಮಗಳನ್ನು ಉಲ್ಲಂಘಿಸಿ ಕಡಿಮೆ ಶ್ರೇಯಾಂಕದ ವಿದ್ಯಾರ್ಥಿಗಳಿಗೆ ಎಂಬಿಬಿಎಸ್ ಕೋರ್ಸ್‌ಗಳಿಗೆ ಪ್ರವೇಶ ನೀಡಲಾಗಿದೆ' ಎಂಬ ಆರೋಪದಡಿ ಸಲ್ಲಿಸಲಾಗಿದ್ದ ಅರ್ಜಿಯನ್ನು ಏಕಸದಸ್ಯ ನ್ಯಾಯಪೀಠ ವಿಚಾರಣೆ ನಡೆಸಿತ್ತು. 'ನಿಯಮ ಬಾಹಿರವಾಗಿ ವಿದ್ಯಾರ್ಥಿಗಳನ್ನು ಪ್ರವೇಶ ಮಾಡಿಕೊಂಡ ಆರೋಪ ಎದುರಿಸುತ್ತಿರುವ 17 ಕಾಲೇಜುಗಳು; ಪ್ರಸಕ್ತ ಶೈಕ್ಷಣಿಕ ವರ್ಷಕ್ಕೆ ತಮ್ಮ ಮ್ಯಾನೇಜ್‌ಮೆಂಟ್ ಹಾಗೂ ಎನ್‌ಆರ್‌ಐ ಕೋಟಾದಿಂದ 212 ವೈದ್ಯಕೀಯ ಸೀಟುಗಳನ್ನು ಸರ್ಕಾರಿ ಕೋಟಾಕ್ಕೆ ಒಪ್ಪಿಸಬೇಕು' ಎಂದು ಆದೇಶಿಸಿತ್ತು.

'ದಿನಗೂಲಿ ನೌಕರರ ಸೇವೆ ಕಾಯಂಗೆ ಅರ್ಹ'

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಯಲ್ಲಿ ಮಂಜೂರಾಗದ ಹುದ್ದೆಗಳಿಗೆ 10 ವರ್ಷಗಳಿಂದ ದಿನಗೂಲಿ ನೌಕರರಾಗಿ ಸೇವೆ ಸಲ್ಲಿಸಿದವರು ಕಾಯಂ ಸೇವೆಗೆ ಅರ್ಹರು' ಎಂದು ಹೈಕೋರ್ಟ್ ಆದೇಶಿಸಿದೆ.

ಈ ಸಂಬಂಧ ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನ ಕಡಕೋಳ ಗ್ರಾಮದ ಶಾಂತಲಕ್ಷ್ಮಿ ಕೋಂ ಗುಂಡೂರಾವ್ ಸೇರಿದಂತೆ 30ಕ್ಕೂ ಹೆಚ್ಚು ನೌಕರರು ಸಲ್ಲಿಸಿದ್ದ ರಿಟ್ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಬಿ.ಎಂ. ಶ್ಯಾಮ್‌ಪ್ರಸಾದ್ ಅವರಿದ್ದ ಏಕಸದಸ್ಯ ನ್ಯಾಯಪೀಠವು, 'ಅರ್ಜಿದಾರರನ್ನು ಮೂರು ತಿಂಗಳ ಒಳಗಾಗಿ ಸೂಕ್ತ ಹುದ್ದೆಗಳಿಗೆ ನೇಮಕ ಮಾಡಿ ಆದೇಶ ಹೊರಡಿಸಬೇಕು' ಎಂದು ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿದೆ.

'ಅರ್ಜಿದಾರರು ಕಾಯಂ ಸೇವೆಗೆ ಅರ್ಹರಲ್ಲ' ಎಂದು 2010ರ ಜೂನ್ 14 ಮತ್ತು 2012ರ ಜೂನ್ 15ರಂದು ನೀಡಿದ್ದ ಸಂಬಂಧಿಸಿದ ಇಲಾಖೆಗಳ ಹಿಂಬರಹಗಳನ್ನು ರದ್ದುಗೊಳಿಸಿರುವ ನ್ಯಾಯಪೀಠ, 'ಅರ್ಜಿದಾರರು 2002/2005ರ ನಿಯಮಗಳಂತೆ ಕಾಯಂ ಸೇವೆಗೆ ಅರ್ಹರು' ಎಂದು ಘೋಷಿಸಿದೆ.

'ಒಂದೇ ಬಗೆಯ ಉದ್ಯೋಗ ಮಾಡುವವರನ್ನು ಭಿನ್ನ ರೀತಿಯಲ್ಲಿ ನೋಡಲಾಗದು. ಅರ್ಜಿದಾರರು 10 ವರ್ಷಗಳಿಂದ ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಯಲ್ಲಿ ದಿನಗೂಲಿ ನೌಕರರಾಗಿ ಸೇವೆ ಸಲ್ಲಿಸಿದ್ದಾರೆ. ಅವರನ್ನು ಹಂಗಾಮಿ ನೌಕರರಾಗಿಯೇ ಮುಂದುವರಿಸಲಾಗದು. ಅವರಿಗೆ ಅರ್ಹ ವೇತನ ಮತ್ತು ಭತ್ಯೆಗಳನ್ನು ನೀಡಬೇಕಾಗುತ್ತದೆ' ಎಂದು ಆದೇಶದಲ್ಲಿ ವಿವರಿಸಲಾಗಿದೆ. ಅರ್ಜಿದಾರರ ಪರ ಹಿರಿಯ ವಕೀಲ ವಿ.ಲಕ್ಷ್ಮಿನಾರಾಯಣ ವಾದ ಮಂಡಿಸಿದ್ದರು ಹಾಗೂ ಬಿ.ಎಲ್.ವಿಕ್ರಮ್ ಬಾಲಾಜಿ ವಕಾಲತ್ತು ವಹಿಸಿದ್ದರು.

'ಚಂದ್ರಯಾನ–4, 5ರ ವಿನ್ಯಾಸ ಸಿದ್ಧ'

ನವದೆಹಲಿ: ಚಂದ್ರಯಾನ–4 ಹಾಗೂ ಚಂದ್ರಯಾನ–5 ಯೋಜನೆಗಳಿಗೆ ಕೇಂದ್ರ ಸರ್ಕಾರದ ಅನುಮತಿಯನ್ನು ಶೀಘ್ರದಲ್ಲೇ ಕೋರಲಾಗುವುದು ಎಂದು ಇಸ್ರೊ ಅಧ್ಯಕ್ಷ ಎಸ್. ಸೋಮನಾಥ್ ಮಂಗಳವಾರ ತಿಳಿಸಿದ್ದಾರೆ.

ಎರಡೂ ಯೋಜನೆಗಳಿಗೆ ಅಗತ್ಯವಿರುವ ಉಪಗ್ರಹಗಳ ವಿನ್ಯಾಸ ಸಿದ್ಧವಾಗಿದೆ. ಮುಂದಿನ ಐದು ವರ್ಷಗಳಲ್ಲಿ 50ರಿಂದ 70 ಉಪಗ್ರಹಗಳನ್ನು ಉಡಾವಣೆ ಮಾಡಲು ಇಸ್ರೊ ಸಜ್ಜಾಗಿದೆ. ಚಂದ್ರಯಾನ–4 ಯೋಜನೆಯನ್ನು 2027–28ರ ಸುಮಾರಿಗೆ ಕಾರ್ಯಗತಗೊಳಿಸುವ ಉದ್ದೇಶ 'ಇಸ್ರೊ'ಕ್ಕಿದೆ ಎಂದಿದ್ದಾರೆ.



ಚಾಲನೆ... ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದ ನಾಯಂಡಹಳ್ಳಿ ವಾರ್ಡ್‌ನಲ್ಲಿ ಮಳೆ ನೀರಿನಿಂದ ಉಂಟಾಗುತ್ತಿರುವ ಸಮಸ್ಯೆಗಳ ನಿವಾರಣೆಗೆ ಬೃಹತ್ ಮಳೆ ನೀರುಗಾಲುವೆಗಳ ಅಭಿವೃದ್ಧಿ ಕಾಮಗಾರಿಗೆ ಶಾಸಕ ಪ್ರಿಯಕೃಷ್ಣ ಅವರು ಚಾಲನೆ ನೀಡಿದರು. ಸ್ಥಳೀಯ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಜರಿದ್ದರು

ಸಿಎಸ್‌ಬಿ ರಚನೆ ಕೋರಿಕೆ: ಸರ್ಕಾರಕ್ಕೆ ನೋಟಿಸ್

ಪ್ರಜಾವಾಣಿ ವಾರ್ತೆ

ಬೆಂಗಳೂರು: ನಿರ್ದಿಷ್ಟ ಸ್ಥಳ ಮತ್ತು ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುವ ಐಎಎಸ್ ಅಧಿಕಾರಿಗಳ ಕನಿಷ್ಠ ಸೇವಾವಧಿಯನ್ನು ನಿಗದಿಪಡಿಸುವ ಮತ್ತು ಕರ್ತವ್ಯ ನಿರ್ವಹಣೆಯ ವೇಳೆ ಅವರ ಹಿತ ಕಾಯುವ ಉದ್ದೇಶ ಹೊಂದಿದ, 'ನಾಗರಿಕ ಸೇವಾ ಮಂಡಳಿ' (ಸಿಎಸ್‌ಬಿ) ರಚಿಸಲು ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಬೇಕು ಎಂದು ಕೋರಲಾದ ಅರ್ಜಿಗೆ ಸಂಬಂಧಿಸಿದಂತೆ ಮುಖ್ಯ ಕಾರ್ಯದರ್ಶಿಗೆ ನೋಟಿಸ್ ಜಾರಿಗೊಳಿಸಲು ಹೈಕೋರ್ಟ್ ಆದೇಶಿಸಿದೆ.

ಈ ಸಂಬಂಧ ಹೈಕೋರ್ಟ್ ವಕೀಲ ರಿಷಬ್ ಟ್ರಕ್ರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ನೇತೃತ್ವದ ವಿಭಾಗೀಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಅರ್ಜಿದಾರರ ಪರ ಹಿರಿಯ ವಕೀಲೆ ಎಸ್.ಸುಶೀಲಾ ವಾದ ಮಂಡಿಸಿ, 'ಈಗಾಗಲೇ ದೇಶದ 20 ರಾಜ್ಯಗಳಲ್ಲಿ ಸಿಎಸ್‌ಬಿ ರಚನೆ ಆಗಿದೆ. ಕರ್ನಾಟಕದಲ್ಲಿ 2014ರಲ್ಲಿ ಮಂಡಳಿ ರಚಿಸಿ ನಂತರ ಅದನ್ನು ಅಮಾನತಿನಲ್ಲಿ ಇರಿಸಲಾಗಿದೆ. ಬಳಿಕ, ಮಂಡಳಿ ರಚನೆ ಸಂಬಂಧ ಹೈಕೋರ್ಟ್‌ನ ವಿಭಾಗೀಯ ನ್ಯಾಯಪೀಠ 2021ರಲ್ಲಿ ಆದೇಶ ನೀಡಿದೆ. ಆದಾಗ್ಯೂ, ರಾಜ್ಯದಲ್ಲಿ ಈವರೆಗೆ ನಾಗರಿಕ ಸೇವಾ ಮಂಡಳಿ ರಚನೆ ಆಗಿಲ್ಲ' ಎಂಬ ಅಂಶವನ್ನು ನ್ಯಾಯಪೀಠದ ಗಮನಕ್ಕೆ ತಂದರು.

ಇದಕ್ಕೆ ಸರ್ಕಾರದ ಪರ ವಕೀಲರು, 'ಅರ್ಜಿದಾರರು ಜುಲೈ 2024ರ 11ರಂದು ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ. ಆದರೆ, ಆತುರಾತುರವಾಗಿ ಮನವಿ ಪರಿಶೀಲನೆಗೂ ಮುನ್ನವೇ ಜುಲೈ 18ರಂದು ಹೈಕೋರ್ಟ್‌ಗೆ ಈ ಅರ್ಜಿ ಸಲ್ಲಿಸಿದ್ದಾರೆ. ಅಂತೆಯೇ, ನ್ಯಾಯಾಲಯದ ಮುಂದೆ ಮಂಡಿಸಿರುವ ವಿವರಗಳನ್ನು ಸರ್ಕಾರಕ್ಕೆ ಸಲ್ಲಿಸಿರುವ ಮನವಿಯಲ್ಲಿ ಅಡಕಗೊಳಿಸಿಲ್ಲ. ಪರಿಷ್ಕೃತ ಮನವಿ ಸಲ್ಲಿಸಿದರೆ, ಅದನ್ನು ಪರಿಶೀಲಿಸಿ ಸರ್ಕಾರ ಮುಂದಿನ ಕ್ರಮ ಕೈಗೊಳ್ಳಲಿದೆ' ಎಂದರು.

ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, 'ಈ ವಿಷಯದಲ್ಲಿ ಸರ್ಕಾರದ ಕ್ರಮ ನ್ಯಾಯಾಂಗ ನಿಂದನೆಗೆ ಸಮಾನವಾಗಿದೆ' ಎಂದು ಮೌಖಿಕವಾಗಿ ಅತೃಪ್ತಿ ಹೊರಹಾಕಿತಲ್ಲದೆ, 'ಈ ಸಂಬಂಧ ಸರ್ಕಾರದ ನಿಲುವೇನು ಎಂಬುದನ್ನು ವಿವರಿಸಿ' ಎಂದು ವಿಚಾರಣೆಯನ್ನು ಸೆಪ್ಟೆಂಬರ್ 9ಕ್ಕೆ ಮುಂದೂಡಿತು.

ಮನವಿ ಏನು?: 'ಆಡಳಿತಾತ್ಮಕ ಮೇಲಧಿಕಾರಿಗಳು, ರಾಜಕಾರಣಿಗಳು ಹಾಗೂ ಇತರರು ನ್ಯಾಯಬಾಹಿರ ಹಾಗೂ ನಿರಂಕುಶ ಒತ್ತಡದಿಂದ ಐಎಎಸ್ ಅಧಿಕಾರಿಗಳನ್ನು ರಕ್ಷಿಸಬೇಕು. ಯಾವುದೇ ಮೌಖಿಕ ಸೂಚನೆ, ಆದೇಶ, ಅಭಿಪ್ರಾಯ ಅಥವಾ ಪ್ರಸ್ತಾವನೆಗಳನ್ನು ಆಧರಿಸಿ ಅವರು ಸೇವೆ ಸಲ್ಲಿಸುವಂತಾಗಬಾರದು. ಈ ನಿಟ್ಟಿನಲ್ಲಿ, ಸುಪ್ರೀಂ ಕೋರ್ಟ್ ನಿರ್ದೇಶನದ ಅನುಸಾರ ಕರ್ನಾಟಕದಲ್ಲೂ ನಾಗರಿಕ ಸೇವಾ ಮಂಡಳಿ (ಸಿಎಸ್‌ಬಿ) ರಚಿಸಬೇಕು ಹಾಗೂ ನಾಗರಿಕ ಸೇವಾ ಅಧಿಕಾರಿಗಳ ಕನಿಷ್ಠ ಸೇವಾವಧಿ ನಿಗದಿಪಡಿಸಲು ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಬೇಕು' ಎಂದು ಅರ್ಜಿದಾರರು ಕೋರಿದ್ದಾರೆ.

ಎಸ್‌ಸಿ-ಎಸ್‌ಟಿ ಹಾಸ್ಟೆಲ್‌ಗಳಲ್ಲಿ ದಟ್ಟಣೆ: ಸೆಪ್ಟೆಂಬರ್ 13ಕ್ಕೆ ವಿಚಾರಣೆ ಮುಂದೂಡಿಕೆ

ಪರಿಹಾರ ಕ್ರಮಕ್ಕೆ ಹೈಕೋರ್ಟ್ ತಾಕೀತು

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಒಳಪಡುವ (ಪರಿಶಿಷ್ಟ ಜಾತಿ–ಪಂಗಡಗಳು) ಎಸ್‌ಸಿ-ಎಸ್‌ಟಿ ವಿದ್ಯಾರ್ಥಿಗಳ ಹಾಸ್ಟೆಲ್‌ಗಳಲ್ಲಿ ಪ್ರವೇಶ ಮಿತಿಗಿಂತಲೂ ಹೆಚ್ಚಿನ ವಿದ್ಯಾರ್ಥಿಗಳು ವಾಸ ಮಾಡುತ್ತಿದ್ದಾರೆ' ಎಂಬ ಮಾಹಿತಿಗೆ ತೀವ್ರ ಕಳವಳ ವ್ಯಕ್ತಪಡಿಸಿರುವ ಹೈಕೋರ್ಟ್, 'ಈ ಕುರಿತಂತೆ ರಾಜ್ಯ ಸರ್ಕಾರ ತಕ್ಷಣವೇ ಪರಿಹಾರ ಕ್ರಮಗಳಿಗೆ ಮುಂದಾಗಬೇಕು' ಎಂದು ರಾಜ್ಯ ಸರ್ಕಾರಕ್ಕೆ ತಾಕೀತು ಮಾಡಿದೆ.

ಈ ಸಂಬಂಧ ಹೈಕೋರ್ಟ್ ಸ್ವಯಂಪ್ರೇರಿತವಾಗಿ ದಾಖಲಿಸಿಕೊಂಡಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ನೇತೃತ್ವದ ವಿಭಾಗೀಯ



ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಸರ್ಕಾರಿ ವಕೀಲರು ರಾಜ್ಯದ ಎಸ್‌ಸಿ-ಎಸ್‌ಟಿ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಮಿತಿ ಹಾಗೂ ಹಾಲಿ ಇರುವ ಸಂಖ್ಯೆ, ವಾರ್ಡನ್ ಹುದ್ದೆಗಳ ಮಾಹಿತಿ ಹೊಂದಿದ ಕಂದಾಯ ಇಲಾಖೆಯ ವಿಭಾಗವಾರು ವರದಿಯನ್ನು ನ್ಯಾಯಪೀಠಕ್ಕೆ ಸಲ್ಲಿಸಿದರು.

ವರದಿಯಲ್ಲಿ, ಹಾಸ್ಟೆಲ್‌ಗಳಲ್ಲಿನ ಪ್ರವೇಶ ಮಿತಿಗಿಂತಲೂ ಮೂರ್ನಾಲ್ಕು ಪಟ್ಟು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿರುವ ಅಂಶವನ್ನು ಗಮನಿಸಿ ಅತೀವ ಅಚ್ಚರಿ ವ್ಯಕ್ತಪಡಿಸಿದ ನ್ಯಾಯಪೀಠ, 'ಎಸ್‌ಸಿ-ಎಸ್‌ಟಿ ವಿದ್ಯಾರ್ಥಿಗಳನ್ನು ಈ ರೀತಿಯಾಗಿ ನಡೆಸಿಕೊಳ್ಳುತ್ತಿರುವುದು ಸಲ್ಲದು. ಸರ್ಕಾರ ತಕ್ಷಣವೇ ಈ ಬಗ್ಗೆ ಗಮನ ಹರಿಸಬೇಕು. ಅಂತೆಯೇ, ಖಾಲಿ ಇರುವ ಹುದ್ದೆಗಳ ಭರ್ತಿಗೂ ಕ್ರಮ ಕೈಗೊಳ್ಳುವ ತುರ್ತು ಅವಶ್ಯಕತೆ ಇದೆ' ಎಂದು ಹೇಳಿತು.

'ಎಸ್‌ಟಿ-ಎಸ್‌ಟಿ ವಿದ್ಯಾರ್ಥಿಗಳು ಹಾಸ್ಟೆಲ್‌ಗಳಲ್ಲಿ ಘನತೆ-ಗೌರವದಿಂದ ಇರಬೇಕು. ಈ ಲೋಪದೋಷ ಸರಿಪಡಿಸಲು ನಿಮ್ಮ ಬಳಿ ಇರುವ ಪರಿಹಾರ ಕ್ರಮಗಳೇನು? ಖಾಲಿ ಹುದ್ದೆಗಳ ಭರ್ತಿಗೆ ಯಾವ ಕ್ರಮ ಕೈಗೊಳ್ಳಲಾಗುವುದು ಎಂಬ ಬಗ್ಗೆ ವಿವರವಾದ ವರದಿಯನ್ನು ಸಲ್ಲಿಸಿ' ಎಂದು ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿದ ನ್ಯಾಯಪೀಠ, ಸೆಪ್ಟೆಂಬರ್ 13ಕ್ಕೆ ವಿಚಾರಣೆ ಮುಂದೂಡಿತು.

ವರದಿಯಲ್ಲಿನ ಪ್ರಮುಖಾಂಶಗಳು: ಉತ್ತರ ಕನ್ನಡ ಜಿಲ್ಲೆ ಶಿರಸಿಯ ಮೆಟ್ರಿಕ್ ಪೂರ್ವ ಹಾಸ್ಟೆಲ್‌ನಲ್ಲಿ ಪ್ರವೇಶ ಮಿತಿ 50 ಇದ್ದು, 150 ವಿದ್ಯಾರ್ಥಿಗಳು ಇದ್ದಾರೆ. ಕೊಪ್ಪಳದ ಹಾಸ್ಟೆಲ್‌ನಲ್ಲಿ 75 ಪ್ರವೇಶ ಮಿತಿ ಇದ್ದರೆ, 214 ವಿದ್ಯಾರ್ಥಿಗಳು ಇದ್ದಾರೆ.

ಹುದ್ದೆಗಳು: ಹಾಸ್ಟೆಲ್‌ಗಳಲ್ಲಿನ 1,890 ಹಿರಿಯ ವಾರ್ಡನ್ ಹುದ್ದೆಗಳಲ್ಲಿ 1,342 ಭರ್ತಿ ಆಗಿದ್ದು, 548 ಖಾಲಿ ಇವೆ. 518 ಕಿರಿಯ ವಾರ್ಡನ್ ಹುದ್ದೆಗಳ ಪೈಕಿ 465 ಭರ್ತಿ ಆಗಿದ್ದು, 53 ಖಾಲಿ ಇವೆ.

ಕಾರ್ಯಾಗಾರದಲ್ಲಿ ಸಾಹಿತಿ ಹಂಪ ನಾಗರಾಜಯ್ಯ ಬೇಸರ

‘ಕನ್ನಡಿಗರಿಗೇ ಕನ್ನಡ ಕಲಿಸಬೇಕಾದ ಸ್ಥಿತಿ’

ಪ್ರಜಾವಾಣಿ ವಾರ್ತೆ


ಬೆಂಗಳೂರು: ‘ಕನ್ನಡಿಗರಿಗೇ ಕನ್ನಡ ಕಲಿಸಬೇಕಾದ ಕಾಲಘಟ್ಟದಲ್ಲಿ ನಾವಿದ್ದೇವೆ’ ಎಂದು ಸಂಶೋಧಕ ಹಂಪ ನಾಗರಾಜಯ್ಯ ಬೇಸರ ವ್ಯಕ್ತಪಡಿಸಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರ ಆಯೋಜಿಸಿರುವ ‘ಕನ್ನಡೇತರರಿಗೆ ಕನ್ನಡ ಕಲಿಸುವ ಶಿಕ್ಷಕರಿಗೆ ಎರಡು ದಿನಗಳ ಕಾರ್ಯಾಗಾರ’ವನ್ನು ಮಂಗಳವಾರ ಉದ್ಘಾಟಿಸಿ ಅವರು ಮಾತನಾಡಿದರು.

‘ಸಾಮಾನ್ಯ ಕನ್ನಡಿಗರು ಮಾತನಾಡುವುದನ್ನು ಗಮನಿಸಿದರೆ, ಅವರ ಮಾತಿನಲ್ಲಿ ಬಹುತೇಕ ಇಂಗ್ಲಿಷ್ ಪದಗಳೇ ಇರುತ್ತವೆ. ಅವರು ಕಂಗ್ಲಿಷ್ ಮಾತನಾಡುತ್ತಿರುತ್ತಾರೆ. ಇಂತಹ ಸ್ಥಿತಿಗೆ ನಾವು ಬಂದಿದ್ದೇವೆ’ ಎಂದರು.

ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ, ‘ಸರೋಜಿನಿ ಮಹಿಷಿ ವರದಿ ಜಾರಿಗೆ ತರಲು ಸಾಧ್ಯವಿಲ್ಲ. ಅದನ್ನು ಸುಪ್ರೀಂ ಕೋರ್ಟ್ ಒಪ್ಪುವುದೂ ಇಲ್ಲ. ದೇಶದ ಯಾವುದೇ ರಾಜ್ಯದ ಜನರು, ಯಾವುದೇ ರಾಜ್ಯಕ್ಕೆ ಹೋಗಿ ಉದ್ಯೋಗ ಮಾಡಬಹುದು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಹೊರಗಿನವರಿಗೇ ಅವಕಾಶ ಕೊಡುತ್ತಾ ಹೋದರೆ ಕನ್ನಡದ ಅಸ್ಮಿತೆ ಏನಾಗಬೇಕು. ಒಕ್ಕೂಟ ವ್ಯವಸ್ಥೆ ಎಂಬುದು ಎಲ್ಲ ರಾಜ್ಯಗಳ, ಭಾಷೆಗಳ ಅಸ್ಮಿತೆಯನ್ನು ಉಳಿಸಿಕೊಂಡು ಹೋಗುವುದು. ಆದರೆ ಕನ್ನಡದ ವಿಚಾರದಲ್ಲಿ ಹಾಗಾಗುತ್ತಿಲ್ಲ’ ಎಂದು ಕಳವಳ ವ್ಯಕ್ತಪಡಿಸಿದರು.

ಕನ್ನಡದ ಮಕ್ಕಳಿಗಾಗಿ 100 ಪುಸ್ತಕ: ‘ಕನ್ನಡ ಸಂಸ್ಕೃತಿ, ಐತಿಹ್ಯ, ಭಾಷೆಯನ್ನು ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಪರಿಚಯ ಮಾಡಿಕೊಡುವ ಉದ್ದೇಶದಿಂದ ಸರಳ ಭಾಷೆಯಲ್ಲಿ 100 ಕಿರು ಪುಸ್ತಕಗಳನ್ನು ಪ್ರಕಟಿಸುವ ಯೋಜನೆ ರೂಪಿಸಿದ್ದೇವೆ. ಪುಸ್ತಕಗಳ ರಚನೆಗಾಗಿ ಈಗಾಗಲೇ ಹಲವು ಮಂದಿ ಲೇಖಕರನ್ನು ಸಂಪರ್ಕಿಸಲಾಗಿದೆ. ಹಲವರು ಒಪ್ಪಿಗೆ ಸೂಚಿಸಿದ್ದಾರೆ. ಪುಸ್ತಕ ರಚನೆ ಕೆಲಸವೂ ಆರಂಭವಾಗಿದೆ’ ಎಂದು ಬಿಳಿಮಲೆ ಹೇಳಿದರು.



ವಿಕಾಸ ಸೌಧದಲ್ಲಿ ಆಯೋಜಿಸಲಾಗಿರುವ ಎರಡು ದಿನಗಳ ಕಾರ್ಯಾಗಾರವನ್ನು ಸಂಶೋಧಕ ಹಂಪ ನಾಗರಾಜಯ್ಯ ಅವರು ‘ಕನ್ನಡ’ ಎಂದು ಬರೆಯುವ ಮೂಲಕ ಉದ್ಘಾಟಿಸಿದರು. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಸಂತೋಷ್ ಹಾನಗಲ್ಲ, ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ, ನಾಮನಿರ್ದೇಶಿತ ಸದಸ್ಯ ಟಿ.ತಿಮ್ಮೇಶ್ ಮತ್ತು ಶಿಬಿರದ ತರಬೇತುದಾರರಾದ ಅಬ್ದುಲ್ ರೆಹಮಾನ್ ಪಾಷಾ ಇದ್ದರು —ಪ್ರಜಾವಾಣಿ ಚಿತ್ರ

ಮುಖ್ಯಾಂಶಗಳು

- ಶಿಕ್ಷಕರಿಗೆ ಎರಡು ದಿನಗಳ ಕಾರ್ಯಾಗಾರ
- 70 ಶಿಕ್ಷಕರಿಗೆ ತರಬೇತಿ

ಮೇಯರ್ ಹುದ್ದೆ ಕನ್ನಡಿಗರಿಗೆ ಮೀಸಲು–ಪತ್ರ

‘ಬಿಬಿಎಂಪಿಯನ್ನು ವಿಭಜನೆ ಮಾಡುವ ಪ್ರಸ್ತಾವ ಸರ್ಕಾರದ ಮುಂದೆ ಇದೆ. ನಾಲ್ಕು ಪಾಲಿಕೆಗಳನ್ನಾಗಿ ವಿಭಜಿಸಿದರೆ, ಮೂರರಲ್ಲಿ ಮೇಯರ್ ಮತ್ತು ಉಪ ಮೇಯರ್ ಆಗಿ ಕನ್ನಡೇತರರೇ ಆಯ್ಕೆಯಾಗುತ್ತಾರೆ. ಆಗ ಕನ್ನಡಿಗರಿಗೆ ತೊಡಕಾಗುತ್ತದೆ. ಈ ಸಮಸ್ಯೆಯನ್ನು ನಿವಾರಿಸುವ ಬಗ್ಗೆ ಉಪ ಮುಖ್ಯಮಂತ್ರಿಯವರಿಗೆ ಪತ್ರ ಬರೆಯಲಾಗಿದೆ’ ಎಂದು ಪುರುಷೋತ್ತಮ ಬಿಳಿಮಲೆ ಹೇಳಿದರು.


‘ಬೆಂಗಳೂರು ವಿಭಜನೆಯಾದಾಗ ಪಾಲಿಕೆಗೆ ಆಯ್ಕೆಯಾಗುವ ಸದಸ್ಯರಲ್ಲಿ ಕನ್ನಡಿಗರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರಾತಿನಿಧ್ಯ ಇರುವಂತೆ ಮತ್ತು ಮೇಯರ್ ಹಾಗೂ ಉಪ ಮೇಯರ್ ಹುದ್ದೆ ಕನ್ನಡಿಗರಿಗೆ ಮೀಸಲಿರುವಂತೆ ಕಾನೂನನ್ನು ರೂಪಿಸಲು ಸಾಧ್ಯವೇ ಎಂಬುದನ್ನು ಪರಿಶೀಲಿಸಿ ಎಂದು ಪತ್ರದಲ್ಲಿ ಕೋರಲಾಗಿದೆ’ ಎಂದರು.

ನಿವೃತ್ತಿ ನಂತರವೂ ಮುಖ್ಯ ಎಂಜಿನಿಯರ್ ಮುಂದುವರಿಕೆಗೆ ಸಚಿವ ಜಮೀರ್ ಪತ್ರ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕೊಳೆಗೇರಿ ಅಭಿವೃದ್ಧಿ ಮಂಡಳಿಯ ಮುಖ್ಯ ಎಂಜಿನಿಯರ್ ಎನ್.ಪಿ. ಬಾಲರಾಜು ಅವರನ್ನು ನಿವೃತ್ತಿ ಬಳಿಕ ಎರಡು ವರ್ಷಗಳ ಅವಧಿಗೆ ಗುತ್ತಿಗೆ ಆಧಾರದಲ್ಲಿ ಅದೇ ಹುದ್ದೆಯಲ್ಲಿ ಮುಂದುವರಿಸಲು ಕಡತ ಮಂಡಿಸುವಂತೆ ವಸತಿ ಸಚಿವರ ಕಚೇರಿಯಿಂದ ಇಲಾಖೆ ಪ್ರಧಾನ ಕಾರ್ಯದರ್ಶಿಗೆ ಮತ್ತೆ ಪತ್ರ ಬರೆಯಲಾಗಿದೆ.

ಬಾಲರಾಜು ಇದೇ 31ರಂದು ವಯೋನಿವೃತ್ತಿ ಹೊಂದುತ್ತಿದ್ದಾರೆ. ಸೆಪ್ಟೆಂಬರ್ 1ರಿಂದ ಎರಡು ವರ್ಷಗಳ ಅವಧಿಗೆ ಮಂಡಳಿಯ ಮುಖ್ಯ ಎಂಜಿನಿಯರ್ ಹುದ್ದೆಯಲ್ಲೇ ಮುಂದುವರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ವಸತಿ ಸಚಿವ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಅವರು ಜುಲೈ 29ರಂದು ವಸತಿ ಇಲಾಖೆ ಪ್ರಧಾನ ಕಾರ್ಯದರ್ಶಿ ನವೀನ್ ರಾಜ್ ಸಿಂಗ್ ಅವರಿಗೆ ಜುಲೈ 29ರಂದು ಟಿಪ್ಪಣಿ ಹೊರಡಿಸಿದ್ದರು.



ಜಮೀರ್ ಅಹ್ಮದ್ ಖಾನ್

ಆದರೆ, ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ಮುಂದುವರಿದಿರುವ ನಿವೃತ್ತ ಅಧಿಕಾರಿಗಳನ್ನು ಕೆಲಸದಿಂದ ಬಿಡುಗಡೆಗೊಳಿಸುವಂತೆ ಹಾಗೂ ನಿವೃತ್ತರನ್ನು ನೇಮಿಸಿಕೊಳ್ಳದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ಹೊರಡಿಸಿದ್ದರು. ಈ ಕಾರಣದಿಂದ ಬಾಲರಾಜು ಅವರನ್ನು ಗುತ್ತಿಗೆ ಆಧಾರದಲ್ಲಿ ಅದೇ ಹುದ್ದೆಯಲ್ಲಿ ಮುಂದುವರಿಸಲು ವಸತಿ ಇಲಾಖೆ ಪ್ರಧಾನ ಕಾರ್ಯದರ್ಶಿ ಈವರೆಗೂ ಕಡತ ಮಂಡಿಸಿಲ್ಲ.

ವಸತಿ ಇಲಾಖೆ ಪ್ರಧಾನ ಕಾರ್ಯದರ್ಶಿಯವರಿಗೆ ಸೋಮವಾರ ಟಿಪ್ಪಣಿ ಹೊರಡಿಸಿರುವ ವಸತಿ ಸಚಿವರ ಆಪ್ತ ಕಾರ್ಯದರ್ಶಿ ಎಸ್. ಸರ್ಫರಾಜ್ ಖಾನ್, ‘ಕೊಳೆಗೇರಿ ಅಭಿವೃದ್ಧಿ ಮಂಡಳಿಯ ಮುಖ್ಯ ಎಂಜಿನಿಯರ್ ಎನ್.ಬಿ. ಬಾಲರಾಜು ಆಗಸ್ಟ್ 31ರಂದು ನಿವೃತ್ತರಾಗುತ್ತಿದ್ದು, ಸೆಪ್ಟೆಂಬರ್ 1ರಿಂದ ಜಾರಿಗೆ ಬರುವಂತೆ ಎರಡು ವರ್ಷಗಳ ಕಾಲ ಗುತ್ತಿಗೆ ಆಧಾರದಲ್ಲಿ ನೇಮಕ ಮಾಡಿಕೊಳ್ಳಲು ಅನುವಾಗುವಂತೆ ಕಡತ ಮಂಡಿಸುವಂತೆ ತಮ್ಮನ್ನು ಕೋರಲು ಸಚಿವರಿಂದ ನಿರ್ದೇಶಿತನಾಗಿದ್ದೇನೆ’ ಎಂದು ತಿಳಿಸಿದ್ದಾರೆ.

ಬಾಲರಾಜು ಈಗ ಕೊಳೆಗೇರಿ ಅಭಿವೃದ್ಧಿ ಮಂಡಳಿ ಮುಖ್ಯ ಎಂಜಿನಿಯರ್ ಹುದ್ದೆಯ ಜತೆಗೆ ರಾಜೀವ್ ಗಾಂಧಿ ವಸತಿ ನಿಗಮದ ಮುಖ್ಯ ಎಂಜಿನಿಯರ್ ಹುದ್ದೆಯ ಹೆಚ್ಚುವರಿ ಪ್ರಭಾರವನ್ನೂ ಹೊಂದಿದ್ದಾರೆ. ರಾಜೀವ್ ಗಾಂಧಿ ವಸತಿ ನಿಗಮ ಬೆಂಗಳೂರು ನಗರದಲ್ಲಿ ಮುಖ್ಯಮಂತ್ರಿಯವರ ಒಂದು ಲಕ್ಷ ಮನೆಗಳ ನಿರ್ಮಾಣ ಯೋಜನೆಯ ಅನುಷ್ಠಾನದ ಜವಾಬ್ದಾರಿಯನ್ನೂ ಹೊತ್ತಿದೆ.

ವಿದ್ಯಾರ್ಥಿಗಳ ಅಪಹರಿಸಿ ಹಲ್ಲೆ: ಇಬ್ಬರು ವಶಕ್ಕೆ

ಪ್ರಜಾವಾಣಿ ವಾರ್ತೆ

ಮಂಗಳೂರು: ಫುಟ್‌ಬಾಲ್ ಟೂರ್ನಿಯಲ್ಲಿ ಆಗಿದ್ದ ಜಗಳಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳ ಒಂದು ಗುಂಪು ಮೂವರು ವಿದ್ಯಾರ್ಥಿಗಳನ್ನು ಅಪಹರಿಸಿ, ವಿವಸ್ತ್ರಗೊಳಿಸಿ ಹಲ್ಲೆ ನಡೆಸಿದೆ. ಈ ಸಂಬಂಧ ಇಬ್ಬರು ಆರೋಪಿಗಳನ್ನು ಮಂಗಳವಾರ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

‘ವಿದ್ಯಾರ್ಥಿಗಳಾದ ದಿಯಾನ್ ಹಾಗೂ ಸಲ್ಮಾನ್ ಬಂಧಿತರು. ಇನ್ನೊಬ್ಬ ವಿದ್ಯಾರ್ಥಿ ತಸ್ಲೀಮ್ ಹಾಗೂ ಇಬ್ಬರು ಅಪ್ರಾಪ್ತ ವಯಸ್ಸಿನ ವಿದ್ಯಾರ್ಥಿಗಳನ್ನು ಇನ್ನಷ್ಟೇ ವಶಕ್ಕೆ ಪಡೆಯಬೇಕಿದೆ’ ಎಂದು ಪೊಲೀಸರು ತಿಳಿಸಿದ್ದಾರೆ.

ನಗರದ ನೆಹರೂ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದ್ದ ಇಂಡಿಪೆಂಡೆನ್ಸ್ ಕಪ್ ಫುಟ್‌ಬಾಲ್ ಟೂರ್ನಿಯಲ್ಲಿ ನಗರದ ಎರಡು ಕಾಲೇಜುಗಳ ತಂಡಗಳ ನಡುವೆ ಆ. 14ರಂದು ಪಂದ್ಯ ನಡೆದಿತ್ತು. ಈ ವೇಳೆ ಗೆದ್ದ ತಂಡ ಹಾಗೂ ಸೋತ ತಂಡಗಳ ವಿದ್ಯಾರ್ಥಿಗಳು ಜಗಳವಾಡಿದ್ದರು. ಈ ದ್ವೇಷವೇ ವಿದ್ಯಾರ್ಥಿಗಳನ್ನು ಅಪಹರಿಸಿ ಹಲ್ಲೆ ನಡೆಸುವ ಮಟ್ಟಕ್ಕೆ ಹೋಗಿದೆ.

'ಹಲ್ಲೆಗೊಳಗಾದ ವಿದ್ಯಾರ್ಥಿಗಳನ್ನು ವೈದ್ಯಕೀಯ ತಪಾಸಣೆಗೆ ಒಳಪಡಿಸಲಾಗಿದ್ದು, ಅವರ ಆರೋಗ್ಯ ಸ್ಥಿರವಾಗಿದೆ. ಆರೋಪಿಗಳ ವಿರುದ್ಧ ಪಾಂಡೇಶ್ವರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಎರಡೂ ಗುಂಪಿನ ವಿದ್ಯಾರ್ಥಿಗಳು ಒಂದೇ ಕೋಮಿಗೆ ಸೇರಿದವರು’ ಎಂದು ಪೊಲೀಸರು ತಿಳಿಸಿದ್ದಾರೆ.

‘ಸಿ.ಎಂ ವಿರುದ್ಧ ಎಚ್‌ಡಿಡಿ–ಎಚ್‌ಡಿಕೆ ಪಿತೂರಿ’

ಪ್ರಜಾವಾಣಿ ವಾರ್ತೆ

ಬೆಂಗಳೂರು: ‘ಜಾತ್ಯತೀತರು ಎಂದು ಹೇಳಿಕೊಳ್ಳುವ ಆದರೆ, ಕಡು ಜಾತಿವಾದಿಗಳಾದ ಎಚ್.ಡಿ.ದೇವೇಗೌಡರು ಮತ್ತು ಎಚ್.ಡಿ.ಕುಮಾರಸ್ವಾಮಿ ದೆಹಲಿಗೆ ಹೋಗಿ, ಸಿದ್ದರಾಮಯ್ಯ ವಿರುದ್ಧ ಪಿತೂರಿ ಮಾಡುತ್ತಿದ್ದಾರೆ’ ಎಂದು ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಪ್ರಧಾನ ಸಂಚಾಲಕ ಕೆ.ಎಂ.ರಾಮಚಂದ್ರಪ್ಪ ಆರೋಪಿಸಿದರು.

ಮಾಧ್ಯಮಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ‘ಹಿಂದುಳಿದ ವರ್ಗಗಳ ನಾಯಕರು ಅಧಿಕಾರದಲ್ಲಿ ಇರುವುದನ್ನು ಸಹಿಸಿಕೊಳ್ಳಲು ಈ ತಂದೆ–ಮಕ್ಕಳಿಗೆ ಆಗುವುದಿಲ್ಲ. ಹೀಗಾಗಿಯೇ ಅಮಿತ್ ಶಾ ಅವರನ್ನು ಭೇಟಿ ಮಾಡಿ, ಸಿದ್ದರಾಮಯ್ಯ ವಿರುದ್ಧ ಸಂಚು ರೂಪಿಸಿದ್ದಾರೆ. ಇವರ ಕುಯುಕ್ತಿಯ ಕಾರಣದಿಂದಲೇ ಕೇಂದ್ರ ಸರ್ಕಾರ, ರಾಜ್ಯಪಾಲರನ್ನು ರಾಜ್ಯ ಸರ್ಕಾರದ ವಿರುದ್ಧ ಬಳಸಿಕೊಳ್ಳುತ್ತಿದೆ’ ಎಂದು ಆಪಾದಿಸಿದರು.


ಒಕ್ಕೂಟದ ಸಂಚಾಲಕ ಮಾವಳ್ಳಿ ಶಂಕರ್ ಮಾತನಾಡಿ, ‘ಅಕ್ರಮ ಮಾಡಿದ್ದಾರೆ ಎಂದು ಸುಳ್ಳನ್ನು ನೂರು ಬಾರಿ ಹೇಳಿ ನಿಜ ಮಾಡಲು ಹೊರಟಿದ್ದಾರೆ. ಆರ್‌ಎಸ್‌ಎಸ್ ಎಂಬ ಸುಳ್ಳುಗಾರರ ಸಂಘ, ಬಿಜೆಪಿ ಮತ್ತು ಪಾಳೆಗಾರಿಕೆ ರಾಜಕಾರಣವನ್ನೇ ಉಸಿರಾಡುತ್ತಿರುವ ಜೆಡಿಎಸ್ ಇದಕ್ಕಾಗಿ ಒಟ್ಟಾಗಿವೆ. ಆದರೆ, ಇದಕ್ಕೆ ನಾವು ಅವಕಾಶ ನೀಡುವುದಿಲ್ಲ’ ಎಂದರು.

‘ದಲಿತರ, ಹಿಂದುಳಿದವರ ಮತ್ತು ಅಲ್ಪಸಂಖ್ಯಾತರ ಪರವಾಗಿ ಕೆಲಸ ಮಾಡುತ್ತಿರುವ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಲು ಕೇಂದ್ರ ಸರ್ಕಾರ ಸಂಚು ರೂಪಿಸಿದೆ. ಇದನ್ನು ಖಂಡಿಸಿ ಇದೇ 27ಕ್ಕೆ ಸ್ವಾತಂತ್ರ್ಯ ಉದ್ಯಾನದಿಂದ ಮೆರವಣಿಗೆ ಹೊರಟು, ರಾಜಭವನಕ್ಕೆ ಮುತ್ತಿಗೆ ಹಾಕುತ್ತೇವೆ’ ಎಂದರು.

ಬಿಜೆಪಿ–ಜೆಡಿಎಸ್ ಷಡ್ಯಂತ್ರ: ಬಿ.ಎಸ್. ಶಿವಣ್ಣ ಆರೋಪ

ಪ್ರಜಾವಾಣಿ ವಾರ್ತೆ

ಬೆಂಗಳೂರು: ‘ಬಿಜೆಪಿ ಅಧಿಕಾರದ ಅವಧಿಯಲ್ಲಿ ನಡೆದಿರುವ ಮುಡಾ ನಿವೇಶನ ಹಂಚಿಕೆ ಅಕ್ರಮದಲ್ಲಿ ಸಿದ್ದರಾಮಯ್ಯ ಅವರನ್ನು ಹೊಣೆಯಾಗಿಸಲು ಬಿಜೆಪಿ–ಜೆಡಿಎಸ್ ಷಡ್ಯಂತ್ರ ರೂಪಿಸಿವೆ’ ಎಂದು ರಾಮಮನೋಹರ್ ಲೋಹಿಯಾ ವಿಚಾರ ವೇದಿಕೆಯ ಅಧ್ಯಕ್ಷ ಬಿ.ಎಸ್. ಶಿವಣ್ಣ ಆರೋಪಿಸಿದ್ದಾರೆ.



ಬಿ.ಎಸ್.ಶಿವಣ್ಣ

‘ಹಿಂದುಳಿದ ವರ್ಗಗಳ ನಾಯಕನೊಬ್ಬ 15 ಬಜೆಟ್‌ಗಳನ್ನು ಮಂಡಿಸಿರುವುದನ್ನು ಮತ್ತು ಎರಡನೇ ಬಾರಿಗೆ ಮುಖ್ಯಮಂತ್ರಿ ಆಗಿರುವುದನ್ನು ಬಿಜೆಪಿ–ಜೆಡಿಎಸ್‌ಗೆ ಸಹಿಸಿಕೊಳ್ಳಲು ಆಗುತ್ತಿಲ್ಲ. ಹೀಗಾಗಿಯೇ ಅವರ ವಿರುದ್ಧ ಪಿತೂರಿ ನಡೆಸಲಾಗುತ್ತಿದೆ’ ಎಂದಿದ್ದಾರೆ.

‘ಸಿದ್ದರಾಮಯ್ಯ ಅಧಿಕಾರದಲ್ಲಿ ಇದ್ದಾಗ ಕುಟುಂಬದವರ ಹಸ್ತಕ್ಷೇಪಕ್ಕೆ ಅವಕಾಶ ನೀಡಿಲ್ಲ. ಅವರ ಪತ್ನಿಯನ್ನು ಯಾರೂ ನೋಡಿಲ್ಲ. ಅಷ್ಟರ ಮಟ್ಟಿಗೆ ರಾಜಕೀಯದೊಂದಿಗೆ ಅವರು ಅಂತರ ಕಾಯ್ದುಕೊಂಡಿದ್ದಾರೆ. ಅಂತಹ ಮಹಿಳೆಯನ್ನು ರಾಜಕೀಯಕ್ಕೆ ಎಳೆದು ತರುತ್ತಿರುವುದು ಸರಿಯಲ್ಲ’ ಎಂದು ಹೇಳಿದ್ದಾರೆ.

ಮೈಸೂರು ರೇಸ್

ಪ್ರೈಸ್‌ಲೆಸ್ ಗೋಲ್ಡ್ ಗೆಲ್ಲುವ ನಿರೀಕ್ಷೆ

ಎಂ.ಆರ್.ಸಿ ಚಾರಿಟಬಲ್ ಟ್ರಸ್ಟ್ ಟ್ರೋಫಿ ಬುಧವಾರದ ಮೈಸೂರು ರೇಸ್‌ಗಳ ಪ್ರಧಾನ ಆಕರ್ಷಣೆಯಾಗಿದ್ದು, ಪ್ರೈಸ್‌ಲೆಸ್ ಗೋಲ್ಡ್ ಈ ರೇಸ್‌ನಲ್ಲಿ ಗೆಲ್ಲುವ ನಿರೀಕ್ಷೆಯಿದೆ. ಮಧ್ಯಾಹ್ನ 2:00ಕ್ಕೆ ಪ್ರಾರಂಭವಾಗಲಿರುವ ದಿನದ ಏಳು ರೇಸ್‌ಗಳಿಗೆ ನಮ್ಮ ಆಯ್ಕೆ ಈ ಕೆಳಕಂಡಂತಿವೆ:

1ನೇ ರೇಸ್: ಎಗೈನ್ಸ್ಟ್ ಆಲ್ ಆಡ್ಸ್ 1, ಡೆವಿಡ್ಸ್ ಡಿಲೈಟ್ 8, ಡೀಮ್ಡ್ ಟು ಫೈರ್ 13
2ನೇ ರೇಸ್: ಬ್ಯೂಟಿಫುಲ್ ಬ್ಲೂಮ್ 6, ಪರ್ಫೆಕ್ಟ್ ಹಾರ್ಟ್ 8, ಎನ್.ಆರ್.ಐ ಏಸ್ 7
3ನೇ ರೇಸ್: ಸ್ಪಾರ್ಕ್ಲಿಂಗ್ ನೈಟ್ 1, ಎನ್.ಆರ್.ಐ ಮಿಲ್ಲೇನಿಯಮ್ 7, ಫೆರೊನಿಯಾ 4
4ನೇ ರೇಸ್: ರೈಸ್ ಎ ಬಕ್ 7, ನ್ಯಾಚುರಲ್ ಒನ್ 5, ಸಿಯೋಲ್ 2
5ನೇ ರೇಸ್: ಪ್ರೈಸ್‌ಲೆಸ್ ಗೋಲ್ಡ್ 2, ಸಂಥಿಂಗ್ ರಾಯಲ್ 4, ಸೆಗೆರ 3
6ನೇ ರೇಸ್: ಡೈನಾಮಿಕ್ ಫೋರ್ಸ್ 6, ದಿ ಫ್ಲೈಯಿಂಗ್ ಫೀಟ್ 8, ವರ್ಲ್ಡ್‌ಲಿ ವೈಸ್ 15
7ನೇ ರೇಸ್: ದಿ ಸೈಜಬಲ್ 7, ಕಿಂಗ್ ಆಫ್ ಕೇಸರಿ 3, ಇನ್‌ಎಫೆಬಲ್ 1

ಉತ್ತಮ ಬೆಟ್: ರೈಸ್ ಎ ಬಕ್

ಜಾಕ್‌ಪಾಟ್‌ಗೆ	1ನೇ ಟ್ರಿಬಲ್	2ನೇ ಟ್ರಿಬಲ್
3,4,5,6,7	2,3,4	5,6,7

ವೈಜ್ಞಾನಿಕ ಮನೋವೃತ್ತಿ ದಿನಾಚರಣೆಯಲ್ಲಿ ಲೇಖಕ ಹನುಮಂತಯ್ಯ

ಮೂಢನಂಬಿಕೆಗಳ ತವರೂರು ಭಾರತ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಮೂಢನಂಬಿಕೆಗಳ ತವರೂರು ಭಾರತ. ತಂತ್ರಜ್ಞಾನ ಮುಂದುವರಿದರೂ ಮೂಢನಂಬಿಕೆ ಆಚರಣೆ ನಿಂತಿಲ್ಲ. ನಾಗರಿಕ ಸಮಾಜ ಆರೋಗ್ಯವಾಗಿ ಇರಬೇಕಾದರೆ ವೈಜ್ಞಾನಿಕ ಮನೋಧರ್ಮ ಅಗತ್ಯ ಎಂದು ಲೇಖಕ ಎಲ್.ಹನುಮಂತಯ್ಯ ಪ್ರತಿಪಾದಿಸಿದರು.

ಕರ್ನಾಟಕ ವೈಜ್ಞಾನಿಕ ಮನೋವೃತ್ತಿ ವೇದಿಕೆ ಮಂಗಳವಾರ ನ್ಯಾಷನಲ್ ಕಾಲೇಜಿನಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ವೈಜ್ಞಾನಿಕ ಮನೋವೃತ್ತಿ ದಿನಾಚರಣೆಯಲ್ಲಿ ಮಾತನಾಡಿದರು.

‘ಅಧ್ಯಯನದ ಪ್ರಕಾರ, ದೇಶದಲ್ಲಿ ಶೇಕಡ 50ರಷ್ಟು ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ. ಹಾವು ಹಾಲು ಕುಡಿಯುವುದಿಲ್ಲ ಎಂಬುದು ವೈಜ್ಞಾನಿಕವಾಗಿ ಸಾಬೀತಾಗಿದೆ. ಆದರೂ ನಾಗರ ಪಂಚಮಿಯಂದು ಕಲ್ಲಿನ ಮೂರ್ತಿಗಳಿಗೆ ಹಾಗೂ ಹುತ್ತಕ್ಕೆ ಹಾಲು ಎರೆದು ವ್ಯರ್ಥ ಮಾಡುತ್ತಿದ್ದೇವೆ. ಇದರ ಬದಲು ಈ ಮಕ್ಕಳಿಗೆ ಹಾಲು ನೀಡುವ ಮೂಲಕ ಆರೋಗ್ಯ ಸುಧಾರಣೆ ಮಾಡಬಹುದಾಗಿದೆ. ಅದೇ ರೀತಿ ಹೋಮ, ಹವನ ಹೆಸರಿನಲ್ಲಿ ಸಾಕಷ್ಟು ತುಪ್ಪ, ಎಣ್ಣೆ ಸುರಿಯುತ್ತೇವೆ’ ಎಂದು ಬೇಸರ ವ್ಯಕ್ತಪಡಿಸಿದರು.



ನಗರದಲ್ಲಿ ಮಂಗಳವಾರ ಆಯೋಜಿಸಿದ್ದ ರಾಷ್ಟ್ರೀಯ ವೈಜ್ಞಾನಿಕ ಮನೋವೃತ್ತಿ ದಿನಾಚರಣೆಯಲ್ಲಿ ಸಿಐಟಿಯು ಕಾರ್ಯದರ್ಶಿ ಕೆ.ಮಹಾಂತೇಶ್, ಲೇಖಕ ಎಲ್. ಹನುಮಂತಯ್ಯ, ಅಖಿಲ ಕರ್ನಾಟಕ ವಿಚಾರವಾದಿ ಟ್ರಸ್ಟ್ ಅಧ್ಯಕ್ಷ ಕೆ.ಬಿ. ಮಹದೇವಪ್ಪ, ನ್ಯಾಷನಲ್ ಕಾಲೇಜು ಅಧ್ಯಕ್ಷ ಸುಧಾಕರ್ ಕಸ್ತೂರಿ, ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಸೌಮ್ಯಾ ಭಾಗವಹಿಸಿದ್ದರು— ಪ್ರಜಾವಾಣಿ ಚಿತ್ರ

ಶಿಕ್ಷಕರು, ಪೋಷಕರು, ಯಾರೇ ಆಗಲಿ ಯಾವುದೇ ವಿಷಯ ಬಗ್ಗೆ ಹೇಳಿದರೆ ಸುಮ್ಮನೆ ಒಪ್ಪಿಕೊಳ್ಳಬಾರದು. ವಿದ್ಯಾರ್ಥಿಗಳು ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಕಣ್ಣುಮುಚ್ಚಿ ಒಪ್ಪಿಕೊಂಡರೆ ಅನೇಕ ಅನಾಹುತಗಳಾಗಿರುವ ಉದಾಹರಣೆ ಇದೆ ಎಂದು ಹೇಳಿದರು.

ಖಭೌತ ವಿಜ್ಞಾನಿ ಪ್ರಜ್ವಲ್ ಶಾಸ್ತ್ರಿ ಮಾತನಾಡಿ, ‘ವಿಜ್ಞಾನ ಎಷ್ಟೇ ಮುಂದುವರಿದರೂ ಸಮಾಜದಲ್ಲಿ ಲಿಂಗ ತಾರತಮ್ಯ ಮಾತ್ರ ನಿಂತಿಲ್ಲ. ಹೆಣ್ಣು ಭ್ರೂಣ ಹತ್ಯೆ ನಡೆಯುತ್ತಲೇ ಇದೆ. ಗಂಡು–ಹೆಣ್ಣು ಇಬ್ಬರನ್ನೂ ಸಮಾನವಾಗಿ ಕಾಣಬೇಕು. ಅಕ್ಷರಸ್ಥರೇ ಹೆಚ್ಚು ಮೂಢನಂಬಿಕೆ ಆಚರಿಸುತ್ತಿದ್ದಾರೆ. ಗ್ರಹಣದ ದಿನ ಮನೆಯಿಂದಲೇ ಹೊರಗೆ ಬಾರದಿರುವುದು, ಬೆಕ್ಕು ಅಡ್ಡ ಬಂದರೆ ಅಪಶಕುನ ಎಂದು ಬಿಂಬಿಸುವುದು ಸರಿಯಲ್ಲ’ ಎಂದರು.

ಎಚ್.ಸಿ.ಉಮೇಶ್ ಅವರು ವೈಚಾರಿಕ ಗೀತೆ ಹಾಡಿದರು. ನ್ಯಾಷನಲ್ ಕಾಲೇಜು ಅಧ್ಯಕ್ಷ ಸುಧಾಕರ್ ಕಸ್ತೂರಿ, ಅಖಿಲ ಕರ್ನಾಟಕ ವಿಚಾರವಾದಿ ಟ್ರಸ್ಟ್ ಅಧ್ಯಕ್ಷ ಕೆ.ಬಿ.ಮಹದೇವಪ್ಪ, ಸಿಐಟಿಯು ರಾಜ್ಯ ಮಂಡಳಿ ಕಾರ್ಯದರ್ಶಿ ಕೆ.ಮಹಾಂತೇಶ್, ಪ್ರಾಂಶುಪಾಲರಾದ ವೈ.ಸಿ.ಕಮಲಾ, ನ್ಯಾಷನಲ್ ಪದವಿಪೂರ್ವ ಪ್ರಾಂಶುಪಾಲರಾದ ಕಾಲೇಜಿನ ಸೌಮ್ಯಾ ಭಾಗವಹಿಸಿದ್ದರು.

ಸಂಕ್ಷಿಪ್ತ ಸುದ್ದಿ

ಕವಿತಾ ಜಾಮೀನು ಅರ್ಜಿಗೆ 22ರ ಒಳಗೆ ಪ್ರತಿಕ್ರಿಯೆ: ಇ.ಡಿ


ಕೆ.ಕವಿತಾ

ನವದೆಹಲಿ (ಪಿಟಿಐ): ಬಿಆರ್‌ಎಸ್ ನಾಯಕಿ ಕೆ.ಕವಿತಾ ಅವರು ಸಲ್ಲಿಸಿರುವ ಜಾಮೀನು ಅರ್ಜಿಗೆ ಸಂಬಂಧಿಸಿದಂತೆ ಆಗಸ್ಟ್ 22ರ ಒಳಗಾಗಿ ಪ್ರತಿಕ್ರಿಯೆ ಸಲ್ಲಿಸುವುದಾಗಿ ಜಾರಿ ನಿರ್ದೇಶನಾಲಯವು (ಇ.ಡಿ) ಸುಪ್ರೀಂ ಕೋರ್ಟ್‌ಗೆ ಮಂಗಳವಾರ ತಿಳಿಸಿದೆ.

ಬಳಿಕ ನ್ಯಾಯಪೀಠವು ವಿಚಾರಣೆಯನ್ನು ಆಗಸ್ಟ್ 27ಕ್ಕೆ ಮುಂದೂಡಿತು.

ಕೇಜ್ರಿವಾಲ್ ನ್ಯಾಯಾಂಗ ಬಂಧನ ವಿಸ್ತರಣೆ


ಅರವಿಂದ ಕೇಜ್ರಿವಾಲ್

ನವದೆಹಲಿ (ಪಿಟಿಐ): ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದಂತೆ ಸಿಬಿಐ ದಾಖಲಿಸಿರುವ ಭ್ರಷ್ಟಾಚಾರ ಪ್ರಕರಣದಲ್ಲಿ ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರ ನ್ಯಾಯಾಂಗ ಬಂಧನದ ಅವಧಿಯನ್ನು ದೆಹಲಿ ನ್ಯಾಯಾಲಯವು ಮಂಗಳವಾರ ಆ. 27ರವರೆಗೆ ವಿಸ್ತರಿಸಿದೆ.

ಮಲೇಷ್ಯಾಕ್ಕೆ ತೆರಳಲು ಸೆಟಲ್ವಾಡ್‌ಗೆ 'ಸುಪ್ರೀಂ' ಒಪ್ಪಿಗೆ

ನವದೆಹಲಿ (ಪಿಟಿಐ): ಮಲೇಷ್ಯಾದಲ್ಲಿ ಆಗಸ್ಟ್ 31ರಿಂದ ನಡೆಯಲಿರುವ ಸಮ್ಮೇಳನದಲ್ಲಿ ಭಾಗವಹಿಸಲು ಸಾಮಾಜಿಕ ಹೋರಾಟಗಾರ್ತಿ ತೀಸ್ತಾ ಸೆಟಲ್ವಾಡ್ ಅವರಿಗೆ ಸುಪ್ರೀಂ ಕೋರ್ಟ್ ಅನುಮತಿ ನೀಡಿದೆ. ಈ ಸಂಬಂಧ ನಿಗದಿತ ದಿನಾಂಕದೊಳಗೆ ಭಾರತಕ್ಕೆ ಹಿಂತಿರುಗುವುದಾಗಿ ಮುಚ್ಚಳಿಕೆ ಬರೆದುಕೊಡುವಂತೆಯೂ ಅವರಿಗೆ ಸೂಚಿಸಿದೆ.

2002ರ ಗೋಧ್ರಾ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಅಮಾಯಕರನ್ನು ಬಂಧಿಸಲು ದಾಖಲೆಗಳನ್ನು ತಿರುಚಿದ್ದ ಪ್ರಕರಣ ಸಂಬಂಧ ಸುಪ್ರೀಂ ಕೋರ್ಟ್ 2023ರ ಜುಲೈನಲ್ಲಿ ಸೆಟಲ್ವಾಡ್ ಅವರಿಗೆ ಜಾಮೀನು ನೀಡಿತ್ತು. ಆದರೆ, ಪಾಸ್‌ಪೋರ್ಟ್‌ಅನ್ನು ಸೆಷನ್ಸ್ ಕೋರ್ಟ್‌ನ ವಶದಲ್ಲಿಯೇ ಉಳಿಸಿಕೊಳ್ಳುವಂತೆ ಸೂಚಿಸಿತ್ತು.

ಜಮ್ಮು, ಶ್ರೀನಗರಕ್ಕೆ ಖರ್ಗೆ, ರಾಹುಲ್ ಭೇಟಿ ಇಂದು

ಜಮ್ಮು/ನವದೆಹಲಿ (ಪಿಟಿಐ): ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಆಗಸ್ಟ್ 21 ಮತ್ತು 22ರಂದು ಜಮ್ಮು ಮತ್ತು ಶ್ರೀನಗರಕ್ಕೆ ಭೇಟಿ ನೀಡಿ, ವಿಧಾನಸಭೆ ಚುನಾವಣೆಯ ಸಿದ್ಧತೆ ಕುರಿತು ಪರಿಶೀಲನೆ ನಡೆಸಲಿದ್ದಾರೆ.

ಭೇಟಿ ಸಂದರ್ಭದಲ್ಲಿ ಖರ್ಗೆ ಮತ್ತು ರಾಹುಲ್ ಅವರು ಜಮ್ಮು ಮತ್ತು ಶ್ರೀನಗರದಲ್ಲಿ ಪಕ್ಷದ ನಾಯಕರು ಹಾಗೂ ಕಾರ್ಯಕರ್ತರೊಂದಿಗೆ ಸಭೆ ನಡೆಸಲಿದ್ದಾರೆ ಎಂದು ಕಾಂಗ್ರೆಸ್‌ನ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಗುಲಾಂ ಅಹ್ಮದ್ ಮಿರ್ ತಿಳಿಸಿದ್ದಾರೆ.

ಅಧಿಸೂಚನೆ ಪ್ರಕಟ(ಶ್ರೀನಗರ ವರದಿ): ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯ 24 ಕ್ಷೇತ್ರಗಳಿಗೆ ಮೊದಲ ಹಂತದಲ್ಲಿ ಸೆಪ್ಟೆಂಬರ್ 18ರಂದು ಚುನಾವಣೆ ನಡೆಯಲಿದ್ದು, ಚುನಾವಣಾ ಆಯೋಗವು ಮಂಗಳವಾರ ಅಧಿಸೂಚನೆ ಹೊರಡಿಸಿದೆ.

ಮೊದಲ ಹಂತದ ಚುನಾವಣೆಗೆ ನಾಮಪತ್ರ ಸಲ್ಲಿಸಲು ಆಗಸ್ಟ್ 27 ಕಡೆಯ ದಿನ. ನಾಮಪತ್ರಗಳ ಪರಿಶೀಲನೆ ಆಗಸ್ಟ್ 28ರಂದು ನಡೆಯಲಿದ್ದು, ವಾಪಸ್ ಪಡೆಯಲು ಆಗಸ್ಟ್ 30ರಂದು ಕೊನೆಯ ದಿನ.

'ಲೈಂಗಿಕ ಬಯಕೆಯನ್ನು ಹದಿಹರೆಯದ ಬಾಲಕಿಯರು ಹತ್ತಿಕ್ಕಿಕೊಳ್ಳಲಿ' ಎಂದಿದ್ದ ಕಲ್ಕತ್ತ ಹೈಕೋರ್ಟ್

'ಉಪದೇಶ' ಇದ್ದ ತೀರ್ಪು ವಜಾ

ನವದೆಹಲಿ (ಪಿಟಿಐ) 'ಬಾಲಕಿಯರು ಲೈಂಗಿಕ ಬಯಕೆಗಳನ್ನು ಹತ್ತಿಕ್ಕಿಕೊಳ್ಳಬೇಕು' ಎಂಬ 'ಆಕ್ಷೇಪಾರ್ಹ ಸಲಹೆ'ಯನ್ನು ನೀಡಿ, ಲೈಂಗಿಕ ದೌರ್ಜನ್ಯ ಪ್ರಕರಣದ ಅಪರಾಧಿಯನ್ನು ಖುಲಾಸೆಗೊಳಿಸಿದ್ದ ಕಲ್ಕತ್ತ ಹೈಕೋರ್ಟ್‌ನ ಆದೇಶವನ್ನು ಸುಪ್ರೀಂ ಕೋರ್ಟ್ ವಜಾಮಾಡಿದೆ.

'ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ಪೋಕ್ಸೊ ಕಾಯ್ದೆಯಡಿ ನಿಭಾಯಿಸುವ ಬಗ್ಗೆ ಸುಪ್ರಿಂ ಕೋರ್ಟ್ ಈಗಾಗಲೇ ಹಲವು ನಿರ್ದೇಶನಗಳನ್ನು ನೀಡಿದೆ' ಎಂದೂ ನ್ಯಾಯಮೂರ್ತಿಗಳಾದ ಅಭಯ್ ಎಸ್. ಓಕಾ ಮತ್ತು ಉಜ್ಜಲ್ ಭುಯಾನ್ ಅವರಿದ್ದ ಪೀಠ ಅಭಿಪ್ರಾಯಪಟ್ಟಿತು.

ಪೀಠದ ಪರವಾಗಿ ತೀರ್ಪು ಪ್ರಕಟಿಸಿದ ನ್ಯಾಯಮೂರ್ತಿ ಅಭಯ್ ಎಸ್. ಓಕಾ ಅವರು, 'ತೀರ್ಪು ಬರೆಯಬೇಕಾದ ಕ್ರಮ ಕುರಿತಂತೆಯೂ ಕೋರ್ಟ್‌ಗಳಿಗೆ ನಿರ್ದೇಶನ ನೀಡಲಾಗಿದೆ' ಎಂದು ಹೇಳಿದರು.

ಡಿಸೆಂಬರ್ 8ರಂದು ಈ ಪ್ರಕರಣದ ವಿಚಾರಣೆಯ ವೇಳೆ ತೀರ್ಪನ್ನು ಕಟುವಾಗಿ ಟೀಕಿಸಿದ್ದ ಸುಪ್ರೀಂ ಕೋರ್ಟ್, 'ಕಲ್ಕತ್ತ ಹೈಕೋರ್ಟ್ ವ್ಯಕ್ತಪಡಿಸಿರುವ ಅಭಿಪ್ರಾಯಗಳು ಖಂಡನಾರ್ಹ ಮತ್ತು ಸಂಪೂರ್ಣವಾಗಿ ಅನಪೇಕ್ಷಿತವಾದುವು' ಎಂದು ಅಭಿಪ್ರಾಯ ವ್ಯಕ್ತಪಡಿಸಿತ್ತು.

ಮುಖ್ಯಾಂಶಗಳು

- ತೀರ್ಪು ಬರವಣಿಗೆ ಕುರಿತು 'ಸುಪ್ರೀಂ'ನಿಂದ ನಿರ್ದೇಶನ
- 20 ವರ್ಷ ಸಜೆ ವಿಧಿಸಿದ್ದ ಅಪರಾಧಿಯ ಖುಲಾಸೆ ಗೊಳಿಸಿದ್ದ ಹೈಕೋರ್ಟ್
- ಸ್ವಯಂಪ್ರೇರಿತವಾಗಿ ರಿಟ್ ಅರ್ಜಿ ದಾಖಲಿಸಿಕೊಂಡಿದ್ದ ಸುಪ್ರೀಂ ಕೋರ್ಟ್

ತೀರ್ಪಿನಲ್ಲಿದ್ದ ಹೈಕೋರ್ಟ್ ವಿಭಾಗೀಯ ಪೀಠದ ಕೆಲ ಅಭಿಪ್ರಾಯಗಳನ್ನು ಆಧರಿಸಿ ಸ್ವಯಂಪ್ರೇರಿತವಾಗಿ ರಿಟ್ ಅರ್ಜಿ ದಾಖಲಿಸಿದ್ದ ಸುಪ್ರೀಂ ಕೋರ್ಟ್, 'ತೀರ್ಪು ಬರೆಯುವಾಗ ನ್ಯಾಯಮೂರ್ತಿಗಳು ಉಪದೇಶ ನೀಡುವ ಅಗತ್ಯವಿಲ್ಲ' ಎಂದು ಸ್ಪಷ್ಟ ಅಭಿಪ್ರಾಯ ವ್ಯಕ್ತಪಡಿಸಿತು.

ಕಲ್ಕತ್ತ ಹೈಕೋರ್ಟ್ 2023ರ ಅ.18ರಂದು ನೀಡಿದ್ದ ತೀರ್ಪನ್ನು ಪಶ್ಚಿಮ ಬಂಗಾಳ ಸರ್ಕಾರವೂ ಪ್ರಶ್ನಿಸಿತ್ತು.

ಹೈಕೋರ್ಟ್ ತನ್ನ ತೀರ್ಪಿನಲ್ಲಿ 'ಬಾಲಕಿಯರು ಲೈಂಗಿಕ ಬಯಕೆಗಳನ್ನು ಹತ್ತಿಕ್ಕಿಕೊಳ್ಳಬೇಕು. ಕೇವಲ ಎರಡು ನಿಮಿಷ ಆಕೆ ಸುಖ ಪಟ್ಟರೂ, ಸಮಾಜದ ದೃಷ್ಟಿಯಲ್ಲಿ ಆಕೆ ಕಳೆದುಕೊಂಡವಳೇ ಆಗಿರುತ್ತಾಳೆ' ಎಂದು ಅಭಿಪ್ರಾಯ ದಾಖಲಿಸಿತ್ತು.



'ಹೈಕೋರ್ಟ್ ತೀರ್ಪಿನಲ್ಲಿರುವ ಕೆಲ ಪ್ಯಾರಾಗಳು 'ಸಮಸ್ಯಾಸ್ಮತಕ'ವಾಗಿವೆ. ಇಂತಹ ತೀರ್ಪುಗಳನ್ನು ಬರೆಯುವುದು 'ಖಂಡಿತವಾಗಿ ಸರಿಯಾದುದಲ್ಲ'. (ಜ.4ರಂದು ಸುಪ್ರೀಂ ಕೋರ್ಟ್ ವ್ಯಕ್ತಪಡಿಸಿದ್ದ ಅಭಿಪ್ರಾಯ)

ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಅಪರಾಧಿಗೆ 20 ವರ್ಷ ಸಜೆ ವಿಧಿಸಿದ್ದ ಪ್ರಕರಣದ ಮೇಲ್ಮನವಿಯ ವಿಚಾರಣೆ ವೇಳೆ ಹೈಕೋರ್ಟ್ ಈ ಅಭಿಪ್ರಾಯ ವ್ಯಕ್ತಪಡಿಸಿತ್ತು. ಅಲ್ಲದೆ, ಇದೇ ಪ್ರಕರಣದಲ್ಲಿ ಅಪರಾಧಿಯನ್ನು ಹೈಕೋರ್ಟ್ ಖುಲಾಸೆಗೊಳಿಸಿತ್ತು.

ಕಳೆದ ವರ್ಷ ಡಿ.8ರಂದು ಹೊರಡಿಸಿದ್ದ ಆದೇಶದಲ್ಲಿ ಸುಪ್ರೀಂ ಕೋರ್ಟ್, 'ಮೇಲ್ನೋಟಕ್ಕೆ ಹೈಕೋರ್ಟ್‌ನ ಅಭಿಪ್ರಾಯಗಳು, ಸಂವಿಧಾನದ ವಿಧಿ 21ರಡಿ (ಬದುಕು ಮತ್ತು ವ್ಯಕ್ತಿಗತ ಸ್ವಾತಂತ್ರ್ಯ) ಬಾಲಕಿಯರಿಗೆ ಇರುವ ಹಕ್ಕುಗಳ ನೇರ ಉಲ್ಲಂಘನೆಯಾಗಿದೆ' ಎಂದು ಹೇಳಿತ್ತು.

ಹೈಕೋರ್ಟ್‌ನ ಮುಂದೆ ಇದ್ದುದು ಅಪರಾಧಿಗೆ ಶಿಕ್ಷೆ ವಿಧಿಸಿ ಕೆಳಹಂತದ ನ್ಯಾಯಾಲಯ ಸೆಪ್ಟೆಂಬರ್ 19/20ರಂದು ನೀಡಿದ್ದ ಆದೇಶದ ಸಿಂಧುತ್ವದ ಪ್ರಶ್ನೆಯಷ್ಟೇ. ಈ ಪ್ರಕರಣದಲ್ಲಿ ಅಪರಾಧಿಗೆ ಐಪಿಸಿ ಸೆಕ್ಷನ್ 363 (ಅಪಹರಣ), 366 (ಅಪಹರಣ, ಒತ್ತೆ, ಮದುವೆಯಾಗುವಂತೆ ಒತ್ತಡ) ಹಾಗೂ ಪೋಕ್ಸೊ ಕಾಯ್ದೆಯ ಸೆಕ್ಷನ್ 6ರಡಿ ಶಿಕ್ಷೆಯನ್ನು ವಿಧಿಸಲಾಗಿತ್ತು.

'ತೀರ್ಪಿನಲ್ಲಿದ್ದ ಹೈಕೋರ್ಟ್‌ನ ವಿಭಾಗೀಯ ಪೀಠದ ಅಭಿಪ್ರಾಯಗಳು, ಉಲ್ಲೇಖಗಳಿಂದಾಗಿ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಅವರ ಆದೇಶದಂತೆ ಸಂವಿಧಾನದ ವಿಧಿ 32ರ ಅನುಸಾರ ಸ್ವಯಂಪ್ರೇರಿತ ರಿಟ್ ದಾಖಲಿಸಲಾಗಿತ್ತು' ಎಂದು ಪೀಠ ಹೇಳಿತು.

'ತೀರ್ಪಿನಲ್ಲಿ ಹೈಕೋರ್ಟ್ ಅನೇಕ ಅಪ್ರಸ್ತುತ ಅಂಶಗಳನ್ನು ಉಲ್ಲೇಖಿಸಿದೆ. ಮೇಲ್ನೋಟಕ್ಕೆ ಕಂಡುಬರುವಂತೆ ನಮ್ಮ ಪ್ರಕಾರ, 'ತೀರ್ಪಿನಲ್ಲಿ ನ್ಯಾಯಮೂರ್ತಿಗಳು ತಮ್ಮ ವ್ಯಕ್ತಿಗತ ಅಭಿಪ್ರಾಯಗಳನ್ನು ಹೇಳಬಾರದು. ಉಪದೇಶವನ್ನೂ ನೀಡಬಾರದು' ಎಂದು ಹೇಳಿತ್ತು

ಕಲ್ಕತ್ತ ಹೈಕೋರ್ಟ್ ಹೇಳಿದ್ದೇನು?

ಹೈಕೋರ್ಟ್ ತನ್ನ ತೀರ್ಪಿನಲ್ಲಿ, 'ತನ್ನ ದೇಹ ರಕ್ಷಿಸಿಕೊಳ್ಳುವುದು ಪ್ರತಿ ಬಾಲಕಿಯ ಹೊಣೆಗಾರಿಕೆ. ಲಿಂಗ ಆಧಾರಿತ ಅಡೆತಡೆ ಮೀರಿ ಸಮಗ್ರ ಅಭಿವೃದ್ಧಿಗೆ ಯತ್ನಿಸಬೇಕು. ತನ್ನ ಲೈಂಗಿಕ ಬಯಕೆ/ವಾಂಛೆಗಳನ್ನು ಹತ್ತಿಕ್ಕಿಕೊಳ್ಳಬೇಕು. ಎರಡು ನಿಮಿಷದ ಲೈಂಗಿಕ ಸುಖಕ್ಕಾಗಿ ಆಕೆ ಒಪ್ಪಿದರೂ ಸಮಾಜದ ದೃಷ್ಟಿಯಲ್ಲಿ ಆಕೆಯನ್ನು ಕಳೆದುಕೊಂಡವಳು ಎಂದೇ ಗುರುತಿಸಲಾಗುತ್ತದೆ. ಆಕೆ ತನ್ನ ಖಾಸಗೀತನ ಹಾಗೂ ತನ್ನ ದೇಹದ ಸ್ವಾಯತ್ತೆಯನ್ನು ರಕ್ಷಿಸಿಕೊಳ್ಳಬೇಕು' ಎಂದು ಅಭಿಪ್ರಾಯಪಟ್ಟಿತ್ತು.

ಬಾಲಕಿಯರ ಅಥವಾ ಮಹಿಳೆಯರ ವ್ಯಕ್ತಿತ್ವ, ಘನತೆ, ಖಾಸಗಿತನವನ್ನು ಗೌರವಿಸುವುದು ಹದಿಹರೆಯದ ಬಾಲಕರ ಕರ್ತವ್ಯ. ಬಾಲಕರು ತಮ್ಮ ಮನಸ್ಸನ್ನು ಸ್ಥಿಮಿತದಲ್ಲಿ ಇಟ್ಟುಕೊಳ್ಳಬೇಕು' ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿತ್ತು.

ತೆರಿಗೆ ಬಾಕಿ: ವಿಚಾರಣೆ ಮುಂದುವರಿಕೆ ಐಟಿಎಟಿಗೆ 'ಸುಪ್ರೀಂ' ಅನುಮತಿ

ನವದೆಹಲಿ (ಪಿಟಿಐ): ತೆರಿಗೆ ಬಾಕಿ ವಸೂಲಿಗಾಗಿ ನೀಡಿರುವ ನೋಟಿಸ್‌ಗೆ ಸಂಬಂಧಿಸಿ, ಕಾಂಗ್ರೆಸ್ ಪಕ್ಷ ಸಲ್ಲಿಸಿರುವ ಅರ್ಜಿ ಕುರಿತು ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿ (ಐಟಿಎಟಿ) ವಿಚಾರಣೆ ಮುಂದುವರಿಸಬಹುದು ಎಂದು ಸುಪ್ರೀಂ ಕೋರ್ಟ್ ಸೋಮವಾರ ಹೇಳಿದೆ.

₹100 ಕೋಟಿ ಬಾಕಿ ತೆರಿಗೆ ವಸೂಲಿಗೆ ಸಂಬಂಧಿಸಿದಂತೆ ಆದಾಯ ತೆರಿಗೆ ಇಲಾಖೆಯು ಕಾಂಗ್ರೆಸ್‌ಗೆ ನೀಡಿದ್ದ ನೋಟಿಸ್‌ಗೆ ತಡೆಯಾಜ್ಞೆ ನೀಡಲು ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿ ಇತ್ತೀಚೆಗೆ ನಿರಾಕರಿಸಿತ್ತು. ಈ ಆದೇಶದ ವಿರುದ್ಧ ಕಾಂಗ್ರೆಸ್, ದೆಹಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು.

ತಡೆಯಾಜ್ಞೆಗಾಗಿ ಐಟಿಎಗೆ ಅರ್ಜಿ ಸಲ್ಲಿಸುವಂತೆ ಮಾರ್ಚ್ 13ರಂದು ಹೈಕೋರ್ಟ್ ಆದೇಶಿಸಿತ್ತು. ಈ ಆದೇಶ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಕಾಂಗ್ರೆಸ್ ಮೇಲ್ಮನವಿ ಸಲ್ಲಿಸಿದೆ. ನ್ಯಾಯಮೂರ್ತಿಗಳಾದ ಬಿ.ವಿ.ನಾಗರತ್ನ ಹಾಗೂ ಎನ್. ಕೋಟೀಶ್ವರ್ ಸಿಂಗ್ ಅವರು ಇದ್ದ ನ್ಯಾಯಪೀಠ, ಕಾಂಗ್ರೆಸ್ ಪಕ್ಷದ ಅರ್ಜಿ ವಿಚಾರಣೆ ನಡೆಸಿತು.

'ಐಟಿಎಟಿಯ ಆದೇಶವನ್ನು ಪ್ರಶ್ನಿಸಿ ಕಾಂಗ್ರೆಸ್ ಪಕ್ಷ ಮೇಲ್ಮನವಿ ಸಲ್ಲಿಸಿದೆ. ಹಾಗಾಗಿ, ಇದೇ ವಿಚಾರವಾಗಿ ಮತ್ತೆ ಐಟಿಎಟಿಗೇ ಅರ್ಜಿ ಸಲ್ಲಿಸುವಂತೆ ಕಾಂಗ್ರೆಸ್‌ಗೆ ಹೈಕೋರ್ಟ್ ಸೂಚಿಸಲು ಹೇಗೆ ಸಾಧ್ಯ' ಎಂದು ಪ್ರಶ್ನಿಸಿದ ನ್ಯಾಯಪೀಠ, 'ತನ್ನ ಅಧಿಕಾರ ವ್ಯಾಪ್ತಿಗೆ ಸಂಬಂಧಿಸಿ ಹೈಕೋರ್ಟ್ ಕೈಗೊಂಡ ನಿರ್ಣಯ ಸರಿ ಇಲ್ಲ' ಎಂದು ಹೇಳಿದೆ.

ಆದಾಯ ತೆರಿಗೆ ಇಲಾಖೆ ಪರ ಹಾಜರಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್ ಎನ್. ವೆಂಕಟರಾಮನ್, 'ಬಾಕಿ ಇರುವ ಆದಾಯ ತೆರಿಗೆಯನ್ನು ಈಗಾಗಲೇ ವಸೂಲು ಮಾಡಲಾಗಿದೆ. ಈಗ, ಉದ್ಭವಿಸಿರುವ ಪ್ರಶ್ನೆ ಕುತೂಹಲಕ್ಕೆ ಸಂಬಂಧಿಸಿದ್ದಷ್ಟೆ' ಎಂದು ಪೀಠಕ್ಕೆ ತಿಳಿಸಿದರು.

ಕಾಂಗ್ರೆಸ್ ಪಕ್ಷದ ಪರ ವಾದ ಮಂಡಿಸಿದ ಹಿರಿಯ ನ್ಯಾಯವಾದಿ ವಿವೇಕ್ ತಂಖಾ, 'ಹೈಕೋರ್ಟ್ ತನಗಿರುವ ಅಧಿಕಾರ ಚಲಾಯಿಸಿ, ಕನಿಷ್ಠ ಪಕ್ಷ ತೆರಿಗೆ ಬಾಕಿ ವಸೂಲಿ ನೋಟಿಸ್‌ಗೆ ಮಧ್ಯಂತರ ತಡೆಯಾಜ್ಞೆ ನೀಡಬೇಕಿತ್ತು' ಎಂದರು.

ನಂತರ, ಆದಾಯ ತೆರಿಗೆ ಇಲಾಖೆಗೆ ನೋಟಿಸ್ ಜಾರಿ ಮಾಡಿದ ಪೀಠ, 'ತನ್ನ ಮುಂದಿರುವ ಅರ್ಜಿ ಕುರಿತಂತೆ ಐಟಿಎಟಿ ನಿರ್ಧಾರ ಕೈಗೊಳ್ಳುವುದಕ್ಕೆ ಈ ರಜಾಕಾಲದ ವಿಶೇಷ ಅರ್ಜಿ ಅಡ್ಡಿಯಾಗುವುದಿಲ್ಲ' ಎಂದು ಸ್ಪಷ್ಟಪಡಿಸಿದೆ.

ಉನ್ನತ ಹುದ್ದೆಗಳಿಗೆ ಖಾಸಗಿಯವರ ನೇಮಕ ಕೈಬಿಟ್ಟ ಕೇಂದ್ರ ಸರ್ಕಾರ

ಹೋರಾಟಕ್ಕೆ ಸಂದ ಜಯ: ಕಾಂಗ್ರೆಸ್

ನವದೆಹಲಿ (ಪಿಟಿಐ): ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು 'ಇಂಡಿಯಾ' ಮೈತ್ರಿಕೂಟದ ನಾಯಕರ ವಿರೋಧದಿಂದಾಗಿ ಕೇಂದ್ರ ಸರ್ಕಾರವು 'ಲ್ಯಾಟರಲ್ ಎಂಟ್ರಿ' ನೇಮಕಾತಿಯಿಂದ ಹಿಂದೆ ಸರಿದಿದೆ ಎಂದು ಕಾಂಗ್ರೆಸ್ ಮಂಗಳವಾರ ಹೇಳಿದೆ.

ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳಲ್ಲಿನ ಉನ್ನತ ಹುದ್ದೆಗಳಿಗೆ ಖಾಸಗಿ ವಲಯದ ಪರಿಣತರನ್ನು ಮೂಲಕ ನೇಮಕ ಮಾಡಿಕೊಳ್ಳುವ ಸಂಬಂಧ ಹೊರಡಿಸಿದ್ದ ಜಾಹೀರಾತನ್ನು ಸರ್ಕಾರದ ಸೂಚನೆಯಂತೆ ಕೇಂದ್ರ ಲೋಕಸೇವಾ ಆಯೋಗ (ಯುಪಿಎಸ್‌ಸಿ) ವಾಪಸ್ ಪಡೆದುಕೊಂಡಿದೆ.

ಈ ಬೆಳವಣಿಗೆಯ ಬಗ್ಗೆ ಪ್ರತಿಕ್ರಿಯಿಸಿದ ಖರ್ಗೆ, 'ಸಂವಿಧಾನಕ್ಕೆ ಜಯವಾಗಲಿ. ದಲಿತರು, ಬುಡಕಟ್ಟು ಜನರು, ಹಿಂದುಳಿದ ಮತ್ತು ದುರ್ಬಲ ವರ್ಗದವರ ಸಾಮಾಜಿಕ ನ್ಯಾಯಕ್ಕಾಗಿ ಕಾಂಗ್ರೆಸ್ ಪಕ್ಷವು ನಡೆಸಿರುವ ಹೋರಾಟವು, ಮೀಸಲಾತಿ ಕಸಿದುಕೊಳ್ಳುವ ಬಿಜೆಪಿಯ ಯೋಜನೆಗಳನ್ನು ವಿಫಲಗೊಳಿಸಿದೆ' ಎಂದಿದ್ದಾರೆ. 'ಆದರೆ ಬಿಜೆಪಿ-ಆರ್‌ಎಸ್‌ಎಸ್ ಅಧಿಕಾರದಲ್ಲಿರುವವರೆಗೂ ಮೀಸಲಾತಿಯನ್ನು ಕಸಿದುಕೊಳ್ಳಲು ಹೊಸ ತಂತ್ರಗಳನ್ನು ಅನುಸರಿಸುತ್ತಲೇ ಇರುತ್ತಾರೆ. ನಾವೆಲ್ಲರೂ ಎಚ್ಚರಿಕೆಯಿಂದ ಇರಬೇಕು' ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರದ ವಿವಿಧ ಸಚಿವಾಲಯಗಳ 45 ಹುದ್ದೆಗಳಿಗೆ ನೇಮಕಾತಿ ಸಂಬಂಧ ಯುಪಿಎಸ್‌ಸಿ, ಆ.17ರಂದು ಜಾಹೀರಾತು ಪ್ರಕಟಿಸಿತ್ತು. ಖಾಸಗಿ ವಲಯದವರೂ ಒಳಗೊಂಡಂತೆ ಪರಿಣತರು ಹಾಗೂ ತಜ್ಞರನ್ನು 'ಲ್ಯಾಟರಲ್ ಎಂಟ್ರಿ' ಮೂಲಕ ನೇಮಕಾತಿ ಮಾಡಿಕೊಳ್ಳುವುದಾಗಿ ತಿಳಿಸಿತ್ತು. 10 ಜಂಟಿ ಕಾರ್ಯದರ್ಶಿಗಳು ಮತ್ತು 35 ನಿರ್ದೇಶಕರು/ಉಪ ಕಾರ್ಯದರ್ಶಿ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಿತ್ತು.

'ಲ್ಯಾಟರಲ್ ಎಂಟ್ರಿ' ನೇಮಕಾತಿಗೆ ಮುಂದಾಗಿರುವ ಸರ್ಕಾರವು ಎಸ್‌ಸಿ,ಎಸ್‌ಟಿ ಹಾಗೂ ಒಬಿಸಿಗಳಿಗಿರುವ ಮೀಸಲಾತಿಯನ್ನು ಬಹಿರಂಗವಾಗಿಯೇ ಕಸಿದುಕೊಳ್ಳುತ್ತಿದೆ ಎಂದು ವಿರೋಧ ಪಕ್ಷಗಳು ಆರೋಪಿಸಿದ್ದವು.

'ಸರ್ಕಾರಿ ಉದ್ಯೋಗಗಳಲ್ಲಿ ಮೀಸಲಾತಿ ಎಂಬುದು ಐತಿಹಾಸಿಕ ಅನ್ಯಾಯವನ್ನು ಸರಿಪಡಿಸುವ ಮತ್ತು ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸುವ ಗುರಿಯನ್ನು ಹೊಂದಿದೆ. ಆದರೆ 'ಲ್ಯಾಟರಲ್ ಎಂಟ್ರಿ' ನೇಮಕಾತಿಗಳಲ್ಲಿ ಮೀಸಲಾತಿಗೆ ಯಾವುದೇ ಅವಕಾಶವಿಲ್ಲ. ಪ್ರಧಾನಿ ಅವರು ಸಾಮಾಜಿಕ ನ್ಯಾಯದ ಪರ ಇರುವುದರಿಂದ ಈ ನಿರ್ಧಾರವನ್ನು ಮರುಪರಿಶೀಲಿಸಬೇಕು. ಆಗಸ್ಟ್ 17ರಂದು ಹೊರಡಿಸಿದ್ದ ಜಾಹೀರಾತು ರದ್ದುಪಡಿಸಬೇಕು' ಎಂದು ಕೇಂದ್ರ ಸಿಬ್ಬಂದಿ ಇಲಾಖೆಯ ರಾಜ್ಯ ಸಚಿವ ಜಿತೇಂದ್ರ ಸಿಂಗ್ ಅವರು ಯುಪಿಎಸ್‌ಸಿ ಅಧ್ಯಕ್ಷೆ ಪ್ರೀತಿ ಸೂದನ್‌ಗೆ ಬರೆದ ಪತ್ರದಲ್ಲಿ ಸೂಚಿಸಿದ್ದರು.

> ಸಂವಿಧಾನ, ಮೀಸಲಾತಿ ವ್ಯವಸ್ಥೆಯನ್ನು ಯಾವುದೇ ಬೆಲೆ ತೆತ್ತಾದರೂ ರಕ್ಷಿಸುತ್ತೇವೆ. ಬಿಜೆಪಿಯ 'ಲ್ಯಾಟರಲ್ ಎಂಟ್ರಿ' ಪಿತೂರಿಯನ್ನು ವಿಫಲಗೊಳಿಸುತ್ತೇವೆ
> **ರಾಹುಲ್ ಗಾಂಧಿ**
> ಲೋಕಸಭೆ ವಿರೋಧ ಪಕ್ಷದ ನಾಯಕ

> ಕೇಂದ್ರದ ನರೇಂದ್ರ ಮೋದಿ ಸರ್ಕಾರವು ಎಸ್‌ಸಿ, ಎಸ್‌ಟಿ ಮತ್ತು ಇತರೆ ಹಿಂದುಳಿದ ಸಮುದಾಯಗಳೆಡೆಗಿನ ಬದ್ಧತೆಯನ್ನು ಪುನರುಚ್ಚರಿಸಿದೆ
> **ಚಿರಾಗ್ ಪಾಸ್ವಾನ್**
> ಕೇಂದ್ರ ಸಚಿವ

> ಹಿಂದುಳಿದ ವರ್ಗದವರು, ದಲಿತರು ಮತ್ತು ಅಲ್ಪಸಂಖ್ಯಾತರು ತೋರಿದ ಒಗ್ಗಟ್ಟಿನ ಮುಂದೆ ಕೇಂದ್ರ ಸರ್ಕಾರ ಕೊನೆಗೂ ಮಂಡಿಯೂರಿದೆ
> **ಅಖಿಲೇಶ್ ಯಾದವ್**
> ಎಸ್‌ಪಿ ಅಧ್ಯಕ್ಷ

ಬಿಜೆಪಿ ಸೇರಿ 32 ಸಂಘಟನೆಗಳ ಸಂವಾದ

ಮೋಹನ್ ಭಾಗವತ್, ದತ್ತಾತ್ರೇಯ ಹೊಸಬಾಳೆ, ಜಂಟಿ ಪ್ರಧಾನ ಕಾರ್ಯದರ್ಶಿಗಳು, ಇತರೆ ಮುಖಂಡರು ಭಾಗಿ

31ರಿಂದ ಆರ್‌ಎಸ್‌ಎಸ್ ಸಹವರ್ತಿ ಸಂಘಟನೆಗಳ ವಾರ್ಷಿಕ ಸಭೆ

ನವದೆಹಲಿ (ಪಿಟಿಐ): ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ಮತ್ತು ಅದರ ಜೊತೆಗೆ ಗುರುತಿಸಿಕೊಂಡಿರುವ ಬಿಜೆಪಿ ಸೇರಿದಂತೆ 32 ಸಂಘಟನೆಗಳ ಹಿರಿಯ ಪದಾಧಿಕಾರಿಗಳ ವಾರ್ಷಿಕ ಸಭೆ ಆಗಸ್ಟ್ 31ರಿಂದ ಕೇರಳದ ಪಾಲಕ್ಕಾಡ್‌ನಲ್ಲಿ ನಡೆಯಲಿದೆ.

ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್, ಸರ ಕಾರ್ಯವಾಹ ದತ್ತಾತ್ರೇಯ ಹೊಸಬಾಳೆ, ಜಂಟಿ ಪ್ರಧಾನ ಕಾರ್ಯದರ್ಶಿಗಳು, ಇತರೆ ಮುಖಂಡರು ಭಾಗವಹಿಸುವರು ಎಂದು ಮಾಧ್ಯಮ ಘಟಕದ ಮುಖ್ಯಸ್ಥ ಸುನಿಲ್ ಅಂಬೇಕರ್ ತಿಳಿಸಿದ್ದಾರೆ.

'ಆರ್‌ಎಸ್‌ಎಸ್‌ನ ಅಖಿಲ ಭಾರತೀಯ ಸಮನ್ವಯ ಬೈಠಕ್ ಆಗಸ್ಟ್ 31ರಿಂದ ಸೆಪ್ಟೆಂಬರ್ 2ರವರೆಗೆ ಪಾಲಕ್ಕಾಡ್‌ನಲ್ಲಿ ನಡೆಯಲಿದೆ' ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಬೈಠಕ್‌ನಲ್ಲಿ ಆರ್‌ಎಸ್‌ಎಸ್‌ನ ಸಹವರ್ತಿ ಸಂಘಟನೆಗಳಾದ ರಾಷ್ಟ್ರ ಸೇವಿಕಾ ಸಮಿತಿ, ವನವಾಸಿ ಕಲ್ಯಾಣ ಆಶ್ರಮ, ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್, ಭಾರತೀಯ ಜನತಾ ಪಕ್ಷ, ಭಾರತೀಯ ಕಿಸಾನ್ ಸಂಘ, ವಿದ್ಯಾಭಾರತಿ ಮತ್ತು ಭಾರತೀಯ ಮಜ್ದೂರ್ ಸಂಘದ ಹಿರಿಯ ಸದಸ್ಯರು ಭಾಗವಹಿಸುವರು ಎಂದು ತಿಳಿಸಿದೆ.

ಆರ್‌ಎಸ್‌ಎಸ್ ಮತ್ತು ಬಿಜೆಪಿಯ ಹಿರಿಯ ಮುಖಂಡರು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ನಿವಾಸದಲ್ಲಿ ಇತ್ತೀಚೆಗೆ ಸಭೆ ಸೇರಿದ್ದರು.

ಜಾತಿ ವ್ಯವಸ್ಥೆ ಅಸಾಂವಿಧಾನಿಕ: ಅರ್ಜಿ ವಜಾ

ನವದೆಹಲಿ (ಪಿಟಿಐ): ಜಾತಿ ವ್ಯವಸ್ಥೆ ಅಸಾಂವಿಧಾನಿಕ ಎಂದು ಘೋಷಿಸಲು ನಿರ್ದೇಶನ ನೀಡುವಂತೆ ಕೋರಿ ಸಲ್ಲಿಕೆಯಾಗಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಮಂಗಳವಾರ ವಜಾಗೊಳಿಸಿದೆ.

ವಾಜೀರ್ ಸಿಂಗ್ ಪೂನಿಯಾ ಅವರು ಸಲ್ಲಿಸಿದ್ದ ಅರ್ಜಿಯನ್ನು ಪರಿಶೀಲಿಸಿದ ಮುಖ್ಯ ನ್ಯಾಯಮೂರ್ತಿ ಡಿ.ವೈ ಚಂದ್ರಚೂಡ್ ಅವರ ನೇತೃತ್ವದ ಪೀಠವು, 'ವಿಚಾರಣಾಯೋಗ್ಯವಾದ ಯಾವುದೇ ಅಂಶ ಇಲ್ಲಿ ಇಲ್ಲ' ಎಂದು ಹೇಳಿದೆ. 'ಸಂವಿಧಾನದ ಮೂಲ ಕರಡುವಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉಲ್ಲೇಖವಿದೆ' ಎಂದು ನ್ಯಾಯಾಲಯ ತಿಳಿಸಿದೆ.

ಜಾತಿ ವ್ಯವಸ್ಥೆಯು ಮೂಲಭೂತ ಹಕ್ಕುಗಳಿಗೆ ವಿರುದ್ಧವಾದದ್ದು, ಅದನ್ನು ಅಸಾಂವಿಧಾನಿಕವೆಂದು ಪರಿಗಣಿಸಬೇಕು ಎಂದು ಅರ್ಜಿದಾರರು ಕೋರಿದ್ದರು.

ಇಸ್ರೊ ಅಧ್ಯಕ್ಷ ಎಸ್. ಸೋಮನಾಥ್ ಹೇಳಿಕೆ

'ಎಸ್‌ಎಸ್‌ಎಲ್‌ವಿ ತಯಾರಿಕೆಗೆ 10ಕ್ಕೂ ಹೆಚ್ಚು ಕಂಪನಿಗಳ ಆಸಕ್ತಿ'

ನವದೆಹಲಿ(ಪಿಟಿಐ): ಸಣ್ಣ ಉಪ ಗ್ರಹ ಉಡಾವಣಾ ವಾಹನ (ಎಸ್‌ಎಸ್‌ಎಲ್‌ವಿ) ತಯಾರಿಕೆಯಲ್ಲಿ 10ಕ್ಕೂ ಹೆಚ್ಚು ಕಂಪನಿಗಳು ಮತ್ತು ಸಮೂಹ ಸಂಸ್ಥೆಗಳು ಆಸಕ್ತಿ ತೋರಿವೆ. ಇದರಲ್ಲಿ ಕೆಲವನ್ನು ತಂತ್ರಜ್ಞಾನ ವರ್ಗಾವಣೆಗೆ ಸಂಭಾವ್ಯ ಪಾಲುದಾರರನ್ನಾಗಿ ಪರಿಗಣಿಸಲಾಗಿದೆ ಎಂದು ಭಾರತೀಯ ಬಾಹ್ಯಾಕಾಶ ಸಂಸ್ಥೆಯ (ಇಸ್ರೊ) ಅಧ್ಯಕ್ಷ ಎಸ್. ಸೋಮನಾಥ್ ಮಂಗಳವಾರ ತಿಳಿಸಿದ್ದಾರೆ.

ಕೆಳಮಟ್ಟದ ಭೂಕಕ್ಷೆಗಳಲ್ಲಿ ಸಣ್ಣ ಉಪಗ್ರಹಗಳನ್ನು ಇರಿಸಲು, ಸ್ವಂತವಾಗಿ ರಾಕೆಟ್‌ಗಳನ್ನು ನಿರ್ಮಿಸುವ ಸಲುವಾಗಿ ಆಯ್ದ ಉದ್ಯಮ ಪಾಲುದಾರರು ಮೊದಲು ಎರಡು ವರ್ಷಗಳ ಅವಧಿಯಲ್ಲಿ ಇಸ್ರೊ ನೆರವಿನಲ್ಲಿ ಎರಡು ಎಸ್‌ಎಸ್‌ಎಲ್‌ವಿಗಳನ್ನು ಅಭಿವೃದ್ಧಿಪಡಿಸಲಿದ್ದಾರೆ ಎಂದು ಅವರು ಹೇಳಿದರು.

ಎಐಸಿಟಿಇ ಮತ್ತು ಇಸ್ರೊ ಆಯೋಜಿಸಿದ್ದ ಕಾರ್ಯಕ್ರಮವೊಂದರಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 100ಕ್ಕೂ ಹೆಚ್ಚು ಕಂಪನಿಗಳು/ಸಮೂಹಸಂಸ್ಥೆಗಳು ಎಸ್‌ಎಸ್‌ಎಲ್‌ವಿಗಾಗಿ ತಂತ್ರಜ್ಞಾನ ವರ್ಗಾವಣೆಗೆ ಆಸಕ್ತಿ ತೋರಿಸಿವೆ ಎಂದು ಹೇಳಿದರು.



ಎಸ್‌ಎಸ್‌ಎಲ್‌ವಿಯ ಉಡಾವಣಾ ವಾಹನದ ಅಭಿವೃದ್ಧಿ ಪೂರ್ಣಗೊಂಡಿದೆ. ಬೃಹತ್ ಉತ್ಪಾದನೆಗಾಗಿ ರಾಕೆಟ್ ಅನ್ನು ಉದ್ಯಮಕ್ಕೆ ವರ್ಗಾಯಿಸಲು ಸಿದ್ಧವಾಗಿದೆ
ಎಸ್. ಸೋಮನಾಥ್, ಇಸ್ರೊ ಅಧ್ಯಕ್ಷ

ತಂತ್ರಜ್ಞಾನ ವರ್ಗಾವಣೆ ಮತ್ತು ಅದನ್ನು ಹೇಗೆ ಮಾಡುವುದು ಹಾಗೂ ಇಸ್ರೊದಿಂದ ಅವರ ನಿರೀಕ್ಷೆಗಳೇನು ಎನ್ನುವ ಬಗ್ಗೆ ಉದ್ಯಮದ ಪ್ರಮುಖರೊಂದಿಗೆ ಇಸ್ರೊ ಒಂದು ದಿನದ ಸಂವಾದ ಕಾರ್ಯಕ್ರಮ ಕೂಡ ಆಯೋಜಿಸಿದೆ ಎಂದು ಸೋಮನಾಥ್ ಹೇಳಿದರು.

ಎಸ್‌ಎಸ್‌ಎಲ್‌ವಿ ತಂತ್ರಜ್ಞಾನದ ವರ್ಗಾವಣೆಗಾಗಿ ಕೆಲವು ಕಂಪನಿಗಳು/ಸಮೂಹಗಳು ಆರ್‌ಎಫ್‌ಪಿ (ಪ್ರಸ್ತಾವನೆಯ ಕೋರಿಕೆ) ದಾಖಲೆಗಳನ್ನು ಪಡೆದಿವೆ ಎಂದು ಅವರು ಹೇಳಿದರು.

ಎಸ್‌ಎಸ್‌ಎಲ್‌ವಿಗಾಗಿ ತಂತ್ರಜ್ಞಾನವನ್ನು ವರ್ಗಾಯಿಸಲು ಗುರುತಿಸಲಾದ ಕಂಪನಿ ಅಥವಾ ಸಮೂಹವು ಉಡಾವಣಾ ವಾಹನಗಳನ್ನು ತಯಾರಿಸಲು ತನ್ನದೇ ಆದ ಕ್ಯಾಂಪಸ್ ಅಭಿವೃದ್ಧಿಪಡಿಸುವವರೆಗೆ ಇಸ್ರೊದ ಸೌಲಭ್ಯಗಳಲ್ಲೇ ರಾಕೆಟ್ ನಿರ್ಮಾಣ ಮುಂದುವರಿಸಬಹುದಾಗಿದೆ. ಕಂಪನಿಗಳ ಉತ್ಪಾದನೆ, ಸೌಲಭ್ಯಗಳು ಮತ್ತು ಆರ್ಥಿಕ ಸಾಮರ್ಥ್ಯ ಸೇರಿದಂತೆ ವಿವಿಧ ಮಾನದಂಡಗಳನ್ನು ನಾವು ಗಮನಿಸುತ್ತೇವೆ. ತಂತ್ರಜ್ಞಾನ ವರ್ಗಾವಣೆ ಶುಲ್ಕವನ್ನು ಅವರು ಪಾವತಿಸಬೇಕು ಎಂದು ಅವರು ಹೇಳಿದರು.

'ನಾವು ವರ್ಗಾವಣೆ ಮಾಡುತ್ತಿರುವುದು ಕೇವಲ ಉತ್ಪಾದನಾ ತಂತ್ರಜ್ಞಾನವಲ್ಲ. ಕೆಲಸಗಳನ್ನು ಹೇಗೆ ಮಾಡಬೇಕೆಂಬ ಜ್ಞಾನವನ್ನು ಸಹ ವರ್ಗಾಯಿಸುತ್ತಿದ್ದೇವೆ. ಅವರು ಇಸ್ರೊ ಒಳಗಡೆ ಬಂದು ನಮ್ಮೊಂದಿಗೆ ಕೆಲಸ ಮಾಡಬೇಕು. ತಂತ್ರಗಳನ್ನು ಕಲಿಯಬೇಕು. ನಾವು ಅವರಿಗೆ ರಾಕೆಟ್ ಅನ್ನು ಹೇಗೆ ನಿರ್ಮಿಸಬೇಕೆಂದು ಕಲಿಸುತ್ತೇವೆ' ಎಂದು ಅವರು ಹೇಳಿದರು.

ಯುವಕನ ಮನೆಗೆ ಭೇಟಿ, ಅಹವಾಲು ಆಲಿಸಿದ ರಾಹುಲ್ ಗಾಂಧಿ

ದಲಿತ ಯುವಕನ ಕುಟುಂಬಸ್ಥರಿಗೆ ಸಾಂತ್ವನ

ರಾಯ್‌ಬರೇಲಿ (ಉತ್ತರ ಪ್ರದೇಶ) (ಪಿಟಿಐ): ಇಲ್ಲಿನ ಸಲೋನ್ ಪ್ರದೇಶದಲ್ಲಿ ಗುಂಡಿನ ದಾಳಿಯಲ್ಲಿ ಹತ್ಯೆಯಾದ 22 ವರ್ಷದ ದಲಿತ ಯುವಕನ ಮನೆಗೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮಂಗಳವಾರ ಭೇಟಿ ನೀಡಿ, ಕುಟುಂಬಕ್ಕೆ ನ್ಯಾಯ ಕೊಡಿಸುವುದಾಗಿ ಭರವಸೆ ನೀಡಿದರು.

ಈ ಹತ್ಯೆಯ ಹಿಂದಿರುವ 'ಸಂಚುಕೋರ'ನ ವಿರುದ್ಧ ಯಾವುದೇ ಕ್ರಮಕೈಗೊಳ್ಳದ ಕಾರಣ ಆ ಪ್ರದೇಶದ ಜನರು ಆಕ್ರೋಶಗೊಂಡಿದ್ದಾರೆ ಎಂದು ಗಾಂಧಿ ಹೇಳಿದ್ದಾರೆ.

'ದಲಿತ ವ್ಯಕ್ತಿಯನ್ನು ಕೊಂದಿರುವ ಕಾರಣ ಇಲ್ಲಿನ ಎಲ್ಲ ಜನರು ನ್ಯಾಯಕ್ಕಾಗಿ ಒತ್ತಾಯಿಸುತ್ತಿದ್ದಾರೆ. ಕೊಲೆಯಾಗಿರುವ ಯುವಕನ ಇಡೀ ಕುಟುಂಬಕ್ಕೆ ಬೆದರಿಕೆ ಹಾಕಲಾಗಿದೆ. ಯಾವುದೇ ಕ್ರಮ ತೆಗೆದುಕೊಳ್ಳುತ್ತಿಲ್ಲ' ಎಂದು ಭುವಲ್‌ಪುರ ಸಿಸ್ನಿ ಗ್ರಾಮದಲ್ಲಿ ರಾಹುಲ್ ಗಾಂಧಿ ಸುದ್ದಿಗಾರರಿಗೆ ತಿಳಿಸಿದರು.



ಗುಂಡಿನ ದಾಳಿಯಲ್ಲಿ ಹತ್ಯೆಯಾದ ದಲಿತ ಯುವಕನ ಕುಟುಂಬದ ಸದಸ್ಯರನ್ನು ಮಂಗಳವಾರ ಭೇಟಿಯಾದ ರಾಹುಲ್ ಗಾಂಧಿ ಸಾಂತ್ವನ ಹೇಳಿದರು –ಪಿಟಿಐ ಚಿತ್ರ

'ಇಲ್ಲಿನ ಪೊಲೀಸ್ ವರಿಷ್ಠಾಧಿಕಾರಿ, ಈ ಹತ್ಯೆಯ ಹಿಂದಿನ 'ಸಂಚುಕೋರ'ನ ವಿರುದ್ಧ ಕ್ರಮ ತೆಗೆದುಕೊಳ್ಳುತ್ತಿಲ್ಲ. ಅವರು ಪ್ರಭಾವಿ ಅಲ್ಲದವರನ್ನು ಬಂಧಿಸುತ್ತಿದ್ದಾರೆ. ರಾಜ್ಯದಲ್ಲಿ ಸಮಾಜದ ಪ್ರತಿ ವರ್ಗವನ್ನೂ ಗೌರವಿಸಬೇಕು. ಎಲ್ಲರಿಗೂ ನ್ಯಾಯ ಸಿಗಬೇಕು. ಈ ಕುಟುಂಬಕ್ಕೆ ನ್ಯಾಯ ಸಿಗುವವರೆಗೆ ನಾವು ಹೋರಾಡುತ್ತೇವೆ' ಎಂದು ಹೇಳಿದರು.

ರಾಯ್‌ಬರೇಲಿ ಕ್ಷೇತ್ರದ ಸಂಸದರೂ ಆದ ರಾಹುಲ್ ಗಾಂಧಿ ಮಧ್ಯಾಹ್ನ 1 ಗಂಟೆ ಸುಮಾರಿಗೆ ಪಕ್ಕದ ಅಮೇಠಿ ಜಿಲ್ಲೆಯ ಫುರ್ಸತ್‌ಗಂಜ್ ವಿಮಾನ ನಿಲ್ದಾಣಕ್ಕೆ ಬಂದಿಳಿದು, ಅಲ್ಲಿಂದ ನೇರವಾಗಿ ಭುವಲ್‌ಪುರ ಸಿಸ್ನಿ ಗ್ರಾಮಕ್ಕೆ ತೆರಳಿದರು. ರಾಹುಲ್ ಅವರ ಜತೆಯಲ್ಲಿ ಕಾಂಗ್ರೆಸ್‌ನ ಉತ್ತರ ಪ್ರದೇಶ ಘಟಕದ ಅಧ್ಯಕ್ಷ ಅಜಯ್ ರಾಯ್, ಎಐಸಿಸಿ ಪ್ರಧಾನ ಕಾರ್ಯದರ್ಶಿ, ರಾಜ್ಯ ಉಸ್ತುವಾರಿ ಅವಿನಾಶ್ ಪಾಂಡೆ ಮತ್ತು ಪಕ್ಷದ ಮುಖಂಡ ಪ್ರಮೋದ್ ತಿವಾರಿ ಸೇರಿದಂತೆ ಇತರರು ಇದ್ದರು.

ಆಗಸ್ಟ್ 11ರಂದು ಕೆಲವು ಸ್ಥಳೀಯರೊಂದಿಗೆ ವಾಗ್ವಾದ ನಡೆದ ನಂತರ ಅರ್ಜುನ್ ಪಾಸಿ ಎಂಬ ವ್ಯಕ್ತಿಯನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು. ಈ ಪ್ರಕರಣದಲ್ಲಿ ಇದುವರೆಗೆ ಆರು ಮಂದಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮಂಡ್ಯ ಸಾಹಿತ್ಯ ಸಮ್ಮೇಳನಕ್ಕೆ 28 ಸಮಿತಿಗಳ ರಚನೆ • ಸಚಿವರು ಹಾಗೂ ಶಾಸಕರಿಗೆ ವಿವಿಧ ಜವಾಬ್ದಾರಿಗಳ ಹಂಚಿಕೆ

ನುಡಿಜಾತ್ರೆಗೆ 100 ಎಕರೆ ಜಾಗ ಗುರುತು

• ಸಿದ್ದು ಆರ್.ಜಿ.ಹಳ್ಳಿ



87ನೇ ನುಡಿಜಾತ್ರೆಯ ಲಾಂಛನ



87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಮಂಡ್ಯ ನಗರದ ಹೊರವಲಯದಲ್ಲಿರುವ ಅಮರಾವತಿ ಹೋಟೆಲ್ ಹಿಂಭಾಗದ ಜಾಗವನ್ನು ಗುರುತಿಸಲಾಗಿದೆ —ಪ್ರಜಾವಾಣಿ ಚಿತ್ರ: ಧನುಷ್ ಡಿ.ವಿ.

ಮುಖ್ಯಾಂಶಗಳು

- ಕನ್ನಡ ಜ್ಯೋತಿ ರಥಯಾತ್ರೆಗೆ ಭುವನಗಿರಿಯಲ್ಲಿ ಚಾಲನೆ
- ನ.15ರಿಂದ ಜಿಲ್ಲೆಯಾದ್ಯಂತ 'ಕನ್ನಡ ರಥ' ಸಂಚಾರ
- ಸಮ್ಮೇಳನಕ್ಕೆ ₹30 ಕೋಟಿ ಅನುದಾನದ ಭರವಸೆ

ಮಂಡ್ಯ: 'ಸಕ್ಕರೆ ನಾಡು' ಮಂಡ್ಯದಲ್ಲಿ ಡಿ.20,21 ಮತ್ತು 22ರಂದು ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ನಗರದ ಹೊರವಲಯದಲ್ಲಿ ಸುಮಾರು 100 ಎಕರೆ ವಿಶಾಲವಾದ ಸ್ಥಳವನ್ನು ಅಂತಿಮಗೊಳಿಸಲಾಗಿದೆ.

ಸಮ್ಮೇಳನಕ್ಕಾಗಿ ಗುರುತಿಸಿರುವ ಅಮರಾವತಿ ಹೋಟೆಲ್ ಮತ್ತು ಸ್ಯಾಂಜೋ ಆಸ್ಪತ್ರೆ ಹಿಂಭಾಗದ ಜಾಗವು ಬೆಂಗಳೂರು- ಮೈಸೂರು ಹೆದ್ದಾರಿಗೆ ಹೊಂದಿಕೊಂಡಂತಿದ್ದು, ಹೊರಜಿಲ್ಲೆಗಳಿಂದ ಬರುವವರಿಗೆ ಅನುಕೂಲವಾಗಲಿದೆ. ವಾಹನಗಳ ನಿಲುಗಡೆಗೂ ಸಾಕಷ್ಟು ಸ್ಥಳಾವಕಾಶವಿದೆ. ಬಹುತೇಕ ಸಮತಟ್ಟಾದ ಹಾಗೂ ಗಟ್ಟಿ ನೆಲದಿಂದ ಕೂಡಿರುವುದರಿಂದ ಸಮ್ಮೇಳನಕ್ಕೆ ಸೂಕ್ತ ಜಾಗ ಎಂಬ ನಿರ್ಣಯಕ್ಕೆ ಬರಲಾಗಿದೆ. ಮಂಡ್ಯ– ನಾಗಮಂಗಲ ರಸ್ತೆಯ ಚಿಕ್ಕಮಂಡ್ಯ ಭಾಗದಲ್ಲಿರುವ ಗದ್ದೆಯ ಬಯಲು ಪ್ರದೇಶವನ್ನು ಕೈಬಿಡಲಾಗಿದೆ.

'ಪ್ರಧಾನ ವೇದಿಕೆ, ಎರಡು ಸಮಾನಾಂತರ ವೇದಿಕೆಗಳು, ಪುಸ್ತಕ ಮತ್ತು ವಾಣಿಜ್ಯ ಮಳಿಗೆಗಳು, ಊಟದ ವ್ಯವಸ್ಥೆ ಮತ್ತು ವಸ್ತುಪ್ರದರ್ಶನವನ್ನು ಒಂದೇ ಸ್ಥಳದಲ್ಲಿ ಏರ್ಪಡಿಸಲು ಅನುಕೂಲವಾಗಲಿದೆ. ಹೆಚ್ಚುವರಿ ಜಾಗ ಬೇಕೆಂದರೆ ವಿಸ್ತರಣೆಗೂ ಅವಕಾಶವಿದೆ' ಎಂದು ಪರಿಷತ್ತಿನ ಪದಾಧಿಕಾರಿಗಳು ತಿಳಿಸಿದರು.

₹30 ಕೋಟಿಗಿಂತ ಹೆಚ್ಚಿಲ್ಲ: 'ನುಡಿಜಾತ್ರೆಗೆ ₹30 ಕೋಟಿ ಅನುದಾನವನ್ನು ಸರ್ಕಾರದಿಂದ ಒದಗಿಸಲಾಗುವುದು. ಅದರ ಮಿತಿಯೊಳಗೆ ಎಲ್ಲ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಬೇಕು. ಹೆಚ್ಚುವರಿ ಅನುದಾನಕ್ಕೆ ಬೇಡಿಕೆ ಸಲ್ಲಿಸುವಂತಿಲ್ಲ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

28 ಸಮಿತಿಗಳ ರಚನೆ: ಸ್ವಾಗತ, ಹಣಕಾಸು ಮತ್ತು ಲೆಕ್ಕ ಪರಿಶೋಧನೆ, ವೇದಿಕೆ ನಿರ್ಮಾಣ, ಆಹಾರ, ವಸತಿ, ಸಾಂಸ್ಕೃತಿಕ, ಪ್ರಚಾರ, ಸ್ಮರಣ ಸಂಚಿಕೆ, ಮೆರವಣಿಗೆ, ನಗರ ಅಲಂಕಾರ, ಸಾರಿಗೆ, ಪುಸ್ತಕ ಆಯ್ಕೆ ಹಾಗೂ ಮಹಿಳಾ ಸಮಿತಿ ಸೇರಿದಂತೆ 28 ಸಮಿತಿಗಳನ್ನು ರಚಿಸಲಾಗಿದೆ. ಸ್ವಾಗತ ಸಮಿತಿಯಲ್ಲಿ ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಅವರನ್ನು ಮಹಾಪೋಷಕರನ್ನಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರನ್ನು ಪ್ರಧಾನ ಪೋಷಕರನ್ನಾಗಿ ನಿಯೋಜಿಸಲಾಗಿದೆ.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪೋಷಕರಾಗಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅಧ್ಯಕ್ಷರಾಗಿ, ಕಸಾಪ ಅಧ್ಯಕ್ಷ ಮಹೇಶ ಜೋಶಿ ಅವರನ್ನು ಕಾರ್ಯಾಧ್ಯಕ್ಷರನ್ನಾಗಿ ಹಾಗೂ ಆಯ್ದ ಸಚಿವರು ಮತ್ತು ಶಾಸಕರಿಗೆ ವಿವಿಧ ಜವಾಬ್ದಾರಿಗಳನ್ನು ವಹಿಸಲಾಗಿದೆ.

ಮಂಡ್ಯಕ್ಕೆ ಕೀರ್ತಿ ತಂದವರಿಗೆ ಸನ್ಮಾನ: 'ಜಿಲ್ಲೆಯಲ್ಲಿ ಹುಟ್ಟಿ, ಬೇರೆ ರಾಜ್ಯ ಮತ್ತು ವಿದೇಶಗಳಲ್ಲಿ ವಾಸಿಸುತ್ತಿದ್ದು, ಕಾರ್ಯಕ್ಷಮತೆಯಿಂದ ಜಿಲ್ಲೆಗೆ ಖ್ಯಾತಿ ತಂದುಕೊಟ್ಟವರ ಹೆಸರು, ದೂರವಾಣಿ ಸಂಖ್ಯೆಯನ್ನು ತಿಳಿಸಲು ಕೋರುತ್ತೇನೆ. ಅಂಥವರನ್ನು ಸಮ್ಮೇಳನದಲ್ಲಿ ಗೌರವಿಸುವ ಉದ್ದೇಶವಿದೆ' ಎಂದು ಕಸಾಪ ಅಧ್ಯಕ್ಷ ಮಹೇಶ ಜೋಶಿ ಮನವಿ ಮಾಡಿದ್ದಾರೆ.

ಸೆ.22ಕ್ಕೆ ಕನ್ನಡ ಜ್ಯೋತಿ ರಥಯಾತ್ರೆಗೆ ಚಾಲನೆ

'ಸಾಹಿತ್ಯ ಸಮ್ಮೇಳನದ ಅಂಗವಾಗಿ ಉತ್ತರ ಕನ್ನಡ ಜಿಲ್ಲೆ, ಸಿದ್ದಾಪುರ ತಾಲ್ಲೂಕಿನ ಭುವನಗಿರಿ ಕ್ಷೇತ್ರದ ಭುವನೇಶ್ವರಿ ಸನ್ನಿಧಿಯಿಂದ ಸೆ.22ರಂದು ಕನ್ನಡ ಜ್ಯೋತಿ ರಥಯಾತ್ರೆಗೆ ಚಾಲನೆ ನೀಡಲಾಗುವುದು' ಎಂದು ಕಸಾಪ ಅಧ್ಯಕ್ಷ ಮಹೇಶ ಜೋಶಿ ತಿಳಿಸಿದ್ದಾರೆ.

'87ನೇ ಸಮ್ಮೇಳನವಾಗಿರುವುದರಿಂದ ರಥಯಾತ್ರೆಯು ಅಷ್ಟು ದಿನ ರಾಜ್ಯಾದಾದ್ಯಂತ ಸಂಚರಿಸಿ, ಜನಜಾಗೃತಿ ಮೂಡಿಸುವ ಜೊತೆಗೆ ಆಹ್ವಾನ ನೀಡಲಿದೆ. ಭುವನಗಿರಿಯ ಸನ್ನಿಧಿಯಲ್ಲಿ ಹಚ್ಚುವ ಕನ್ನಡ ದೀಪದಿಂದಲೇ ಸಮ್ಮೇಳನವನ್ನು ಉದ್ಘಾಟಿಸಲಾಗುವುದು' ಎಂದು ಮಾಹಿತಿ ನೀಡಿದ್ದಾರೆ.

ಜಿಲ್ಲೆಯಾದ್ಯಂತ ರಥ ಸಂಚಾರ:

'ಒಂದು ರಥ ರಾಜ್ಯದಾದ್ಯಂತ ಸಂಚರಿಸಿದರೆ, ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಮತ್ತೊಂದು ರಥ ಸಂಚರಿಸಲಿದೆ. ನವೆಂಬರ್ 15ರಂದು ಜಿಲ್ಲೆಯ ನಿಮಿಷಾಂಬ ದೇಗುಲದಿಂದ ಹೊರಡುವ ರಥವು ಜಿಲ್ಲೆಯ 45 ಹೋಬಳಿಗಳ 233 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಂಚರಿಸಲಿದೆ' ಎಂದು ಜಿಲ್ಲಾ ಕಸಾಪದ ಗೌರವ ಕಾರ್ಯದರ್ಶಿ ಕೃಷ್ಣೇಗೌಡ ಹುಸ್ಕೂರು ತಿಳಿಸಿದ್ದಾರೆ.

ಸುದ್ದಿ 2 ನಿಮಿಷ

ಸಮಾಜ ಕಲ್ಯಾಣ ಇಲಾಖೆ ಜೆ.ಡಿಗೆ ₹2.32 ಕೋಟಿ ದಂಡ

ತುಮಕೂರು: ಆಸ್ತಿ ಅಕ್ರಮ ಸಂಪಾದನೆ ದೃಢಪಟ್ಟ ತುಮಕೂರಿನ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ (ಹಿಂದಿನ) ಆರ್.ಸುಬ್ರಹ್ಮಣ್ಯ ಎಂಬುವವರಿಗೆ ₹2.32 ಕೋಟಿ ದಂಡ ಹಾಗೂ 5 ವರ್ಷ ಕಠಿಣ ಕಾರಾಗೃಹ ಶಿಕ್ಷೆ ವಿಧಿಸಿ ಲೋಕಾಯುಕ್ತ ವಿಶೇಷ ನ್ಯಾಯಾಲಯ ಮಂಗಳವಾರ ಆದೇಶಿಸಿದೆ.

2016ರಲ್ಲಿ ಅಂದಿನ ಭ್ರಷ್ಟಾಚಾರ ನಿಗ್ರಹ ದಳ (ಎಸಿಬಿ) ಪೊಲೀಸರು ತುಮಕೂರಿನ ಕುವೆಂಪು ನಗರದ ಮನೆ, ಕಚೇರಿ ಹಾಗೂ ಮತ್ತಿತರ ಕಡೆಗಳಲ್ಲಿ ದಾಳಿ ನಡೆಸಿದ್ದರು. ಸುಬ್ರಹ್ಮಣ್ಯ ಹಾಗೂ ಅವರ ಕುಟುಂಬದವರ ಹೆಸರಿನಲ್ಲಿ ₹1.21ಕೋಟಿ ಆಸ್ತಿಯನ್ನು ಅಕ್ರಮವಾಗಿ ಹೊಂದಿರುವುದನ್ನು ಪತ್ತೆ ಮಾಡಿದ್ದರು. ನಂತರ ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿಯನ್ನು ಸಲ್ಲಿಸಿದ್ದರು.

7ನೇ ಹೆಚ್ಚುವರಿ ಜಿಲ್ಲಾ ಹಾಗೂ ಸೆಷನ್ಸ್ ನ್ಯಾಯಾಲಯ (ಲೋಕಾಯುಕ್ತ ವಿಶೇಷ ನ್ಯಾಯಾಲಯ) ನ್ಯಾಯಾಧೀಶರಾದ ಟಿ.ಪಿ. ರಾಮಲಿಂಗೇಗೌಡ ಅವರು ವಿಚಾರಣೆ ನಡೆಸಿದರು. ಆರೋಪಿ ಸುಬ್ರಹ್ಮಣ್ಯ ಹಾಗೂ ಕುಟುಂಬದವರು ನಿಗದಿತ ಆದಾಯಕ್ಕಿಂತ ₹1.16ಕೋಟಿ ಆಸ್ತಿಯನ್ನು ಅಕ್ರಮವಾಗಿ ಸಂಪಾದಿಸಿರುವುದು ವಿಚಾರಣೆ ಸಮಯದಲ್ಲಿ ದೃಢಪಟ್ಟಿರುವುದಾಗಿ ಪ್ರಕಟಿಸಿದರು. ಅಕ್ರಮವಾಗಿ ಸಂಪಾದಿಸಿರುವ ಆಸ್ತಿಯ ಎರಡು ಪಟ್ಟು ₹2.32 ಕೋಟಿ ವಸೂಲಿ ಮಾಡುವಂತೆ ಆದೇಶದಲ್ಲಿ ತಿಳಿಸಿದ್ದಾರೆ.

ಲೋಕಾಯುಕ್ತರ ಪರವಾಗಿ ಎನ್.ಬಿ.ಬಸವರಾಜು ವಾದ ಮಂಡಿಸಿದರು. ಲೋಕಾಯುಕ್ತ ಇನ್‌ಸ್ಪೆಕ್ಟರ್‌ಗಳಾದ ಹಾಲಪ್ಪ, ಜೆ.ರಮೇಶ್ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಸುಬ್ರಹ್ಮಣ್ಯ ಅವರನ್ನು ವಶಕ್ಕೆ ಪಡೆದು ಜೈಲಿಗೆ ಕಳುಹಿಸಲಾಗಿದೆ. ಪ್ರಸ್ತುತ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದರು.

ರಾಯರ ಪೂರ್ವಾರಾಧನೆ ಸಂಭ್ರಮ



ರಾಯಚೂರು: ಶ್ರೀ ರಾಘವೇಂದ್ರ ಸ್ವಾಮಿಗಳ 353ನೇ ಆರಾಧನಾ ಮಹೋತ್ಸವ ಪ್ರಯುಕ್ತ ಮಂತ್ರಾಲಯ ಮಠದಲ್ಲಿ ಮಂಗಳವಾರ ಸುಬುಧೇಂದ್ರ ತೀರ್ಥ ಶ್ರೀಗಳ ನೇತೃತ್ವದಲ್ಲಿ ರಾಯರ ಪೂರ್ವಾರಾಧನೆ ನಡೆಯಿತು.

ಬೆಳಗಿನ ಜಾವ ಸುಪ್ರಭಾತದೊಂದಿಗೆ ಧಾರ್ಮಿಕ ಕಾರ್ಯಗಳು ಆರಂಭವಾದವು. ಪಂಚಾಮೃತ ಅಭಿಷೇಕ, ಉತ್ಸವ ರಾಯರ ಪಾದಪೂಜೆ, ರಜತ ಸಿಂಹವಾಹನೋತ್ಸವ ಇನ್ನಿತರ ಧಾರ್ಮಿಕ ಕಾರ್ಯಗಳು ವಿಧಿವತ್ತಾಗಿ ಸಂಪನ್ನಗೊಂಡವು.

ನಂತರ ರಾಯರು ರಚಿಸಿರುವ ಪರಿಮಳ ಗ್ರಂಥವನ್ನು ಪಲ್ಲಕ್ಕಿಯಲ್ಲಿ ಇಟ್ಟು ಮಠದ ಪ್ರಾಂಗಣದಲ್ಲಿ ಮೆರವಣಿಗೆ ಮಾಡಲಾಯಿತು.

ತಮಿಳುನಾಡು ಸರ್ಕಾರದ ನಿರ್ದೇಶನದಂತೆ ಅಲ್ಲಿಯ ಮುಜರಾಯಿ ಇಲಾಖೆಯ ಅಧಿಕಾರಿಗಳು ಶ್ರೀರಂಗಂನ ಶ್ರೀರಂಗನಾಥ ದೇವಸ್ಥಾನದಿಂದ ರಾಯರಿಗೆ ಶೇಷ ವಸ್ತ್ರ ಹಾಗೂ ಗಂಧ ತಂದು ಮಠಾಧೀಶರಿಗೆ ಒಪ್ಪಿಸಿದರು.

ಇದಕ್ಕೂ ಮೊದಲು ತಮಿಳುನಾಡಿನ ಶ್ರೀರಂಗಂನಿಂದ ತರಲಾದ ವಸ್ತ್ರವನ್ನು ಮಂತ್ರಾಲಯ ಮಠದ ಪೀಠಾಧಿಪತಿ ಸುಬುಧೇಂದ್ರ ತೀರ್ಥರು ಹಾಗೂ ಮಠದ ಅಧಿಕಾರಿಗಳು ವಿವಿಧ ಕಲಾ-ತಂಡಗಳ ವಾದ್ಯಗಳೊಂದಿಗೆ ಸ್ವಾಗತಿಸಿ ಬರಮಾಡಿಕೊಂಡರು.

ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು ಹಾಗೂ ಮಹಾರಾಷ್ಟ್ರದಿಂದ ಆಗಮಿಸಿರುವ ಭಕ್ತರು ರಾಘವೇಂದ್ರ ಸ್ವಾಮಿಗಳ ಆರಾಧನಾ ಮಹೋತ್ಸವದಲ್ಲಿ ಪಾಲ್ಗೊಂಡಿದ್ದರು.

ಗಜಪಯಣ ಇಂದು



ಮೈಸೂರು: ನಾಡಹಬ್ಬ ದಸರಾ ಮಹೋತ್ಸವಕ್ಕೆ ಮುನ್ನುಡಿ ಬರೆಯುವ 'ಗಜಪಯಣ'ಕ್ಕೆ, ಹುಣಸೂರು ತಾಲ್ಲೂಕಿನ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ವೀರನಹೊಸಹಳ್ಳಿಯಲ್ಲಿ ಆ.21ರ ಬೆಳಿಗ್ಗೆ 10.20ಕ್ಕೆ ಚಾಲನೆ ದೊರೆಯಲಿದೆ.

ಅಂಬಾರಿ ಆನೆ 'ಅಭಿಮನ್ಯು' ನೇತೃತ್ವದ 9 ಆನೆಗಳ ಮೊದಲ ತಂಡಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ.ಮಹದೇವಪ್ಪ ಹಾಗೂ ಅರಣ್ಯ ಸಚಿವ ಈಶ್ವರ ಖಂಡ್ರೆ ಪೂಜೆ ಸಲ್ಲಿಸಿ ಕಾಡಿನಿಂದ ಬೀಳ್ಕೊಡಲಿದ್ದಾರೆ. ನಂತರ ದಸರಾ ಆನೆಗಳ ಕುರಿತ ಕಿರು ಪುಸ್ತಕ ಬಿಡುಗಡೆ ಮಾಡಲಿದ್ದಾರೆ.

ಗಜಪಡೆಯಲ್ಲಿ ಅಭಿಮನ್ಯು, ವರಲಕ್ಷ್ಮಿ, ಧನಂಜಯ, ಗೋಪಿ, ಭೀಮ, ಲಕ್ಷ್ಮಿ, ಕಂಜನ್, ರೋಹಿತ್ ಹಾಗೂ ಏಕಲವ್ಯ ಆನೆಗಳು ಇರಲಿವೆ. 10 ಕಲಾ ತಂಡಗಳು ಪಾಲ್ಗೊಳ್ಳಲಿದ್ದು, ಹಾಡಿ ಮಕ್ಕಳು, ಗಿರಿಜನರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

ಭಾರಿ ಮಳೆ: ಕೊರಟಗೆರೆಗೆ ನುಗ್ಗಿದ ನೀರು

ತುಮಕೂರು– ತುಂಬಿ ಹರಿದ ಜಯಮಂಗಲಿ, ಸುವರ್ಣಮುಖಿ ನದಿ; ಸುಂಟಿಕೊಪ್ಪದಲ್ಲಿ ಭಾರಿ ಮಳೆ

ಪ್ರಜಾವಾಣಿ ವಾರ್ತೆ



ಕೊಡಿಗೇನಹಳ್ಳಿ ಸಮೀಪ ಹರಿಯುತ್ತಿರುವ ಜಯಮಂಗಲಿ ನದಿಯನ್ನು ಜನರು ವೀಕ್ಷಿಸಿದರು – ಪ್ರಜಾವಾಣಿ ಚಿತ್ರ

ತುಮಕೂರು/ಮಡಿಕೇರಿ: ತುಮಕೂರು ಜಿಲ್ಲೆಯ ಕೊರಟಗೆರೆ ಭಾಗದಲ್ಲಿ ಸೋಮವಾರ ರಾತ್ರಿ ಭಾರಿ ಮಳೆ ಸುರಿದಿದೆ. ಸುವರ್ಣಮುಖಿ, ಜಯಮಂಗಲಿ ನದಿಗಳು ತುಂಬಿ ಹರಿಯುತ್ತಿವೆ. ಕೊಡಗು ಜಿಲ್ಲೆಯ ಸುಂಟಿಕೊಪ್ಪ ವ್ಯಾಪ್ತಿಯಲ್ಲಿ ಮಂಗಳವಾರ ಭಾರಿ ಮಳೆ ಸುರಿದಿದೆ. ಮಡಿಕೇರಿ ನಗರದಲ್ಲಿ ಸಾಧಾರಣ ಮಳೆಯಾಗಿದೆ.

ಬೆಟ್ಟದ ಭಾಗದಿಂದ ಹರಿದು ಹೋಗಲು ಮಾಡಿದ್ದ ಕಾಲುವೆ ಕಟ್ಟಿಕೊಂಡು ಕೊರಟಗೆರೆ ಪಟ್ಟಣಕ್ಕೆ ನೀರು ನುಗ್ಗಿತ್ತು. ಶಿವಗಂಗಾ ಚಿತ್ರ ಮಂದಿರದ ಸುತ್ತಮುತ್ತಲಿನ ಸುಮಾರು 100ಕ್ಕೂ ಹೆಚ್ಚು ಮನೆಗಳಿಗೆ, ವಾಣಿಜ್ಯ ಮಳಿಗೆಗಳಿಗೆ ನೀರು ನುಗ್ಗಿ ಸಾಕಷ್ಟು ಸಮಸ್ಯೆ ಎದುರಾಯಿತು.

ಗುಬ್ಬಿ ತಾಲ್ಲೂಕಿನಲ್ಲಿ ಮಳೆಯಿಂದ 8 ಮನೆಗಳಿಗೆ ಹಾನಿಯಾಗಿದೆ. ತುರುವೇಕೆರೆ ತಾಲ್ಲೂಕಿನಲ್ಲಿ ಬೀಸಿದ ಗಾಳಿ, ಮಳೆಗೆ 26 ವಿದ್ಯುತ್ ಕಂಬಗಳು ಉರುಳಿ ಬಿದ್ದಿದ್ದು, ಮನೆಗಳಿಗೂ ಹಾನಿಯಾಗಿದೆ.

(ಬಳ್ಳಾರಿ ವರದಿ): ಬಳ್ಳಾರಿ ಜಿಲ್ಲೆಯಾದ್ಯಂತ ಸೋಮವಾರ ರಾತ್ರಿ ಭಾರಿ ಮಳೆಯಿಂದ ಮನೆ, ಸೇತುವೆಗಳಿಗೆ ಹಾನಿಯಾಗಿದೆ. ರಾತ್ರಿಯಿಡೀ 4.75 ಸೆಂ.ಮೀ ಮಳೆ ಸುರಿದಿದೆ. ಹೊಲ, ಗದ್ದೆ, ಜನವಸತಿ ಪ್ರದೇಶ, ಶಾಲೆಗಳಿಗೆ ನೀರು ನುಗ್ಗಿದೆ.

ರಕ್ಷಣೆ: ವಿಜಯನಗರ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕು ಅರಸೀಕೆರೆ ಹೋಬಳಿ ವ್ಯಾಪ್ತಿಯಲ್ಲಿ ಹಳ್ಳದಲ್ಲಿ ಬೈಕ್ ಸಹಿತ ಕೊಚ್ಚಿಕೊಂಡು ಹೋಗುತ್ತಿದ್ದ ಅಖಿಲ ಭಾರತ ಕಿಸಾನ್ ಸಭಾದ ಸಂಘಟನೆಯ ನಾಯಕ ಹೊಸಹಳ್ಳಿ ಮಲ್ಲೇಶ್ ಎಂಬುವರನ್ನು ಯುವಕರು ರಕ್ಷಿಸಿದರು. ಬೈಕ್ ಪತ್ತೆಯಾಗಿಲ್ಲ. ಹೊಸಪೇಟೆ ತಾಲ್ಲೂಕಿನ ಕಮಲಾಪುರ ಕೆರೆ ಕೋಡಿ ಬಿದ್ದಿದೆ.

ರಾಯಚೂರು ವರದಿ: ಜಿಲ್ಲೆಯ ವಿವಿಧೆಡೆ ಮಂಗಳವಾರ ಬೆಳಗ್ಗೆ ಮಳೆಯಾಗಿದೆ. ರಾಯಚೂರು ತಾಲ್ಲೂಕಿನ ಗಧಾರ ಗ್ರಾಮದಲ್ಲಿ ಮಳೆಗೆ ಹಳ್ಳ ಉಕ್ಕಿ ಹರಿದು ಸೇತುವೆ ಮೇಲೆ ನೀರು ಬಂದಿದೆ. ಹೊಲಗಳಿಗೆ ಅಪಾರ ಪ್ರಮಾಣದಲ್ಲಿ ನೀರು ನುಗ್ಗಿದೆ.

ಕಡೂರು (ಚಿಕ್ಕಮಗಳೂರು): ಸೋಮವಾರ ಸುರಿದ ಭಾರಿ ಮಳೆಗೆ ಚಿಕ್ಕಂಗಳ ಗ್ರಾಮದಲ್ಲಿ ರಾತ್ರಿ ಮನೆಯ ಗೋಡೆ ಕುಸಿದು ಗೋಪಾಲ ಗೌಡ (65) ಎಂಬವರು ಮೃತಪಟ್ಟಿದ್ದಾರೆ. ಅಂಗವಿಕಲರಾಗಿದ್ದ ಅವರು ಮನೆಯಲ್ಲಿ ಒಬ್ಬರೇ ವಾಸವಾಗಿದ್ದರು.

2ನೇ ಬಾರಿ ಕುಸಿದ ಸೇತುವೆ (ಗೌರಿಬಿದನೂರು ವರದಿ): ಗೌರಿಬಿದನೂರು–ಚಿಕ್ಕಬಳ್ಳಾಪುರ ಮಾರ್ಗದ ರಾಷ್ಟ್ರೀಯ ಹೆದ್ದಾರಿ 69ರ ಗಿಡಗಾನಹಳ್ಳಿ ಬಳಿ ನೂತನ ಸೇತುವೆ ನಿರ್ಮಿಸಲು ಹಳೆ ಸೇತುವೆ ತೆರವುಗೊಳಿಸಲಾಗಿತ್ತು. ಸಂಚಾರಕ್ಕೆ ತಾತ್ಕಾಲಿಕವಾಗಿ ಮತ್ತೊಂದು ಸೇತುವೆ ನಿರ್ಮಿಸಲಾಗಿತ್ತು. ಈ ಸೇತುವೆ ಶನಿವಾರ ರಾತ್ರಿ ಸುರಿದ ಭಾರಿ ಮಳೆಗೆ ಸಂಪೂರ್ಣವಾಗಿ ಕೊಚ್ಚಿ ಹೋಗಿತ್ತು.

ಇದರಿಂದ ಎಚ್ಚೆತ್ತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಭಾನುವಾರ ತರಾತುರಿಯಲ್ಲಿ ಅದೇ ಸೇತುವೆ ದುರಸ್ತಿಗೊಳಿಸಿ ಸಂಚಾರಕ್ಕೆ ಅನುವು ಮಾಡಿಕೊಟ್ಟಿತ್ತು. ಆದರೆ, ಸೋಮವಾರ ರಾತ್ರಿ ಮತ್ತೆ ಸುರಿದ ಮಳೆಗೆ ಸೇತುವೆ ಸಂಪೂರ್ಣವಾಗಿ ಕೊಚ್ಚಿ ಹೋಗಿದೆ.

ಚಾರ್ಮಾಡಿ ಘಾಟಿಯಲ್ಲಿ ವಿಪರೀತ ಮಳೆ

ಚಿಕ್ಕಮಗಳೂರು: ಜಿಲ್ಲೆಯ ಹಲವೆಡೆ ಭಾರಿ ಮಳೆಯಾಗಿದ್ದು, ಚಾರ್ಮಾಡಿ ಘಾಟಿಯಲ್ಲಿ ವಿಪರೀತ ಮಳೆ ಸುರಿದು ಆತಂಕ ಸೃಷ್ಟಿಸಿತು.

ಘಾಟಿ ರಸ್ತೆಯಲ್ಲಿ ನೀರು ಹೊಳೆಯಂತೆ ಹರಿಯಿತು. ಗುಡ್ಡದಿಂದ ಸಣ್ಣ ಬಂಡೆಗಳು ರಸ್ತೆಗೆ ಉರುಳಿ ವಾಹನ ಸಂಚಾರಕ್ಕೆ ಅಡಚಣೆಯಾಗಿದೆ. ಚಿಕ್ಕಮಗಳೂರು ತಾಲ್ಲೂಕಿನ ಜಾಗರ, ಸಿರವಾಸೆ, ಮುತ್ತೋಡಿ ಭಾಗದಲ್ಲಿ ಧಾರಾಕಾರವಾಗಿ ಮಳೆ ಸುರಿದಿದೆ. ಎನ್.ಆರ್.ಪುರ, ಬಾಳೆಹೊನ್ನೂರು ಸುತ್ತಮುತ್ತ ಕೂಡ ಮಳೆ ಸುರಿಯಿತು. ಅಜ್ಜಂಪುರ ತಾಲ್ಲೂಕಿನ ಶಿವನಿ ಸುತ್ತಮುತ್ತ ಕೂಡ ಧಾರಾಕಾರ ಮಳೆ ಸುರಿಯಿತು.

ರಾಜ್ಯಪಾಲರಿಗೆ ₹250 ಕೋಟಿ

ಒಂದನೇ ಪುಟದಿಂದ...

ಉಳಿಕೆ ಕಾಮಗಾರಿಗಳನ್ನು ಮುಂದುವರಿದ ಕಾಮಗಾರಿ ಎಂದು ಪರಿಗಣಿಸಿ ಮುಂದಿನ ವರ್ಷದಲ್ಲಿ ಅನುಷ್ಠಾನಗೊಳಿಸಲು ಆರ್ಥಿಕ ಇಲಾಖೆ ಸೂಚಿಸಿತ್ತು.

ಅದರಂತೆ, ₹5 ಸಾವಿರ ಕೋಟಿಯಲ್ಲಿ ₹3,750 ಕೋಟಿಯನ್ನು ಕಲ್ಯಾಣ ಕರ್ನಾಟಕ ಪ್ರದೇಶದ ವ್ಯಾಪ್ತಿಯ ಜಿಲ್ಲೆ ಮತ್ತು ತಾಲ್ಲೂಕುಗಳಿಗೆ ವರ್ಗ ಅಭಿವೃದ್ಧಿ ಸೂಚ್ಯಂಕ (ಸಿಡಿಐ) ಆಧರಿಸಿ ಕ್ರಿಯಾ ಯೋಜನೆಗಳನ್ನು ರೂಪಿಸಲು ಅನುದಾನ ಹಂಚಿಕೆ ಮಾಡಲಾಗಿದೆ. ಪ್ರಸಕ್ತ ಸಾಲಿನಲ್ಲಿ ಬಜೆಟ್‌ನಲ್ಲಿ ಘೋಷಿಸಿದ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಒಟ್ಟು 11 ಇಲಾಖೆಗಳಿಗೆ ₹1 ಸಾವಿರ ಕೋಟಿ ನಿಗದಿಪಡಿಸಲಾಗಿದೆ. ಉನ್ನತ ಶಿಕ್ಷಣ ವಲಯದಲ್ಲಿ ರಾಜ್ಯಪಾಲರು ಸೂಚಿಸುವ ಯೋಜನೆಗಳಿಗೆ ₹250 ಕೋಟಿಯನ್ನು, ಕೆಕೆಆರ್‌ಡಿಬಿಯ ಶಿಫಾರಸಿನಂತೆ ವೆಚ್ಚ ಮಾಡಲು ನಿಗದಿಪಡಿಸಲಾಗಿದೆ ಎಂದು ಮಂಡಳಿಯ ಮೂಲಗಳು ಹೇಳಿವೆ.

ಜುಲೈ 1ರಂದು ನಡೆದ ಕೆಕೆಆರ್‌ಡಿಬಿ ಸಭೆಯಲ್ಲಿ ₹5,000 ಕೋಟಿ ಅನುದಾನದ ಕ್ರಿಯಾಯೋಜನೆಗೆ ಒಪ್ಪಿಗೆ ಪಡೆದು ಸರ್ಕಾರಕ್ಕೆ ಕಾರ್ಯದರ್ಶಿ ಸುಂದರೇಶ್ ಬಾಬು ಅವರು ಪ್ರಸ್ತಾವ ಸಲ್ಲಿಸಿದ್ದರು. ಅದರಂತೆ ಮೈಕ್ರೋ ಮತ್ತು ಮ್ಯಾಕ್ರೋ ಯೋಜನೆಗಳಿಗೆ (ಒಟ್ಟು ಶೇ 86) ₹2096.25 ಕೋಟಿ, ಮುಖ್ಯಮಂತ್ರಿ, ಸರ್ಕಾರ (ಯೋಜನಾ ಇಲಾಖೆಯ ಸಚಿವರು), ಮತ್ತು ಮಂಡಳಿ ಅಧ್ಯಕ್ಷರ ವಿವೇಚನಾ ಕೋಟಾ ತಲಾ ಶೇ 3ರಂತೆ (ತಲಾ ₹112.50 ಕೋಟಿ), ಪ್ರಾದೇಶಿಕ ನಿಧಿ (ಶೇ 4) ₹150 ಕೋಟಿ, ಆಡಳಿತ ವೆಚ್ಚ (ಶೇ 1) ₹37.50 ಕೋಟಿ ಸೇರಿ ಒಟ್ಟು (ಶೇ 100) ₹3,750 ಕೋಟಿ ಹಂಚಿಕೆ ಮಾಡಲಾಗಿತ್ತು.



ರಾಜ್ಯಪಾಲರು ವಿಶ್ವವಿದ್ಯಾಲಯಗಳ ಕುಲಪತಿಗಳಿಂದ ಪ್ರಸ್ತಾವಗಳನ್ನು ಪಡೆದು, ಅವರ ವಿವೇಚನೆಯಂತೆ ಕ್ರಿಯಾ ಯೋಜನೆಗಳಿಗೆ ಒಟ್ಟು ₹250 ಕೋಟಿ ವೆಚ್ಚ ಮಾಡಲು ಅವಕಾಶ ಕಲ್ಪಿಸಲಾಗಿದೆ

ಅಜಯ್ ಸಿಂಗ್, ಅಧ್ಯಕ್ಷ, ಕೆಕೆಆರ್‌ಡಿಬಿ

ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಆಯವ್ಯಯದಲ್ಲಿ ಘೋಷಿಸಿರುವ ಕಾರ್ಯಕ್ರಮಗಳಿಗೆ ಒಟ್ಟು ₹1,250 ಕೋಟಿ ಹಂಚಿಕೆ ಮಾಡಲಾಗಿತ್ತು. ಅದರಲ್ಲಿ ಮುಖ್ಯಮಂತ್ರಿ, ಸರ್ಕಾರ ಮತ್ತು ಮಂಡಳಿ ಅಧ್ಯಕ್ಷರ ವಿವೇಚನಾ ಕೋಟಾ ತಲಾ ಶೇ 3ರಂತೆ ಒಟ್ಟು ₹112.50 ಕೋಟಿ ಮೀಸಲಿರಿಸಲಾಗಿತ್ತು. ಹೀಗೆ ಒಟ್ಟು ₹5,000 ಕೋಟಿಯಲ್ಲಿ ಮುಖ್ಯಮಂತ್ರಿ, ಯೋಜನಾ ಇಲಾಖೆಯ ಸಚಿವರು ಮತ್ತು ಮಂಡಳಿ ಅಧ್ಯಕ್ಷರ ವಿವೇಚನಾ ಕೋಟಾ ತಲಾ ₹150 ಕೋಟಿ ಮೀಸಲಿರಿಸಿ, ಇಡೀ ಕ್ರಿಯಾಯೋಜನೆಯ ಪ್ರಸ್ತಾವವನ್ನು ಅನುಮೋದಿಸಿ, ರಾಜ್ಯಪಾಲರ ಅನುಮೋದನೆಗಾಗಿ ಮುಖ್ಯಮಂತ್ರಿ ಶಿಫಾರಸು ಮಾಡಿದ್ದರು.

ಕ್ರಿಯಾ ಯೋಜನೆಗೆ ಅನುಮೋದನೆ ನೀಡುವಂತೆ ರಾಜ್ಯಪಾಲರ ಬಳಿಗೆ ಯೋಜನಾ ಇಲಾಖೆಯ ಅಧಿಕಾರಿಗಳು ತೆರಳಿದ್ದರು. ಈ ವೇಳೆ ಕ್ರಿಯಾಯೋಜನೆಯಲ್ಲಿ ಬದಲಾವಣೆ ಮಾಡುವ ಕುರಿತು ಚರ್ಚೆ ನಡೆದಿತ್ತು. ಬಳಿಕ ಮುಖ್ಯಮಂತ್ರಿಯ ಸೂಚನೆಯಂತೆ, ಆಯವ್ಯಯದಲ್ಲಿ ಘೋಷಿಸಿರುವ ಕಾರ್ಯಕ್ರಮಗಳಿಗೆ ಹಂಚಿಕೆ ಮಾಡಿದ್ದ ₹1,250 ಕೋಟಿಯಲ್ಲಿ ₹250 ಕೋಟಿಯನ್ನು ರಾಜ್ಯಪಾಲರ ವಿವೇಚನೆಯಂತೆ ವಿಶ್ವವಿದ್ಯಾಲಯಗಳಿಗೆ ವೆಚ್ಚ ಮಾಡುವ ಪೂರಕ ಟಿಪ್ಪಣಿ ಸಿದ್ಧಪಡಿಸಲಾಗಿತ್ತು ಎಂದೂ ಮೂಲಗಳು ತಿಳಿಸಿವೆ.

ರಾಜ್ಯಪಾಲರ ವಿವೇಚನೆ ಪ್ರಸ್ತಾವಿತ ಮೊತ್ತ

ವಿಶ್ವವಿದ್ಯಾಲಯ	ಮೊತ್ತ (₹ ಕೋಟಿಗಳಲ್ಲಿ)
ವಿಜಯನಗರ ಶ್ರೀ ಕೃಷ್ಣದೇವರಾಯ, ಬಳ್ಳಾರಿ	43.33
ಬಾಗಲಕೋಟೆ ತೋಟಗಾರಿಕೆ ವಿವಿ	18.81
ಗುಲ್ಬರ್ಗ ವಿವಿ	29.42
ಕನ್ನಡ ವಿವಿ, ಹಂಪಿ	25.80
ರಾಯಚೂರು ವಿವಿ	36.50
ರಾಯಚೂರು ಕೃಷಿ ವಿವಿ	46.56
ಪಶು ವೈದ್ಯಕೀಯ, ಮೀನುಗಾರಿಕೆ ವಿಜ್ಞಾನಗಳ ವಿವಿ, ಬೀದರ್	19.94
ವಿಟಿಯು, ಪ್ರಾದೇಶಿಕ ಕೇಂದ್ರ	15.95
ಕೆಎಸ್‌ಒಯು, ಮೈಸೂರು	9.50
ಕೊಪ್ಪಳ ವಿವಿ	7.79

ಒಂದು ತಿಂಗಳು ಯಶವಂತಪುರ ನಿಲ್ದಾಣ ಪ್ಲಾಟ್‌ಫಾರ್ಮ್ ಬಂದ್

ರೈಲುಗಳ ಸಂಚಾರದಲ್ಲಿ ವ್ಯತ್ಯಯ

ಪ್ರಜಾವಾಣಿ ವಾರ್ತೆ



ಸಕಲೇಶಪುರ ತಾಲ್ಲೂಕಿನ ಬಾಳ್ಳುಪೇಟೆ ಬಳಿ ರೈಲು ಮಾರ್ಗದ ಮೇಲೆ ಕುಸಿದಿದ್ದ ಮಣ್ಣನ್ನು ತೆರವುಗೊಳಿಸಲಾಗಿದೆ

ಬೆಂಗಳೂರು: ಯಶವಂತಪುರ ರೈಲು ನಿಲ್ದಾಣದ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದ್ದು, ಒಂದು ತಿಂಗಳು ಪ್ಲಾಟ್‌ಫಾರ್ಮ್‌ಗಳನ್ನು ಬಂದ್ ಮಾಡಲಾಗಿದೆ. ಆರು ರೈಲುಗಳ ಸಂಚಾರ ರದ್ದು ಮಾಡಲಾಗಿದ್ದು, 8 ರೈಲುಗಳ ಮಾರ್ಗ ಬದಲಾವಣೆ ಮಾಡಲಾಗಿದೆ.

ಮಂಗಳವಾರದಿಂದ (ಆಗಸ್ಟ್ 20) ಸೆಪ್ಟೆಂಬರ್ 19 ರವರೆಗೂ ಯಶವಂತಪುರ ನಿಲ್ದಾಣದ ಕಾಮಗಾರಿ ಕೈಗೊಂಡಿರುವ ಕಾರಣ ರೈಲುಗಳ ಸಂಚಾರದಲ್ಲಿ ವ್ಯತ್ಯಯವಾಗಲಿದೆ. ಆ.21 ರಿಂದ ಸೆ.4ರ ವರೆಗೆ 2, 3ನೇ ಪ್ಲಾಟ್‌ಫಾರ್ಮ್ ಹಾಗೂ ಸೆ.5 ರಿಂದ 19ರ ವರೆಗೆ 4, 5ನೇ ಪ್ಲಾಟ್‌ಫಾರ್ಮ್ ಬಂದ್ ಆಗಲಿವೆ ಎಂದು ನೈರುತ್ಯ ರೈಲ್ವೆ ವಲಯ ಪ್ರಕಟಣೆ ತಿಳಿಸಿದೆ.

ಭಾಗಶಃ ರದ್ದುಗೊಳಿಸಿದ್ದ ತುಮಕೂರು–ಯಶವಂತಪುರ (06580) ರೈಲು ಎಂದಿನಂತೆ ಯಶವಂತಪುರದವರೆಗೆ ಸಂಚರಿಸಲಿದೆ. ಬೆಳಿಗ್ಗೆ 10 ಗಂಟೆಗೆ ಬದಲಾಗಿ 9.24ಕ್ಕೆ ನಿಲ್ದಾಣ ತಲುಪಲಿದೆ. ಯಶವಂತಪುರ–ತುಮಕೂರು (06573) ರೈಲು ಯಶವಂತಪುರ ನಿಲ್ದಾಣದಿಂದ ಸಂಜೆ 7.50ಕ್ಕೆ ಹೊರಡಲಿದೆ. ಬೆಂಗಳೂರು–ಕುಪ್ಪಂ (06529) ರೈಲು ಕೃಷ್ಣರಾಜಪುರದಿಂದ ಮಧ್ಯಾಹ್ನ 12.17ಕ್ಕೆ ಹೊರಡಲಿದೆ.

ಯಶವಂತಪುರದಿಂದ ತುಮಕೂರಿಗೆ ಹಾಗೂ ತುಮಕೂರಿನಿಂದ ಯಶವಂತಪುರ ನಡುವೆ ಸಂಚರಿಸುವ ರೈಲುಗಳನ್ನು ರದ್ದುಪಡಿಸಲಾಗಿತ್ತು. ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರು ವಿಶೇಷ ಮುತುವರ್ಜಿ ವಹಿಸಿ ಈ ಎರಡು ರೈಲುಗಳು ಈ ಮೊದಲಿನಂತೆಯೇ ಸಂಚರಿಸಲು ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದರು.

ರೈಲು ಸಂಚಾರ ರದ್ದು: ಆ.21 ರಿಂದ 31 ಹಾಗೂ ಸೆ.1ರಿಂದ 19ರ ಅವಧಿಯಲ್ಲಿ ತುಮಕೂರು–ಕೆಎಸ್‌ಆರ್ ಬೆಂಗಳೂರು, ಕೆಎಸ್‌ಆರ್ ಬೆಂಗಳೂರು–ತುಮಕೂರು, ಸಿಕಂದರಾಬಾದ್–ಯಶವಂತಪುರ, ಯಶವಂತಪುರ–ಸಿಕಂದರಾಬಾದ್, ಯಶವಂತಪುರ–ಕೊಚುವೇಲಿ ಮಾರ್ಗಗಳಲ್ಲಿ ರೈಲು ಸಂಚಾರ ರದ್ದು ಮಾಡಲಾಗಿದೆ.

ಮಾರ್ಗ ಬದಲಾವಣೆ: ಆ.24 ಮತ್ತು 31 ಹಾಗೂ ಸೆ.7 ಮತ್ತು 14 ರಂದು ಹುಬ್ಬಳ್ಳಿ-ಎಂಜಿಆರ್ ಚೆನ್ನೈ ಸೆಂಟ್ರಲ್ ಎಕ್ಸ್‌ಪ್ರೆಸ್ ರೈಲು ಹುಬ್ಬಳ್ಳಿ, ಅರಸೀಕೆರೆ, ಚಿಕ್ಕಬಾಣಾವರ, ಯಶವಂತಪುರ 'ಎ' ಕ್ಯಾಬಿನ್, ಲೊಟ್ಟೆಗೊಲ್ಲಹಳ್ಳಿ, ಬಾಣಸವಾಡಿ, ಕೃಷ್ಣರಾಜಪುರಮೂಲಕಸಂಚರಿಸುತ್ತದೆ.

ಆ. 21 ರಿಂದ ಸೆ. 19ರವರೆಗೆ ಬಾಣಸವಾಡಿ-ತುಮಕೂರು ಎಕ್ಸ್‌ಪ್ರೆಸ್ ವಿಶೇಷ ರೈಲು ಬಾಣಸವಾಡಿ, ಯಶವಂತಪುರ 'ಎ' ಕ್ಯಾಬಿನ್, ಚಿಕ್ಕಬಾಣಾವರ ಮತ್ತು ತುಮಕೂರು ನಿಲ್ದಾಣಗಳ ಮೂಲಕ ಸಂಚರಿಸುತ್ತದೆ.

ಆ.20 ರಿಂದ ಸೆ.18ರವರೆಗೆ ವಾಸ್ಕೊಡಗಾಮ-ಯಶವಂತಪುರ ರೈಲು ತುಮಕೂರು, ಚಿಕ್ಕಬಾಣಾವರ, ಯಶವಂತಪುರ 'ಎ' ಕ್ಯಾಬಿನ್, ಲೊಟ್ಟೆಗೊಲ್ಲಹಳ್ಳಿ, ಹೆಬ್ಬಾಳ, ಬಾಣಸವಾಡಿ ಮೂಲಕ ಸಂಚರಿಸುತ್ತದೆ.

ಆ.20ರಿಂದ ಸೆ.18ರ ವರೆಗೆ ಸೊಲ್ಲಾಪುರ-ಹಾಸನ ಎಕ್ಸ್‌ಪ್ರೆಸ್ ರೈಲು ಯಲಹಂಕ, ಯಶವಂತಪುರ 'ಎ' ಕ್ಯಾಬಿನ್ ಮತ್ತು ಚಿಕ್ಕಬಾಣಾವರ ನಿಲ್ದಾಣಗಳ ಮೂಲಕ ಸಂಚರಿಸುತ್ತದೆ.

ಮಾರ್ಗ ಬದಲಾವಣೆಯ ಎಲ್ಲ ರೈಲುಗಳು ಯಶವಂತಪುರ ನಿಲ್ದಾಣದಲ್ಲಿ ನಿಲ್ಲುವುದಿಲ್ಲ.

ತುಮಕೂರಿನಲ್ಲಿ ವಂದೇ ಭಾರತ್ ನಿಲುಗಡೆ

ತುಮಕೂರಿನಲ್ಲಿ ಧಾರವಾಡ-ಬೆಂಗಳೂರು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ನಿಲುಗಡೆಗೆ ಅನುಮೋದನೆ ನೀಡಲಾಗಿದೆ. ಸಚಿವ ವಿ.ಸೋಮಣ್ಣ ಅವರು ಆ.23ರಂದು ಸಂಜೆ 6.18 ಕ್ಕೆ ತುಮಕೂರಿನಲ್ಲಿ ನಿಲುಗಡೆಗೆ ಹಸಿರು ನಿಶಾನೆ ತೋರಲಿದ್ದಾರೆ. ಬಳಿಕ ಸಚಿವರು ಅದೇ ರೈಲಿನಲ್ಲಿ ಬೆಂಗಳೂರಿನವರೆಗೆ ಪ್ರಯಾಣಿಸಲಿದ್ದಾರೆ ಎಂದು ರೈಲ್ವೆ ಇಲಾಖೆ ಪ್ರಕಟಣೆ ತಿಳಿಸಿದೆ.

ಇಂದಿನಿಂದ ರೈಲು ಸಂಚಾರ ಆರಂಭ

ಹಾಸನ: ಬೆಂಗಳೂರು-ಮಂಗಳೂರು ಮಾರ್ಗದ ಬಾಳ್ಳುಪೇಟೆ ಬಳಿ ಭೂಕುಸಿತ ಸಂಭವಿಸಿದ್ದ ಸ್ಥಳದಲ್ಲಿ ಮಣ್ಣು ತೆರವು ಕಾರ್ಯಾಚರಣೆ ಪೂರ್ಣಗೊಂಡಿದೆ. ರೈಲು ಹಳಿಗಳ ಸುರಕ್ಷತೆಯನ್ನು ಪರೀಕ್ಷಿಸಲಾಗಿದ್ದು, ಬುಧವಾರದಿಂದ ರೈಲು ಸಂಚಾರ ಮತ್ತೆ ಆರಂಭವಾಗಲಿದೆ.

'ರೈಲು ಮಾರ್ಗದ ಮಣ್ಣು ತೆರವುಗೊಳಿಸಿದ್ದು, ಹಳಿಗಳ ಪಕ್ಕದಲ್ಲಿ ಭೂಕುಸಿತದ ಸಾಧ್ಯತೆ ಇರುವೆಡೆ ಮರಳಿನ ಚೀಲಗಳನ್ನು ಇಡಲಾಗಿದೆ. ಈ ಮಾರ್ಗವನ್ನು ಅಧಿಕಾರಿಗಳು ಪರಿಶೀಲಿಸಿದ್ದು, ರೈಲು ಸಂಚಾರಕ್ಕೆ ಯೋಗ್ಯವಾಗಿದೆ ಎಂದು ಪ್ರಮಾಣೀಕರಿಸಿದ್ದಾರೆ. ಹೀಗಾಗಿ, ಎಲ್ಲ ರೈಲುಗಳು ನಿಗದಿತ ವೇಳಾಪಟ್ಟಿಯಂತೆ ಸಂಚರಿಸಲಿವೆ' ಎಂದು ನೈರುತ್ಯ ರೈಲ್ವೆ ಪ್ರಕಟಣೆ ತಿಳಿಸಿದೆ.

ಆಗಸ್ಟ್ 21ರಿಂದ ಸೆಪ್ಟೆಂಬರ್ 19ರ ಅವಧಿಯಲ್ಲಿ ಭಾಗಶಃ ರದ್ದಾದ ರೈಲುಗಳ ವಿವರ

ರೈಲು ಸಂಖ್ಯೆ	ರೈಲು ಹೆಸರು	ಭಾಗಶಃ ರದ್ದಾದ ಮಾರ್ಗ
06574	ತುಮಕೂರು–ಯಶವಂತಪುರ	ಚಿಕ್ಕಬಾಣಾವರ–ಯಶವಂತಪುರ
06591	ಯಶವಂತಪುರ–ಹೊಸೂರು	ಯಶವಂತಪುರ–ಹೆಬ್ಬಾಳ
06592	ಹೊಸೂರು–ಯಶವಂತಪುರ	ಹೆಬ್ಬಾಳ–ಯಶವಂತಪುರ
06593	ಯಶವಂತಪುರ–ಚಿಕ್ಕಬಳ್ಳಾಪುರ	ಯಶವಂತಪುರ–ಯಲಹಂಕ
06594	ಚಿಕ್ಕಬಳ್ಳಾಪುರ–ಯಶವಂತಪುರ	ಯಲಹಂಕ–ಯಶವಂತಪುರ
06393	ಯಶವಂತಪುರ–ಹೊಸೂರು	ಯಶವಂತಪುರ–ಹೆಬ್ಬಾಳ
06394	ಹೊಸೂರು–ಯಶವಂತಪುರ	ಹೆಬ್ಬಾಳ–ಯಶವಂತಪುರ
16239	ಚಿಕ್ಕಮಗಳೂರು–ಯಶವಂತಪುರ	ಚಿಕ್ಕಬಾಣಾವರ–ಯಶವಂತಪುರ
16240	ಯಶವಂತಪುರ–ಚಿಕ್ಕಮಗಳೂರು	ಯಶವಂತಪುರ–ಚಿಕ್ಕಬಾಣಾವರ
16208	ಮೈಸೂರು–ಯಶವಂತಪುರ	ಚಿಕ್ಕಬಾಣಾವರ–ಯಶವಂತಪುರ
16211	ಯಶವಂತಪುರ–ಸೇಲಂ	ಯಶವಂತಪುರ–ಹೆಬ್ಬಾಳ
16212	ಸೇಲಂ–ಯಶವಂತಪುರ	ಹೆಬ್ಬಾಳ–ಯಶವಂತಪುರ
16207	ಯಶವಂತಪುರ–ಮೈಸೂರು	ಯಶವಂತಪುರ–ಚಿಕ್ಕಬಾಣಾವರ
17211	ಮಚಲಿಪಟ್ಟಣ–ಯಶವಂತಪುರ	ಯಲಹಂಕ–ಯಶವಂತಪುರ
17212	ಯಶವಂತಪುರ–ಮಚಲಿಪಟ್ಟಣ	ಯಶವಂತಪುರ–ಯಲಹಂಕ
12194	ಜಬಲ್ಪುರ–ಯಶವಂತಪುರ	ಯಲಹಂಕ–ಯಶವಂತಪುರ
12193	ಯಶವಂತಪುರ–ಜಬಲ್ಪುರ	ಯಶವಂತಪುರ–ಯಲಹಂಕ
06579	ಯಶವಂತಪುರ–ತುಮಕೂರು	ಯಶವಂತಪುರ–ಚಿಕ್ಕಬಾಣಾವರ
22883	ಪುರಿ–ಯಶವಂತಪುರ	ಯಲಹಂಕ–ಯಶವಂತಪುರ
22884	ಯಶವಂತಪುರ–ಪುರಿ	ಯಶವಂತಪುರ–ಯಲಹಂಕ
19301	ಡಾ.ಅಂಬೇಡ್ಕರ್ ನಗರ–ಯಶವಂತಪುರ	ಯಲಹಂಕ–ಯಶವಂತಪುರ
19302	ಯಶವಂತಪುರ–ಡಾ.ಅಂಬೇಡ್ಕರ್ ನಗರ	ಯಶವಂತಪುರ–ಯಲಹಂಕ

ನಯನಾ ದ್ವಿತೀಯ, ಅನ್ನಪೂರ್ಣ ತೃತೀಯ: ಇಬ್ಬರಿಗೆ ಸಮಾಧಾನಕರ ಬಹುಮಾನ

ಕರುನಾಡ ಸವಿಯೂಟ: ದಾಕ್ಷಾಯಣಿ ಪ್ರಥಮ

ಪ್ರಜಾವಾಣಿ ವಾರ್ತೆ



ಹುಬ್ಬಳ್ಳಿಯಲ್ಲಿ ಮಂಗಳವಾರ ನಡೆದ 'ಕರುನಾಡ ಸವಿಯೂಟ' ಆವೃತ್ತಿ–3 ಸ್ಪರ್ಧೆಯಲ್ಲಿ ವಿಜೇತರಾದಅನ್ನಪೂರ್ಣ ಪೂಜಾರಿ (ತೃತೀಯ), ನಯನಾ ಹೆಗಡೆ (ದ್ವಿತೀಯ),ದಾಕ್ಷಾಯಣಿ ಹಿರೇಮಠ (ಪ್ರಥಮ) ಅವರಿಗೆ ಒಗ್ಗರಣೆ ಡಬ್ಬಿ ಖ್ಯಾತಿಯ ಮುರಳಿ ಮತ್ತು ಸುಚಿತ್ರಾ ಬಹುಮಾನ ವಿತರಿಸಿದರು—ಪ್ರಜಾವಾಣಿ ಚಿತ್ರ

ಹುಬ್ಬಳ್ಳಿ: ನಗರದ ಆರ್.ಎನ್.ಶೆಟ್ಟಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ 'ಪ್ರಜಾವಾಣಿ', 'ಡೆಕ್ಕನ್ ಹೆರಾಲ್ಡ್' ಮತ್ತು 'ಫ್ರೀಡಂ ಕುಕ್ಕಿಂಗ್ ಆಯಿಲ್' ಸಹಯೋಗದಲ್ಲಿ ನಡೆದ 'ಕರುನಾಡ ಸವಿಯೂಟ' ಆವೃತ್ತಿ–3 ಸ್ಪರ್ಧೆಯಲ್ಲಿ ಧಾರವಾಡದ ದಾಕ್ಷಾಯಣಿ ಹಿರೇಮಠ ಅವರು ಪ್ರಥಮ ಸ್ಥಾನ ಗಳಿಸಿದರು.

ದಾಕ್ಷಾಯಣಿ ಹಿರೇಮಠ ಅವರಿಗೆ ₹10 ಸಾವಿರ, ದ್ವಿತೀಯ ಸ್ಥಾನ ಗಳಿಸಿದ ಶಿರಸಿಯ ನಯನಾ ಹೆಗಡೆ ಅವರಿಗೆ ₹7 ಸಾವಿರ ಮತ್ತು ತೃತೀಯ ಸ್ಥಾನ ಗಳಿಸಿದ ಹುಬ್ಬಳ್ಳಿಯ ಅನ್ನಪೂರ್ಣ ಪೂಜಾರಿ ಅವರಿಗೆ ₹ 5 ಸಾವಿರ ಬಹುಮಾನ ನೀಡಲಾಯಿತು. ಅನಿತಾ ಗಂಗಾಧರ ಕುಲಕರ್ಣಿ ಮತ್ತು ಶುಭಾ ಹೆಗಡೆ ಅವರು ಸಮಾಧಾನಕರ ಬಹುಮಾನ ಪಡೆದರು.

ಸ್ಪರ್ಧಿಗಳು ಸಿದ್ಧಪಡಿಸಿದ್ದ ತರಹೇವಾರಿ ಖಾದ್ಯಗಳು ತೀರ್ಪುಗಾರರು, ಗಣ್ಯರು ಮತ್ತು ಜನರ ಮನಗೆದ್ದವು. ಒಗ್ಗರಣೆ ಡಬ್ಬಿ ಖ್ಯಾತಿಯ ಮುರಳಿ ಮತ್ತು ಸುಚಿತ್ರಾ ಅವರು ತೀರ್ಪುಗಾರರಾಗಿ, ಫಲಿತಾಂಶ ಪ್ರಕಟಿಸಿದರು.

ಸ್ಪರ್ಧೆಗೆ ಇಂಡೇನ್ ಗ್ಯಾಸ್, ಎಕ್ಸೊ ಸಂಸ್ಥೆ, ಕರ್ನಾಟಕ ರಾಜ್ಯ ಕೃಷಿ ಇಲಾಖೆ, ಸನ್‌ರೈಸ್ ಶುದ್ಧ ಮಸಾಲಾ, ಇಂಡಿಯಾ ಗೇಟ್ ಬಾಸುಮತಿ ರೈಸ್, ಶ್ರೀಕೃಷ್ಣ ಶುದ್ಧ ಹಳ್ಳಿ ತುಪ್ಪ, ಫಿಲಿಪ್ಸ್ ಜೂಸರ್ ಮಿಕ್ಸರ್ ಗ್ರೈಂಡರ್, ಪ್ರೀತಿ ಕಿಚನ್ ಅಪ್ಲೈಯನ್ಸಸ್, ಎಸ್‌ಎಸ್‌ಪಿ ಹಿಂಗ್, ವೆಂಕೋಬ್ ಚಿಕನ್ ಮತ್ತು ಸುಜಯ್ ಇರಿಗೇಷನ್ ಪ್ರೈವೇಟ್ ಲಿಮಿಟೆಡ್ ಸಹಯೋಗವಿತ್ತು.

ದಾವಣಗೆರೆಯಲ್ಲಿ ಸ್ಪರ್ಧೆ ಇಂದು: ಆಗಸ್ಟ್ 21ರಂದು ಬೆಳಿಗ್ಗೆ 9ರಿಂದ ದಾವಣಗೆರೆಯ ಪಿ.ಬಿ. ರಸ್ತೆ, ಎಚ್.ಪಿ. ಪೆಟ್ರೋಲ್ ಬಂಕ್ ಎದುರಿನ ಹೋಟೆಲ್ ಶ್ರೀ ಪಂಜುರ್ಲಿ ಪ್ಯಾಲೇಸ್‌ನಲ್ಲಿ 'ಕರುನಾಡ ಸವಿಯೂಟ' ಅಡುಗೆ ಸ್ಪರ್ಧೆ ನಡೆಯಲಿದೆ.

ಮೂರು ಆಟೋಗಳಿಗೆ ಡಿಕ್ಕಿ ಪ್ರಕರಣ • ಅತ್ಯಾಚಾರ ಯತ್ನಕ್ಕೆ ಒಳಗಾಗಿದ್ದ ಯುವತಿ

ಸಂತ್ರಸ್ತೆ ವಿರುದ್ಧ ಎಫ್‌ಐಆರ್ ದಾಖಲು

ಪ್ರಜಾವಾಣಿ ವಾರ್ತೆ

ಅಪರಾಧ ಸುದ್ದಿ

ಬೆಂಗಳೂರು: ಕೊರಿಯೊಗ್ರಾಫರ್‌ನಿಂದ ಅತ್ಯಾಚಾರ ಯತ್ನಕ್ಕೆ ಒಳಗಾಗಿ ಆಸ್ಪತ್ರೆಯೊಂದರಲ್ಲಿ ಚಿಕಿತ್ಸೆ ಪಡೆಯುತ್ತಿರುವ ಉತ್ತರ ಭಾರತ ಮೂಲದ 21 ವರ್ಷದ ಸಂತ್ರಸ್ತೆಯ ವಿರುದ್ಧ ಆಡುಗೋಡಿ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶನಿವಾರ ತಡರಾತ್ರಿ 1.30 ರಿಂದ 2 ಗಂಟೆ ಸುಮಾರಿಗೆ ಮೂರು ಆಟೋಗಳಿಗೆ ಸರಣಿ ಅಪಘಾತ ಎಸಗಿದ್ದ ಆರೋಪದ ಅಡಿ ಚಾಲಕ ಅಜಾಜ್ ಎಂಬುವವರು ನೀಡಿದ ದೂರಿನ ಮೇರೆಗೆ ಸಂತ್ರಸ್ತೆ ವಿರುದ್ಧ ಪ್ರಕರಣ ದಾಖಲಾಗಿದೆ.

'ಸಂತ್ರಸ್ತೆ ಸದ್ಯ ಆಸ್ಪತ್ರೆಯಲ್ಲಿದ್ದು, ಚೇತರಿಸಿಕೊಳ್ಳುತ್ತಿದ್ದಾರೆ. ಅವರು ಸಂಪೂರ್ಣ ಗುಣಮುಖರಾದ ಮೇಲೆ ಹೇಳಿಕೆ ಪಡೆದುಕೊಳ್ಳಲಾಗುವುದು' ಎಂದು ಪೊಲೀಸ್ ಮೂಲಗಳು ತಿಳಿಸಿವೆ.

'ಸಂತ್ರಸ್ತೆ ಮೇಲೆ ಲೈಂಗಿಕ ದೌರ್ಜನ್ಯ ನಡೆಯುವುದಕ್ಕೂ ಮೊದಲು ಕೋರಮಂಗಲದ ಪಬ್‌ಗೆ ತನ್ನ ಸ್ನೇಹಿತನ ಜತೆ ಕಾರಿನಲ್ಲಿ ಹೋಗಿದ್ದರು. ವಾಪಸ್ ಬರುವಾಗ ಈಕೆಯೇ ಕಾರು ಚಾಲನೆ ಮಾಡಿದ್ದರು. ಮಾರ್ಗ ಮಧ್ಯೆ ಮಂಗಳ ಜಂಕ್ಷನ್‌ನಲ್ಲಿ ಯು-ಟರ್ನ್ ಮಾಡಿಕೊಳ್ಳುವಾಗ ಆಟೋವೊಂದಕ್ಕೆ ಕಾರು ಡಿಕ್ಕಿ ಹೊಡೆದಿದ್ದು, ಬಳಿಕ ಕಾರನ್ನು ಹಿಂದಕ್ಕೆ ತೆಗೆದುಕೊಳ್ಳುವ ವೇಳೆ ಮತ್ತೆರಡು ಆಟೋಗಳಿಗೆ ಡಿಕ್ಕಿಯಾಗಿತ್ತು. ಬಳಿಕ ಕಾರನ್ನು ನಿಲ್ಲಿಸದೆ ತೆರಳಿದ್ದರು ಎಂಬ ಆರೋಪ ಇದೆ. ನಂತರ, ಪೂರಾ ಮಾರ್ಗವನ್ನು ಕಾರನ್ನು ಹಿಂಬಾಲಿಸಿದ್ದ ಆಟೋ ಚಾಲಕರು ಅಲ್ಲಿ ಅಡ್ಡಗಟ್ಟಿ ಆಟೋಗಳನ್ನು ರಿಪೇರಿ ಮಾಡಿಸಿಕೊಡುವಂತೆ ಯುವತಿಯನ್ನು ಒತ್ತಾಯಿಸಿದ್ದರು. ಆದರೆ, ಅವರು ಸಮರ್ಪಕ ಉತ್ತರ ನೀಡದೆ ಅಲ್ಲಿಂದ ಪರಾರಿಯಾಗಿದ್ದರು ಎಂದು ದೂರಲಾಗಿದೆ. ನಂತರ, ಸ್ಥಳಕ್ಕೆ ಬಂದಿದ್ದ ಹೊಯ್ಸಳ ಸಿಬ್ಬಂದಿಗೆ ಆಟೋ ಚಾಲಕರು ಘಟನೆ ಕುರಿತು ಮಾಹಿತಿ ನೀಡಿದ್ದರು' ಎಂದು ಮೂಲಗಳು ತಿಳಿಸಿವೆ.

ಸ್ನೇಹಿತನ ಹೇಳಿಕೆ ದಾಖಲು: ಘಟನೆ ವೇಳೆ ಸ್ಥಳದಲ್ಲಿದ್ದ ಸಂತ್ರಸ್ತೆಯ ಸ್ನೇಹಿತನಿಗೆ ಪೊಲೀಸರು ನೋಟಿಸ್ ನೀಡಿದ್ದರು. ಅವರ ಹೇಳಿಕೆ ಪಡೆಯಲಾಗಿದೆ.

'ಕಾಲೇಜು ಸಹಪಾಠಿಯ ಜನ್ಮದಿನಾಚರಣೆಯ ಪಾರ್ಟಿಗೆ ಹೋಗಿದ್ದು, ಊಟ ಮುಗಿಸಿಕೊಂಡು ವಾಪಸ್ ಬರುತ್ತಿದ್ದೆವು. ನಾನು ಮತ್ತು ನನ್ನ ಸ್ನೇಹಿತೆ ಮದ್ಯ ಸೇವಿಸಿರಲಿಲ್ಲ. ಆಕೆಯೇ ಕಾರು ಚಾಲನೆ ಮಾಡುತ್ತಿದ್ದರು. ನಿಯಂತ್ರಣ ತಪ್ಪಿ ಆಟೋಗಳಿಗೆ ಡಿಕ್ಕಿಯಾಗಿದೆ ಎಂದು ಹೇಳಿಕೆ ನೀಡಿದ್ದಾರೆ. ಚಾಲನಾ ಪರವಾನಗಿ ಪರಿಶೀಲನೆ ನಡೆಸಲಾಗುತ್ತಿದೆ' ಎಂದು ಪೊಲೀಸರು ಹೇಳಿದರು.

ಚಿಕಿತ್ಸೆ ವೇಳೆ ವೈದ್ಯ, ಶುಶ್ರೂಷಕಿ ಮೇಲೆ ಹಲ್ಲೆ

ಬೆಂಗಳೂರು: ಚಿಕಿತ್ಸೆಗೆಂದು ಕರೆದೊಯ್ದ ವೇಳೆ ಮದ್ಯದ ಅಮಲಿನಲ್ಲಿ ವೈದ್ಯ ಹಾಗೂ ಶುಶ್ರೂಷಕಿ ಮೇಲೆ ಹಲ್ಲೆ ನಡೆಸಿ, ಆಸ್ಪತ್ರೆಯಲ್ಲಿದ್ದ ಚಿಕಿತ್ಸಾ ಉಪಕರಣಗಳನ್ನು ಹಾನಿಗೊಳಿಸಿದ್ದ ಆರೋಪಿಯನ್ನು ಎಲೆಕ್ಟ್ರಾನಿಕ್ ಸಿಟಿ ಠಾಣೆ ಪೊಲೀಸರು ಮಂಗಳವಾರ ಬಂಧಿಸಿದ್ದಾರೆ.

ನೇಪಾಳದ ಅಶಿಕ್ ಸರಾಯ್ (36) ಬಂಧಿತ ಆರೋಪಿ. ಶ್ರೀಸಾಯಿ ಆಸ್ಪತ್ರೆಯ ವೈದ್ಯ ನಾಗೇಂದ್ರಪ್ಪ ಅವರು ನೀಡಿದ ದೂರು ಆಧರಿಸಿ ಆರೋಪಿಯನ್ನು ಬಂಧಿಸಲಾಗಿದೆ.

ಠಾಣಾ ವ್ಯಾಪ್ತಿಯ ನೀಲಾದ್ರಿ ರಸ್ತೆಯ ಅಂಗಡಿಯೊಂದರಲ್ಲಿ ಆರೋಪಿ ಕೆಲಸ ಮಾಡುತ್ತಿದ್ದ. ಆರೋಪಿಗೆ ಮದ್ಯ ಸೇವಿಸಿ ಬಂದು ಕೆಲಸ ಮಾಡುವ ಅಭ್ಯಾಸವಿತ್ತು. ಸೋಮವಾರ ಸಂಜೆಯೂ ಮದ್ಯ ಸೇವಿಸಿ ಅಂಗಡಿಗೆ ಬಂದಿದ್ದ ಆರೋಪಿ ಮುಖ್ಯರಸ್ತೆಗೆ ಬಂದು ವಾಹನಗಳನ್ನು ಅಡ್ಡಗಟ್ಟುವುದು, ಪಾದಚಾರಿಗಳಿಗೆ ಕಿರುಕುಳ ಉಂಟು ಮಾಡುತ್ತಿದ್ದ. ಅಲ್ಲದೇ ರಸ್ತೆಯಲ್ಲೇ ಬಿದ್ದಾಗಿಯ ಮಾಡಿಕೊಂಡಿದ್ದ. ಸ್ಥಳೀಯರು ಹೊಯ್ಸಳ ಸಿಬ್ಬಂದಿಗೆ ಕರೆ ಮಾಡಿ ಮಾಹಿತಿ ನೀಡಿದ್ದರು. ಸ್ಥಳಕ್ಕೆ ಬಂದಿದ್ದ ಪೊಲೀಸರು, ಸ್ಥಳೀಯರ ನೆರವು ಪಡೆದು ಆರೋಪಿಯನ್ನು ಆಸ್ಪತ್ರೆಗೆ ಕರೆದೊಯ್ದಿದ್ದರು. ಪೊಲೀಸರು ಅಲ್ಲಿಂದ ತೆರಳಿದ ಮೇಲೆ ಚಿಕಿತ್ಸೆ ಕೊಡಲು ಮುಂದಾದ ನಾಗೇಂದ್ರಪ್ಪ ಹಾಗೂ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ್ದ, ಉಪಕರಣಗಳಿಗೂ ಹಾನಿ ಮಾಡಿದ್ದಾನೆ ಎಂದು ಪೊಲೀಸರು ಹೇಳಿದರು. ಹಲ್ಲೆಯಿಂದ ವೈದ್ಯರ ತುಟಿ, ಬೆರಳುಗಳು ಹಾಗೂ ಕಾಲಿಗೆ ಗಾಯಗಳಾಗಿವೆ ಎಂದು ಪೊಲೀಸರು ಹೇಳಿದರು.

ಪೆಟ್ರೋಲ್ ಸುರಿದು ಬೆಂಕಿ ಹಚ್ಚಿ ಪತ್ನಿ ಕೊಲೆ

ದಾಬಸ್‌ಪೇಟೆ: ಪೆಟ್ರೋಲ್ ಸುರಿದು ಬೆಂಕಿ ಹಚ್ಚಿ ಪತ್ನಿಯನ್ನು ಕೊಲೆ ಮಾಡಿರುವ ಆರೋಪದ ಅಡಿ ಪತಿಯನ್ನು ದಾಬಸ್‌ಪೇಟೆ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಮನೆಯ ಕೌಟುಂಬಿಕ ಕಲಹದಲ್ಲಿ ಸುಟ್ಟ ಗಾಯಗಳಿಂದ ಸ್ಥಿತಿಯಲ್ಲಿ ಕಾವ್ಯಾ (27) ಅವರ ಮೃತದೇಹ ಪತ್ತೆಯಾಗಿದೆ. ಪೆಟ್ರೋಲ್ ಸುರಿದು ಬೆಂಕಿ ಹಚ್ಚಿ ಕೊಲೆ ಮಾಡಲಾಗಿದೆ ಎಂದು ಸಂಬಂಧಿಕರು ದೂರು ನೀಡಿದ್ದು, ಆ ದೂರು ಆಧರಿಸಿ ಆರೋಪಿ ಶಿವಾನಂದ್ (38) ಅವರನ್ನು ಬಂಧಿಸಲಾಗಿದೆ.



ಕಾವ್ಯಾ



ಶಿವಾನಂದ್

ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕಿನ ಮಾವಿನಕೆರೆ ಗ್ರಾಮದ ಕಾವ್ಯಾ ಮತ್ತು ಹಾಸನದ ಅಲೂರು ತಾಲ್ಲೂಕಿನ ಮಣಿಪುರದ ಶಿವಾನಂದ್ ಮದುವೆ ಆಗಿದ್ದರು. ಈ ದಂಪತಿಗೆ ಇಬ್ಬರು ಮಕ್ಕಳಿದ್ದಾರೆ. ಶಿವಾನಂದ್ ಅವರು ದಾಬಸ್‌ಪೇಟೆಯ ಖಾಸಗಿ ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಿದ್ದರು. ಆರೋಪಿಗೆ ಮದ್ಯ ಸೇವನೆ ಅಭ್ಯಾಸ ಇತ್ತು. ಅನಾರೋಗ್ಯ ಮತ್ತು ಕೆಲಸದ ಕಾರಣದಲ್ಲಿ ಸಂಸಾರದಲ್ಲಿ ಬಿರುಕು ಮೂಡಿತ್ತು. ಕಾವ್ಯಾ ಅವರು ತವರು ಮನೆಗೆ ಹೋಗಿದ್ದರು. ಕೆಲವು ದಿನಗಳ ಹಿಂದಷ್ಟೇ ಗಂಡನ ಮನೆಗೆ ಬಂದಿದ್ದರು. ಅದಾದ ಮೇಲೆ ಘಟನೆ ನಡೆದಿದೆ ಎಂದು ಪೊಲೀಸರು ಹೇಳಿದರು.

ಸ್ಥಳಕ್ಕೆ ಬೆಂಗಳೂರು ಗ್ರಾಮಾಂತರ ಎಸ್‌ಪಿ ಸಿ.ಕೆ.ಬಾಬಾ, ಡಿವೈಎಸ್‌ಪಿ ಜಗದೀಶ್ ಭೇಟಿ ನೀಡಿ ಪರಿಶೀಲಿಸಿದರು.



ಜಪ್ತಿ ಮಾಡಿಕೊಂಡ ನಕಲಿ ದಾಖಲೆಗಳನ್ನು ನಗರ ಪೊಲೀಸ್ ಕಮಿಷನರ್ ಬಿ.ದಯಾನಂದ ಅವರು ಪರಿಶೀಲಿಸಿದರು

ದ್ವಿಚಕ್ರ ವಾಹನಗಳ ಕಳವು: ಸ್ನೇಹಿತರಿಬ್ಬರ ಬಂಧನ

ಐಷಾರಾಮಿ ಜೀವನಕ್ಕಾಗಿ ಕಳ್ಳತನ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಮನೆ ಎದುರು ಹಾಗೂ ರಸ್ತೆ ಬದಿಯಲ್ಲಿ ರಾತ್ರಿ ವೇಳೆ ನಿಲುಗಡೆ ಮಾಡುತ್ತಿದ್ದ ದ್ವಿಚಕ್ರ ವಾಹನಗಳನ್ನು ಕಳ್ಳತನ ಮಾಡಿ ಎಂಜಿನ್-ಚಾಸ್ಸಿ ಸಂಖ್ಯೆಯನ್ನು ತಿದ್ದುಪಡಿ ಮಾಡಿ ಒಎಲ್‌ಎಕ್ಸ್‌ನಲ್ಲಿ ಮಾರಾಟ ಮಾಡುತ್ತಿದ್ದ ಸ್ನೇಹಿತರಿಬ್ಬರನ್ನು ವಿದ್ಯಾರಣ್ಯಪುರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಕೊಪ್ಪಳ ಜಿಲ್ಲೆಯ ಬಸಾಪಟ್ಟಣದ ರಾಘವೇಂದ್ರ(25) ಹಾಗೂ ಗಂಗಾವತಿಯ ಸಾಯಿತೇಜ(25) ಬಂಧಿತರು. ಇಬ್ಬರೂ ನಗರದ ಹುಣಸಮಾರನಹಳ್ಳಿಯಲ್ಲಿ ಬಾಡಿಗೆ ಮನೆಯೊಂದರಲ್ಲಿ ನೆಲೆಸಿದ್ದರು.

ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ನಗರ ಪೊಲೀಸ್ ಕಮಿಷನರ್ ಬಿ.ದಯಾನಂದ, 'ಬಂಧಿತರಿಂದ ₹26 ಲಕ್ಷ ಮೌಲ್ಯದ 25 ದ್ವಿಚಕ್ರ ವಾಹನ, ಆರು ಮೊಬೈಲ್ ಫೋನ್, ಎರಡು ಲ್ಯಾಪ್‌ಟಾಪ್ ಹಾಗೂ ಒಂದು ಕಲರ್ ಪ್ರಿಂಟರ್ ಜಪ್ತಿ ಮಾಡಲಾಗಿದೆ' ಎಂದರು.

'ಠಾಣಾ ವ್ಯಾಪ್ತಿಯಲ್ಲಿ ಇತ್ತೀಚೆಗೆ ದ್ವಿಚಕ್ರ ವಾಹನಗಳ ಕಳ್ಳತನ ಪ್ರಕರಣಗಳು ಹೆಚ್ಚು ವರದಿಯಾಗುತ್ತಿದ್ದವು. ಆರೋಪಿಗಳ ಪತ್ತೆಗೆ ಇನ್‌ಸ್ಪೆಕ್ಟರ್ ನೇತೃತ್ವದಲ್ಲಿ ವಿಶೇಷ ತಂಡ ರಚಿಸಲಾಗಿತ್ತು. ತಂಡವು ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದೆ. ಆರೋಪಿಗಳಿಬ್ಬರೂ ಒಂದೇ ಕಾಲೇಜಿನಲ್ಲಿ ಎಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿದ್ದರು. ಅರ್ಧಕ್ಕೆ ವ್ಯಾಸಂಗ ಬಿಟ್ಟು ಐಷಾರಾಮಿ ಜೀವನಕ್ಕಾಗಿ ಕಳ್ಳತನಕ್ಕೆ ಇಳಿದಿದ್ದರು' ಎಂದು ಹೇಳಿದರು.

ಆರೋಪಿಗಳ ಬಂಧನದಿಂದ ವಿದ್ಯಾರಣ್ಯಪುರ ಸೇರಿದಂತೆ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ನಡೆದಿದ್ದ ಒಟ್ಟು 12 ದ್ವಿಚಕ್ರ ವಾಹನ ಕಳ್ಳತನ ಪ್ರಕರಣಗಳು ಪತ್ತೆಯಾಗಿವೆ ಎಂದು ವಿವರಿಸಿದರು.

ಆಂಧ್ರಪ್ರದೇಶಕ್ಕೂ ತೆರಳಿ ಕಳ್ಳತನ: ಬೆಂಗಳೂರು ನಗರ, ಗ್ರಾಮಾಂತರ ಜಿಲ್ಲೆ ಹಾಗೂ ಆಂಧ್ರಪ್ರದೇಶದ ಕಡಪ ಜಿಲ್ಲೆಗಳಲ್ಲಿ ರಾತ್ರಿ ವೇಳೆ ನಿಲುಗಡೆ ಮಾಡಿದ್ದ ದುಬಾರಿ ಬೆಲೆಯ ದ್ವಿಚಕ್ರ ವಾಹನಗಳನ್ನೇ ಕಳ್ಳತನ ಮಾಡುತ್ತಿದ್ದರು. ಇಬ್ಬರೂ ಎಂಜಿನಿಯರಿಂಗ್ ಪದವಿ ವ್ಯಾಸಂಗ ಮಾಡಿದ್ದರಿಂದ ತಾಂತ್ರಿಕ ಜ್ಞಾನ ಹೊಂದಿದ್ದರು. ಆ ಜ್ಞಾನವನ್ನು ಕಳ್ಳತನ ಕೃತ್ಯಕ್ಕೆ ಬಳಕೆ ಮಾಡಿಕೊಂಡಿದ್ದರು ಎಂದು ಪೊಲೀಸರು ಹೇಳಿದರು.

'ಹಣ ಸಂಪಾದನೆಗೆ ಬಾಡಿಗೆ ಮನೆಯಲ್ಲಿ ಕಲರ್ ಪ್ರಿಂಟರ್ ಇಟ್ಟುಕೊಂಡು ನೋಂದಣಿ ಪ್ರಮಾಣ ಪತ್ರ, ವಿಮೆ ಸೇರಿದಂತೆ ಅಗತ್ಯ ದಾಖಲೆಗಳನ್ನು ಅನುಮಾನ ಬಾರದಂತೆ ಸೃಷ್ಟಿಸುತ್ತಿದ್ದರು. ಆರ್‌ಟಿಒ ನೀಡುವ ಸ್ಮಾರ್ಟ್ ಕಾರ್ಡ್‌ಗಳಂತೆಯೇ ನಕಲಿ ದಾಖಲೆಗಳು ಇರುತ್ತಿದ್ದವು. ಅಲ್ಲದೇ ಕಳ್ಳತನ ಮಾಡಿದ್ದ ದ್ವಿಚಕ್ರ ವಾಹನಗಳ ಬಿಡಿಭಾಗಗಳನ್ನು ಬಿಚ್ಚಿ ಬೇರೊಂದು ವಾಹನಕ್ಕೆ ಜೋಡಣೆ ಮಾಡುತ್ತಿದ್ದರು. ಅಸಲಿ ಸ್ಟಿಕರ್ ಸಹ ಬದಲಾವಣೆ ಮಾಡುತ್ತಿದ್ದರು' ಎಂದು ಪೊಲೀಸ್ ಮೂಲಗಳು ತಿಳಿಸಿವೆ.

'ಎಂಜಿನ್ ಮತ್ತು ಚಾಸ್ಸಿ ಸಂಖ್ಯೆಯನ್ನು ತಿದ್ದುಪಡಿ ಮಾಡಿದ ನಂತರ ದ್ವಿಚಕ್ರ ವಾಹನಗಳ ಮಾರಾಟಕ್ಕೆ ಒಎಲ್‌ಎಕ್ಸ್‌ನಲ್ಲಿ ಅಪ್‌ಲೋಡ್ ಮಾಡುತ್ತಿದ್ದರು. ಖರೀದಿಗೆ ಆಸಕ್ತಿ ತೋರಿದವರನ್ನು ಖುದ್ದು ಭೇಟಿ ಮಾಡಿ ನಕಲಿ ದಾಖಲೆಗಳನ್ನು ಅಸಲಿಯೆಂದು ತೋರಿಸುತ್ತಿದ್ದರು' ಎಂದು ಪೊಲೀಸರು ಹೇಳಿದರು.

₹5 ಲಕ್ಷ ಮೌಲ್ಯದ 20 ದ್ವಿಚಕ್ರ ವಾಹನ ಜಪ್ತಿ

ಪೀಣ್ಯ ಠಾಣೆ ಪೊಲೀಸರು ಕಾರ್ಯಾಚರಣೆ ನಡೆಸಿ, ದ್ವಿಚಕ್ರ ವಾಹನಗಳನ್ನು ಕಳ್ಳತನ ಮಾಡುತ್ತಿದ್ದ ವೆಂಕಟೇಶ್(39) ಎಂಬಾತನನ್ನು ಬಂಧಿಸಿದ್ದಾರೆ.

ಆರೋಪಿಯಿಂದ ₹5 ಲಕ್ಷ ಮೌಲ್ಯದ 20 ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಿದ್ದಾರೆ. ನಾಗಸಂದ್ರ, ಜಾಲಹಳ್ಳಿ ಹಾಗೂ ಪೀಣ್ಯ ಮೆಟ್ರೊ ನಿಲ್ದಾಣದ ಬಳಿ ನಿಲುಗಡೆ ಮಾಡುತ್ತಿದ್ದ ದ್ವಿಚಕ್ರ ವಾಹನಗಳನ್ನು ಕಳ್ಳತನ ಮಾಡುತ್ತಿದ್ದ.

ಆರೋಪಿಯ ಬಂಧನದಿಂದ ಪೀಣ್ಯ, ಬ್ಯಾಡರಹಳ್ಳಿ, ಜಂಡ್ರಾ ಲೇಔಟ್, ನಂದಿನಿ ಲೇಔಟ್, ಪುಟ್ಟೇನಹಳ್ಳಿ, ಹುಳಿಮಾವು, ಮಾದನಾಯಕನಹಳ್ಳಿ, ಕುಮಾರಸ್ವಾಮಿ ಲೇಔಟ್ ಸೇರಿದಂತೆ 11 ಪ್ರಕರಣಗಳು ಪತ್ತೆಯಾಗಿವೆ ಎಂದು ಪೊಲೀಸರು ಹೇಳಿದರು.

ಯುವಕನಿಗೆ ಕಿರುಕುಳ: ಲಿಂಗತ್ವ ಅಲ್ಪಸಂಖ್ಯಾತರ ವಿರುದ್ಧ ಎಫ್‌ಐಆರ್

ಬೆಂಗಳೂರು: ಯುವಕನೊಬ್ಬನಿಗೆ ಬಟ್ಟೆಮದ್ದು ನೀಡಿ ಪ್ರಜ್ಞೆ ತಪ್ಪಿಸಿ, ಆತನ ಮರ್ಮಾಂಗಕ್ಕೆ ಹಾನಿ ಮಾಡಿರುವ ಆರೋಪದ ಅಡಿ ಐವರು ಲಿಂಗತ್ವ ಅಲ್ಪಸಂಖ್ಯಾತರ ವಿರುದ್ಧ ಪುಲಕೇಶಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಚಿತ್ರಾ, ಪ್ರೀತಿ, ಕಾಜಲ್, ಅಶ್ವಿನಿ, ಮುಗಿಲ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ಡಿ.ಜೆ. ಹಳ್ಳಿ ನಿವಾಸಿ 18 ವರ್ಷದ ಯುವಕ ನೀಡಿದ ದೂರಿನ ಮೇರೆಗೆ ಎಫ್‌ಐಆರ್ ದಾಖಲು ಮಾಡಿಕೊಳ್ಳಲಾಗಿದೆ ಎಂದು ಪೊಲೀಸರು ಹೇಳಿದರು.

'ಡಿ.ಜೆ. ಹಳ್ಳಿಯಲ್ಲಿ ವಾಸವಾಗಿದ್ದ ಯುವಕ ಅಂಬೇಡ್ಕರ್ ಕಾಲೇಜು ಸಮೀಪದ ಟೀ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದ. ಅದೇ ಟೀ ಅಂಗಡಿಗೆ ಬರುತ್ತಿದ್ದ ಲಿಂಗತ್ವ ಅಲ್ಪಸಂಖ್ಯಾತರು ಯುವಕನಿಗೆ ತಮ್ಮೊಂದಿಗೆ ಬಂದರೆ ಉತ್ತಮ ಸಂಪಾದನೆ ಮಾಡಬಹುದು ಎಂದು ಪುಸಲಾಯಿಸಿದ್ದರು. ಆರಂಭದಲ್ಲಿ ಯುವಕ, ಆರೋಪಿಗಳ ಜತೆ ತೆರಳುವುದನ್ನು ನಿರಾಕರಿಸಿದ್ದ. ನಂತರ, ಯುವಕನಿಗೆ ಬೆದರಿಸಿದ್ದ ಆರೋಪಿಗಳು, ಟ್ಯಾನರಿ ರಸ್ತೆಯಲ್ಲಿರುವ ತಮ್ಮ ಮನೆಗೆ ಕರೆದೊಯ್ದು ಕೆಲವು ದಿನಗಳ ಕಾಲ ಗೃಹ ಬಂಧನದಲ್ಲಿ ಇರಿಸಿದ್ದರು' ಎಂದು ದೂರಿನಲ್ಲಿ ವಿವರಿಸಲಾಗಿದೆ.

'ಯುವಕನ ಮನೆಯವರನ್ನು ಹತ್ತಿ ಎಂದು ಆರೋಪಿಗಳು ಬೆದರಿಸಿ ಯುವಕನಿಂದ ಮಾರು ವರ್ಷ ಭಿಕ್ಷಾಟನೆ ಮಾಡಿಸಿದ್ದರು. ಆರೋಪಿಗಳಿಗೆ ಯುವಕ ಪ್ರತಿನಿತ್ಯ ₹2 ಸಾವಿರ ತಂದು ಕೊಡುತ್ತಿದ್ದ. ಲಿಂಗ ಪರಿವರ್ತನೆಗೆ ಯುವಕ ಒಪ್ಪದಿದ್ದಾಗ ಆತನಿಗೆ ಹಿಂದೆ ನೀಡಿ ಪ್ರಜ್ಞೆ ತಪ್ಪಿಸಿದ ಬಟ್ಟೆಮದ್ದು ನೀಡಿ ಯುವಕನ ಮರ್ಮಾಂಗ ಕತ್ತರಿಸಿದ್ದಾರೆ' ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಕಾರು ಅಡ್ಡಗಟ್ಟಿ ಹಲ್ಲೆಗೆ ಯತ್ನ: ಆರೋಪಿ ಬಂಧನ

ಬೆಂಗಳೂರು: ಕಾರಿನಲ್ಲಿ ತೆರಳುತ್ತಿದ್ದ ದಂಪತಿಯನ್ನು ಅಡ್ಡಗಟ್ಟಿ ಗಲಾಟೆ ಮಾಡಿ, ಹಲ್ಲೆಗೆ ಯತ್ನಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ನವೀನ್ ರೆಡ್ಡಿ (30) ಎಂಬಾತನನ್ನು ಬೆಳ್ಳಂದೂರು ಪೊಲೀಸರು ಬಂಧಿಸಿದ್ದಾರೆ.

ಸರ್ಜಾಪುರ ಮುಖ್ಯರಸ್ತೆಯಲ್ಲಿ ಜಿತಿನ್ ಎಂಬುವವರು ಪತ್ನಿ-ಮಕ್ಕಳ ಜತೆ ಸೋಮವಾರ ರಾತ್ರಿ ಕಾರಿನಲ್ಲಿ ಸ್ನೇಹಿತನ ಮನೆಗೆ ಹೋಗುತ್ತಿದ್ದರು. ವಾಹನ ಹಿಂದಿಕ್ಕುವ ವಿಚಾರಕ್ಕೆ ಈ ಜಗಳ ನಡೆದಿದೆ. ದ್ವಿಚಕ್ರ ವಾಹನದಲ್ಲಿ ಬಂದ ಆರೋಪಿ, ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾನೆ. ಕಾರಿನ ವೈಪರ್ ಕಿತ್ತು ಹಾಕಿ, ಗಾಜು ಒಡೆಯಲು ಹಾಕಿದ್ದಾನೆ. ಈ ದೃಶ್ಯವನ್ನು ಅವರು ಮೊಬೈಲ್‌ನಲ್ಲಿ ಸೆರೆ ಹಿಡಿದು, 'ಎಕ್ಸ್' ನಲ್ಲಿ ಹಂಚಿಕೊಂಡು, ನಗರ ಪೊಲೀಸ್ ಕಮಿಷನರ್ ಅವರಿಗೆ ಟ್ಯಾಗ್ ಮಾಡಿದ್ದರು.

ಕಾರಿನ ಗಾಜು ಒಡೆದು ಲ್ಯಾಪ್‌ಟಾಪ್, ಮೊಬೈಲ್ ಕಳವು: ಮೂವರ ಸೆರೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ರಸ್ತೆ ಬದಿಯಲ್ಲಿ ನಿಲುಗಡೆ ಮಾಡಿದ್ದ ಕಾರುಗಳ ಗಾಜು ಒಡೆದು ಲ್ಯಾಪ್‌ಟಾಪ್ ಹಾಗೂ ಮೊಬೈಲ್ ಕಳ್ಳತನ ಮಾಡುತ್ತಿದ್ದ ತಮಿಳುನಾಡಿನ ಮೂವರನ್ನು ಇಂದಿರಾನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ತಮಿಳುನಾಡಿನ ಸೆಂಥಿಲ್ ಕುಮಾರ್(29), ಮುರಳಿ(37) ಹಾಗೂ ಮೂರ್ತಿ(30) ಬಂಧಿತರು.

ಇಬ್ಬರು ಆರೋಪಿಗಳು ತಲೆಮರೆಸಿಕೊಂಡಿದ್ದು ಅವರ ಪತ್ತೆಗೆ ಶೋಧ ನಡೆಸಲಾಗುತ್ತಿದೆ ಎಂದು ಪೊಲೀಸರು ಹೇಳಿದರು.

ಬಂಧಿತರಿಂದ ಎರಡು ಚಾಕು, ಖಾರದ ಪುಡಿ, ಎರಡು ಮೊಬೈಲ್ ಫೋನ್ ಜಪ್ತಿ ಮಾಡಲಾಗಿದೆ.

'ಇಂದಿರಾನಗರದ ಕದಿರಯ್ಯನಪಾಳ್ಯದ ನಿಲುಗಡೆ ತೋಟದ ಬಳಿ ಐವರು ಆರೋಪಿಗಳು ಮಾರಕಾಸ್ತ್ರ, ಖಾರದ ಪುಡಿ, ಚಾಕು ಹಿಡಿದು ದರೋಡೆಗೆ ಹೊಂಚು ಹಾಕುತ್ತಿದ್ದರು. ಖಚಿತ ಮಾಹಿತಿ ಮೇರೆಗೆ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಲಾಯಿತು' ಎಂದು ಪೊಲೀಸರು ಹೇಳಿದರು.

'ಇಂದಿರಾನಗರ ವ್ಯಾಪ್ತಿಯಲ್ಲಿ ರಸ್ತೆ ಬದಿಯಲ್ಲಿ ನಿಲುಗಡೆ ಮಾಡುತ್ತಿದ್ದ ಕಾರುಗಳಲ್ಲಿ ಬೆಲೆಬಾಳುವ ವಸ್ತುಗಳನ್ನು ಮಾಲೀಕರು ಇಟ್ಟು ಹೋಗುವುದನ್ನು ಆರೋಪಿಗಳನ್ನು ಪತ್ತೆ ಮಾಡುತ್ತಿದ್ದರು. ನಂತರ, ಗಾಜು ಒಡೆದು ಲ್ಯಾಪ್‌ಟಾಪ್ ಹಾಗೂ ಮೊಬೈಲ್ ಕದ್ದು ಕ್ಷಣಾರ್ಧದಲ್ಲಿ ಪರಾರಿ ಆಗುತ್ತಿದ್ದರು. ಸಿಸಿಟಿವಿ ದೃಶ್ಯಾವಳಿ ಆಧರಿಸಿ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಲಾಗಿದೆ. ಆರೋಪಿಗಳಿಂದ ಲ್ಯಾಪ್‌ಟಾಪ್ ಖರೀದಿಸುತ್ತಿದ್ದ ವ್ಯಕ್ತಿಯನ್ನು ಅತ್ತಿಬೆಲೆಯಲ್ಲಿ ವಶಕ್ಕೆ ಪಡೆಯಲಾಗಿದೆ' ಎಂದು ಪೊಲೀಸರು ಹೇಳಿದರು.


ಮೊಬೈಲ್ ಫೋನ್ ಕಳ್ಳತನ: ಮೂವರ ಬಂಧನ

ಬೆಂಗಳೂರು: ಮೊಬೈಲ್ ಫೋನ್ ಕಳವು ಮಾಡುತ್ತಿದ್ದ ಮೂವರು ಆರೋಪಿಗಳನ್ನು ವೈಟ್‌ಫೀಲ್ಡ್ ಠಾಣೆ ಪೊಲೀಸರು ಬಂಧಿಸಿದ್ದಾರೆ.

ನಗರದ ಸೈಯದ್ ಮುಜೀಲ್, ಸೈಯದ್ ಅಯಾನ್ ಹಾಗೂ ಮೈಸೂರಿನ ರಾಜೇಶ್ ನಗರದ ಮೊಹಮ್ಮದ್ ಇಮ್ರಾನ್ ಬಂಧಿತರು.

ಬಂಧಿತರಿಂದ ಐದು ಮೊಬೈಲ್ ಫೋನ್, ಕೃತ್ಯಕ್ಕೆ ಬಳಸುತ್ತಿದ್ದ ಎರಡು ದ್ವಿಚಕ್ರ ವಾಹನಗಳು ಜಪ್ತಿ ಮಾಡಲಾಗಿದೆ. ಇವುಗಳ ಮೌಲ್ಯ ₹1.40 ಲಕ್ಷ ಎಂದು ಅಂದಾಜಿಸಲಾಗಿದೆ.

'ಪ್ರಯಾಣಿಕರು ಬಸ್ ಹತ್ತುವಾಗ ಜೇಬಿನಲ್ಲಿದ್ದ ಮೊಬೈಲ್ ಕಸಿದು ಆರೋಪಿಗಳು ಪರಾರಿ ಆಗುತ್ತಿದ್ದರು. ವರ್ತೂರಿನ ಕಾರ್ಮಿಕರ ಶೆಡ್‌ನ ನಿವಾಸಿಯೊಬ್ಬರು ನೀಡಿದ ದೂರು ಆಧರಿಸಿ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಲಾಯಿತು' ಎಂದು ಪೊಲೀಸರು ಹೇಳಿದರು.





ಡಿಜಿಟಲ್ ಮೋಸ ತಡೆಯಲು ವಿಶ್ವಪ್ರಯತ್ನ

ಕೃಷ್ಣ ಭಟ್

ಕಳೆದ ತಿಂಗಳು ಯುಪಿಐ ವಹಿವಾಟಿನಲ್ಲಿ ಎಷ್ಟು ಮೋಸದ ವಹಿವಾಟು ನಡೆದಿದೆ – ಎಂಬ ಅಂಕಿ-ಅಂಶವನ್ನು ಆರ್‌ಬಿಐ ಬಿಡುಗಡೆ ಮಾಡಿದಾಗ, ಯುಪಿಐನಲ್ಲಿ ಮೋಸ ಮಾಡುವ ಪ್ರಕರಣಗಳು ಹೆಚ್ಚುತ್ತಿವೆ – ಎಂಬುದು ಮತ್ತೊಮ್ಮೆ ಬಹಿರಂಗವಾಗಿತ್ತು. ಇದು, ನಮ್ಮ ಡಿಜಿಟಲ್ ಪೇಮೆಂಟ್ ವ್ಯವಸ್ಥೆಯಲ್ಲಿ ಏನೋ ಕೊರತೆಯಿದೆ ಎಂಬುದನ್ನು ಸೂಚಿಸುತ್ತದೆಯೇನೋ ಹೌದು. ಆದರೆ, ಇದೇ ಸಮಯದಲ್ಲಿ ಡಿಜಿಟಲ್ ಪೇಮೆಂಟ್ ಮೋಸದ ವಿಷಯದಲ್ಲಿ ಜಾಗತಿಕ ಮಟ್ಟದಲ್ಲಿ ಆಗುತ್ತಿರುವ ಬೆಳವಣಿಗೆಗಳನ್ನು ನೋಡಿದರೆ, ಈ ಸಮಸ್ಯೆ ಬರಿ ಭಾರತದ್ದಷ್ಟೇ ಅಲ್ಲ, ಇಡೀ ವಿಶ್ವ ಈ ಡಿಜಿಟಲ್ ಪೇಮೆಂಟ್ ಮೋಸವನ್ನು ತಡೆಯುವುದಕ್ಕೆ ಹೋರಾಡುತ್ತಿದೆ.

ದುರದೃಷ್ಟವಶಾತ್, ಯಾವ ದೇಶದಲ್ಲೂ ಇದಕ್ಕೊಂದು ಚಳವಳಿಯ ರೂಪವೋ, ಸರ್ಕಾರೇತರ ಸಂಸ್ಥೆಗಳ ಬೆಂಬಲವೋ, ಯಾವುದೂ ಸಿಕ್ಕಿಲ್ಲ. ಜನರೇ ಸ್ವಯಂಪ್ರೇರಿತವಾಗಿ, ನಿಯಂತ್ರಕ ಸಂಸ್ಥೆಗಳ ಕ್ರಮಗಳಿಂದಾಗಿ ಅಲ್ಪ ಸ್ವಲ್ಪ ಮಟ್ಟಿಗೆ ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ನಡೆಯುತ್ತಿದೆ.

ಭಾರತದಲ್ಲಿ, 2023ರಲ್ಲಿ ಒಟ್ಟು 95 ಸಾವಿರ ಡಿಜಿಟಲ್ ಮೋಸದ ಪ್ರಕರಣಗಳು ವರದಿಯಾಗಿವೆ. ಅದಕ್ಕೂ ಹಿಂದಿನ ವರ್ಷ ಸುಮಾರು 84 ಸಾವಿರ ಮೋಸದ ಪ್ರಕರಣಗಳು ವರದಿಯಾಗಿದ್ದವು. ಹಾಗೆಂದ ಮಾತ್ರಕ್ಕೆ, ಒಟ್ಟು 865 ಕೋಟಿ ವಹಿವಾಟುಗಳ ಪೈಕಿ ಇದು ಸುಮಾರು ಶೇ 10ರಷ್ಟು. ಸುಮಾರು ಇದೇ ಶೇಕಡಾವಾರು ಮೋಸದ ವಹಿವಾಟುಗಳು ಸಿಂಗಪುರದಲ್ಲೂ ನಡೆದಿವೆ. ಹಣಕಾಸುವ್ಯವಸ್ಥೆ ವಿಷಯದಲ್ಲಿ ಸಿಂಗಪುರದ ವ್ಯವಸ್ಥೆ ಅತ್ಯಂತ ಕಟ್ಟುನಿಟ್ಟು ಎಂದೇ ಹೇಳಲಾಗುತ್ತದೆ. ಆದರೆ, ಅಲ್ಲೂ ಮೋಸಗಾರರಿಗೇನೂ ಅಂಜಿಕೆ ಇಲ್ಲ. 2022ಕ್ಕೆ ಹೋಲಿಸಿದರೆ 2023ರಲ್ಲಿ ಮೋಸದ ಪ್ರಕರಣಗಳಲ್ಲಿ ಶೇ 70ರಷ್ಟು ಹೆಚ್ಚಳವಾಗಿದೆ. ಮುಂದುವರಿದ ದೇಶಗಳಾದ ಅಮೆರಿಕ, ಯುರೋಪ್ ದೇಶಗಳಲ್ಲೂ ಇದೇ ಪರಿಸ್ಥಿತಿ ಇದೆ.

ಇದಕ್ಕೆ ಎಲ್ಲ ದೇಶಗಳೂ ಪರಿಹಾರ ಹುಡುಕುತ್ತಿವೆ. ಆದರೆ, ಯಾವ ದೇಶದಲ್ಲೂ ಈ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಿದ್ಧ ಪರಿಹಾರವಿಲ್ಲ. ಅಷ್ಟಕ್ಕೂ, ಈ ಯಾವುದೇ ಮೋಸದ ಪ್ರಕರಣಗಳು ಈ ವ್ಯವಸ್ಥೆಯನ್ನೋ ತಂತ್ರಜ್ಞಾನವನ್ನೋ ದುರ್ಬಳಕೆ ಮಾಡಿಕೊಂಡಿದ್ದಲ್ಲ. ಬದಲಿಗೆ, ಈ ತಂತ್ರಜ್ಞಾನದ ಬಗ್ಗೆ ಜನರಲ್ಲಿರುವ ಅಜ್ಞಾನವನ್ನು ದುರ್ಬಳಕೆ ಮಾಡಿಕೊಂಡಿದ್ದಷ್ಟೇ! ಯುಪಿಐ ವಿಷಯದಲ್ಲಂತೂ ಮೋಸದ ಥರಹೇವಾರಿ



ಪ್ರಕರಣಗಳು ನಡೆದಿವೆ. ನಾವೀಗ ವ್ಯಾಪಕವಾಗಿ ಬಳಸುತ್ತಿರುವ 'ಕ್ಯೂಆರ್ ಕೋಡ್' ಕೂಡ ಆರಂಭದ ದಿನಗಳಲ್ಲಿ ಮೋಸದ ಪ್ರಕರಣಗಳಿಗೆ ಸಿಕ್ಕಿ ಹೆಸರು ಕೆಡಿಸಿಕೊಂಡಿತ್ತು. ಆದರೆ, ಅಂತಹ ಸಮಸ್ಯೆಗಿಂತ ಅದರ ಅನುಕೂಲವೇ ಹೆಚ್ಚಿದ್ದುದರಿಂದ ಜನರು ಬಳಸುವುದನ್ನು ಮುಂದುವರಿಸಿದರು.

ಎಲ್ಲ ದೇಶಗಳಲ್ಲೂ ಇದನ್ನು ತಡೆಯುವುದು ಹೇಗೆ ಎಂಬ ವಿವಿಧ ರೀತಿಯ ಸಂಶೋಧನೆಗಳು ನಡೆಯುತ್ತಿವೆ. ಇತ್ತೀಚೆಗೆ ಇಂಟರ್‌ಪೋಲ್ ಕೂಡ ಈ ಸಂಬಂಧ ಮಾಹಿತಿ ಹಾಗೂ ತಿಳಿವಳಿಕೆಯ ವರದಿಯನ್ನು ಬಿಡುಗಡೆ ಮಾಡಿತ್ತು. ಆರ್‌ಬಿಐ ಅಂತೂ ಕಾಲಕಾಲಕ್ಕೆ ಯುಪಿಐ ಹಾಗೂ ಕಾರ್ಡ್ ಟ್ರಾನ್ಸಾಕ್ಷನ್ ಮಾಡುವಾಗ ಯಾವ ಯಾವ ರೀತಿಯ ಎಚ್ಚರಿಕೆ ವಹಿಸಬೇಕು ಎಂಬ ಮಾಹಿತಿ ಪ್ರಕಟಿಸುತ್ತಲೇ ಇರುತ್ತವೆ. ಅಲ್ಲದೆ, ವಹಿವಾಟು ನಡೆಯುವ ಕಾಲಾವಧಿಯ ಹೆಚ್ಚಳ ಮಾಡುವುದಕ್ಕೂ ಎನ್‌ಪಿಸಿಐ ಚರ್ಚೆ ನಡೆಸಿದ್ದು, ಅದು ಶೀಘ್ರದಲ್ಲೇ ಜಾರಿಗೆ ಬರುವ ಸಾಧ್ಯತೆ ಇದೆ. ಇದರಿಂದ, ಹಣ ಕಡಿತವಾದ ನಂತರ ಅದರಲ್ಲಿ ಮೋಸವಾಗಿದ್ದು ಗೊತ್ತಾದರೆ, ತಕ್ಷಣ ಕ್ರಮ ತೆಗೆದುಕೊಂಡು ಅದನ್ನು ಸರಿಪಡಿಸುವುದಕ್ಕೆ ಜನರ ಬಳಿ ಸಮಯ ಇರುತ್ತದೆ.

ಜೊತೆಗೆ, ಜನಸಾಮಾನ್ಯರಿಗೆ ಎಸ್‌ಎಂಎಸ್ ಮೂಲಕವೂ ಆರ್‌ಬಿಐ ಮಾಹಿತಿ ಕಳುಹಿಸುತ್ತಿರುತ್ತದೆ. ಈ ಮೋಸ ತಡೆಯುವ ಏಕೈಕ ಉಪಾಯವೆಂದರೆ, ಜನರೇ ಈ ಬಗ್ಗೆ ಜಾಗೃತರಾಗುವುದು!

ಈ ರೀತಿ ಹಠಾತ್ತನೆ ಮೋಸದ ಪ್ರಕರಣಗಳು ವರ್ಷದಿಂದ ವರ್ಷಕ್ಕೆ ಹೆಚ್ಚಳವಾಗುತ್ತಿರುವುದಕ್ಕೆ ಮೂಲಕಾರಣವೇ ಡಿಜಿಟಲ್ ವಹಿವಾಟಿನಲ್ಲಿ ಆಗುತ್ತಿರುವ ಏರಿಕೆ! ಡಿಜಿಟಲ್ ಟ್ರಾನ್ಸಾಕ್ಷನ್ ಎಂದರೆ ಬರಿ ಯುಪಿಐ ಅಲ್ಲ. ಡೆಬಿಟ್ ಮತ್ತು ಕ್ರೆಡಿಟ್ ಕಾರ್ಡ್ ಬಳಸಿ ವೆಬ್‌ಸೈಟ್‌ಗಳಲ್ಲಿ, ಇಕಾಮರ್ಸ್ ಸೈಟ್‌ಗಳಲ್ಲಿ ಮಾಡುವ ವಹಿವಾಟುಗಳೂ ಸೇರಿರುತ್ತವೆ. ಯುಪಿಐ ವ್ಯವಸ್ಥೆ ಬಂದಮೇಲೆ ಹಣಕಾಸಿಗೆ ಸಂಬಂಧಿಸಿದ ತಂತ್ರಜ್ಞಾನವನ್ನು ಬಳಸುವ ಬಗ್ಗೆ ಅಷ್ಟೇನೂ ತಿಳಿವಳಿಕೆ ಇಲ್ಲದಿದ್ದವರೂ ಬಳಸುವುದಕ್ಕೆ ಶುರು ಮಾಡಿದರು. ಇದರಿಂದ ಆದ ಸಮಸ್ಯೆಯೇನೆಂದರೆ, ಅವರನ್ನು ಸುಲಭವಾಗಿ ಸುಳ್ಳು ಹೇಳಿ ಯಾಮಾರಿಸಬಹುದು.


ಒಂದು ವಿಧದ ಸುಳ್ಳು ಹೆಚ್ಚು ಪ್ರಚಾರವಾಗಿ ಅದು ಜನರಿಗೆ ತಿಳಿದುಹೋಯಿತು – ಎನ್ನುವ ಹೊತ್ತಿಗೆ ಮೋಸಗಾರರು ಹೊಸ ತಂತ್ರವನ್ನು ಹುಡುಕಿಕೊಳ್ಳುತ್ತಾರೆ.

ಉದಾಹರಣೆಗೆ, ಯುಪಿಐ ಬಂದ ಹೊಸತರಲ್ಲಿ ಹಣ ವಿನಂತಿ ಮಾಡುವುದಕ್ಕೆ ಸಂಬಂಧಿಸಿದಂತೆ ಎನ್‌ಪಿಸಿಐ ಒದಗಿಸಿದ್ದ ಅಷ್ಟೇನೂ ಜನಪ್ರಿಯವಾಗದಿದ್ದ ಒಂದು ಸೌಲಭ್ಯವನ್ನು ಬಳಸಿಕೊಂಡು ಮೋಸಗಾರರು ಜನರನ್ನು ಯಾಮಾರಿಸುತ್ತಿದ್ದರು. ಆದರೆ, ಈಗ ಜನರಿಗೆ ಆ ತಂತ್ರ ತಿಳಿದುಹೋಗಿದೆ. ಹೀಗಾಗಿ, ಬೇರೆ ಬೇರೆ ತಂತ್ರಗಳನ್ನು ಹುಡುಕಿಕೊಂಡಿದ್ದಾರೆ.

ಇದೆಲ್ಲದರಾಚೆ, ಕಳೆದೊಂದು ವರ್ಷದಿಂದ ಎನ್‌ಪಿಸಿಐ ತನ್ನ ಯುಪಿಐ ಸೌಲಭ್ಯದಲ್ಲಿ ಹಲವು ಹೊಸ ಹೊಸ ಸೌಲಭ್ಯಗಳನ್ನು ತರುತ್ತಿದೆ. 'ಡೆಲಿಗೇಟ್ ಪೇಮೆಂಟ್' ಎಂಬ ವ್ಯವಸ್ಥೆಯನ್ನು ಯುಪಿಐನಲ್ಲಿ ಪರಿಚಯಿಸುವುದಕ್ಕೆ ಎನ್‌ಪಿಸಿಐ ಸದ್ಯ ಚಿಂತನೆ ನಡೆಸಿದೆ. ಇದರಿಂದ ಬ್ಯಾಂಕ್ ಅಕೌಂಟ್ ಇಲ್ಲದವರೂ ಕೂಡ ಯುಪಿಐ ಬಳಕೆ ಮಾಡುವುದಕ್ಕೆ ಸಾಧ್ಯವಾಗುತ್ತದೆ. ಇದು ಅನುಕೂಲವೇನೋ ಹೌದು. ಆದರೆ, ಸಮಸ್ಯೆ ಇರುವುದು ಈಗಾಗಲೇ ಯುಪಿಐನಲ್ಲಿ ಮೋಸದ ಪ್ರಕರಣಗಳು ಹೆಚ್ಚುತ್ತಿವೆ. ಇದನ್ನೂ ಪರಿಚಯಿಸಿದರೆ, ಮೋಸಗಾರರಿಗೆ ಜನರನ್ನು ಮೋಸ ಮಾಡುವುದು ಇನ್ನಷ್ಟು ಸುಲಭವಾದೀತು ಎಂಬುದು ತಂತ್ರಜ್ಞಾನಪರಿಣತರು ಆತಂಕವನ್ನು ವ್ಯಕ್ತಪಡಿಸುತ್ತಿದ್ದಾರೆ. ❖

ಮಿದುಳನ್ನು ತೊಳೆಯುವ ಫಿಲ್ಟರ್

ನೇಸರ ಕಾಡನಕುಪ್ಪೆ



ವಯಸ್ಸಾದಂತೆ ಮಿದುಳಲ್ಲೂ ಕಸ ಸೇರುತ್ತದೆ – ಎಂದರೆ ನೀವು ನಂಬುತ್ತೀರ? ಇದು ಮನಸ್ಸಿಗೆ ಸಂಬಂಧಿಸಿದ ಕಸವಲ್ಲ; ಇದು ನರ, ರಕ್ತ, ಮಾಂಸಗಳಿರುವ ಅಂಗಕ್ಕೆ ಸೇರಿದ ವಿಚಾರ. ರಕ್ತನಾಳಗಳ ಮೂಲಕ ಹರಿಯುವ ರಕ್ತವು ತಾನು ಹರಿದ ಜಾಗದಲ್ಲೆಲ್ಲಾ ತನ್ನೊಳಗಿರುವ ವಿಷಪೂರಿತ ಅಂಶಗಳನ್ನು ಸೇರಿಸುತ್ತಿರುತ್ತದೆ. ಮಿದುಳು ದೇಹದ ಯುಕ್ತಿ ಕೇಂದ್ರವಾಗಿರುವ ಕಾರಣ ಅದು ಹಲವು ಅಡ್ಡಪರಿಣಾಮಗಳನ್ನು ಉಂಟುಮಾಡುತ್ತದೆ. ವಿಜ್ಞಾನಿಗಳು ಈಗ 'ಮಿದುಳಕಸ'ವನ್ನು ತೊಳೆಯುವ ತಂತ್ರಜ್ಞಾನವನ್ನು ಕಂಡುಹಿಡಿದಿರುವುದು ಕುತೂಹಲ ಮೂಡಿಸಿದೆ.

ಅಲ್ಜೈಮರ್ಸ್, ಪಾರ್ಕಿನ್‌ಸನ್‌ನಂತಹ ಕಾಯಿಲೆಗಳಿಗೆ ಪರಿಪೂರ್ಣವಾದ ಮದ್ದನ್ನು ಇದುವರೆಗೂ ಕಂಡುಹಿಡಿಯಲಾಗಿಲ್ಲ. ಮಿದುಳು ಕುಸಿಯುವ ಕಾಯಿಲೆ ಅಲ್ಜೈಮರ್ಸ್ ಆದರೆ, ನರಕೋಶಗಳಿಗೆ ಸಂಬಂಧಿಸಿದ ಕಾಯಿಲೆ ಪಾರ್ಕಿನ್‌ಸನ್; ಈ ಎರಡೂ ಕಾಯಿಲೆಗಳು ಮರೆಗುಳಿತನ, ದೇಹದ ಭಾಗಗಳ ಮೇಲಿನ ನಿಯಂತ್ರಣ ಕಳೆದುಕೊಳ್ಳುವಿಕೆಯಂಥ ಸಮಸ್ಯೆಗಳನ್ನು ಉಂಟುಮಾಡುತ್ತವೆ. ಈ ಎರಡೂ ಕಾಯಿಲೆಗಳಿಗೆ ಮಿದುಳು ಮಲಿನಗೊಳ್ಳುವುದೂ ಒಂದು ಕಾರಣ ಎಂದು ವಿಜ್ಞಾನಿಗಳು ನಂಬಿದ್ದಾರೆ. ಹಾಗಾದರೆ, ಮಿದುಳನ್ನು ಶುಚಿಗೊಳಿಸಿದರೆ ಈ ಕಾಯಿಲೆಗಳಿಗೂ ಪರಿಹಾರ ಸಿಗುವುದೇ ಎನ್ನುವುದು ಸದ್ಯದ ಪ್ರಶ್ನೆ.

ಅಮೆರಿಕದ ನ್ಯೂಯಾರ್ಕ್‌ನ ಮಾನ್ರೋ ಕೌಂಟಿಯ ಯೂನಿವರ್ಸಿಟಿ ಆಫ್ ರಾಚೆಸ್ಟರ್‌ನ ಹಜೀಮ್ ಎಂಜಿನಿಯರಿಂಗ್ ಕಾಲೇಜಿನ ಮೆಕ್ಯಾನಿಕಲ್ ಎಂಜಿನಿಯರಿಂಗ್ ಪ್ರಾಧ್ಯಾಪಕ ಡಗ್ಲಸ್ ಕೆಲ್ಲೇ ಈ ಸಂಶೋಧನೆ ಮಾಡಿದ್ದಾರೆ. ಇವರ ಪ್ರಕಾರ, 'ಮಿದುಳಿನಲ್ಲಿ ಕಸವು ಒಮ್ಮೆಗೇ ಸೇರುವುದಲ್ಲ. ಅದು ನಾವು ಜನ್ಮಪಡೆದ ದಿನದಿಂದಲೂ ಆಗಿರುತ್ತದೆ. ಆದರೆ, ವರ್ಷಗಳು ಕಳೆದಂತೆ, ಅದರಲ್ಲೂ ಮಧ್ಯವಯಸ್ಸನ್ನು ದಾಟಿದಮೇಲೆ ಈ ಕಸದ ಪ್ರಮಾಣ ಹೆಚ್ಚಾಗಿ ಮಿದುಳು ತನ್ನ ಆರೋಗ್ಯವನ್ನು ಕಳೆದುಕೊಳ್ಳುತ್ತದೆ. ಆಗ, ಅದು ಹಲವು ಬಗೆಯ ಆರೋಗ್ಯ ಸಂಬಂಧಿತ ಸಮಸ್ಯೆಗಳನ್ನು ಉಂಟುಮಾಡುತ್ತದೆ. ಇದನ್ನು ತಪ್ಪಿಸಲು ರಕ್ತಶೋಧ ತಂತ್ರಜ್ಞಾನ ಪೂರಕವಾಗಿದೆ' ಎಂದು ವಿಶ್ಲೇಷಿಸಿದ್ದಾರೆ.

ಏನಿದು ತಂತ್ರಜ್ಞಾನ?

ಮಿದುಳಿಗೆ ರಕ್ತವನ್ನು ಪೂರೈಸುವ ಮುಖ್ಯವಾಹಿನಿಗೆ ಫಿಲ್ಟರ್ ಅನ್ನು ಅಳವಡಿಸುವ ತಂತ್ರಜ್ಞಾನವಿದು. ಇದು ನ್ಯಾನೋ ತಂತ್ರಜ್ಞಾನವಾಗಿರುವ ಕಾರಣ ಅತಿ ಸೂಕ್ಷ್ಮವಾದುದು. ಹಾಗಾಗಿ, 'ಫಿಲ್ಟರ್' ಎಂದರೆ ಒಂದು ದೊಡ್ಡ ಸಾಧನ ಎಂದು ಭಾವಿಸಬೇಕಿಲ್ಲ. ಅತಿ ಸೂಕ್ಷ್ಮವಾದ ಕೇವಲ ಒಂದು ಕೂದಲಿನ ಸಾವಿರದ ಒಂದು ಭಾಗದಷ್ಟು ಸಣ್ಣದಾಗಿರುವ ಸಾಧನವೊಂದನ್ನು ರಕ್ತನಾಳದೊಳಗೆ ಸೇರಿಸಲಾಗುತ್ತದೆ. ರಕ್ತದಲ್ಲಿರುವ ಅನಗತ್ಯ ಪ್ರೊಟೀನ್, ಕೊಬ್ಬಿನಾಂಶ, ಕೆಲವು ರಾಸಾಯನಿಕಗಳ ದತ್ತಾಂಶವನ್ನು ಈ ಸಾಧನದಲ್ಲಿ ಸೇರಿಸಲಾಗಿರುತ್ತದೆ. ಈ ಬಗೆಯ ಅಂಶಗಳನ್ನು ಗುರುತಿಸುವ ಈ ಸಾಧನವು ತನ್ನಲ್ಲಿನ ವಿದ್ಯುತ್ ಸಂಜ್ಞೆಗಳ ಮೂಲಕ ಅಲ್ಲೇ ಅದನ್ನು ನಾಶ ಮಾಡುತ್ತದೆ.

ಅಲ್ಲದೇ. ಈ ಸಾಧನದೊಳಗೆ ಯಾವುದೇ ಬಗೆಯ ಬ್ಯಾಟರಿಯಾಗಲಿ, ಅಥವಾ ಕೃತಕ ಸಾಧನವಾಗಲಿ ಇರುವುದಿಲ್ಲ. ಮಿದುಳಿನಲ್ಲಿ ಸಾಕಷ್ಟು ಪ್ರಮಾಣದಲ್ಲೇ ವಿದ್ಯುತ್ ಉತ್ಪಾದನೆಯಾಗುತ್ತದೆ. ಅದನ್ನೇ ಬಳಸಿಕೊಳ್ಳುವ ಈ ಸಾಧನವು ತನ್ನ ಕೆಲಸ ಮಾಡುತ್ತದೆ. ಹಾಗಾಗಿ, ಈ ಸಾಧನದಿಂದ ಯಾವುದೇ ಅಡ್ಡಪರಿಣಾಮ ಇರಲಾರದು. ಜೊತೆಗೆ, ಈ ಸಾಧನವೇ ಸಾವಯವ ವಸ್ತುಗಳಿಂದ ಮಾಡಲ್ಪಟ್ಟಿದೆ. ಆದ್ದರಿಂದ ದೇಹ ಈ ಸಾಧನವನ್ನು ತಿರಸ್ಕರಿಸದೇ ಸ್ವೀಕರಿಸುತ್ತದೆ ಎನ್ನುವುದನ್ನು ಡಗ್ಲಸ್ ವಿಶ್ಲೇಷಿಸಿದ್ದಾರೆ.

ಈಗಾಗಲೇ ಇಲಿಗಳು ಮೇಲೆ ಈ ಸಾಧನವನ್ನು ಪ್ರಯೋಗ ಮಾಡಲಾಗಿದೆ. ಈ ಪ್ರಯೋಗ ಯಶಸ್ವಿಯೂ ಆಗಿದೆ. ವೈದ್ಯಕೀಯ ನೈತಿಕ ಸಮಿತಿಯ ಒಪ್ಪಿಗೆ ಸಿಕ್ಕ ಕೂಡಲೇ ಮಾನವಪ್ರಯೋಗ ಕೂಡ ನಡೆಯಲಿದೆ. ಮಾನವಪ್ರಯೋಗಕ್ಕೆ ಸ್ವಯಂಪ್ರೇರಿತರಾಗಿ ಬರುವ ರೋಗಿಗಳನ್ನು ಬಳಸಲಾಗುತ್ತದೆ. ಈ ಪ್ರಯೋಗ ಯಶಸ್ವಿಯಾದಲ್ಲಿ ಅನೇಕ ಮಿದುಳು ಸಂಬಂಧಿತ ಸಮಸ್ಯೆಗಳಿಗೆ ಪರಿಹಾರ ಸಿಗಲಿರುವುದು ಈ ಸಂಶೋಧನೆಯ ಹೆಗ್ಗಳಿಕೆಯಾಗಿದೆ.

ಕೇವಲ ಸಾಧನ ಮಾತ್ರವೇ ಅಲ್ಲದೇ, ಔಷಧದ ಸ್ವರೂಪದಲ್ಲೂ ಈ ತಂತ್ರಜ್ಞಾನವನ್ನು ಬಳಸುವ ಉದ್ದೇಶವಿದೆ. ಕೆಲವು ರೋಗಿಗಳಿಗೆ ಸಾಧನ ಅಳವಡಿಸಲು ಹಲವು ಕಾರಣಗಳಿಂದ ಸಾಧ್ಯವಾಗುವುದಿಲ್ಲ. ಉದಾಹರಣೆಗೆ ವಯಸ್ಸು, ಚರ್ಮ ಅಥವಾ ಮಾಂಸಖಂಡಗಳಲ್ಲಿರುವ ದೋಷ ಮುಂತಾದ ಕಾರಣಗಳು ಕೆಲವೊಮ್ಮೆ ರೋಗಿಗಳನ್ನು ಶಸ್ತ್ರಚಿಕಿತ್ಸೆಗೆ ಅರ್ಹರನ್ನಾಗಿ ಮಾಡುವುದಿಲ್ಲ. ಅಂತಹ ರೋಗಿಗಳಿಗೆ ಔಷಧದ ಮೂಲಕ ನ್ಯಾನೋ ರೋಬೋಗಳನ್ನು ಸೇರಿಸಿ ಅದನ್ನು ಚುಚ್ಚುಮದ್ದಿನ ಮೂಲಕ ದೇಹಕ್ಕೆ ಸೇರಿಸುವ ಸಿದ್ಧತೆಯೂ ನಡೆದಿದೆ. ಈ ತಂತ್ರಜ್ಞಾನ ಸಿದ್ಧವಾದರೆ, ಕಡಿಮೆ ಅಪಾಯದ ಮೂಲಕ ರೋಗಿಗಳಿಗೆ ಚಿಕಿತ್ಸೆ ನೀಡುವ ಸಾಧ್ಯತೆಯೂ ಇರಲಿದೆ.

ಈ ತಂತ್ರಜ್ಞಾನವನ್ನು ಸಾಧ್ಯವಾದಷ್ಟೂ ಕೈಗೆಟುಕುವ ಬೆಲೆಯಲ್ಲಿ ಅಭಿವೃದ್ಧಿಪಡಿಸಬೇಕು ಎನ್ನುವುದು ಡಗ್ಲಸ್ ಅವರ ಆಶಯವಾಗಿದೆ. ಏಕೆಂದರೆ ಅಲ್ಜೈಮರ್ಸ್ ಅಥವಾ ಪಾರ್ಕಿನ್‌ಸನ್ ಕಾಯಿಲೆಗಳು ರೋಗಿ ಹಾಗೂ ಕುಟುಂಬ ಸದಸ್ಯರನ್ನು ಆಗಲೇ ಸಾಕಷ್ಟು ಆರ್ಥಿಕವಾಗಿಯೂ ಮಾನಸಿಕವಾಗಿಯೂ ಕುಗ್ಗಿಸಿರುತ್ತವೆ. ❖

ಎಸ್ಸೆಸ್ಸೆಲ್ಸಿ- ಪಿಯುಸಿ ಪರೀಕ್ಷೆ ದಿಕ್ಸೂಚಿ

ಎಸ್ಸೆಸ್ಸೆಲ್ಸಿ –ವಿಜ್ಞಾನ

ವಿದ್ಯುಚ್ಛಕ್ತಿ

12) ಓಮ್ ನಿಯಮವನ್ನು ಬರೆಯಿರಿ

ಉತ್ತರ:- ಸ್ಥಿರವಾದ ತಾಪಮಾನದಲ್ಲಿ ವಿದ್ಯುತ್ ಮಂಡಲದಲ್ಲಿನ ಲೋಹದ ತಂತಿಯ ನಡುವಿನ ವಿಭವಾಂತರ V ಯು ಅದರ ಮೂಲಕ ಹರಿಯುವ ವಿದ್ಯುತ್ ಪ್ರವಾಹಕ್ಕೆ ನೇರ ಅನುಪಾತದಲ್ಲಿರುತ್ತದೆ. ಇದನ್ನು ಓಮ್‌ನ ನಿಯಮ ಎಂದು ಕರೆಯುವರು.

13) ರೋಧ ಬಗ್ಗೆ ಬರೆಯಿರ

ಉತ್ತರ:– ಒಂದು ನಿರ್ದಿಷ್ಟ ತಾಪಮಾನದಲ್ಲಿ, ಲೋಹದ ತಂತಿಯ ಸ್ಥಿರಾಂಕ R ಆಗಿದ್ದು, ಇದನ್ನು ರೋಧ ಎಂದು ಕರೆಯುವರು. ಇದು ವಾಹಕದ ಗುಣವಾಗಿದ್ದು ವಾಹಕದಲ್ಲಿ ಪ್ರವಹಿಸುವ ಆವೇಶಗಳ ಪ್ರವಾಹವನ್ನು ವಿರೋಧಿಸುತ್ತದೆ. ರೋಧದ SI ಏಕಮಾನವು ಓಮ್, ಇದನ್ನು ಗ್ರೀಕ್ ಅಕ್ಷರವಾದ Ω ನಿಂದ ಗುರುತಿಸುವರು.

ಯಾವುದೇ ಒಂದು ರೋಧಕದ ಮೂಲಕ ಪ್ರವಹಿಸುವ ವಿದ್ಯುತ್ ಪ್ರವಾಹವು ಅದರ ರೋಧಕ್ಕೆ ವಿಲೋಮ ಅನುಪಾತವನ್ನು ಹೊಂದಿರುತ್ತದೆ

14) ಯಾವುದಕ್ಕೆ ಬದಲಾಯಿಸಬಹುದಾದ ರೋಧ (variable resistance) ಎನ್ನುವರು.?

ಉತ್ತರ:– ವಿದ್ಯುತ್ ವಿಭವಾಂತರದ ಮೂಲವನ್ನು ಬದಲಾಯಿಸದೆ ವಿದ್ಯುತ್‌ಪ್ರವಾಹವನ್ನು ನಿಯಂತ್ರಿಸಲು ಉಪಯೋಗಿಸುವ ಘಟಕವನ್ನು ಬದಲಾಯಿಸಬಹುದಾದ ರೋಧ(**variable resistance**) ಎನ್ನುವರು.

15) ಯಾವುದಕ್ಕೆ ರೋಧಕ ಎಂದು ಕರೆಯುವರು ಕರೆಯುವರು?

ಉತ್ತರ:– ವಾಹಕದ ಮೂಲಕ ಇಲೆಕ್ಟ್ರಾನ್‌ಗಳ ಪ್ರವಾಹವು ಅದರ ರೋಧದಿಂದಾಗಿ ಕುಂಠಿತವಾಗುತ್ತದೆ. ಒಂದು ನಿರ್ದಿಷ್ಟ ಗಾತ್ರದ ವಸ್ತುವು ಕಡಿಮೆ ರೋಧವನ್ನು ಒದಗಿಸಿದರೆ ಅದು ಉತ್ತಮ ವಾಹಕವಾಗಿದೆ. ಒಂದು ವಾಹಕವು ಗಣನೀಯವಾದ ರೋಧವನ್ನು ಹೊಂದಿದ್ದರೆ ಅದನ್ನು ರೋಧಕ ಎಂದು ಕರೆಯುವರು. ಹೆಚ್ಚಿನ ರೋಧವನ್ನು ಒಡ್ಡುವ ಒಂದೇ ಗಾತ್ರದ ವಸ್ತುವು ದುರ್ಬಲ ವಾಹಕವಾಗಿದೆ.

16) ವಾಹಕದ ರೋಧವು ಅವಲಂಬಿಸಿರುವ ಅಂಶಗಳು ಯಾವುವು?

ಉತ್ತರ:– ವಾಹಕದ ರೋಧವು ಅವಲಂಬಿಸಿರುವ ಅಂಶಗಳು ವಾಹಕದ ರೋಧವು (1) ವಾಹಕದ ಉದ್ದ (2) ವಾಹಕದ ಅಡ್ಡಕೊಯ್ತ (3) ವಸ್ತುವಿನ ಪ್ರಾಕೃತಿಕ ಗುಣ ಇವುಗಳ ಮೇಲೆ ಅವಲಂಬಿಸಿದೆ. ನಿಖರವಾದ ಮಾಪನಗಳ ಪ್ರಕಾರ, ಯಾವುದೇ ಏಕರೂಪ ಲೋಹೀಯ ವಾಹಕದ ರೋಧವು ಅದರ ಉದ್ದಕ್ಕೆ **(l)** ನೇರ ಅನುಪಾತದಲ್ಲಿರುತ್ತದೆ ಮತ್ತು ಅದರ ಅಡ್ಡಕೊಯ್ತಕ್ಕೆ **(A)** ವಿಲೋಮಾನುಪಾತದಲ್ಲಿರುತ್ತದೆ.

17) ರೋಧ ಶೀಲತೆಯ ಅಂತಾರಾಷ್ಟ್ರೀಯ ಏಕಮಾನ ಯಾವುದು?

ಉತ್ತರ:– ರೋಧಶೀಲತೆಯ ಅಂತರಾಷ್ಟ್ರೀಯ ಏಕಮಾನ **Ω m** (ಓಮ್–ಮೀಟರ್). ಇದು ಯಾವುದೇ ಒಂದು ವಸ್ತುವಿನ ವಿಶಿಷ್ಟ ಗುಣವಾಗಿದೆ.

18) ಲೋಹಗಳು ಮತ್ತು ಮಿಶ್ರ ಲೋಹಗಳ ರೋಧಶೀಲತೆ ಎಷ್ಟು ವ್ಯಾಪ್ತಿಯನ್ನು ಹೊಂದಿರುತ್ತವೆ.?

ಉತ್ತರ:– ಲೋಹಗಳು ಮತ್ತು ಮಿಶ್ರ ಲೋಹಗಳು 10^{-8} **Ωm** ನಿಂದ 10^{-6} **Ωm**ನ ವ್ಯಾಪ್ತಿಯ ಕಡಿಮೆ ರೋಧಶೀಲತೆಯನ್ನು ಹೊಂದಿರುತ್ತವೆ.

19) ಕೆಳಗಿನ ಲೋಹಗಳ ರೋಧಶೀಲತೆಯನ್ನು ತಿಳಿಸಿ

ಬೆಳ್ಳಿ, ತಾಮ್ರ, ಅಲ್ಯುಮಿನಿಯಂ, ಟಂಗಸ್ಟನ್, ನಿಕ್ಕಲ್, ಕಬ್ಬಿಣ, ಕ್ರೋಮಿಯಂ, ಪಾದರಸ, ಮ್ಯಾಂಗನೀಸ್

ಉತ್ತರ:–

ಲೋಹ	ರೋಧಶೀಲತೆ (Ω m)
ಬೆಳ್ಳಿ	1.60×10^{-8}
ತಾಮ್ರ	1.62×10^{-8}
ಅಲ್ಯುಮಿನಿಯಂ	2.63×10^{-8}
ಟಂಗ್‌ಸ್ಟನ್	5.20×10^{-8}
ನಿಕ್ಕಲ್	6.84×10^{-8}
ಕಬ್ಬಿಣ	10.0×10^{-8}
ಕ್ರೋಮಿಯಂ	12.9×10^{-8}
ಪಾದರಸ	94.0×10^{-8}
ಮ್ಯಾಂಗನೀಸ್	1.84×10^{-6}

20) ಒಂದೇ ರೀತಿಯ ವಸ್ತುವಿನ ದಪ್ಪ ತಂತಿ ಅಥವಾ ತೆಳು ತಂತಿಯನ್ನು ಒಂದೇ ಮೂಲಕ್ಕೆ ಸಂಪರ್ಕಿಸಿದಾಗ ಯಾವ ತಂತಿಯ ಮೂಲಕ ವಿದ್ಯುತ್ ಸುಲಭವಾಗಿ ಹರಿಯುತ್ತದೆ? ಮತ್ತು ಹೇಗೆ?

ಉತ್ತರ:– ದಪ್ಪದಾದ ತಂತಿಯ ಮೂಲಕ ವಿದ್ಯುತ್ ಸುಲಭವಾಗಿ ಹರಿಯುತ್ತದೆ, ಏಕೆಂದರೆ ತಂತಿ ದಪ್ಪವಾಗಿದ್ದರೆ ರೋಧವು ಕಡಿಮೆ ಆಗುತ್ತದೆ. ಈ ಕಾರಣದಿಂದ ದಪ್ಪ ತಂತಿ ಅವಶ್ಯ

21) ವಿದ್ಯುತ್ ಟೋಸ್ಟರ್ ಮತ್ತು ವಿದ್ಯುತ್ ಇಸ್ತ್ರಿ ಪೆಟ್ಟಿಗೆಯ ಸುರುಳಿಗಳನ್ನು ಶುದ್ಧ ಲೋಹದ ಬದಲಿಗೆ ಮಿಶ್ರ ಲೋಹಗಳಿಂದ ತಯಾರಿಸುತ್ತಾರೆ. ಏಕೆ?

ಉತ್ತರ:– ಮಿಶ್ರಲೋಹದ ರೋಧಶೀಲತೆಯು ಅದರ ಘಟಕ ಲೋಹಗಳಿಗಿಂತಲೂ ಸಾಮಾನ್ಯವಾಗಿ ಹೆಚ್ಚಿನದಾಗಿರುತ್ತದೆ, ಮಿಶ್ರಲೋಹಗಳು ಹೆಚ್ಚಿನ ತಾಪಾಮಾನದಲ್ಲಿ ಸುಲಭವಾಗಿ ದಹಿಸುವುದಿಲ್ಲ, ಈ ಕಾರಣಕ್ಕಾಗಿ ಇವುಗಳನ್ನು ವಿದ್ಯುತ್ ಉಷ್ಣೋತ್ಪಾದನಾ ಸಾಧನಗಳಾದ ವಿದ್ಯುತ್ ಇಸ್ತ್ರೀ ಪೆಟ್ಟಿಗೆ, ಟೋಸ್ಟರ್ ಇತ್ಯಾದಿಗಳಲ್ಲಿ ಸಾಮಾನ್ಯವಾಗಿ ಬಳಸಲಾಗುತ್ತದೆ.

22) ಕೋಷ್ಟಕ 11.2ರಲ್ಲಿನ ದತ್ತಾಂಶವನ್ನು ಬಳಸಿಕೊಂಡು ಈ ಕೆಳಗಿನ ಪ್ರಶ್ನೆಗಳನ್ನು ಉತ್ತರಿಸಿ

ಎ) ಕಬ್ಬಿಣ ಮತ್ತು ಪಾದರಸಗಳಲ್ಲಿ ಉತ್ತಮವಾದ ವಾಹಕ ಯಾವುದು?

ಬಿ) ಯಾವ ವಸ್ತುವು ಅತ್ಯುತ್ತಮ ವಾಹಕವಾಗಿದೆ?

ಉತ್ತರ:– (ಎ) ಕಬ್ಬಿಣದ ರೋಧಶೀಲತೆ = 10.0×10^{-8}

ಪಾದರಸದ ರೋಧಶೀಲತೆ = 94.0×10^{-8}

ಪಾದರಸದ ರೋಧಶೀಲತೆ ಕಬ್ಬಿಣಕ್ಕಿಂತ ಹೆಚ್ಚಾಗಿದೆ, ಇದರಿಂದ ನಮಗೆ ತಿಳಿದು ಬರುವುದೇನೆಂದರೆ ಕಬ್ಬಿಣವು ಪಾದರಸಕ್ಕಿಂತ ಉತ್ತಮ ವಾಹಕವಾಗಿದೆ.

(ಬಿ) ಬೆಳ್ಳಿಯ ರೋಧಶೀಲತೆ ಕಡಿಮೆ ಇರುವುದರಿಂದ ಇದು ಉತ್ತಮ ವಾಹಕವಾಗಿದೆ.

23) (a) ವಿದ್ಯುತ್ ಬಲ್ಬ್‌ನ ತಂತುಗಳ ರೋಧವು 1200 Ω ಆಗಿದ್ದು, 220 V ಮೂಲದಿಂದ ವಿದ್ಯುತ್ ಬಲ್ಬ್ ಸೆಳೆಯುವ ವಿದ್ಯುತ್ ಪ್ರವಾಹ ಎಷ್ಟು?

(b) ಹೀಟರ್‌ನ ಸುರುಳಿಯ ರೋಧವು 100 Ω ಆಗಿದ್ದು, 220 V ಮೂಲದಿಂದ ವಿದ್ಯುತ್ ಹೀಟರ್‌ನ ಸುರುಳಿಯು ಸೆಳೆಯುವ ವಿದ್ಯುತ್ ಪ್ರವಾಹ ಎಷ್ಟು?

ಉತ್ತರ:–

(ಮುಂದುವರಿಯುವುದು……….)

ಎಸ್ಸೆಸ್ಸೆಲ್ಸಿ ಸಮಾಜ ವಿಷಯದ ಇಂಗ್ಲಿಷ್ ಮಾಧ್ಯಮದ ಪ್ರಶ್ನೋತ್ತರಕ್ಕಾಗಿ ಕ್ಯುಆರ್ ಕೋಡ್ ಸ್ಕ್ಯಾನ್ ಮಾಡಿ

ಮಾಹಿತಿ: ಜ್ಞಾನಭಾರತಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ, ಕೇಂದ್ರ

II PUC BIOLOGY

MOLECULAR BASIS OF INHERITANCE

53. What is the importance of gene regulation?

Ans:-Regulation of genes is important because –

i) All the genes are not required by all the cells.

ii) Development of an individual takes place in a number of steps, each controlled by a separate set of genes.

iii) It provides for metabolism of a particular chemical by particular cell.

iv) It helps in production of specific chemicals by specific cells, e.g., RuBP by chlorenchy,ma cells, haemoglobin by erythropoietic cells.

54 Mention the differences between the Prokaryotic DNA and Eukaryotic DNA.

Ans:- The differences between the Prokaryotic DNA and Eukaryotic DNA are –

Prokaryotic DNA	Eukaryotic DNA
They are located in the cytoplasm.	They are located in the nucleus, mito- chondria and plastids.
They are circular in shape.	They are linear in nucleus, circular in chloroplasts and mitochondria.
They are not associated with the histones.	They are associated with the histones.
They form tangled mass on degeneration.	Two chains of polynuclotide appear on degeneration.
They code for lesser number of the proteins.	They code for large number of proteins.
Extra chromo-somal DNA may be present in the form of plasmids.	Plasmids are absent.
They do not contain the Non – coding introns.	The Non – coding introns are present and with major part of DNA non-functional.

55. What is satellite DNA in a genome? Explain its role in DNA fingerprinting.

Ans:- Satellite DNA – is a DNA segment having long sequences of short repetitive DNA which is called satellite because it separates out during density gradient ultra-centrifugation. Some of these (11 -60 base pairs, minisatellites) are hypervariable, being specific to the individuals, their parents and progeny because they show the same degree of polymorphism.

Satellite DNA fragments are separated with the help of restriction enzymes. Being variable, they are called restriction fragment length polymorphism (RFLP). They are matched to determine identity and relationship in DNA fingerprinting.

56. What are the applications of DNA fingerprinting?

Ans:- Applications of DNA fingerprinting are -

(1) It is being increasingly used to identify and convict criminals like murderers and rapists. DNA typing can also prevent unnecessary harassment to an innocent suspect.

(2) It can also be used for solving the cases of disputed parentage.

(3) The technique is used to identify the victims of disasters like plane crash, building collapse, fire breakouts, floods, earthquakes etc., where conventional methods of identification are not possible.

(4) DNA typing has also revolutionized anthropology.

(5) DNA studies have established a common link among all the members of the animal kingdom especially, the link between the humans and the apes.

57. What is Human Genome Project and what are its goals?

Ans:- Human Genome Project was a project of sequencing the entire human genome and find out its characteristics features.

The goals of Human Genome Project are –

(a) Sequencing – To sequence the whole human genome and find out the entire range of base pairs.

(b) Storage – To store the information in data bases.

(c) Analysis – To develop and conduct computer based analysis

(d) Genes – Identify all the genes (approximately 20,000 – 30,000)

(e)Technology – Transfer technologies developed during the project to other sectors like industry, agriculture and forestry.

(f) ELSI – To solve any ethical, legal and social issues that may arise from the project

58. What are the Prospects and Implications of Human Genome Project?

Ans:- The Prospects and Implications of Human Genome Project are – 1. Completion of first phase of human genome project has been compared to discovery of antibiotics because it has opened a vast data base of knowledge about various aspects of human genome.

(Contd…..)

ಪುಟಾಣಿಗಳ ಮೇಲೆ ಲೈಂಗಿಕ ದೌರ್ಜನ್ಯ: ವ್ಯಾಪಕ ಆಕ್ರೋಶ

ಮಹಾರಾಷ್ಟ್ರದ ಠಾಣೆ ಜಿಲ್ಲೆಯಲ್ಲಿ ಘಟನೆ ● ಬಾಲಕಿಯರ ಶೌಚಾಲಯದಲ್ಲಿ ದುಷ್ಕೃತ್ಯ

ಮುಂಬೈ (ಪಿಟಿಐ): ನರ್ಸರಿಗೆ ಹೋಗುವ ಮೂರು ಹಾಗೂ ನಾಲ್ಕು ವರ್ಷದ ಇಬ್ಬರು ಬಾಲಕಿಯರ ಮೇಲೆ 23 ವರ್ಷದ ಸ್ವಚ್ಛತಾ ಕಾರ್ಮಿಕನೊಬ್ಬ ಬಾಲಕಿಯರ ಶೌಚಾಲಯದಲ್ಲಿ ಲೈಂಗಿಕ ದೌರ್ಜನ್ಯ ಎಸಗಿರುವುದು ಮಹಾರಾಷ್ಟ್ರದಾದ್ಯಂತ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಠಾಣೆ ಜಿಲ್ಲೆಯ ಬದ್ಲಾಪುರ ಪ್ರದೇಶದ ಶಾಲೆಯೊಂದರಲ್ಲಿ ಈ ದೌರ್ಜನ್ಯ ನಡೆದಿದೆ. ದೌರ್ಜನ್ಯವನ್ನು ಖಂಡಿಸಿ, ಸಾರ್ವಜನಿಕರು ಮಂಗಳವಾರ ಬದ್ಲಾಪುರ ರೈಲು ನಿಲ್ದಾಣದಲ್ಲಿ 'ರೈಲು ತಡೆ' ನಡೆಸಿದರು. ಸಾವಿರಾರು ಜನರು ಜಮಾವಣೆಗೊಂಡಿದ್ದರು. ಈ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.



ಸಾರ್ವಜನಿಕರು ಬದ್ಲಾಪುರ ರೈಲು ನಿಲ್ದಾಣದಲ್ಲಿ ಮಂಗಳವಾರ 'ರೈಲು ತಡೆ' ನಡೆಸಿ ಆಕ್ರೋಶ ವ್ಯಕ್ತಪಡಿಸಿದರು —ಪಿಟಿಐ ಚಿತ್ರ

ಶಾಲೆಯೊಳಗೆ ಪುಟ್ಟ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ, ಕೋಲ್ಕತ್ತದ ವೈದ್ಯ ವಿದ್ಯಾರ್ಥಿನಿ ಮೇಲಿನ ಅತ್ಯಾಚಾರ, ಹತ್ಯೆ ಪ್ರಕರಣಕ್ಕಿಂತ ಹೆಚ್ಚು ಘೋರ

ವಿಜಯ್ ವಡೆಟ್ಟೀವಾರ್, ವಿಧಾನಸಭೆ ವಿರೋಧ ಪಕ್ಷದ ನಾಯಕ

ಶಾಲಾ ಆಡಳಿತ ಮಂಡಳಿಯ ಪ್ರಕರಣದ ಕುರಿತು ನಿರ್ಲಕ್ಷ್ಯ ವಹಿಸಿದರೆ, ಅಪರಾಧಿಗಳನ್ನು ರಕ್ಷಿಸುವ ಕೆಲಸ ಮಾಡಿದರೆ, ಶಾಲೆಯ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು

ಏಕನಾಥ ಶಿಂದೆ, ಮುಖ್ಯಮಂತ್ರಿ

ರೈಲು ತಡೆ ನಡೆಸುತ್ತಿರುವವರು ಯಾರೂ ಬದ್ಲಾಪುರದ ಜನರಲ್ಲ. ಅವರೆಲ್ಲರೂ ವಿರೋಧ ಪಕ್ಷಗಳ ಕಾರ್ಯಕರ್ತರು. ಜನರನ್ನು ಪಕ್ಕದ ಹಳ್ಳಿಗಳಿಂದ ಕರೆತರಲಾಗಿದೆ

ಕಿಸನ್ ಕಥೋರೆ, ಬಿಜೆಪಿ ಶಾಸಕ

ಲಾಡ್ಲಿ ಬೆಹನಾ ಯೋಜನೆ ಜಾರಿ ಮಾಡುತ್ತಾರೆ. ಆದರೆ, ಇಲ್ಲಿ ಮಕ್ಕಳು-ಮಹಿಳೆಯರಿಗೆ ರಕ್ಷಣೆ ಇಲ್ಲ. ಮಹಿಳೆಯರ ಮೇಲಾಗುವ ಅಪರಾಧಗಳನ್ನು ಇಟ್ಟುಕೊಂಡು ಕೆಲವೇ ರಾಜ್ಯಗಳನ್ನು ಗುರಿಯಾಗಿಸಲಾಗುತ್ತದೆ

ಉದ್ಧವ್ ಠಾಕ್ರೆ, ಮುಖ್ಯಸ್ಥ, ಶಿವಸೇನಾ (ಉದ್ಧವ್ ಬಣ)

ರೈಲು ತಡೆ: ತೀವ್ರಗೊಂಡ ಪ್ರತಿಭಟನೆ

ಆರೋಪಿಯ ಬಂಧನದ ಬಳಿಕ, ಶಾಲೆಯ ಆಡಳಿತ ಮಂಡಳಿಯು ಯಾವುದೇ ಕ್ರಮ ಕೈಗೊಂಡಿರಲಿಲ್ಲ. ಈ ಬಗ್ಗೆ ಆಕ್ರೋಶಗೊಂಡ ಸಂತ್ರಸ್ತ ಬಾಲಕಿಯರ ಪೋಷಕರು ಮಂಗಳವಾರ ಬೆಳಿಗ್ಗೆಯೇ ಇತರ ಪೋಷಕರು, ಸ್ಥಳೀಯರೊಂದಿಗೆ ಶಾಲೆಯ ಮುಂದೆ ಪ್ರತಿಭಟನೆ ನಡೆಸಿದರು. ನಂತರ ದೊಡ್ಡ ಸಂಖ್ಯೆಯಲ್ಲಿ ಸಾರ್ವಜನಿಕರು ಸ್ಥಳಕ್ಕೆ ದೌಡಾಯಿಸತೊಡಗಿದರು. ಆಕ್ರೋಶಗೊಂಡಿದ್ದ ಜನರು ಶಾಲೆಯ ಮೇಲೆ ಕಲ್ಲು ತೂರಾಟ ನಡೆಸಿದರು. ಕಿಟಕಿ ಗಾಜುಗಳನ್ನು ಒಡೆದರು.

ನಂತರ, ಸಾವಿರಾರು ಸಾರ್ವಜನಿಕರು ಬದ್ಲಾಪುರ ರೈಲು ನಿಲ್ದಾಣದಲ್ಲಿ ಜಮಾವಣೆಗೊಂಡು 'ರೈಲು ತಡೆ' ನಡೆಸಿದರು. ಸುಮಾರು 10 ಪ್ರಮುಖ ರೈಲುಗಳ ಸಂಚಾರ ಮಾರ್ಗಗಳನ್ನು ಬದಲಿಸಲಾಯಿತು. ಪ್ರಯಾಣಿಕರ ಅನುಕೂಲಕ್ಕೆ ಬಸ್ ವ್ಯವಸ್ಥೆ ಮಾಡಲಾಗಿತ್ತು. ರೈಲು ತಡೆ ನಿಲ್ಲಿಸಲು ಪೊಲೀಸರು ಹಾಗೂ ಮುಖ್ಯಮಂತ್ರಿ ಅವರ ಮನವಿಯ ಬಳಿಕವೂ ಪ್ರತಿಭಟನೆಯನ್ನು ಜನರು ನಿಲ್ಲಿಸಲಿಲ್ಲ. ಬೆಳಿಗ್ಗೆಯಿಂದ ಆರಂಭವಾದ ಪ್ರತಿಭಟನೆಯು 10 ಗಂಟೆಗಳ ಕಾಲ ಮುಂದುವರಿಯಿತು. ರಾತ್ರಿ ವೇಳೆ ರೈಲು ಸಂಚಾರ ಆರಂಭಗೊಂಡಿತು.

'ಬಾಲಕಿಯರಿಗೆ ನ್ಯಾಯ ನೀಡಿ', 'ತಪ್ಪಿತಸ್ಥರನ್ನು ನೇಣಿಗೆ ಹಾಕಿ' ಎಂದು ಪ್ರತಿಭಟನಾನಿರತರು ಘೋಷಣೆಗಳನ್ನು ಕೂಗಿದರು. ವಿವಿಧ ಸಂಘಟನೆಗಳು ಬದ್ಲಾಪುರ ಬಂದ್‌ಗೂ ಕರೆ ನೀಡಿದ್ದವು.

ಏನಿದು ಘಟನೆ?

'ಆಗಸ್ಟ್ 12 ಮತ್ತು 13ರಂದು ಈ ಘಟನೆ ನಡೆದಿದೆ. ಬೆಳಗಿನ ಮೊದಲ ತರಗತಿ ಮುಗಿದ ಬಳಿಕ ಬಾಲಕಿಯರು ಶೌಚಾಲಯಕ್ಕೆ ತೆರಳಿದ್ದಾರೆ. ಈ ವೇಳೆ ಆರೋಪಿಯು ಲೈಂಗಿಕ ದೌರ್ಜನ್ಯ ನಡೆಸಿದ್ದಾನೆ' ಎಂದು ಮಾಧ್ಯಮಗಳು ವರದಿ ಪ್ರಕಟಿಸಿವೆ.

'ಆಗಸ್ಟ್ 15ರಂದು ನಾಲ್ಕು ವರ್ಷದ ಬಾಲಕಿಯು ತನ್ನ ಖಾಸಗಿ ಅಂಗದಲ್ಲಿ ನೋವಾಗುತ್ತಿರುವ ಕುರಿತು ಪೋಷಕರಿಗೆ ತಿಳಿಸಿದ್ದಾಳೆ. ತುಸು ಹೆಚ್ಚು ವಿಚಾರಿಸಿದಾಗ ತನ್ನ ಸ್ನೇಹಿತೆಗೂ ಇದೇ ರೀತಿ ಆಗಿರುವುದಾಗಿ ಆಕೆ ತಿಳಿಸಿದ್ದಾಳೆ. ಪೋಷಕರು, ಮೂರು ವರ್ಷದ ಬಾಲಕಿಯ ಪೋಷಕರನ್ನು ವಿಚಾರಿಸಿದ್ದಾರೆ. ಆಗ ಅವರು, 'ಹೌದು ನಮ್ಮ ಮಗಳೂ ಎರಡು ಮೂರು ದಿನಗಳಿಂದ ಶಾಲೆಗೆ ಹೋಗಲು ಹೆದರುತ್ತಿದ್ದಾಳೆ' ಎಂದಿದ್ದಾರೆ' ಎಂದು ವರದಿಗಳಲ್ಲಿ ಹೇಳಲಾಗಿದೆ.

ಎಫ್‌ಐಆರ್ ದಾಖಲಿಸಲು 11 ತಾಸು ವಿಳಂಬ

'ಖಾಸಗಿ ಕ್ಲಿನಿಕ್‌ವೊಂದರಲ್ಲಿ ತಮ್ಮ ಮಕ್ಕಳ ವೈದ್ಯಕೀಯ ಪರೀಕ್ಷೆಯನ್ನು ಪೋಷಕರು ಮಾಡಿಸಿದ್ದಾರೆ. ಲೈಂಗಿಕ ದೌರ್ಜನ್ಯ ನಡೆದಿರುವುದು ಪರೀಕ್ಷೆಯಲ್ಲಿ ದೃಢಪಡುತ್ತದೆ. ಬಳಿಕ, ಪೋಷಕರು ಪೊಲೀಸ್ ಠಾಣೆಗೆ ದೂರು ನೀಡಲು ಹೋಗುತ್ತಾರೆ. ಆದರೆ, ಠಾಣೆಯ ಇನ್‌ಸ್ಪೆಕ್ಟರ್ ಶುಭದಾ ಶಿತೋಲೆ ಪೋಕ್ಸೊ ಕಾಯ್ದೆ ಅಡಿ ದೂರು ದಾಖಲಿಸಿಕೊಳ್ಳಲು ನಿರಾಕರಿಸುತ್ತಾರೆ' ಎಂದು ಮಾಧ್ಯಮಗಳು ವರದಿ ಮಾಡಿವೆ.

'ನಿಮ್ಮ ಆರೋಪಗಳನ್ನು ಖಚಿತಪಡಿಸಿಕೊಳ್ಳದೇ ದೂರು ದಾಖಲಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಶುಭದಾ ಹೇಳಿದ್ದಾರೆ. 11 ತಾಸುಗಳವರೆಗೆ ಪೋಷಕರನ್ನು ಠಾಣೆಯಲ್ಲಿಯೇ ಕಾಯಿಸಿದ ಬಳಿಕ, ಬಾಲಕಿಯರ ವೈದ್ಯಕೀಯ ಪರೀಕ್ಷೆ ನಡೆಸಿ, ನಂತರ ಶುಭದಾ ಅವರು ಪೋಕ್ಸೊ ಕಾಯ್ದೆಯಡಿ ದೂರು ದಾಖಲಿಸಿಕೊಳ್ಳುತ್ತಾರೆ. ಆಗಸ್ಟ್ 17ರಂದು ಆರೋಪಿಯನ್ನು ಬಂಧಿಸಲಾಗುತ್ತದೆ' ಎಂದು ವರದಿಗಳಲ್ಲಿ ಉಲ್ಲೇಖಿಸಲಾಗಿದೆ.

ಈಗಾಗಲೇ ಶುಭದಾ ಅವರನ್ನು ವರ್ಗಾವಣೆ ಮಾಡಲಾಗಿದೆ. ಪೊಲೀಸರು ದೂರು ದಾಖಲಿಸಿಕೊಳ್ಳಲು ವಿಳಂಬ ಮಾಡಿದ ಕುರಿತು ಮಕ್ಕಳ ಹಕ್ಕುಗಳ ರಾಷ್ಟ್ರೀಯ ಆಯೋಗವು ಗಮನ ಹರಿಸಿದ್ದು, 'ಯಾಕಾಗಿ ದೂರು ದಾಖಲಿಸಿಕೊಳ್ಳುವಲ್ಲಿ ವಿಳಂಬ ಮಾಡಲಾಯಿತು' ಎಂದು ಪ್ರಶ್ನಿಸಿದೆ. ಘಟನೆ ಕುರಿತು ತನಿಖೆ ನಡೆಸಲು ಆಯೋಗದ ತಂಡವೊಂದು ಬದ್ಲಾಪುರಕ್ಕೆ ತೆರಳಿದೆ.

ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗವು ಘಟನೆ ಕುರಿತು ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡಿದೆ. ಎರಡು ವಾರಗಳ ಒಳಗೆ ಘಟನೆ ಕುರಿತು ವಿಸ್ತೃತ ವರದಿ ನೀಡುವಂತೆ ಸರ್ಕಾರಕ್ಕೆ ಹೇಳಿದೆ. ಜೊತೆಗೆ, ಸಂತ್ರಸ್ತ ಬಾಲಕಿಯರಿಗೆ ಶಾಲಾ ಆಡಳಿತ ಮಂಡಳಿ ಅಥವಾ ಆಡಳಿತವು ಆಪ್ತ ಸಮಾಲೋಚನೆಯ ವ್ಯವಸ್ಥೆ ಕಲ್ಪಿಸಿದೆಯೇ ಎಂಬ ಕುರಿತೂ ವರದಿ ನೀಡುವಂತೆ ಕೇಳಿದೆ.

ಪ್ರತಿಭಟನೆಯ ಬಳಿಕ ಸರ್ಕಾರದ ಕ್ರಮಗಳು

- ಐಜಿಪಿ ಆರತಿ ಸಿಂಗ್ ನೇತೃತ್ವದಲ್ಲಿ ಎಸ್‌ಐಟಿ ರಚನೆ
- ಮಹಿಳೆಯರು ಮತ್ತು ಬಾಲಕಿಯರ ಸುರಕ್ಷೆಗೆ ಉದ್ಯೋಗದ ಸ್ಥಳದಲ್ಲಿ, ಶಾಲೆಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು 'ವಿಶಾಖ ಸಮಿತಿ'ಯು ನೀಡಿದ ಶಿಫಾರಸನ್ನು ಅನುಸರಿಸದ ಶಾಲೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು
- ಆರೋಪಿ ಮೇಲೆ ಪೋಕ್ಸೊ ಕಾಯ್ದೆ ಅಡಿಯಲ್ಲಿ ಹಾಗೂ ಅತ್ಯಾಚಾರ ಯತ್ನ ಪ್ರಕರಣ ದಾಖಲಿಸಲು ಸೂಚಿಸಿದ ಮುಖ್ಯಮಂತ್ರಿ ಏಕನಾಥ ಶಿಂಧೆ
- ಪ್ರಕರಣವನ್ನು ತ್ವರಿತಗತಿಯಲ್ಲಿ ವಿಚಾರಣೆ ನಡೆಸಲಾಗುವುದು. ಜೊತೆಗೆ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ನೇಮಕ ಮಾಡಲಾಗುವುದು
- ಪೋಷಕರ ದೂರಿನ ತನಿಖೆಯಲ್ಲಿ ವಿಳಂಬ ಧೋರಣೆ ಅನುಸರಿಸಿದ ಹಿರಿಯ ಪೊಲೀಸ್ ಅಧಿಕಾರಿ ಸೇರಿದಂತೆ ಮೂವರ ಅಮಾನತು

ಪ್ರಾಂಶುಪಾಲ ಅಮಾನತು: ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆಯೇ ಶಾಲೆಯ ಆಡಳಿತ ಮಂಡಳಿಯು ಶಾಲೆಯ ಪ್ರಾಂಶುಪಾಲ, ಶಿಕ್ಷಕಿ, ಮಹಿಳಾ ಸಹಾಯಕಿಯೊಬ್ಬರನ್ನು ಅಮಾನತು ಮಾಡಿದೆ.

ಹಲವು ಪ್ರಶ್ನೆಗಳನ್ನು ಹುಟ್ಟು ಹಾಕಿದ ಘಟನೆ

- ಪುರುಷ ಸ್ವಚ್ಛತಾ ಕಾರ್ಮಿಕರೊಬ್ಬರಿಗೆ, ಬಾಲಕಿಯರ ಶೌಚಾಲಯದ ನಿರ್ವಹಣೆಯ ಜವಾಬ್ದಾರಿಯನ್ನು ಯಾಕೆ ನೀಡಲಾಗಿತ್ತು. ಮಹಿಳಾ ಸ್ವಚ್ಛತಾ ಕಾರ್ಮಿಕರನ್ನು ಏಕೆ ನೇಮಕ ಮಾಡಿಕೊಂಡಿರಲಿಲ್ಲ
- ದೂರು ದಾಖಲಾದ ಬಳಿಕ, ಪೊಲೀಸರು ಶಾಲೆಗೆ ಭೇಟಿ ನೀಡಿ ತನಿಖೆ ನಡೆಸಿದ್ದಾರೆ. ಈ ವೇಳೆ ಶಾಲೆಯಲ್ಲಿರುವ ಯಾವ ಸಿ.ಸಿ.ಟಿ.ವಿ ಕ್ಯಾಮೆರಾಗಳೂ ಕಾರ್ಯನಿರ್ವಹಿಸುತ್ತಿಲ್ಲ ಎಂದು ಶಾಲೆಯವರು ಪೊಲೀಸರಿಗೆ ತಿಳಿಸಿದ್ದಾರೆ. ಶಾಲೆಗಳಲ್ಲಿ ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಅಳವಡಿಸಬೇಕು ಹಾಗೂ ಅವನ್ನು ಸೂಕ್ತವಾಗಿ ನಿರ್ವಹಿಸಬೇಕು ಎಂಬ ಕಠಿಣ ನಿಯಮವಿದ್ದರೂ ಯಾಕಾಗಿ ಶಾಲೆಯಲ್ಲಿ ಸಿ.ಸಿ.ಟಿ.ವಿ ಕ್ಯಾಮೆರಾಗಳು ಕೆಟ್ಟು ನಿಂತಿದ್ದವು

ಬ್ರಿಟನ್‌ನ ಶೆವ್ನಿಂಗ್ ವಿದ್ಯಾರ್ಥಿ ವೇತನ, ಶಿಷ್ಯ ವೇತನಕ್ಕೆ ಅರ್ಜಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಬ್ರಿಟನ್ ಸರ್ಕಾರವು ಜಾಗತಿಕಮಟ್ಟದ ತನ್ನ ಪ್ರಮುಖ ಯೋಜನೆ 'ಶೆವ್ನಿಂಗ್ ವಿದ್ಯಾರ್ಥಿವೇತನ ಮತ್ತು ಶಿಷ್ಯವೇತನ'ದ 2024-25ನೇ ಸಾಲಿನ ಕೋರ್ಸ್‌ಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಸುಸ್ಥಿರ ಅಭಿವೃದ್ಧಿ, ಹವಾಮಾನ ಬದಲಾವಣೆ, ಶುದ್ಧ ಇಂಧನ, ಹಣಕಾಸು ಸೇವೆಗಳು, ಸೈಬರ್ ಭದ್ರತೆ, ತಂತ್ರಜ್ಞಾನ, ಆರ್ಥಿಕ ಬೆಳವಣಿಗೆ, ನಾವೀನ್ಯ, ನಗರಾಭಿವೃದ್ಧಿ, ಲಿಂಗಸಮಾನತೆ, ಶಿಕ್ಷಣ, ಸಾರ್ವಜನಿಕ ನೀತಿ, ಕಾನೂನು, ವಿದೇಶಾಂಗ ನೀತಿ, ಅಭಿವೃದ್ಧಿ, ಅಂತರ-ರಾಷ್ಟ್ರೀಯ ಸಂಬಂಧಗಳು, ಮಾಧ್ಯಮ, ಬಿಕ್ಕಟ್ಟು, ರಕ್ಷಣಾ ಅಧ್ಯಯನಗಳು ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಅಧ್ಯಯನ ನಡೆಸಲು ಈ ಯೋಜನೆ ಅನುವು ಮಾಡಿಕೊಡಲಿದೆ.

ಸಾರ್ವಜನಿಕ, ಖಾಸಗಿ ಮತ್ತು ಸರ್ಕಾರಿ ವಲಯದಲ್ಲಿನ ವೃತ್ತಿಪರರು, ಅಧಿಕಾರಶಾಹಿಗಳು, ಮಾಧ್ಯಮ ಪ್ರತಿನಿಧಿಗಳು, ಶಿಕ್ಷಣ ತಜ್ಞರು, ವಿಜ್ಞಾನಿಗಳು, ಉದ್ಯಮಿಗಳು, ನಾಗರಿಕರು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಯಾವುದೇ ವಯೋಮಿತಿಯ ನಿರ್ಬಂಧವಿಲ್ಲ.

ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾಗುವವರಿಗೆ ಯಾವುದೇ ಕೆಲಸದಲ್ಲಿ ಎರಡು ವರ್ಷದ ಅನುಭವದ ಅಗತ್ಯವಿದೆ. ಇವರು ಬ್ರಿಟನ್ ವಿಶ್ವವಿದ್ಯಾಲಯದಲ್ಲಿ ಯಾವುದೇ ವಿಷಯದಲ್ಲಿ ಒಂದು ವರ್ಷದ ಸ್ನಾತಕೋತ್ತರ ಪದವಿ ಕೋರ್ಸ್‌ಗಳಲ್ಲಿ ಅಧ್ಯಯನ ಮಾಡಬಹುದು. ಶಿಷ್ಯ ವೇತನಕ್ಕೆ ಆಯ್ಕೆಯಾಗುವ ವೃತ್ತಿಪರರಿಗೆ ಕೆಲಸದಲ್ಲಿ 7 ವರ್ಷಗಳ ಅನುಭವದ ಅವಶ್ಯಕತೆಯಿದೆ. ನಿರ್ದಿಷ್ಟ ಕೆಲಸದ ಕ್ಷೇತ್ರದಲ್ಲಿ ತಮ್ಮ ಜ್ಞಾನ ಮತ್ತು ಪರಿಣತಿ ವಿಸ್ತರಿಸಲು ಬಯಸುತ್ತಿರುವ ವೃತ್ತಿಪರರು ಬ್ರಿಟನ್ ವಿಶ್ವವಿದ್ಯಾಲಯಗಳಲ್ಲಿ 8ರಿಂದ11 ವಾರಗಳ ಅವಧಿಯ ಕೋರ್ಸ್‌ಗಳನ್ನು ಅಧ್ಯಯನ ಮಾಡಲು ಅವಕಾಶ ಸಿಗಲಿದೆ.

ಆಸಕ್ತರು ಹೆಚ್ಚಿನ ಮಾಹಿತಿ ಮತ್ತು ಅರ್ಜಿ ಸಲ್ಲಿಸಲು ಅಧಿಕೃತ ವೆಬ್‌ಸೈಟ್ https://www.chevening.org/scholarship/india/ ಭೇಟಿ ನೀಡಬಹುದು ಎಂದು ಬೆಂಗಳೂರಿನಲ್ಲಿ ಕಚೇರಿ ಹೊಂದಿರುವ ಬ್ರಿಟನ್ ಡೆಪ್ಯುಟಿ ಹೈಕಮಿಷನ್ ಅವರ ಅಧಿಕೃತ, ರಾಜಕೀಯ ಸಲಹೆಗಾರ ಮಂಜುನಾಥ್ ಕೆ.ಎಸ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಯನಾಡ್: ಇನ್ನೂ ಪತ್ತೆಯಾಗದ 119 ಮಂದಿ

ಪ್ರಜಾವಾಣಿ ವಾರ್ತೆ

ತಿರುವನಂತಪುರ: 'ಜುಲೈ 30ರಂದು ವಯನಾಡ್‌ನಲ್ಲಿ ಸಂಭವಿಸಿದ ಗುಡ್ಡ ಕುಸಿತದಲ್ಲಿ 17 ಕುಟುಂಬಗಳ 65 ಮಂದಿ ಕಣ್ಮರೆಯಾಗಿದ್ದಾರೆ' ಎಂದು ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ತಿಳಿಸಿದ್ದಾರೆ.

'ಇದುವರೆಗೂ ಗುರುತಿಸಲಾದ 179 ಮೃತದೇಹಗಳ ಪೈಕಿ ಐದು ಮಂದಿ ಅವಲಂಬಿತರನ್ನು ಪತ್ತೆಹಚ್ಚಲು ಸಾಧ್ಯವಾಗಿಲ್ಲ. ಮೃತಪಟ್ಟ 59 ಮಂದಿ ಅವಲಂಬಿತರಿಗೆ ಸರ್ಕಾರದಿಂದ ತಲಾ ₹6 ಲಕ್ಷ ಆರ್ಥಿಕ ನೆರವು ನೀಡಲಾಗಿದೆ' ಎಂದು ಅವರು ಹೇಳಿದ್ದಾರೆ.

'ಭೂಕುಸಿತದಿಂದ ಈವರೆಗೆ 119 ಮಂದಿ ಕಣ್ಮರೆಯಾಗಿದ್ದಾರೆ. 91 ಮಂದಿ ಸಂಬಂಧಿಕರ ಡಿಎನ್‌ಎ ಮಾದರಿ ಸಂಗ್ರಹಿಸಲಾಗಿದ್ದು, ಅದನ್ನು ಹೊಂದಾಣಿಕೆ ಮಾಡಿ ನೋಡುವ ಕೆಲಸವು ಪ್ರಗತಿಯಲ್ಲಿದೆ' ಎಂದು ವಿವರಿಸಿದ್ದಾರೆ.

'ನಿರಾಶ್ರಿತ ಶಿಬಿರದಲ್ಲಿ ಆಶ್ರಯ ಪಡೆದಿರುವವರಿಗೆ ತಾತ್ಕಾಲಿಕ ನೆಲೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ. ತಜ್ಞರು, ಸ್ಥಳೀಯರು, ಜನಪ್ರತಿನಿಧಿಗಳ ಜೊತೆ ಚರ್ಚೆ ನಡೆಸಿದ ಪುನರ್‌ವಸತಿ ಯೋಜನೆಯನ್ನು ಅಂತಿಮಗೊಳಿಸಲಾಗುವುದು' ಎಂದು ಅವರು ತಿಳಿಸಿದ್ದಾರೆ.

ಸಂಕ್ಷಿಪ್ತ ಸುದ್ದಿ

ದೆಹಲಿ: ಆಸ್ಪತ್ರೆಗಳಿಗೆ ಬಾಂಬ್ ಬೆದರಿಕೆ

ನವದೆಹಲಿ (ಪಿಟಿಐ): ರಾಷ್ಟ್ರ ರಾಜಧಾನಿಯ 100ಕ್ಕೂ ಅಧಿಕ ಆಸ್ಪತ್ರೆಗಳಿಗೆ ಮಂಗಳವಾರ ಬಾಂಬ್ ಬೆದರಿಕೆಯ ಇ- ಮೇಲ್‌ಗಳು ಬಂದ ಬೆನ್ನಲ್ಲೇ ತೀವ್ರ ಶೋಧ ನಡೆಸಲಾಯಿತು. ಆದರೆ, ಇವು ಹುಸಿ ಎಂದು ಗೊತ್ತಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ದೆಹಲಿ, ಎನ್‌ಸಿಆರ್ ವಲಯದಲ್ಲಿ ಇತ್ತೀಚೆಗೆ 150ಕ್ಕೂ ಹೆಚ್ಚು ಶಾಲೆಗಳಿಗೆ ಇಂತಹುದೇ ಇ-ಮೇಲ್ ಬೆದರಿಕೆ ಕರೆ ಬಂದಿದ್ದು, ತೀವ್ರ ಗೊಂದಲ ಮೂಡಿತ್ತು.

ಅಧಿಕಾರಿಗಳ ಪ್ರಕಾರ, ಏಮ್ಸ್, ಸಫ್ದರ್‌ಜಂಗ್, ಸರ್ ಗಂಗಾರಾವ್, ಅಪೋಲೊ, ಫೋರ್ಟಿಸ್ ಸೇರಿ ಹಲವು ಆಸ್ಪತ್ರೆಗಳಿಗೆ ಬೆದರಿಕೆಯ ಇ-ಮೇಲ್ ಬಂದಿತ್ತು. ನಂಗ್ಲೋಯಿ ಆಸ್ಪತ್ರೆಗೆ ಮಧ್ಯಾಹ್ನ 1.04ಕ್ಕೆ ಹಾಗೂ ಪ್ರೈಮಸ್ ಆಸ್ಪತ್ರೆಗೆ ಮಧ್ಯಾಹ್ನ 1.07ಕ್ಕೆ ಬಾಂಬ್ ಬೆದರಿಕೆಯ ಕರೆ ಬಂದಿದೆ ಎಂದು ದೆಹಲಿ ಅಗ್ನಿಶಾಮಕ ಸೇವೆಗಳ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಚಾಣಕ್ಯ ಮಾಲ್, ಸಾಕೇತ್ ಸೆಲೆಕ್ಟ್ ಸಿಟಿ ವಾಕ್ ಮಾಲ್, ಆ್ಯಂಬಿಯೆನ್ಸ್ ಮಾಲ್, ಡಿಎಲ್‌ಎಫ್ ಮಾಲ್‌ಗಳಿಗೂ ಬೆದರಿಕೆ ಇ-ಮೇಲ್‌ಗಳು ಬಂದಿವೆ.

ಅಜ್ಮೀರ್ ಲೈಂಗಿಕ ಪ್ರಕರಣ: ಮತ್ತೆ ಆರು ಮಂದಿಗೆ ಜೀವಾವಧಿ ಶಿಕ್ಷೆ

ಜೈಪುರ (ಪಿಟಿಐ): 100ಕ್ಕೂ ಹೆಚ್ಚು ಹೆಣ್ಣುಮಕ್ಕಳ ಮೇಲೆ ಅತ್ಯಾಚಾರ ಎಸಗಿ, ಬೆದರಿಕೆ ಹಾಕಿದ್ದ ಅಜ್ಮೀರ್ ಲೈಂಗಿಕ ಪ್ರಕರಣದಲ್ಲಿ ಮತ್ತೆ ಆರು ಮಂದಿಗೆ ಜೀವಾವಧಿ ಶಿಕ್ಷೆ ವಿಧಿಸಿ ಇಲ್ಲಿನ ಪೋಕ್ಸೊ ನ್ಯಾಯಾಲಯ ತೀರ್ಪು ನೀಡಿದೆ.

ಪೋಕ್ಸೊ ಕೋರ್ಟ್ ನ್ಯಾಯಾಧೀಶರಾದ ರಂಜನ್ ಸಿಂಗ್, ಪ್ರತಿ ದೋಷಿಗೆ ₹5 ಲಕ್ಷ ದಂಡವನ್ನೂ ವಿಧಿಸಿದ್ದಾರೆ. 1992ರಲ್ಲಿ ಈ ಪ್ರಕರಣ ನಡೆದಿದೆ. ಶಾಲೆ ಮತ್ತು ಕಾಲೇಜಿಗೆ ಹೋಗುತ್ತಿದ್ದ 11ರಿಂದ 20 ವರ್ಷ ವಯಸ್ಸಿನ ಹೆಣ್ಣು ಮಕ್ಕಳನ್ನು ಪರಿಚಯಿಸಿಕೊಂಡು ಅವರ ನಗ್ನ ಚಿತ್ರ ತೆಗೆದು, ಬಳಿಕ ಅವರ ಮೇಲೆ ಅತ್ಯಾಚಾರ ಎಸಗಲಾಗಿತ್ತು. ಪ್ರಕರಣದಲ್ಲಿ 18 ಮಂದಿಯನ್ನು ಅಪರಾಧಿಗಳೆಂದು ಗುರುತಿಸಲಾಗಿದೆ.


ಭಾರತದಲ್ಲಿ ಮಹಿಳೆಯರು ಮತ್ತು ಪುರುಷರು–2023 ವರದಿ ಬಿಡುಗಡೆ

ಲಿಂಗ ಸಮಾನತೆ ಕನಸಿನ ಗಂಟು?

ಪ್ರಜಾವಾಣಿ ವಾರ್ತೆ

ಅಭಿವೃದ್ಧಿ ಗುರಿಗಳ ಸಾಧನೆಗೆ ಲಿಂಗ ಸಮಾನತೆ ಬಹಳ ಮುಖ್ಯ. ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳಲ್ಲಿ ಕೂಡ ಲಿಂಗ ಸಮಾನತೆ ಮತ್ತು ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಲಾಗಿದೆ. ಜಗತ್ತಿನಲ್ಲಿಯೇ ಮಹಿಳೆಯರು ಅತ್ಯಂತ ಹಿಂದುಳಿದ ವರ್ಗವಾಗಿದ್ದು, ಭಾರತದ ಸ್ಥಿತಿ ಅದಕ್ಕಿಂತ ಭಿನ್ನವೇನಲ್ಲ. ದೇಶವು ಆರ್ಥಿಕ ಅಭಿವೃದ್ಧಿ ಸಾಧಿಸಲು ಮಹಿಳೆಯರಿಗೆ ಎಲ್ಲ ವಲಯಗಳಲ್ಲಿಯೂ ಸಮಾನ ಅವಕಾಶಗಳನ್ನು ಕಲ್ಪಿಸಿ, ಸಬಲೀಕರಣಗೊಳಿಸುವುದು ಬಹಳ ಮುಖ್ಯ. ಈ ದಿಸೆಯಲ್ಲಿ ವಸ್ತುಸ್ಥಿತಿ ಮೇಲೆ ಬೆಳಕು ಚೆಲ್ಲಲು ಕೇಂದ್ರದ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯವು ವಿವಿಧ ಇಲಾಖೆಗಳ ಲಿಂಗ–ಸಂಬಂಧಿ ಅಂಕಿ ಸಂಖ್ಯೆಗಳನ್ನು ಒಳಗೊಂಡಿರುವ 'ಭಾರತದಲ್ಲಿ ಮಹಿಳೆಯರು ಮತ್ತು ಪುರುಷರು–2023' ಎನ್ನುವ ವರದಿ ಬಿಡುಗಡೆ ಮಾಡಿದೆ. 2011ರ ಜನಗಣತಿ ಆಧರಿಸಿರುವ ಈ ವರದಿಯಲ್ಲಿ, 2020, 2023ರವರೆಗಿನ ಲಿಂಗಾನುಪಾತ, ಆರೋಗ್ಯ, ಉದ್ಯೋಗ, ಮಹಿಳಾ ಸಬಲೀಕರಣ, ಶಿಕ್ಷಣ, ಆರ್ಥಿಕತೆ ರಾಜಕೀಯಕ್ಕೆ ಸಂಬಂಧಿಸಿದ ಅಂಕಿ ಅಂಶಗಳಿವೆ. ಭಾರತದಲ್ಲಿ ಮಹಿಳೆಯರ ಹಿಂದುಳಿದಿರುವಿಕೆ, ಈಗ ಅವರು ಸಾಧಿಸುತ್ತಿರುವ ಪ್ರಗತಿಯ ಚಿತ್ರಣವನ್ನು ವರದಿ ನೀಡುತ್ತದೆ.

ಆಧಾರ: ವುಮೆನ್ ಅಂಡ್ ಮೆನ್ ಇನ್ ಇಂಡಿಯಾ–2023 ವರದಿ




ಹೆಚ್ಚಲಿದೆ ಲಿಂಗಾನುಪಾತ

2011ರ ಜನಗಣತಿಯ ಪ್ರಕಾರ ಭಾರತದ ಜನಸಂಖ್ಯೆ 121.1 ಕೋಟಿ. ಈ ಪೈಕಿ ಶೇ 48.5ರಷ್ಟು ಮಹಿಳೆಯರು. 2036ರ ವೇಳೆಗೆ ದೇಶದ ಜನಸಂಖ್ಯೆ 152.2 ಕೋಟಿಗೆ ಏರುವ ಅಂದಾಜಿದ್ದು, ಮಹಿಳೆಯರ ಸಂಖ್ಯೆಯಲ್ಲೂ ಕೊಂಚ ಹೆಚ್ಚಳವಾಗಲಿದೆ. ಒಟ್ಟು ಜನಸಂಖ್ಯೆಯಲ್ಲಿ ಶೇ 48.8ರಷ್ಟು ಮಹಿಳೆಯರು ಇರಲಿದ್ದಾರೆ ಎಂದು ವರದಿ ಹೇಳಿದೆ.

2036ರ ವೇಳೆಗೆ ದೇಶದಲ್ಲಿ ಲಿಂಗಾನುಪಾತ ಕೂಡ ಜಾಸ್ತಿಯಾಗಲಿದೆ. 2011ರಲ್ಲಿ 943 ಪುರುಷರಿಗೆ 943 ಮಹಿಳೆಯರಿದ್ದರು. 2036ರ ವೇಳೆಗೆ ಈ ಸಂಖ್ಯೆ 952ಕ್ಕೆ ತಲುಪುವ ನಿರೀಕ್ಷೆ ಇದೆ ಎಂದು ವರದಿ ಹೇಳಿದೆ. 2036ರ ವೇಳೆಗೆ ಗ್ರಾಮೀಣ ಭಾಗಗಳಲ್ಲಿ ಲಿಂಗಾನುಪಾತ 1000:969 ಇದ್ದರೆ, ನಗರ ಪ್ರದೇಶಗಳಲ್ಲಿ 1000:926 ಇರಲಿದೆ. ಲಿಂಗ ಸಮಾನತೆಯ ದೃಷ್ಟಿಯಿಂದ ಇದು ಸಕಾರಾತ್ಮಕ ಬೆಳವಣಿಗೆ ಎಂದು ವರದಿ ವಿವರಿಸಿದೆ.


ಲಿಂಗಾನುಪಾತ: 1951ರಿಂದ 2036*ರವರೆಗೆ




ಸರ್ಕಾರಗಳ ಸತತ ಪ್ರಯತ್ನದಿಂದಾಗಿ ನವಜಾತ ಶಿಶು ಮತ್ತು ತಾಯಿ ಮರಣ ಪ್ರಮಾಣ ಕಡಿಮೆಯಾಗಿದೆ ಎಂದು ವರದಿ ಹೇಳಿದೆ. 2008ರಲ್ಲಿ ನವಜಾತ ಶಿಶು ಮರಣ ಪ್ರಮಾಣ (Infant Mortality rate) (ಪ್ರತಿ 1,000 ಸಜೀವ ಜನನಕ್ಕೆ ಮೃತಪಡುವ ನವಜಾತ ಶಿಶುಗಳ ಸಂಖ್ಯೆ) 53 ಇತ್ತು. 2020ರ ವೇಳೆಗೆ ಅದು 28ಕ್ಕೆ ಇಳಿಕೆಯಾಗಿದೆ. ಅದೇ ರೀತಿ, 2004–06ರಲ್ಲಿ ಹೆರಿಗೆ ಸಂದರ್ಭದಲ್ಲಿ ತಾಯಂದಿರ ಮರಣ ಅನುಪಾತ 254 ಇತ್ತು (maternal mortality ratio– ತಾಯಿ ಮರಣ ಅನುಪಾತ ಎಂದರೆ, ಹೆರಿಗೆ ಸಂದರ್ಭದಲ್ಲಿ ಮೃತಪಡುವ ಮಹಿಳೆಯರ ಸಂಖ್ಯೆ. ವರ್ಷದಲ್ಲಿ ವರದಿಯಾಗುವ ಪ್ರತಿ ಒಂದು ಲಕ್ಷ ಸಜೀವ ಜನನ ಪ್ರಕರಣಗಳನ್ನು ಆಧಾರವಾಗಿಟ್ಟುಕೊಂಡು ಇದನ್ನು ಲೆಕ್ಕಹಾಕಲಾಗುತ್ತದೆ). 2016–18ಕ್ಕೆ ಅದು 97ಕ್ಕೆ ಇಳಿದಿದೆ.

ಸುಸ್ಥಿರ ಅಭಿವೃದ್ಧಿ ಗುರಿಗಳ (ಎಸ್‌ಡಿಜಿ) ಅನುಸಾರ 2030ರ ವೇಳೆಗೆ ಈ ಅನುಪಾತವನ್ನು 70ರ ಒಳಗೆ ತರಬೇಕಾಗಿದೆ.

ಇಳಿದ ಶಿಶು ಮತ್ತು ತಾಯಿ ಮರಣ ಪ್ರಮಾಣ





195 2018–20ರಲ್ಲಿ ಅಸ್ಸಾಂನಲ್ಲಿ ವರದಿಯಾದ ತಾಯಿ ಮರಣ ಅನುಪಾತ

19 2018–20ರಲ್ಲಿ ಕೇರಳದಲ್ಲಿ ವರದಿಯಾದ ತಾಯಿ ಮರಣ ಅನುಪಾತ

6 2020ರಲ್ಲಿ ಕೇರಳದಲ್ಲಿ ವರದಿಯಾದ ನವಜಾತ ಶಿಶು ಮರಣ ಪ್ರಕರಣಗಳು

43 2020ರಲ್ಲಿ ಮಧ್ಯಪ್ರದೇಶದಲ್ಲಿ ವರದಿಯಾದ ನವಜಾತ ಶಿಶು ಮರಣ ಪ್ರಕರಣಗಳು

ವಿವಿಧ ವಲಯಗಳಲ್ಲಿ ತೊಡಗಿರುವ ಜನಸಂಖ್ಯೆ (%ಗಳಲ್ಲಿ)

ವಲಯ	ಗ್ರಾಮೀಣ		ನಗರ	
	ಪುರುಷ	ಮಹಿಳೆ	ಪುರುಷ	ಮಹಿಳೆ
ಕೃಷಿ	49.1	76.2	4.7	11.7
ಗಣಿಗಾರಿಕೆ ಮತ್ತು ಕ್ವಾರಿ	0.4	0.1	0.6	0.1
ಉತ್ಪಾದನೆ	8.2	8.3	20.5	23.9
ವಿದ್ಯುತ್, ನೀರು ಇತ್ಯಾದಿ	0.5	0.1	1.3	0.5
ನಿರ್ಮಾಣ	19.0	4.2	12.6	3.1
ಉದ್ದಿಮೆ, ಹೋಟೆಲ್/ರೆಸ್ಟೊರೆಂಟ್	10.5	4.1	26.5	15.2
ಸಾರಿಗೆ, ದಾಸ್ತಾನು ಮತ್ತು ಸಂವಹನ	5.3	0.2	13.2	5.5
ಇತರೆ ವಲಯ	7.0	6.9	20.6	40.1

ವಿವಿಧ ವಲಯಗಳಲ್ಲಿ ತೊಡಗಿರುವ ಜನಸಂಖ್ಯೆಯನ್ನು ಗಮನಿಸಿದರೆ, ಗ್ರಾಮೀಣ ಪ್ರದೇಶದ ಮಹಿಳೆಯರ ಪೈಕಿ ಮುಕ್ಕಾಲು ಪಾಲು ಕೃಷಿ ಸಂಬಂಧಿ ಚಟುವಟಿಕೆಗಳಲ್ಲಿ ತೊಡಗಿದ್ದರೆ, ಪುರುಷರ ಪೈಕಿ ಸುಮಾರು ಅರ್ಧದಷ್ಟು ಮಂದಿ ಕೃಷಿಯಲ್ಲಿ ತೊಡಗಿದ್ದಾರೆ. ಉತ್ಪಾದನಾ ವಲಯದಲ್ಲಿ ಇಬ್ಬರೂ ಬಹುತೇಕ ಸಮನಾಗಿದ್ದರೆ, ನಿರ್ಮಾಣ ವಲಯದಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶ ಎರಡೂ ಕಡೆ ಪುರುಷರು ಹೆಚ್ಚಾಗಿದ್ದಾರೆ.

ಕಾರ್ಮಿಕರು ಮತ್ತು ಜನಸಂಖ್ಯೆಯ ನಡುವಿನ ಅನುಪಾತ (ಡಬ್ಲ್ಯುಪಿಆರ್)

	ನಗರ	ಗ್ರಾಮೀಣ
ಮಹಿಳೆ	18.7	30
ಪುರುಷ	55.6	54



15–59 ವರ್ಷದ ನಡುವಿನ ವಯಸ್ಸಿನ ಆಧಾರದಲ್ಲಿ ಡಬ್ಲ್ಯುಪಿಆರ್ (ಕಾರ್ಮಿಕ-ಜನಸಂಖ್ಯೆ ಅನುಪಾತವು ಒಂದು ನಿರ್ದಿಷ್ಟ ಪ್ರದೇಶದಲ್ಲಿರುವ ಒಟ್ಟು ಜನಸಂಖ್ಯೆ ಮತ್ತು ಆ ಜನಸಂಖ್ಯೆಯಲ್ಲಿ ಉದ್ಯೋಗಸ್ಥ ವ್ಯಕ್ತಿಗಳ ಪ್ರಮಾಣವನ್ನು ಒದಗಿಸುತ್ತದೆ) ಅನ್ನು ನೋಡುವುದಾದರೆ, ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗ ಮಾಡುವ ಮಹಿಳೆಯರ ಸಂಖ್ಯೆಯು ಪುರುಷರ ಸಂಖ್ಯೆಗಿಂತ ಸುಮಾರು ಶೇ 50ರಷ್ಟು ಕಡಿಮೆ ಇದೆ. ನಗರ ಪ್ರದೇಶದಲ್ಲಿ ಈ ವಯಸ್ಸಿನ ಮಹಿಳೆಯರ ಡಬ್ಲ್ಯುಪಿಆರ್ ಪುರುಷರ ಪ್ರಮಾಣದಲ್ಲಿ ಕಾಲುಭಾಗದಷ್ಟಿದೆ.

ವಯಸ್ಸಿನ ಆಧಾರದಲ್ಲಿ ಡಬ್ಲ್ಯುಪಿಆರ್


ವಯೋಮಾನ **15-59** ವರ್ಷ

	ಮಹಿಳೆ	ಪುರುಷ
ನಗರ	43.3	81.6
ಗ್ರಾಮೀಣ	26.0	76.8

2022-23 ಅಂಕಿ ಅಂಶ


ಕೇಂದ್ರ ಮಂತ್ರಿ ಪರಿಷತ್‌ನಲ್ಲಿ ಮಹಿಳೆಯರ ಪಾಲು

ಭಾರತದ ರಾಜಕಾರಣದಲ್ಲಿ ಮಹಿಳೆಯರ ಪಾತ್ರವು ಅತ್ಯಂತ ಕಡಿಮೆ ಪ್ರಮಾಣದಲ್ಲಿದೆ. ಚುನಾವಣೆಗಳಲ್ಲಿ ಸ್ಪರ್ಧಿಸುತ್ತಿರುವ ಮತ್ತು ಲೋಕಸಭ, ವಿಧಾನಸಭೆಗಳಿಗೆ ಆಯ್ಕೆ ಆಗುತ್ತಿರುವ ಪ್ರತಿನಿಧಿಗಳ ಸಂಖ್ಯೆಯು ಪುರುಷರಿಗೆ ಹೋಲಿಸಿದರೆ ಭಾರಿ ಕಡಿಮೆ ಇದೆ. ಅದಕ್ಕೆ ತಕ್ಕಂತೆ ಕೇಂದ್ರ ಮಂತ್ರಿ ಪರಿಷತ್‌ನಲ್ಲಿ ಮಹಿಳೆಯರ ಸಂಖ್ಯೆ ದಶಕಗಳಿಂದಲೂ ಕಡಿಮೆಯೇ ಇದೆ. ಮಹಿಳಾ ಮಂತ್ರಿಗಳ ಪ್ರಮಾಣವು 2015ರಲ್ಲಿ ಗರಿಷ್ಠ ಮಟ್ಟ ಮುಟ್ಟಿತ್ತು (ಶೇ 17.8). ಹತ್ತಕ್ಕಿಂತ ಹೆಚ್ಚು ಲೋಕಸಭಾ ಸ್ಥಾನಗಳಿರುವ ರಾಜ್ಯಗಳ ಪೈಕಿ ಒಟ್ಟು ಸಂಸದರ ಪೈಕಿ ಮಹಿಳಾ ಸಂಸದರ ಪ್ರಮಾಣವು ಒಡಿಶಾದಲ್ಲಿ ಅತಿ ಹೆಚ್ಚು (ಶೇ 33) ಇದ್ದರೆ, ಕೇರಳದಲ್ಲಿ ಅತಿ ಕಡಿಮೆ (ಶೇ 5) ಇತ್ತು (2023ರ ಅಂಕಿಅಂಶ).



ಸರ್ಕಾರಿ ಕಾಮಗಾರಿಗಳನ್ನು ಬಿಟ್ಟು ಇತರೆ ಕೆಲಸಗಳಲ್ಲಿ ತಾತ್ಕಾಲಿಕ ಅವಧಿಯ ಕಾರ್ಮಿಕರು ಪಡೆಯುವ ದಿನಗೂಲಿಯಲ್ಲಿಯೂ ಪುರುಷರು ಮತ್ತು ಮಹಿಳೆಯರಲ್ಲಿ ಎದ್ದುಕಾಣುವ ವ್ಯತ್ಯಾಸವಿದೆ. ಈ ವಿಚಾರದಲ್ಲಿ ಗ್ರಾಮೀಣ ಪ್ರದೇಶಗಳಿಗಿಂತಲೂ ನಗರ ಪ್ರದೇಶದಲ್ಲಿ ಹೆಚ್ಚು ಅಂತರ ಇರುವುದು ಗಮನಾರ್ಹವಾಗಿದೆ.

ಸರ್ಕಾರಿ ಕಾಮಗಾರಿ ಬಿಟ್ಟು ಇತರೆ ಕೆಲಸಗಳಲ್ಲಿ ಕಾರ್ಮಿಕರು ಪಡೆದ ಸರಾಸರಿ ದಿನಗೂಲಿ (₹ಗಳಲ್ಲಿ)



ಫಲವಂತಿಕೆ ದರ ಕುಸಿತ

ದೇಶದಲ್ಲಿ ಮಹಿಳೆಯರು ಮಕ್ಕಳನ್ನು ಪಡೆಯುವ ಒಟ್ಟು ಫಲವಂತಿಕೆ ದರ (total fertility rate–ಟಿಎಫ್‌ಆರ್) ಕಡಿಮೆಯಾಗುತ್ತಿರುವುದನ್ನು ವರದಿ ಉಲ್ಲೇಖಿಸಿದೆ. ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲೂ ಈ ದರ ಕಡಿಮೆಯಾಗಿದೆ. (ಟಿಎಫ್‌ಆರ್ ಎಂದರೆ, ಸಂತಾನೋತ್ಪತ್ತಿ ವಯೋಮಾನದ ಪ್ರತಿಯೊಬ್ಬ ಮಹಿಳೆಯು ಮಕ್ಕಳನ್ನು ಪಡೆಯುವ ಸರಾಸರಿ ಸಾಮರ್ಥ್ಯ. ದೇಶದ ಜನಿಸುವ ಮಕ್ಕಳ ಸಂಖ್ಯೆಯನ್ನು ಸಂತಾನೋತ್ಪತ್ತಿ ವಯೋಮಾನದ ಒಟ್ಟು ಮಹಿಳೆಯರ ಸಂಖ್ಯೆಯೊಂದಿಗೆ ತಾಳೆ ಮಾಡಿ ಫಲವಂತಿಕೆ ದರವನ್ನು ಲೆಕ್ಕ ಹಾಕಲಾಗುತ್ತದೆ).



2016ರಲ್ಲಿ ಈ ದರ 2.3 ಇದ್ದರೆ, 2020ರಲ್ಲಿ ಇದು 2ಕ್ಕೆ ಇಳಿದಿದೆ. ಅನಕ್ಷರಸ್ಥ ತಾಯಂದಿರಲ್ಲಿ ಈ ದರ 3.1ರಷ್ಟಿದ್ದರೆ, ಶಿಕ್ಷಿತರಲ್ಲಿ 1.9ರಷ್ಟಿದೆ. ಪದವಿ ಪಡೆದಿರುವ ತಾಯಂದಿರ ಫಲವಂತಿಕೆ ದರ 1.6ರಷ್ಟು ಇದೆ.

ಒಟ್ಟು ಫಲವಂತಿಕೆಯ ದರ

ವರ್ಷ	ಗ್ರಾಮೀಣ	ನಗರ	ಒಟ್ಟು
2016	2.5	1.8	2.3
2017	2.4	1.7	2.2
2018	2.4	2.4	1.7
2019	2.3	1.7	2.1
2020	2.2	1.6	2.0

ವಯಸ್ಸಿಗೆ ಅನುಗಣವಾಗಿ ಫಲವಂತಿಕೆ ದರದಲ್ಲಿ (ಎಎಸ್‌ಎಫ್‌ಆರ್– ನಿರ್ದಿಷ್ಟ ವಯಸ್ಸಿನ ಅಥವಾ ವಯೋಮಾನದ ಮಹಿಳೆಯರು ಮಕ್ಕಳಿಗೆ ಜನ್ಮ ನೀಡುವ ಪ್ರಮಾಣ. ಆ ವಯಸ್ಸಿನ ಅಥವಾ ಆ ವಯೋಮಾನದ 1000 ಮಹಿಳೆಯರ ಆಧಾರದಲ್ಲಿ ಈ ದರವನ್ನು ಲೆಕ್ಕಹಾಕಲಾಗುತ್ತದೆ) ಏರಿಳಿತ ಕಂಡುಬಂದಿದೆ.

2016ಕ್ಕೆ ಹೋಲಿಸಿದರೆ, 20ರಿಂದ 24 ವರ್ಷ ವಯಸ್ಸಿನ ಮಹಿಳೆಯರ ಫಲವಂತಿಕೆ ದರ 2020ರಲ್ಲಿ 135.4ರಿಂದ 113ಕ್ಕೆ ಇಳಿದಿದೆ. ಅದೇ ರೀತಿ, 25ರಿಂದ 29 ವರ್ಷ ವಯಸ್ಸಿನ ಮಹಿಳೆಯರ ಫಲವಂತಿಕೆ ದರ 166ರಿಂದ 139.6ಕ್ಕೆ ಕುಸಿದಿದೆ. ಶಿಕ್ಷಣ ಪಡೆದು, ಉದ್ಯೋಗಕ್ಕೆ ಸೇರಿ ಆರ್ಥಿಕವಾಗಿ ಸ್ವಾವಲಂಬಿಗಳಾದ ಬಳಿಕ ಮಕ್ಕಳು ಪಡೆಯುವ ಬಗ್ಗೆ ಮಹಿಳೆಯರಲ್ಲಿ ಜಾಗೃತಿ ಮೂಡಿರುವುದು ಇದಕ್ಕೆ ಕಾರಣವಿರಬಹುದು ಎಂದು ವರದಿ ಹೇಳಿದೆ. ಒಂದು ವೇಳೆ ಇದು ನಿಜವಾಗಿದ್ದಲ್ಲಿ 'ಮಹಿಳೆಯರು ಬೇಗ ಮದುವೆಯಾಗಿ ಮಕ್ಕಳನ್ನು ಪಡೆಯಬೇಕು' ಎಂಬ ಸಮಾಜದ ತಪ್ಪು ಕಲ್ಪನೆಯನ್ನು ಮಹಿಳೆಯರು ದೂರಮಾಡಿದಂತಾಗುತ್ತದೆ ಎಂದು ವರದಿ ಹೇಳಿದೆ.

15ರಿಂದ 19ರ ವಯೋಮಾನದವರ ಫಲವಂತಿಕೆ ದರ 2020ರಲ್ಲಿ 11.3ರಷ್ಟಿದ್ದು, ಹೆಣ್ಣುಮಕ್ಕಳಿಗೆ ಚಿಕ್ಕವಯಸ್ಸಿನಲ್ಲಿ ಮದುವೆ ಮಾಡುವುದು ಮತ್ತು ಮಕ್ಕಳನ್ನು ಪಡೆಯುವುದರ ವಿರುದ್ಧ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಅದು ಪ್ರತಿಪಾದಿಸಿದೆ.

ಸಿನಿ ಬಿಟ್ಸ್

'ಸಂಜು..'ವಿನ ಚಿತ್ರೀಕರಣ ಮುಕ್ತಾಯ

ನಾಗಶೇಖರ್ ನಿರ್ದೇಶನದಲ್ಲಿ ಶ್ರೀನಗರ ಕಿಟ್ಟಿ, ರಚಿತಾರಾಮ್ ಜೋಡಿಯಾಗಿ ನಟಿಸಿರುವ 'ಸಂಜು ವೆಡ್ಸ್ ಗೀತಾ-2' ಚಿತ್ರೀಕರಣ ಇತ್ತೀಚೆಗಷ್ಟೇ ಮುಕ್ತಾಯಗೊಂಡಿದೆ. ಛಲವಾದಿ ಕುಮಾರ್ ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ.

'ವರ್ಷದ ಹಿಂದೆ ಚಿತ್ರ ಶುರುವಾಗಿತ್ತು. ಶಿಡ್ಲಘಟ್ಟ, ಸ್ವಿಟ್ಜರ್‌ಲೆಂಡ್, ಬೆಂಗಳೂರು ಸುತ್ತಮುತ್ತ 72 ದಿನಗಳ ಕಾಲ ಆರು ಹಂತಗಳಲ್ಲಿ ಚಿತ್ರೀಕರಣ ನಡೆಸಿದ್ದೇವೆ. ಈಗಾಗಲೇ ಎಡಿಟಂಗ್, ಡಬ್ಬಿಂಗ್ ಕೂಡ ನಡೆದಿದೆ. ಇವತ್ತಿನ ಟೆಕ್ನಾಲಜಿಯ ಲವ್ ಸ್ಟೋರಿ, ಜೊತೆಗೆ ಒಂದು ಸರ್ಪ್ರೈಸ್ ಚಿತ್ರದಲ್ಲಿದೆ' ಎಂದರು ನಿರ್ದೇಶಕರು.

ಸಾಧು ಕೋಕಿಲ, ರಂಗಾಯಣ ರಘು, ತಬಲಾ ನಾಣಿ, ಚೇತನ್ ಚಂದ್ರ, ರಾಗಿಣಿ ದ್ವಿವೇದಿ ಸೇರಿದಂತೆ ದೊಡ್ಡ ತಾರಾಬಳಗವೇ ಚಿತ್ರದಲ್ಲಿದೆ. 'ರಮ್ಯಾ ಅವರು ಚೆನ್ನಾಗಿ ಇದ್ದರು. ಹಾಗಾಗಿ 'ಸಂಜು ವೆಡ್ಸ್ ಗೀತಾ'ದಲ್ಲಿ ಅವರನ್ನು ಚೆನ್ನಾಗಿ ತೋರಿಸಲಾಗಿತ್ತು. ಕಳೆದ 10 ವರ್ಷಗಳಲ್ಲಿ ರಚಿತಾ ರಾಮ್ ಅವರಿಗಿಂತಲೂ ಬ್ಯೂಟಿಫುಲ್ ಆದ ನಟಿಯನ್ನು ನಾನು ನೋಡಿಲ್ಲ. ಹಾಗಾಗಿ ಅವರನ್ನು ಕೂಡ 'ಸಂಜು ವೆಡ್ಸ್ ಗೀತಾ–2'ದಲ್ಲಿ ನಿರ್ದೇಶಕರು ಚೆನ್ನಾಗಿ ತೋರಿಸಿದ್ದಾರೆ' ಎಂದರು ಸಾಧು ಕೋಕಿಲ.

ಶ್ರೀಧರ ವಿ. ಸಂಭ್ರಮ್ ಸಂಗೀತ, ಸತ್ಯ ಹೆಗಡೆ ಛಾಯಾ-ಚಿತ್ರಗ್ರಹಣ ಚಿತ್ರಕ್ಕಿದೆ. ❖


ರಚಿತಾ ರಾಮ್, ಶ್ರೀನಗರ ಕಿಟ್ಟಿ

ಶೀಘ್ರದಲ್ಲೇ ತೆರೆಗೆ 'ಎಡಗೈಯೇ ಅಪಘಾತಕ್ಕೆ ಕಾರಣ'

2022ರಲ್ಲಿ ಸೆಟ್ಟೇರಿದ ನಟ ದಿಗಂತ್ ನಟನೆಯ 'ಎಡಗೈಯೇ ಅಪಘಾತಕ್ಕೆ ಕಾರಣ' ಸಿನಿಮಾ ಬಿಡುಗಡೆಗೆ ಸಜ್ಜಾಗುತ್ತಿದೆ. ಇತ್ತೀಚೆಗೆ ನಡೆದ ಎಡಗೈ ಬಳಕೆದಾರರ ದಿನದಂದು ಚಿತ್ರದ ಹೊಸ ಪೋಸ್ಟರ್ ಬಿಡುಗಡೆಯಾಗಿದೆ.

'ಎಡಗೈ ಬಳಸುವವರನ್ನೇ ಗಮನದಲ್ಲಿಟ್ಟುಕೊಂಡು, ಅವರ ಜೀವನಶೈಲಿ ಕುರಿತು ಈ ಚಿತ್ರ ಕಟ್ಟಿಕೊಡಲಾಗಿದೆ. ದಿಗಂತ್ ಅವರು ಇಲ್ಲಿಯವರೆಗೂ ಚಾಕೋಲೇಟ್ ಬಾಯ್ ರೀತಿ ಇದ್ದರು. ರೊಮ್ಯಾಂಟಿಕ್ ಹೀರೊ ದಿಗಂತ್ ಈ ಸಿನಿಮಾದಲ್ಲಿ ಸಂಪೂರ್ಣವಾಗಿ ವಿಭಿನ್ನ ಪಾತ್ರದಲ್ಲಿ ಕಾಣಸಿಗಲಿದ್ದಾರೆ. ಎಡಗೈ ಬಳಸುವವರು ಅನುಭವಿಸುವ ಸಮಸ್ಯೆ, ಸಂಕಷ್ಟದ ಸರಮಾಲೆಯೇ ಚಿತ್ರದಲ್ಲಿದೆ' ಎಂದಿದೆ ಚಿತ್ರತಂಡ.


ಎಡಗೈಯೇ ಅಪಘಾತಕ್ಕೆ ಕಾರಣ ಸಿನಿಮಾ ಪೋಸ್ಟರ್

ಸಿನಿಮಾಗೆ ಸಮರ್ಥ್ ಬಿ. ಕಡಕೊಳ್ ಆ್ಯಕ್ಷನ್ ಕಟ್ ಹೇಳಿದ್ದು ಇದು ಇವರ ನಿರ್ದೇಶನದ ಚೊಚ್ಚಲ ಚಿತ್ರ. ಮರ್ಡರ್ ಮಿಸ್ಟರಿ, ಡಾರ್ಕ್ ಕಾಮಿಡಿ ಹಾಗೂ ಸಸ್ಪೆನ್ಸ್ ಥ್ರಿಲ್ಲರ್ ಜಾನರ್‌ನಲ್ಲಿರುವ ಈ ಸಿನಿಮಾದಲ್ಲಿ ದಿಗಂತ್‌ಗೆ ಜೋಡಿಯಾಗಿ ಧನು ಹರ್ಷ ನಟಿಸುತ್ತಿದ್ದು ನಿಧಿ ಸುಬ್ಬಯ್ಯ, ರಾಧಿಕಾ ನಾರಾಯಣ್, ಭಜರಂಗಿ ಲೋಕಿ, ಕೃಷ್ಣ ಹೆಬ್ಬಾಳ್ ಕೂಡಾ ಚಿತ್ರದ ಪ್ರಮುಖ ಪಾತ್ರದಲ್ಲಿದ್ದಾರೆ. ಹೈಫನ್ ಪಿಕ್ಚರ್ಸ್ ಹಾಗೂ ಗುರುದತ್ ಗಾಣಿಗ ಫಿಲ್ಮಂಸ್ ಬ್ಯಾನರ್‌ನಡಿ ಗುರುದತ್ ಗಾಣಿಗ ಹಾಗೂ ನಿರ್ದೇಶಕ ಸಮರ್ಥ್ ಬಿ. ಕಡಕೊಳ್ ಜಂಟಿಯಾಗಿ ನಿರ್ಮಾಣ ಮಾಡಿದ್ದಾರೆ. ❖

ಮತ್ತಷ್ಟು ಸಿನಿಮಾ ಸುದ್ದಿಗಳಿಗೆ ನೋಡಿ https://www.prajavani.net

ಗುಂಡಣ್ಣ



ನಿಸರ್ಗ ಕಲಿಸಿದ ಪಾಠ



ಅಭಿನವ ಗವಿಸಿದ್ಧೇಶ್ವರ ಸ್ವಾಮೀಜಿ, ಗವಿಮಠ, ಕೊಪ್ಪಳ

ನಿಸರ್ಗದ ಸೃಷ್ಟಿ ಎಷ್ಟು ಅದ್ಭುತ ನೋಡಿ. ಕಾಲಿಲ್ಲದವರು ಹುಟ್ಯಾರ. ಕೈ ಇಲ್ಲದವರು ಅದಾರ. ಕಿವಿ, ಕಣ್ಣು ಇಲ್ಲದವರು ಇದ್ದಾರ. ತಲೆ ಇಲ್ಲದವರಂತೂ ಬೇಕಾದಷ್ಟು ಮಂದಿ ಅದೀವಿ. ಆದರೆ ಹೊಟ್ಟೆ ಇಲ್ಲದವರು ಒಬ್ಬರಾದರೂ ಹುಟ್ಟಿದ್ದಾರಾ?

ಜಗತ್ತಿನಲ್ಲಿ ಹೊಟ್ಟೆ ಇಲ್ಲದವರು ಯಾರೂ ಹುಟ್ಟಿಲ್ಲ. ಹೊಟ್ಟೆ ಇಲ್ಲದವರ ಬಗ್ಗೆ ಯಾವುದಾದರೂ ಮಾಧ್ಯಮದಲ್ಲಿ ಬಂದಿದ್ದು ನೀವು ನೋಡಿರೇನು? ಕೇಳಿರೇನು? ಯಾಕೆ ಹೀಗೆ? ಯಾಕೆಂದರೆ ಕೈ ಇರಲಿ ಬಿಡಲಿ, ಕಾಲು ಇರಲಿ ಇಲ್ಲದೇ ಹೋಗಲಿ, ಕಣ್ಣು ಕಾಣದಿದ್ದರೇನಂತೆ, ಕಿವಿ ಕೇಳದಿದ್ದರೂ ಹೊಟ್ಟೆ ಮಾತ್ರ ಯಾಕಿದೆ ಎಂದರೆ, 'ನೀನು ದುಡಿದೇ ಉಣ್ಣಬೇಕು' ಎನ್ನುವುದು ನಿಸರ್ಗದ ನಿಯಮ. ಯಾವುದೇ ಅಂಗ ಇಲ್ಲದಿದ್ದರೂ ಹೊಟ್ಟೆ ತುಂಬಬೇಕು ಅಂದರ ನಾವು ದುಡಿಯಲೇ ಬೇಕು. ದುಡಿಯದಿದ್ದರೆ ಇಲ್ಲಿ ಏನೂ ಸಿಗಲ್ಲ.

ಪ್ರಾಣಿ ಪಕ್ಷಿಗಳೂ ದುಡಿದೇ ತಿನ್ನುತ್ತವೆ. ದುಡಿಯದೆ ಅವಕ್ಕೂ ಆಹಾರ ಸಿಗಲ್ಲ. ಯಾವ ಪಕ್ಷಿಯ ಗೂಡಿನಲ್ಲಿಯೂ ಆಹಾರ ತಂದು ಇಟ್ಟಿಲ್ಲ. ತಾನಾಗಿಯೇ ಆಹಾರ ಬಂದು ಗೂಡಿನೊಳಕ್ಕೆ ಬೀಳಲ್ಲ. ಅವೂ ದುಡಿದೇ ತಿನ್ನಬೇಕು. ದುಡಿಯದಿದ್ದರೆ ಇಲ್ಲಿ ಅನ್ನ ಸಿಗುವುದಿಲ್ಲ. ನಾನು ಕಾಡಿನ ರಾಜ ಇದೇನಿ ಎಂದು ಹೇಳಿದರೆ ಯಾರು ಕೇಳ್ತಾರೆ? ಕಾಡಿನ ರಾಜ ಅಂತ ಕಾಡಿನಲ್ಲಿ ಇರುವ ಪ್ರಾಣಿ ಪಕ್ಷಿಗಳು ಅದರ ಬಾಯಿಯೊಳಗೆ ಬಂದು ಬೀಳ್ತಾವೇನು? ಕಾಡಿನ ರಾಜ ಆದರೂ ಹೊಟ್ಟೆ ತುಂಬಿಸಿಕೊಳ್ಳಲು ಅದು ಬೇಟೆಯಾಡಲೇ ಬೇಕು. ಅದೇ ನಿಸರ್ಗದ ತತ್ವ.

'ಹಸ್ತಗಳೆರಡು, ಬಾಯ್ ತಾನೊಂದು ಏನಿದರರ್ಥ, ಕಾಲುಗಳೆರಡು ಬಾಯ್ ತಾನೊಂದು ಏನಿದರರ್ಥ.' ನಿಸರ್ಗ ಎಷ್ಟು ಮಜಾ ಇದೆ ನೋಡಿ. ನಮ್ಮ ದೇಹದಲ್ಲಿ ಎರಡು ಕೈಗಳಿವೆ. ಎರಡು ಕಾಲುಗಳಿವೆ. ಕಿವಿ ಎರಡಿವೆ, ಒನ್ ಬೈ ಟು ಮೂಗಿದೆ. ಆದರೆ ಒಂದೇ ಬಾಯಿ ಇಟ್ಟಿದ್ದಾನೆ ದೇವರು. ಯಾಕೆ? ಒಂದು ಬಾಯಿ ಇಟ್ಟೇ ನಾವು ಈ ಜಗತ್ತನ್ನು ಇಷ್ಟೆಲ್ಲಾ ಹಾಳು ಮಾಡೇವಿ. ಇನ್ನು ಎರಡೆರಡು ಬಾಯಿ ಇಟ್ಟಿದ್ದರೆ ಜಗತ್ತು ಉಳೀತಿತ್ತೇನು ನಮ್ಮ ಕೈಯಾಗ? ಯಾರೋ ಒಬ್ಬಳು ಸ್ವಾಮಿಗಳ ಹತ್ರ ಬಂದು, 'ನಮ್ಮ ಆಯುಷ್ಯ ಮತ್ತು ಆರೋಗ್ಯ ಚೆನ್ನಾಗಿರಬೇಕು ಅಂದರೆ ಏನ್ ಮಾಡಬೇಕು? ಯಾವ ವ್ರತ ಮಾಡಬೇಕು' ಎಂದು ಕೇಳಿದಳಂತೆ. ಅದಕ್ಕ ಸ್ವಾಮಿಗಳು, 'ಮುಖ್ಯವಾಗಿ ಮೌನ ವ್ರತ ಮಾಡಬೇಕು. ಹಂಗಾದರೆ ನಿನ್ನ ಆರೋಗ್ಯ ಕೂಡಾ ಚೆನ್ನಾಗಿರುತ್ತದೆ. ಆಯುಷ್ಯವೂ ಹೆಚ್ಚಾಗುತ್ತದೆ. ನಿನ್ನ ಕುಟುಂಬದವರ ಆರೋಗ್ಯವೂ ಚೆನ್ನಾಗಿರುತ್ತದೆ' ಎಂದು ಉತ್ತರಿಸಿದರಂತೆ.

ನಮಗೆ ಎರಡು ಕೈ ಯಾಕಿಟ್ಟಾನೆಂದರೆ ಎರಡುಪಟ್ಟು ದುಡಿ ಒಂದು ಪಟ್ಟು ಉಣ್ಣು ಎಂದು. ಎರಡು ಕಾಲು ಯಾಕಿಟ್ಟಾನೆಂದರೆ ಎರಡು ಪಟ್ಟು ನಡಿ, ಒಂದು ಪಟ್ಟು ನುಡಿ ಎಂದು, ಎರಡು ಕಣ್ಣು ಯಾಕಿಟ್ಟಾನಂದರೆ ಎರಡುಪಟ್ಟು ನೋಡು ಒಂದುಪಟ್ಟು ಮಾಡು ಎಂದು. ಎರಡು ಪಟ್ಟು ಕೇಳು ಒಂದು ಪಟ್ಟು ಮಾತಾಡು ಅಂತ ಎರಡು ಕಿವಿಗಳನ್ನು ಇಟ್ಟಾನೆ. ಕೆಲಸ ಜಾಸ್ತಿ ಮಾಡು, ಮಾತು ಕಡಿಮೆ ಆಡು. ಇದೇ ನಿಸರ್ಗದ ನಿಯಮ. ನಿಸರ್ಗದ ಈ ನಿಯಮವನ್ನು ನಾವು ಪಾಲಿಸಬೇಕು. ಎರಡು ಪಟ್ಟು ದುಡಿಯಬೇಕು. ಒಂದು ಪಟ್ಟು ಉಣ್ಣಬೇಕು. ಆಗ ಬದುಕು ಸಾರ್ಥಕವಾಗ್ತದ. ❖

ದಿನ ಭವಿಷ್ಯ

ವಿದ್ಯಾಶಂಕರ ಸೋಮಯಾಜಿ. ಕಮ್ಮರಡಿ — ಬುಧವಾರ ಆಗಸ್ಟ್ 21, 2024

ಶ್ರೀ ಕ್ರೋಧಿ ನಾಮ ಸಂವತ್ಸರ ದಕ್ಷಿಣಾಯನ ವರ್ಷ ಋತು ತಿಥಿ: ಶ್ರಾವಣ ಕೃಷ್ಣ ದ್ವಿತೀಯ ಗಂ. 17-07 ನಕ್ಷತ್ರ: ಪೂರ್ವಾಭಾದ್ರ ಗಂ. 24-34 ಯೋಗ: ಸುಕರ್ಮ ಗಂ. 17-01 ಕರಣ: ತೈತಿಲ ಗಂ. 06-50, ಸಿಂಹ ಮಾಸದ 05 ನೇ ದಿನ, ಮಳೆನಕ್ಷತ್ರ: ಮಘಾ 2.
ರಾಹುಕಾಲ : ಮಧ್ಯಾಹ್ನ 12-00 – 01-30
ಸೂರ್ಯೋದಯ : 06-22 ಸೂರ್ಯಾಸ್ತ : 06-45
ಮುಸ್ಲಿಂ ದಿನಾಂಕ : 16 ಸಫರ್
ಅದೃಷ್ಟ ಸಂಖ್ಯೆ : 11, 2

ಮೇಷ: ವ್ಯಾಪಾರ ವ್ಯವಹಾರದಲ್ಲಿ ಲಾಭ, ನಷ್ಟ ಏನೇ ಆದರೂ ಅದನ್ನು ಮುಕ್ತವಾಗಿ ಸ್ವೀಕರಿಸುವ ಭಾವನೆ ಇರಲಿ. ತಿಂಡಿ ತಿನಿಸು ಪದಾರ್ಥಗಳ ಮಾರಾಟಗಾರರಿಗೆ ಲಾಭ ಸಿಗುವುದು. ಬಟ್ಟೆ ವ್ಯಾಪಾರ ಉತ್ತಮವಾಗಿರುತ್ತದೆ.

ವೃಷಭ: ಜೀವನದಲ್ಲಿ ನಡೆದ ಕೆಲವು ಘಟನೆಗಳು ಪ್ರಮುಖ ಘಟ್ಟಗಳಂತಾಗಿ ಜೀವನಶೈಲಿಯೇ ಬದಲಾಗುತ್ತದೆ. ಕೆಲವರ ಸಂಬಂಧವು ಕೊನೆಗೊಳ್ಳುವಂಥ ಪರಿಸ್ಥಿತಿ ಎದುರಾಗಬಹುದು. ವಿವೇಕರಹಿತ ಕೆಲಸದಲ್ಲಿ ತೊಡಗಿಸಿಕೊಳ್ಳದಿರಿ.

ಮಿಥುನ: ಹೊಸ ಯೋಜನೆಗಳಿಗೆ ಚಾಲನೆ ನೀಡುವ ವಿಚಾರವನ್ನು ಸ್ವಲ್ಪ ದಿನ ಮುಂದಕ್ಕೆ ತಳ್ಳುವುದು ಸೂಕ್ತ. ನಿಮ್ಮ ಕೌಶಲವನ್ನು ತೋರಲು ಹೆಚ್ಚಿನ ಅವಕಾಶಗಳು ನಿಮಗೆದುರಾಗಲಿದೆ. ಉಡುಪು ಮಾರಾಟಗಾರರಿಗೆ ವಿಶೇಷ ದಿನ.

ಕರ್ಕಾಟಕ: ಎಣ್ಣೆ ಮತ್ತು ಬೇಳೆಕಾಳು ವ್ಯಾಪಾರದಲ್ಲಿ ಮಾರಾಟ ಉತ್ತಮವಾಗಿರುವುದು. ವಿದ್ಯಾರ್ಜನೆಗೆಂದು ಪರ ಊರಿಗೆ ಹೋದ ನೀವು ಹಾದಿ ತಪ್ಪಿದ್ದು ಹೆತ್ತವರಿಗೆ ಸಂಕಟ ಉಂಟು ಮಾಡುವುದು. ತಾಳ್ಮೆಯ ಪರೀಕ್ಷೆ ಆಗಬಹುದು.

ಸಿಂಹ: ತಂದೆಯ ಮನಸ್ಸಿಗೆ ನೋವಾಗುವ ಸಂಗತಿ ನಿಮ್ಮಿಂದ ನಡೆಯಲಿದೆ. ತಾಂತ್ರಿಕ ಪರಿಣತರಿಗೆ ಉನ್ನತ ಸಂಸ್ಥೆಗಳಲ್ಲಿ ಉದ್ಯೋಗ ಸಿಗಲಿದೆ. ವಿದೇಶದಲ್ಲಿ ಇರುವವರು ಸ್ವದೇಶದ ಬಂಧುಗಳನ್ನು ಭೇಟಿಯಾಗಲು ಬರುವಂತೆ ಆಗುವುದು.

ಕನ್ಯಾ: ಪರಿಶ್ರಮಕ್ಕೆ ತಕ್ಕಂಥ ಆದಾಯವಿಲ್ಲದೆ ಸೊರಗಿದ್ದ ನಿಮಗೆ, ಅತಿ ಹೆಚ್ಚಿನ ವರಮಾನದ ಮಾರ್ಗವನ್ನು ಆಪ್ತ ಸ್ನೇಹಿತರೊಬ್ಬರು ತೋರುವರು. ಮನೆಯಲ್ಲಿ ಅಣ್ಣ-ತಮ್ಮಂದಿರ ಆಂತರಿಕ ವ್ಯವಹಾರಗಳು ಒಂದು ಹಂತ ತಲುಪುತ್ತವೆ.

ತುಲಾ: ಬುದ್ಧಿವಂತರಾದ, ತಿಳಿವಳಿಕೆ ಹೊಂದಿದವರಾದ ನೀವು ಇಂದು ಗ್ರಹಚಾರದ ಫಲವಾಗಿ ಮನೋಬಲದಿಂದ ಕಾರ್ಯ ಸಾಧಿಸುವಲ್ಲಿ ವಿಫಲರಾಗುವಿರಿ. ಹೋಟೆಲ್ ಉದ್ಯಮದವರಿಗೆ ಅತ್ಯಧಿಕ ಲಾಭ ಪ್ರಾಪ್ತಿ.

ವೃಶ್ಚಿಕ: ಕೆಲಸದಲ್ಲಿ ಒತ್ತಡ ಹೆಚ್ಚಿರುವುದರಿಂದ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ. ದಾಖಲೆ ಅಥವಾ ಒಪ್ಪಂದಗಳಿಗೆ ಎಚ್ಚರ ವಹಿಸಿ ಸಹಿ ಮಾಡಿರಿ. ಯುವ ಕೃಷಿಕರು ಕೃಷಿ ಕ್ಷೇತ್ರದಲ್ಲಿ ಉತ್ತಮ ಸಾಧನೆ ತೋರುವಿರಿ.

ಧನು: ವಿದೇಶಿ ಸಂಸ್ಥೆಗಳೊಡನೆ ಸಹಭಾಗಿತ್ವ ಒಪ್ಪಂದಗಳನ್ನು ಮಾಡಿಕೊಳ್ಳುವಂಥ ತೀರ್ಮಾನಗಳನ್ನು ತೆಗೆದುಕೊಳ್ಳುವುದು ಸಮಂಜಸವಲ್ಲ. ಇಂದಿನ ನಿಮ್ಮ ಪ್ರಯಾಣದಲ್ಲಿ ಸುಖವಿರುವುದು.

ಮಕರ: ಮನೆಯ ಪರಿಸ್ಥಿತಿ ಅರಿವಿದ್ದರೂ ಆದರ್ಶ ವೃತ್ತಿಗಾಗಿಯೇ ಹಲವು ದಿನಗಳ ಕಾಯುವಿಕೆ ಸರಿಯಾದುದಲ್ಲ. ಗೃಹದಲ್ಲಿ ಶುಭ, ಮಂಗಳ ಕಾರ್ಯಗಳ ಚಟುವಟಿಕೆಗಳು ತೋರಿ ಬರುವವು.

ಕುಂಭ: ಜವಾಬ್ದಾರಿಯನ್ನು ಕಳೆದುಕೊಳ್ಳುವ ನಿಟ್ಟಿನಲ್ಲಿ ತೆಗೆದುಕೊಂಡ ನಿರ್ಧಾರಗಳು ಗೌರವ ಕಡಿಮೆಗೊಳಿಸಬಹುದು. ಬಯಸಿದ ಕೆಲಸಗಳನ್ನು ಇಂದು ತ್ವರಿತವಾಗಿ ಮಾಡಿ ಮುಗಿಸುತ್ತೀರಿ. ಅಭಿವೃದ್ಧಿಯಲ್ಲಿ ಹಿನ್ನಡೆ ಕಾಣಲಿದ್ದೀರಿ.


ಮೀನ: ಸ್ವಲ್ಪ ಎಚ್ಚರ ತಪ್ಪಿದಲ್ಲಿ ಶತ್ರುಗಳಿಂದ ತುಂಬಾ ಸುಲಭವಾಗಿ ಮೋಸ ಹೋಗುವಂಥ ಸಾಧ್ಯತೆಗಳೂ ಇವೆ. ಉತ್ತಮ ಯೋಚನಾ ಸಾಮರ್ಥ್ಯ ಹೊಂದಿದ್ದರೂ ಒತ್ತಡದಲ್ಲಿ ನಿರ್ಧಾರ ತೆಗೆದುಕೊಳ್ಳದಿರಿ.

ಪದಬಂಧ 5779

– ವಿದ್ಯಾ ವಿನಯ್

ಎಡದಿಂದ ಬಲಕ್ಕೆ
1.ಅತಿಶಯವಾದ ಮೋಹ (3)
3.ಕಾಂತಿ ಅಥವಾ ಪ್ರಕಾಶ (3)
6.ವೀರಶೈವ ಸ್ವಾಮಿಗಳ ಸಮಾಧಿ (3)
7.ಇದು ಕನ್ನಡಿಗನ ಟೆಲಿಸ್ಕೋಪ್ (3)
9.ಹಿಟ್ಟು ಎಂದಾಗ ಬಂದಿರುವ ಕೋಪ! (2)
10.ಕನ್ನ ಹಾಕಿದವ ತೋರಿಸಿದ ದರ್ಪಣ (3)
12.ಬಾದಾರಾಯಣನ ಕಾಲದ ಶರ! (2)
15.ಕರ ಕಡಿಯಲು ಹವಣಿಸಿದ ಹಂದಿ (3)
16.ಆಧಾರವಾದ ಧಾಖಲು ಪತ್ರ (3)
17.ವಿವಾದವಿಲ್ಲದೆ ನಡೆದ ಲಗ್ನ (3)
18.ಇಂಪಾದ ಧ್ವನಿ (3)

ಮೇಲಿಂದ ಕೆಳಕ್ಕೆ
1.ಹಾವು ಮುಂತಾದ ಹರಿದಾಡುವ ಪ್ರಾಣಿ (4)
2.ತಲೆಕೂದಲ ಬುಡದಲ್ಲಿ ಉಂಟಾಗುವ ಹೊಟ್ಟು (3)
3.ಹೊರಗೆ ಆವರಿಸಿರುವ ಧೂಮ (2)
4.ಧರ್ಮಕಾರ್ಯಗಳಿಗೆ ಕಾದಿಟ್ಟ ಹಣ (4)
5.ಸೆಳವು ರೋಗವನ್ನು ಹೀಗೂ ಹೇಳುತ್ತಾರೆ (4)
8.ದಕ್ಷಿಣ ದಿಕ್ಕಿದು (3)
9.ಮಳೆಗಾಲದಲ್ಲಿ ಆಕಾಶದಿಂದ ಭೂಮಿಗೆ ಬಡಿಯುವ ವಿದ್ಯುತ್‌ಪ್ರವಾಹ (3)
11. ಕೊನೆಗೆ ಸೂತ್ರವಿದ್ದಾಗ ಉಡಿದಾರ ಕಾಣಿಸಿತಲ್ಲಾ (4)
12.ಅದೇ ತಾನೆ ಮೂಡುತ್ತಿರುವ ಸೂರ್ಯ (4)
13.ಕಡಗ ಧರಿಸಿರುವ ಶೂರ! (4)
14.ಪ್ರೀತಿ ಹೀಗೆ ಬಂದಿದೆ (3)
16.ಉದಾಹರಣೆ ನೀಡುವಾಗ ಆದ ಬಾಯಾರಿಕೆ (2)



5778ನೇ ಪದಬಂಧದ ಉತ್ತರ

ಎಡದಿಂದ ಬಲಕ್ಕೆ:
1.ಅಸಂಬಂಧ್ಧ 3.ಕತ್ತಿ
5.ರಾಗ 7.ರಣರಂಗ
9.ಧ್ವಿಸಂ 10.ದಡಾರ
11.ಜಾಗ 12.ಜಮಾಬಂದಿ
14.ಸ್ತ್ಥಾನ 15.ಕಾಕ
16.ಸಕಾರಣ

ಮೇಲಿಂದ ಕೆಳಕ್ಕೆ:
2.ಸಂಯೋಗ 3.ಕಜರಂ
5.ರಾಜಾಧಿರಾಜ
6.ಆನಂದತುಂದಿಲ 8.ಗಜಗಮನ 13.ಮಾದಕ
14.ಸ್ಥಾವರ

ಸುಡೊಕು 6164


	9		2		5		6	
			4			8		5
	4	5			9		3	
4	6		9		7			
				4		1		6
8		7	5		6		4	
		4			2			
7	2			5		6		3
	8		7				5	

ಆಡುವುದು ಹೇಗೆ?

ಮನೆಗಳನ್ನು 1ರಿಂದ 9ರವರೆಗಿನ ಅಂಕಿಗಳಿಂದ ತುಂಬಿ. ಮೇಲಿನಿಂದ ಕೆಳಕ್ಕೆ, ಎಡದಿಂದ ಬಲಕ್ಕೆ ಪ್ರತಿ ಸಾಲಿಗೂ ಇದೇ ನಿಯಮ. ದೊಡ್ಡ ಚೌಕದ ಒಳಗಿನ ಮಧ್ಯಮ ಚೌಕದ ಮನೆಗಳನ್ನೂ ತುಂಬಬೇಕು. ಯಾವ ಅಂಕಿಯೂ ಯಾವುದೇ ಸಾಲು, ಮಧ್ಯಮ ಚೌಕದಲ್ಲಿ ಪುನರಾವರ್ತನೆ ಆಗಬಾರದು.

6163

6	7	9	3	5	4	2	1	8
5	2	4	1	6	8	9	3	7
1	8	3	2	7	9	6	5	4
8	6	7	9	3	5	1	4	2
2	4	5	6	1	7	3	8	9
9	3	1	4	8	2	5	7	6
4	1	8	5	9	6	7	2	3
3	9	2	7	4	1	8	6	5
7	5	6	8	2	3	4	9	1



ಎನ್‌ಎಸ್‌ಇ ನಿಫ್ಟಿ

ವಿನಿಮಯ ದರ





ಚಿನ್ನದ ದರ ₹1,400 ಬೆಳ್ಳಿ ₹3,150 ಏರಿಕೆ

ನವದೆಹಲಿ (ಪಿಟಿಐ): ದೇಶೀಯ ಆಭರಣ ಮಾರುಕಟ್ಟೆಯಲ್ಲಿ ಹೆಚ್ಚಿದ ಬೇಡಿಕೆಯಿಂದಾಗಿ ಮಂಗಳವಾರ ಇಲ್ಲಿನ ಚಿನಿವಾರ ಪೇಟೆಯಲ್ಲಿ ಚಿನ್ನ ಮತ್ತು ಬೆಳ್ಳಿ ಧಾರಣೆಯು ಏರಿಕೆಯಾಗಿದೆ.

10 ಗ್ರಾಂ ಚಿನ್ನದ ದರವು ₹1,400 ಏರಿಕೆಯಾಗಿದ್ದು, ₹74,150ಕ್ಕೆ ಮಾರಾಟವಾಗಿದೆ. ಬೆಳ್ಳಿ ಧಾರಣೆಯು ಕೆ.ಜಿಗೆ ₹3,150 ಹೆಚ್ಚಳವಾಗಿದ್ದು, ₹87,150ಕ್ಕೆ ತಲುಪಿದೆ.

ಕೇಂದ್ರ ಬಜೆಟ್‌ನಲ್ಲಿ ಚಿನ್ನ ಮತ್ತು ಬೆಳ್ಳಿ ಮೇಲಿನ ಮೂಲ ಕಸ್ಟಮ್ಸ್ ಸುಂಕವನ್ನು ಸರ್ಕಾರವು ಕಡಿತಗೊಳಿಸಿತ್ತು. ಹಾಗಾಗಿ, ಜುಲೈ 23ರಂದು ಚಿನ್ನದ ಧಾರಣೆಯು 10 ಗ್ರಾಂಗೆ ₹3,350 ಕಡಿಮೆಯಾಗಿತ್ತು.

'ಅಮೆರಿಕದ ಕೇಂದ್ರೀಯ ಬ್ಯಾಂಕ್ ಆದ ಫೆಡರಲ್ ರಿಸರ್ವ್ ಮುಂಬರುವ ಹಣಕಾಸು ನೀತಿ ಸಮಿತಿ ಸಭೆಗಳಲ್ಲಿ ಬಡ್ಡಿದರ ಕಡಿತಗೊಳಿಸುವ ಸಾಧ್ಯತೆ ಇದೆ. ಹಾಗಾಗಿ, ಹಳದಿ ಲೋಹದ ಬೆಲೆ ಏರಿಕೆಯಾಗಿದೆ' ಎಂದು ಎಚ್‌ಡಿಎಫ್‌ಸಿ ಸೆಕ್ಯುರಿಟೀಸ್‌ನ ಹಿರಿಯ ವಿಶ್ಲೇಷಕ ಸೌಮಿಲ್ ಗಾಂಧಿ ತಿಳಿಸಿದ್ದಾರೆ.

ಪಡಿತರ ಅಂಗಡಿಯಲ್ಲಿ ಸಿರಿಧಾನ್ಯ, ಹೈನು ಉತ್ಪನ್ನ ಲಭ್ಯ

ಜನ ಪೋಷಣ ಕೇಂದ್ರಕ್ಕೆ ಚಾಲನೆ

ನವದೆಹಲಿ (ಪಿಟಿಐ): ಸಾರ್ವಜನಿಕ ಪಡಿತರ ವ್ಯವಸ್ಥೆಯಡಿ ಪೌಷ್ಟಿಕ ಆಹಾರ ಪದಾರ್ಥಗಳನ್ನು ವಿತರಿಸುವ ಪ್ರಾಯೋಗಿಕ ಯೋಜನೆಗೆ ಕೇಂದ್ರ ಸರ್ಕಾರ ಮಂಗಳವಾರ ಚಾಲನೆ ನೀಡಿದೆ.

ಉತ್ತರಪ್ರದೇಶ, ಗುಜರಾತ್, ರಾಜಸ್ಥಾನ ಮತ್ತು ತೆಲಂಗಾಣದಲ್ಲಿ 'ಜನ ಪೋಷಣ ಕೇಂದ್ರ'ದ ಹೆಸರಿನಡಿ 60 ಪಡಿತರ ಅಂಗಡಿಗಳಿಗೆ ಕೇಂದ್ರ ಆಹಾರ ಸಚಿವ ಪ್ರಲ್ಹಾದ ಜೋಶಿ ಚಾಲನೆ ನೀಡಿದ್ದಾರೆ.

ಮುಂಬರುವ ಆರು ತಿಂಗಳಿನಲ್ಲಿ ಒಂದು ಸಾವಿರ ಪಡಿತರ ಅಂಗಡಿಗಳನ್ನು ಜನ ಪೋಷಣ ಕೇಂದ್ರಗಳಾಗಿ ಮೇಲ್ದರ್ಜೆಗೇರಿಸಲಾಗುತ್ತದೆ. ಪ್ರಸಕ್ತ ವರ್ಷದಲ್ಲಿ 40 ಸಾವಿರದಿಂದ 50 ಸಾವಿರ ಅಂಗಡಿಗಳನ್ನು ಮೇಲ್ದರ್ಜೆಗೇರಿಸುವ ಗುರಿ ಹೊಂದಲಾಗಿದೆ.

ಜನರಿಗೆ ಪೋಷಕಾಂಶಗಳ ಖಾತರಿ ನೀಡುವುದು ಕೇಂದ್ರ ಸರ್ಕಾರದ ಗುರಿಯಾಗಿದೆ. ಅಲ್ಲದೆ, ಎಲ್ಲರಿಗೂ ಪೌಷ್ಟಿಕಾಂಶಯುಕ್ತ ಆಹಾರ ದೊರೆಯುವಂತೆ ಮಾಡುವ ಉದ್ದೇಶ ಹೊಂದಲಾಗಿದೆ.



ಪ್ರಲ್ಹಾದ ಜೋಶಿ

ಸದ್ಯ ಪಡಿತರ ಅಂಗಡಿಗಳಲ್ಲಿ ಸಬ್ಸಿಡಿ ದರದಲ್ಲಿ ಗ್ರಾಹಕರಿಗೆ ಆಹಾರ ಧಾನ್ಯ ವಿತರಿಸಲಾಗುತ್ತದೆ. ಇನ್ನು ಮುಂದೆ ಈ ಕೇಂದ್ರಗಳಲ್ಲಿ ಸಿರಿಧಾನ್ಯ, ಬೇಳೆಕಾಳು, ಹೈನು ಉತ್ಪನ್ನಗಳು ಸೇರಿ ದೈನಂದಿನ ಅಗತ್ಯ ಆಹಾರ ಪದಾರ್ಥಗಳು ದೊರೆಯಲಿವೆ. ಇದರಿಂದ ಪಡಿತರ ವಿತರಕರ ಆದಾಯವೂ ಹೆಚ್ಚಲಿದೆ.

ಸಚಿವರ ಅಸಮಾಧಾನ: 'ಕೆಲವು ಪ್ರದೇಶದಲ್ಲಿ ಪಡಿತರ ಅಂಗಡಿಗಳು 8ರಿಂದ 9 ದಿನಗಳು ತೆರೆದಿರುತ್ತವೆ. ಕೆಲವು ವಿತರಕರು ಮೂರು ತಿಂಗಳಿಗೊಮ್ಮೆ ತೆರೆಯುತ್ತಾರೆ. ಉಳಿದ ಅವಧಿಯಲ್ಲಿ ಈ ಅಂಗಡಿಗಳು ಮುಚ್ಚಿರುತ್ತವೆ' ಎಂದು ಪಡಿತರ ಅಂಗಡಿಗಳ ಕಾರ್ಯವೈಖರಿ ಬಗ್ಗೆ ಸಚಿವ ಪ್ರಲ್ಹಾದ ಜೋಶಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪ್ರಸ್ತುತ ನೀಡುತ್ತಿರುವ ಕಮಿಷನ್ ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಸಾಲುತ್ತಿಲ್ಲ. ಹಾಗಾಗಿ, ಪೌಷ್ಟಿಕ ಆಹಾರ ಪದಾರ್ಥಗಳ ಮಾರಾಟಕ್ಕಾಗಿ ಅಂಗಡಿಯ ಜಾಗ ಮತ್ತು ಮಾನವ ಸಂಪನ್ಮೂಲವನ್ನು ಬಳಸಿಕೊಳ್ಳಬಹುದಾಗಿದೆ ಎಂದು ಹೇಳಿದ್ದಾರೆ.

ಆ್ಯಪ್ ಬಿಡುಗಡೆ: 'ಒಂದು ರಾಷ್ಟ್ರ; ಒಂದು ಪಡಿತರ ಚೀಟಿ' ವ್ಯವಸ್ಥೆಯನ್ನು ಬಲಗೊಳಿಸಲು ಕೇಂದ್ರ ಸರ್ಕಾರವು 'ಮೇರಾ ರೇಷನ್' ಆ್ಯಪ್ ಅನ್ನು ಬಿಡುಗಡೆಗೊಳಿಸಿತ್ತು. ಈ ಆ್ಯಪ್‌ನ ಹೊಸ ಆವೃತ್ತಿ ಹಾಗೂ ಭಾರತೀಯ ಆಹಾರ ನಿಗಮದ ಕೈಪಿಡಿಯನ್ನು ಬಿಡುಗಡೆಗೊಳಿಸಿದರು.

ವಿತರಕರಿಗೆ ಸಾಲ ಸೌಲಭ್ಯ

ಪಡಿತರ ವಿತರಕರಿಗೆ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ಬ್ಯಾಂಕ್ (ಎಸ್‌ಐಡಿಬಿಐ) ಮೂಲಕ ಸಾಲ ಸೌಲಭ್ಯ ಕಲ್ಪಿಸಲಾಗುವುದು. ಜೊತೆಗೆ, ಕೇಂದ್ರ ಕೌಶಲ ಅಭಿವೃದ್ಧಿ ಸಚಿವಾಲಯದ ಮೂಲಕ ಉದ್ಯಮಶೀಲತೆ ಬಗ್ಗೆ ತರಬೇತಿ ನೀಡಲಾಗುವುದು ಎಂದು ಕೇಂದ್ರ ಆಹಾರ ಸಚಿವಾಲಯದ ಕಾರ್ಯದರ್ಶಿ ಸಂಜೀವ್ ಚೋಪ್ರಾ ತಿಳಿಸಿದ್ದಾರೆ.

ಪೌಷ್ಟಿಕ ಆಹಾರ ಪದಾರ್ಥ ವಿತರಿಸುವ ಪ್ರಾಯೋಗಿಕ ಯೋಜನೆಯು ಹಂತ ಹಂತವಾಗಿ 5.38 ಲಕ್ಷ ಅಂಗಡಿಗಳಿಗೆ ವಿಸ್ತರಣೆಯಾಗಲಿದೆ. ಬಳಿಕ ದೇಶದಾದ್ಯಂತ ಇರುವ ಪಡಿತರ ಅಂಗಡಿಗಳಿಗೆ ವಿಸ್ತರಿಸಲು ಸರ್ಕಾರ ಗುರಿ ಹೊಂದಿದೆ ಎಂದು ಹೇಳಿದ್ದಾರೆ.

ಪ್ರಶ್ನೋತ್ತರ



ಪ್ರಮೋದ ಶ್ರೀಕಾಂತ ದೈತೋಟ
ತೆರಿಗೆ ಮತ್ತು ವೈಯಕ್ತಿಕ ಹಣಕಾಸು ತಜ್ಞ

ಪ್ರದೀಪ, ದಾವಣಗೆರೆ.

● **ಪ್ರಶ್ನೆ: ನಾನು ಬೆಂಗಳೂರಿನಲ್ಲಿ ಖಾಸಗಿ ಕಂಪನಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದು, ಆದಾಯ ತೆರಿಗೆ ಪಾವತಿಸುತ್ತಿದ್ದೇನೆ. ಸ್ವಂತ ಊರಿನಲ್ಲಿ ಹೊಸ ಮನೆ ಕಟ್ಟಿಸುತ್ತಿದ್ದೇನೆ. ನನ್ನ ವೇತನದಲ್ಲಿ ಉಳಿತಾಯದ ಹಣವನ್ನು ಮನೆ ನಿರ್ಮಾಣಕ್ಕಾಗಿ ನನ್ನ ತಂದೆಯ ಖಾತೆಗೆ ವರ್ಗಾಹಿಸುತ್ತಿದ್ದೇನೆ. ಅವರು ಕೃಷಿಕರಾಗಿದ್ದಾರೆ. ಅವರ ಖಾತೆಗೆ ನಾನು ಜಮೆ ಮಾಡುವ ಹಣಕ್ಕೆ ತೆರಿಗೆ ಅನ್ವಯಿಸುತ್ತದೆಯೇ? ನಾನು ಹೀಗೆ ವರ್ಗಾಯಿಸುವುದರಿಂದ ಯಾವುದಾದರೂ ಸಮಸ್ಯೆ ಇದೆಯೇ? ಈ ವರ್ಗಾವಣೆಯನ್ನು ನಮ್ಮ ಮನೆಯ ನಿರ್ಮಾಣಕ್ಕೋಸ್ಕರ ಹೇಗೆ ನಿರ್ವಹಿಸಬಹುದು? ಈ ಬಗ್ಗೆ ಮಾಹಿತಿ ನೀಡಿ.**

ಉತ್ತರ: ಈಗಾಗಲೇ ನೀವು ತೆರಿಗೆ ಪಾವತಿಸುತ್ತಿರುವ ಬಗ್ಗೆ ಹೇಳಿದ್ದೀರಿ. ನಿಮ್ಮ ತಂದೆಯವರು ಕೃಷಿ ಆದಾಯ ಹೊಂದಿರುವ ಬಗ್ಗೆ ತಿಳಿಸಿದ್ದೀರಿ. ಊರಿನಲ್ಲಿ ಮನೆ ನಿರ್ಮಿಸುವುದು ನಿಮ್ಮ ಉದ್ದೇಶವಾಗಿದೆ. ಪ್ರಶ್ನೆಯಲ್ಲಿ ಹೇಳಿರುವಂತೆ ನಿಮ್ಮ ಗಳಿಕೆಯಲ್ಲಿ ಉಳಿದ ಒಂದಷ್ಟು ಮೊತ್ತವನ್ನು ಮನೆ ನಿರ್ಮಾಣದ ಉದ್ದೇಶಕ್ಕಾಗಿ ಉಪಯೋಗಿಸುತ್ತಿದ್ದೀರಿ. ಈ ಮೊತ್ತವು ನಿಮ್ಮ ತೆರಿಗೆ ಆದಾಯದ ಭಾಗವೇ ಆಗಿದೆ. ಇದಕ್ಕೆ ಅನ್ವಯವಾಗುವ ತೆರಿಗೆಯನ್ನು ನೀವು ಈಗಾಗಲೇ ಕಟ್ಟಿರುತ್ತೀರಿ.

ಇಲ್ಲಿರುವ ಪ್ರಶ್ನೆ ಎಂದರೆ ಯಾವ ರೀತಿ ನೀವು ಈ ಮೊತ್ತವನ್ನು ನೈಜ ಉದ್ದೇಶಕ್ಕಾಗಿ ಬಳಸಿಕೊಳ್ಳಬೇಕು ಎಂಬುದಾಗಿದೆ. ಇದಕ್ಕೆ ಸಂಬಂಧಿಸಿದಂತೆ ನೀವು ಈ ಕೆಳಗಿನ ಆಯ್ಕೆಗಳಲ್ಲಿ ಸೂಕ್ತ ಹಾಗೂ ವ್ಯಾವಹಾರಿಕವಾಗಿ ನಿಮಗೆ ಸಾಧ್ಯವಾಗುವ ರೀತಿಯಲ್ಲಿ ಅಳವಡಿಸಿಕೊಳ್ಳಬಹುದು.

- ಯಾವುದೇ ಹಣದ ವರ್ಗಾವಣೆಯು ತಮ್ಮ ಸಮೀಪದ ಬಂಧುಗಳ ನಡುವೆ ನಡೆದರೆ ಅಂತಹ ವರ್ಗಾವಣೆಯು ಕೆಲವು ರಿಯಾಯಿತಿಗೆ ಒಳಪಡುತ್ತದೆ. ಅರ್ಥಾತ್ ಆ ಮೊತ್ತವನ್ನು ತೆರಿಗೆಗೆ ಒಳಪಡಿಸಲಾಗುವುದಿಲ್ಲ. ಆದರೆ, ಇದಕ್ಕೆ ಸೂಕ್ತ ವರ್ಗಾವಣೆಯ 'ಗಿಫ್ಟ್ ಡೀಡ್' ಹೊಂದಬೇಕಿದೆ. ಮುಂದಿನ ಆರ್ಥಿಕ ವ್ಯವಹಾರಗಳ ಪಾರದರ್ಶಕತೆಯ ದೃಷ್ಟಿಯಿಂದ ಇದು ಅತ್ಯಗತ್ಯವಾಗಿದೆ. ಇದಕ್ಕೆ ಯಾವುದೇ ಆರ್ಥಿಕ ಮಿತಿ ಇಲ್ಲ.
- ನಿಮ್ಮ ಊರಿನಲ್ಲಿ ತಂದೆಯವರ ಹೆಸರಿನಲ್ಲಿ ಈಗಾಗಲೇ ಒಂದು ಬ್ಯಾಂಕ್ ಖಾತೆಯಿದೆ. ಈ ಖಾತೆಗೆ ನಿಮ್ಮ ಹೆಸರನ್ನು ಸೇರಿಸಿ ಅಥವಾ ನಿಮ್ಮ ಹೆಸರಲ್ಲಿ (ಪ್ರಾಥಮಿಕ ಖಾತೆದಾರರಾಗಿ) ಒಂದು ಖಾತೆ ತೆರೆದು ಆ ಖಾತೆಗೆ ನಿಮ್ಮ ತಂದೆಯ ಹೆಸರನ್ನು ಸೇರಿಸಿ ಜಂಟಿ ಖಾತೆ ತೆರೆಯಿರಿ. ಅದರಲ್ಲಿ ನಿಮ್ಮಿಬ್ಬರಲ್ಲಿ ಯಾರೇ ಆದರೂ ವೈಯಕ್ತಿಕವಾಗಿ ಪಾವತಿ ವ್ಯವಹಾರ ಮಾಡುವ ಅವಕಾಶ ಕೊಡುವಂತೆ ಬ್ಯಾಂಕ್ ಖಾತೆ ತೆರೆಯುವಾಗ ಸೂಚಿಸಿ. ನೀವು ಪ್ರತಿ ಬಾರಿ ಹಣ ಕಳುಹಿಸುವಾಗ ನಿಮ್ಮ ಹೆಸರಲ್ಲಿ ಜಂಟಿ ಖಾತೆಗೆ ಹಣ ವರ್ಗಾಯಿಸಿ. ನಿಮ್ಮ ಆದಾಯವು ಈಗಾಗಲೇ ಘೋಷಣೆ ಆಗಿದೆ. ಹಾಗಾಗಿ, ಒಂದು ಖಾತೆಯಿಂದ ಇನ್ನೊಂದು ಖಾತೆಗೆ ನಿಮ್ಮ ಹಣವನ್ನು ನಿಮ್ಮ ಅನುಕೂಲಕ್ಕೆ ವರ್ಗಾಯಿಸುವುದರಿಂದ ತೆರಿಗೆ ವಿಚಾರ ಉದ್ಭವಿಸುವುದಿಲ್ಲ. ಖಾತೆಗೆ ನಿಮ್ಮ ತಂದೆಯವರೂ ಅಧಿಕೃತ ಸಹಿದಾರರಾಗುವುದರಿಂದ ಯಾವುದೇ ಸಮಸ್ಯೆ ಎದುರಾಗುವುದಿಲ್ಲ. ಅಗತ್ಯವಿದ್ದಾಗ ಮೊತ್ತ ಹಿಂಪಡೆದು ಪಾವತಿ ಮಾಡಬಹುದು.
- ಕೊನೆಯ ಅವಕಾಶವಾಗಿ ನೀವು ವರ್ಗಾಯಿಸುವ ಮೊತ್ತವನ್ನು ಸಾಲ ಎಂದು ದಾಖಲಿಸಿ ಹಣವನ್ನು ವರ್ಗಾಯಿಸಿಕೊಳ್ಳಬಹುದಾಗಿದೆ.

ಅಶ್ವಿನಿ ಬಿ.ಎನ್., ಊರು ಹೆಸರಿಸಿಲ್ಲ.

● **ಪ್ರಶ್ನೆ: ತುಮಕೂರು ಜಿಲ್ಲೆಯ ಹಳ್ಳಿಯೊಂದರಲ್ಲಿ ನನಗೆ ಒಂದು ಎಕರೆ ಭೂಮಿ ಇದೆ. ಪ್ರಸ್ತುತ ಈ ಭೂಮಿಯನ್ನು ಮಾರಾಟ ಮಾಡುವ ಹಂತದಲ್ಲಿದ್ದೇನೆ. ಈ ಭೂಮಿಯ ಗೈಡೆನ್ಸ್ ಮೌಲ್ಯ ₹4 ಲಕ್ಷ. ನನ್ನ ಪ್ರಶ್ನೆ ಏನೆಂದರೆ ಈ ಮೌಲ್ಯಕ್ಕಿಂತ ಅಧಿಕ ಮೊತ್ತಕ್ಕೆ ಭೂಮಿ ಮಾರಾಟ ಮಾಡುವ ಸಂದರ್ಭದಲ್ಲಿ ವರ್ಗಾವಣೆ ದಾಖಲೆಗಳಲ್ಲಿ ಮೌಲ್ಯವನ್ನು ನಮೂದಿಸಬಹುದೇ? ಖರೀದಿದಾರರು ತಾವು ಪಾವತಿಸುವ ಮೊತ್ತವನ್ನು ಬ್ಯಾಂಕ್ ಮೂಲಕ ಆರ್‌ಟಿಜಿಎಸ್ ಮಾಡುವ ಬಗ್ಗೆ ಒಪ್ಪಿರುತ್ತಾರೆ. ಈ ರೀತಿ ವರ್ಗಾಯಿಸುವುದು ಸುರಕ್ಷಿತವೇ? ಈ ಬಗ್ಗೆ ಮಾಹಿತಿ ನೀಡಿ.**

ಉತ್ತರ: ಯಾವುದೇ ಭೂಮಿಯನ್ನು ಮಾರಾಟ ಮಾಡುವ ಸಂದರ್ಭದಲ್ಲಿ ಮುದ್ರಾಂಕ ಶುಲ್ಕದ ತೀರ್ಮಾನಕ್ಕೆ ಭೂಮಿಯ ಕನಿಷ್ಠ ಮೌಲ್ಯವನ್ನು ಸರ್ಕಾರ ನಿರ್ಧರಿಸಿ ಸುತ್ತೋಲೆ ಹೊರಡಿಸುತ್ತದೆ. ಇದು ತಮಗೆ ಗೊತ್ತಿರಬಹುದಾದ ವಿಚಾರವಾಗಿದೆ. ಆದರೆ, ಈ ಮೌಲ್ಯಕ್ಕಿಂತ ಹೆಚ್ಚಿನ ಮೊತ್ತಕ್ಕೆ ಕೊಂಡುಕೊಳ್ಳುವವರ ನಡುವೆ ಆರ್ಥಿಕ ಮೌಲ್ಯ ನಿರ್ಧಾರವಾಗಿದ್ದರೆ ಅದಕ್ಕೆ ಯಾರೂ ಅಡ್ಡಿ ಬರಲು ಸಾಧ್ಯವಿಲ್ಲ.

ಕೊಂಡುಕೊಳ್ಳುವವರ ನಡುವಿನ ವ್ಯವಹಾರದಲ್ಲಿ ಆಸ್ತಿಯ ಮೇಲಿನ ಮೌಲ್ಯ ನಿರ್ಧಾರವಾಗುತ್ತದೆ. ಹೀಗಾಗಿ, ನಿಮ್ಮ ಭೂಮಿಯ ಮಾರಾಟ ಮೊತ್ತವನ್ನು ಗೈಡೆನ್ಸ್ ಮೌಲ್ಯ ₹4 ಲಕ್ಷ ಮೀರಿಯೂ ನಿಗದಿ ಮಾಡಬಹುದು. ಆದರೆ, ಅದಕ್ಕೆ ಸಂಬಂಧಿಸಿ ಮುದ್ರಾಂಕ ಶುಲ್ಕವನ್ನು, ಭೂಮಿ ಖರೀದಿಸುವವರು ಪಾವತಿಸುವುದಕ್ಕೆ ತಯಾರಿರಬೇಕು. ಅದೇ ರೀತಿ ಬಂಡವಾಳ ಗಳಿಕೆ ಮೇಲಿನ ತೆರಿಗೆ ಅನ್ವಯಿಸುವುದೇ ಆಗಿದ್ದಲ್ಲಿ ಮುಂದೆ ಮಾರಾಟದ ಸಮಯದಲ್ಲಿ ಕೊಂಡುಕೊಂಡವರು ಅದನ್ನು ಅಸಲು ಎಂದು ಪರಿಗಣಿಸುವುದಕ್ಕೂ ಅವಕಾಶ ಇದೆ. ಹಳ್ಳಿ ಪ್ರದೇಶದ ಯಾವುದೇ ಕೃಷಿ ಭೂಮಿಯನ್ನು ವರ್ಗಾವಣೆ ಮಾಡಿದಾಗ ಬಂಡವಾಳ ಗಳಿಕೆ ಮೇಲಿನ ತೆರಿಗೆ ಇರುವುದಿಲ್ಲ. ಆದರೆ, ಆ ಭೂಮಿಯನ್ನು ಕೃಷಿಗಾಗಿ ಉಪಯೋಗಿಸಲಾಗುತ್ತದೆಯೇ ಎಂಬುದನ್ನು ಖಾತರಿಪಡಿಸುವ ದಾಖಲೆಗಳನ್ನು ಹೊಂದಿರಬೇಕಿದೆ.

ಇನ್ನು ಹಣ ವರ್ಗಾವಣೆಗೆ ಸಂಬಂಧಿಸಿ ನೀವು ಆರ್‌ಟಿಜಿಎಸ್ ಮೂಲಕ ಭೂಮಿಯ ಮೌಲ್ಯ ಪಡೆಯಬಹುದು. ಇದು ಸಹಜ ಪಾವತಿ ಪದ್ಧತಿಯಾಗಿದೆ. ಹೀಗಾಗಿ, ವರ್ಗಾವಣೆಯ ಸಮಯದಲ್ಲಿ ನಿಮ್ಮ ಖಾತೆಗೆ ಮೊತ್ತ ಜಮೆ ಆಗಿರುವ ಬಗ್ಗೆ ಬ್ಯಾಂಕ್‌ನಲ್ಲಿ ವಿಚಾರಿಸಿ ಖಚಿತಪಡಿಸಿಕೊಳ್ಳಬೇಕು. ಪರ್ಯಾಯವಾಗಿ ನೀವು ಡಿ.ಡಿ ಮೂಲಕವೂ ಹಣ ಪಡೆಯಬಹುದು. ನಿಮ್ಮ ಅನುಕೂಲಕರ ಬ್ಯಾಂಕ್ ಖಾತೆಗೆ ಅದನ್ನು ಜಮೆ ಮಾಡಬಹುದು. ಈ ಬಗ್ಗೆ ಮಾಹಿತಿಯನ್ನು ನಿಮ್ಮ ವರ್ಗಾವಣೆ ದಾಖಲೆಗಳಲ್ಲಿ ಸೇರಿಸಿಕೊಳ್ಳಿ. ಅಗತ್ಯ ಕಂಡುಬಂದರೆ ನುರಿತ ವಕೀಲರಿಂದ ಸಲಹೆ ಪಡೆದುಕೊಳ್ಳಬಹುದು.

ಹಣಕಾಸು, ತೆರಿಗೆ ಸಮಸ್ಯೆಗೆ ಪರಿಹಾರ

ಹಣಕಾಸಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಪತ್ರದಲ್ಲಿ (ದೂರವಾಣಿ ಸಂಖ್ಯೆ ಸಹಿತ) ಬರೆದು ಕಳುಹಿಸಿ. ವಿಳಾಸ: ಪ್ರಶ್ನೋತ್ತರ, ವಾಣಿಜ್ಯ ವಿಭಾಗ, ಪ್ರಜಾವಾಣಿ, ನಂ.75, ಮಹಾತ್ಮ ಗಾಂಧಿ ರಸ್ತೆ, ಬೆಂಗಳೂರು–560001
ಇ–ಮೇಲ್:businessdesk@prajavani.co.in

ಸೆನ್ಸೆಕ್ಸ್ ಚೇತರಿಕೆ

ಮುಂಬೈ (ಪಿಟಿಐ): ಬ್ಯಾಂಕಿಂಗ್, ಹಣಕಾಸು ಮತ್ತು ಆಟೊ ಷೇರುಗಳ ಮಾರಾಟ ಹೆಚ್ಚಳದಿಂದಾಗಿ ಮಂಗಳವಾರ ನಡೆದ ವಹಿವಾಟಿನಲ್ಲಿ ದೇಶದ ಷೇರುಪೇಟೆಗಳಲ್ಲಿ ಸಕಾರಾತ್ಮಕ ವಹಿವಾಟು ನಡೆದಿದೆ.

ಮುಂಬೈ ಷೇರುಪೇಟೆ ಸೂಚ್ಯಂಕ ಸೆನ್ಸೆಕ್ಸ್ ಚೇತರಿಕೆ ಕಂಡಿದೆ. 378 ಅಂಶ ಏರಿಕೆ ಕಂಡು 80,802 ಅಂಶಗಳಲ್ಲಿ ಸ್ಥಿರಗೊಂಡಿತು. ವಹಿವಾಟಿನ ಒಂದು ಹಂತದಲ್ಲಿ 518 ಅಂಶ ಏರಿಕೆ ಕಂಡಿತ್ತು. ರಾಷ್ಟ್ರೀಯ ಷೇರುಪೇಟೆ ಸೂಚ್ಯಂಕ ನಿಫ್ಟಿ 126 ಅಂಶ ಏರಿಕೆ ಕಂಡು, 24,698 ಅಂಶಗಳಲ್ಲಿ ವಹಿವಾಟನ್ನು ಮುಕ್ತಾಯಗೊಳಿಸಿತು.

ಸೆನ್ಸೆಕ್ಸ್ ಗುಚ್ಛದಲ್ಲಿನ ಬಜಾಜ್ ಫಿನ್‌ಸರ್ವ್, ಇಂಡಸ್ ಇಂಡ್ ಬ್ಯಾಂಕ್, ಟೆಕ್ ಮಹೀಂದ್ರ, ಬಜಾಜ್ ಫೈನಾನ್ಸ್, ಕೋಟಕ್ ಮಹೀಂದ್ರ ಬ್ಯಾಂಕ್, ಎಕ್ಸಿಸ್ ಬ್ಯಾಂಕ್, ಎನ್‌ಟಿಪಿಸಿ ಮತ್ತು ಸನ್ ಫಾರ್ಮಾ ಷೇರಿನ ಮೌಲ್ಯದಲ್ಲಿ ಏರಿಕೆಯಾಗಿದೆ.

ಭಾರ್ತಿ ಏರ್‌ಟೆಲ್, ಐಟಿಸಿ, ಅದಾನಿ ಪೋರ್ಟ್ಸ್, ಜೆಎಸ್‌ಡಬ್ಲ್ಯು ಸ್ಟೀಲ್, ಟಾಟಾ ಮೋಟರ್ಸ್ ಷೇರಿನ ಮೌಲ್ಯ ಕುಸಿದಿದೆ.

369 ಲಕ್ಷ ಹೆಕ್ಟೇರ್‌ನಲ್ಲಿ ಭತ್ತ ನಾಟಿ

ನವದೆಹಲಿ (ಪಿಟಿಐ): ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಇಲ್ಲಿಯವರೆಗೆ 369.05 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಭತ್ತ ನಾಟಿ ಮಾಡಲಾಗಿದೆ ಎಂದು ಕೇಂದ್ರ ಕೃಷಿ ಸಚಿವಾಲಯ ಮಂಗಳವಾರ ತಿಳಿಸಿದೆ.

ಕಳೆದ ವರ್ಷ ಇದೇ ಅವಧಿಯಲ್ಲಿ 349.49 ಲಕ್ಷ ಹೆಕ್ಟೇರ್‌ನಲ್ಲಿ ಭತ್ತ ನಾಟಿ ಮಾಡಲಾಗಿತ್ತು. ಜೂನ್‌ನಲ್ಲಿ ಮುಂಗಾರು ಮಳೆ ಉತ್ತಮ ಆರಂಭ ಕಂಡಿತು. ಹಾಗಾಗಿ, ಹೆಚ್ಚಿನ ಪ್ರದೇಶದಲ್ಲಿ ನಾಟಿ ಮಾಡಲಾಗಿದೆ. ಸೆಪ್ಟೆಂಬರ್‌ನಿಂದ ಭತ್ತ ಕಟಾವು ಶುರುವಾಗಲಿದೆ ಎಂದು ತಿಳಿಸಿದೆ.

120.18 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ತೊಗರಿ, ಉದ್ದು ಸೇರಿ ವಿವಿಧ ಕಾಳುಗಳ ಬಿತ್ತನೆಯಾಗಿದೆ. ಕಳೆದ ವರ್ಷದ ಇದೇ ಅವಧಿಯಲ್ಲಿ 113.69 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆಯಾಗಿತ್ತು ಎಂದು ತಿಳಿಸಿದೆ.

181.11 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಒರಟು ಧಾನ್ಯಗಳ ಬಿತ್ತನೆಯಾಗಿದೆ. ಈ ಪೈಕಿ 87.23 ಲಕ್ಷ ಹೆಕ್ಟೇರ್‌ನಲ್ಲಿ ಮೆಕ್ಕೆಜೋಳ ಬಿತ್ತನೆಯಾಗಿದೆ.

ಕಳೆದ ವರ್ಷಕ್ಕೆ ಹೋಲಿಸಿದರೆ ಎಣ್ಣೆಕಾಳುಗಳ ಬಿತ್ತನೆ ಪ್ರದೇಶದಲ್ಲಿ ಏರಿಕೆಯಾಗಿದೆ. ಒಟ್ಟು 186.77 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆ ಪೂರ್ಣಗೊಂಡಿದೆ.

57.68 ಲಕ್ಷ ಹೆಕ್ಟೇರ್‌ನಲ್ಲಿ ಕಬ್ಬು ನಾಟಿ ಮಾಡಲಾಗಿದೆ. ಹತ್ತಿ ಬಿತ್ತನೆ ಪ್ರದೇಶದಲ್ಲಿ ಇಳಿಕೆಯಾಗಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 122.15 ಲಕ್ಷ ಹೆಕ್ಟೇರ್‌ನಲ್ಲಿ ಹತ್ತಿ ಬಿತ್ತನೆಯಾಗಿತ್ತು. ಈ ಬಾರಿ 111 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆಯಾಗಿದೆ.

ಒಟ್ಟಾರೆ ಮುಂಗಾರು ಹಂಗಾಮಿನಲ್ಲಿ 1,031.56 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಪೂರ್ಣಗೊಂಡಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಬಿತ್ತನೆ ಪ್ರದೇಶದಲ್ಲಿ ಶೇ 2ರಷ್ಟು ಏರಿಕೆಯಾಗಿದೆ ಎಂದು ತಿಳಿಸಿದೆ.

₹200 ಕೋಟಿ ಹೂಡಿಕೆಗೆ ಬೆಸ್ಟೆಕ್ ಒಲವು: ಸಚಿವ

ಪ್ರಜಾವಾಣಿ ವಾರ್ತೆ

ಬೆಂಗಳೂರು: ತೈವಾನ್‌ನ ಎಲೆಕ್ಟ್ರಾನಿಕ್ಸ್ ಬಿಡಿಭಾಗಗಳ ತಯಾರಿಕಾ ಕಂಪನಿ ಬೆಸ್ಟೆಕ್ ಪವರ್ ಎಲೆಕ್ಟ್ರಾನಿಕ್ಸ್, ರಾಜ್ಯದಲ್ಲಿ ₹200 ಕೋಟಿ ಬಂಡವಾಳ ಹೂಡಲು ಆಸಕ್ತಿ ತೋರಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಹೇಳಿದರು.

ಬೆಸ್ಟೆಕ್ ಉದ್ಯಮ ಸಮೂಹದ ಅಧ್ಯಕ್ಷ ಮೈಕ್ ಚೆನ್ ಮತ್ತು ಉಪಾಧ್ಯಕ್ಷೆ ತೆರೇಸಾ ಡಾಂಗ್ ಜತೆಗೆ ನಗರದಲ್ಲಿ ಮಂಗಳವಾರ ಸಚಿವರು ಸಭೆ ನಡೆಸಿದರು.

ನಂತರ ಮಾತನಾಡಿದ ಅವರು, 'ಕಂಪನಿಯು ಬೆಂಗಳೂರು ಸುತ್ತಮುತ್ತಲಿನ ಪ್ರದೇಶದಲ್ಲಿ ಕಾರ್ಖಾನೆ ಸ್ಥಾಪಿಸಲು ಆಸಕ್ತಿ ತೋರಿಸಿದೆ. ಇದಕ್ಕೆ ರಾಜ್ಯ ಸರ್ಕಾರವು ಎಲ್ಲಾ ರೀತಿಯ ಸಹಕಾರ ನೀಡಲಿದೆ' ಎಂದರು.

'ಮೂಲಸೌಕರ್ಯ ಕಲ್ಪಿಸಿದ ಮೂರು ವರ್ಷಗಳಲ್ಲಿ ಕಂಪನಿಯು ಹಂತ ಹಂತವಾಗಿ ಬಂಡವಾಳ ಹೂಡಲಿದೆ. ಕಂಪನಿಯು 5,000 ಉದ್ಯೋಗಗಳನ್ನು ಸೃಷ್ಟಿಸಲಿದೆ' ಎಂದರು.

'ನಾರಾಯಣಗುರು ನಿಗಮಕ್ಕೆ ಶೀಘ್ರ ಆದೇಶ'

ಪ್ರಜಾವಾಣಿ ವಾರ್ತೆ

ಬೆಂಗಳೂರು: ಬ್ರಹ್ಮಶ್ರೀ ನಾರಾಯಣ ಗುರು ಈಡಿಗ ಅಭಿವೃದ್ಧಿ ನಿಗಮ ಸ್ಥಾಪನೆಗೆ ಶೀಘ್ರದಲ್ಲೇ ಆದೇಶ ಹೊರಡಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಂಗಳವಾರ ಆಯೋಜಿಸಿದ್ದ ಬ್ರಹ್ಮಶ್ರೀ ನಾರಾಯಣಗುರು ಅವರ 170ನೇ ಜನ್ಮ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಈಡಿಗ ಸಮುದಾಯದವರು ಸೋಲೂರು ಭಾಗದಲ್ಲಿ 10 ಎಕರೆ ಜಮೀನನ್ನು ಮಂಜೂರು ಮಾಡಲು ಕೇಳಿದ್ದಾರೆ. ಈ ಬಗ್ಗೆಯೂ ಪರಿಶೀಲಿಸಲು ಸೂಚಿಸಿದ್ದೇನೆ. ಸಮುದಾಯ ಭವನ ಹಾಗೂ ವಿದ್ಯಾರ್ಥಿ ವಸತಿ ನಿಲಯ ನಿರ್ಮಾಣಕ್ಕೂ ಅನುದಾನ ಬಿಡುಗಡೆ ಮಾಡುವುದಾಗಿ ಆಶ್ವಾಸನೆ ನೀಡಿದರು.

'ಈಡಿಗ ಸಮುದಾಯದವರೊಬ್ಬರನ್ನು ಕೆಪಿಎಸ್‌ಸಿ ಸದಸ್ಯರನ್ನಾಗಿ ಮಾಡಬೇಕೆಂದು ಮನವಿ ಮಾಡಿದ್ದಾರೆ. ಈಗಿನ ಸದಸ್ಯರ ಅವಧಿ ಮುಗಿದ ನಂತರ, ಸಮುದಾಯದವರನ್ನು ಸದಸ್ಯರನ್ನಾಗಿ ಮಾಡೋಣ' ಎಂದರು.

'ಬುದ್ಧ, ಬಸವ, ಕನಕದಾಸರಂತೆ, ನಾರಾಯಣ ಗುರುಗಳು ಕೂಡ ಸಂತರು. ಅವರು ಸಮಾಜದಲ್ಲಿ ಅಸಮಾನತೆ ಹೋಗಬೇಕು ಎಂದು ಬೋಧಿಸಿದ್ದರು. ಅವರು ತೋರಿದ ದಾರಿಯಲ್ಲಿ ಸಾಗುವುದೇ ನಾವು ಅವರಿಗೆ ಸಲ್ಲಿಸುವ ಗೌರವ' ಎಂದು ಹೇಳಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನಾರಾಯಣ ಗುರು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಬಿಲ್ಲವ ಸಂಘದ ಅಧ್ಯಕ್ಷ ವೇದ ಕುಮಾರ್, ಆರ್ಯ ಈಡಿಗ ಸಂಘದ ಅಧ್ಯಕ್ಷ ಎಂ. ತಿಮ್ಮೇಗೌಡ, ಆರ್ಯ ಈಡಿಗ ಮಹಾಸಂಸ್ಥಾನದ ವಿಖ್ಯಾತಾನಂದ ಸ್ವಾಮೀಜಿ, ಶ್ರೀನಾರಾಯಣ ಗುರು ಮಹಾಸಂಸ್ಥಾನದ ಪೀಠಾಧಿಪತಿ ರೇಣುಕಾನಂದ ಸ್ವಾಮೀಜಿ, ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಪಾಲ್ಗೊಂಡಿದ್ದರು –ಪ್ರಜಾವಾಣಿ ಚಿತ್ರ

ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ, 'ಹಿಂದುಳಿದ ವರ್ಗದ ನಾಯಕರು ರಾಜ್ಯ ಆಳುವುದಕ್ಕೆ ಪ್ರಾರಂಭಿಸಿದರೆ, ಕೆಲವೊಂದು ಶಕ್ತಿಗಳಿಗೆ ತಡೆದುಕೊಳ್ಳಲಾಗುವುದಿಲ್ಲ. ಬಂಗಾರಪ್ಪನವರು ಆಡಳಿತ ನಡೆಸುವಾಗಲೂ ಏನೇನೋ ಆರೋಪಗಳನ್ನು ಮಾಡಿದರು. ತುಳಿತಕ್ಕೆ ಒಳಗಾದವರಿಗೆ, ಧ್ವನಿ ಇಲ್ಲದವರಿಗೆ ಶಕ್ತಿ ತುಂಬುವ ಕೆಲಸ ಮಾಡುವವರೆಲ್ಲರ ಮೇಲೂ ಆಪಾದನೆಗಳು ಬರುತ್ತಲೇ ಇವೆ. ಹಿಂದುಳಿದ ವರ್ಗದವರು ಗಟ್ಟಿಯಾಗಿ ನಮ್ಮ ಶಕ್ತಿ ಏನೆಂದು ತೋರಿಸಬೇಕು' ಎಂದು ಹೇಳಿದರು.

ಐಡಿಬಿಐ ಬ್ಯಾಂಕ್: ಎಫ್.ಡಿ ಬಡ್ಡಿದರ ಏರಿಕೆ

ನವದೆಹಲಿ (ಪಿಟಿಐ): ಬ್ಯಾಂಕ್‌ಗಳು ಠೇವಣಿ ಸಂಗ್ರಹ ಹೆಚ್ಚಳಕ್ಕೆ ಒತ್ತು ನೀಡಬೇಕು ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ಭಾರತೀಯ ರಿಸರ್ವ್ ಬ್ಯಾಂಕ್ ಸೂಚನೆ ನೀಡಿದ ಬೆನ್ನಲ್ಲೇ, ಐಡಿಬಿಐ ಬ್ಯಾಂಕ್ ಮಂಗಳವಾರ ನಿಶ್ಚಿತ ಠೇವಣಿ ಮೇಲಿನ ಬಡ್ಡಿದರ ವನ್ನು ಏರಿಕೆ ಮಾಡಿದೆ.

IDBI BANK

444 ದಿನಗಳ ಅವಧಿಯ ಠೇವಣಿಯ ಬಡ್ಡಿದರವನ್ನು ಶೇ 7.85ರಷ್ಟು ಹಾಗೂ 375 ದಿನಗಳ ಅವಧಿಯ ಠೇವಣಿ ಮೇಲಿನ ಬಡ್ಡಿದರವನ್ನು ಶೇ 7.75ರಷ್ಟು ಏರಿಕೆ ಮಾಡಲಾಗಿದೆ ಎಂದು ಬ್ಯಾಂಕ್ ತಿಳಿಸಿದೆ.

ವಿಶೇಷ ಅವಧಿಯ ಉತ್ಸವ್ ಠೇವಣಿ ಯೋಜನೆಯಡಿ 700 ದಿನಗಳ ಅವಧಿಯ ಠೇವಣಿಗೆ ಶೇ 7.70ರಷ್ಟು ಹಾಗೂ 300 ದಿನಗಳ ಅವಧಿಯ ಠೇವಣಿಗೆ ಶೇ 7.55ರಷ್ಟು ಬಡ್ಡಿದರ ನಿಗದಿಪಡಿಸಲಾಗಿದೆ ಎಂದು ತಿಳಿಸಿದೆ. ಈ ಯೋಜನೆಯಡಿ ಗ್ರಾಹಕರಿಗೆ ಹೆಚ್ಚಿನ ಗಳಿಕೆ ಸಿಗಲಿದೆ. ಸೆಪ್ಟೆಂಬರ್ 30ರ ವರೆಗೆ ಈ ಸೌಲಭ್ಯ ಸಿಗಲಿದೆ. ಗ್ರಾಹಕರು ಬ್ಯಾಂಕ್‌ನ ವೆಬ್‌ಸೈಟ್, ಮೊಬೈಲ್ ಬ್ಯಾಂಕಿಂಗ್ ಅಥವಾ ಹತ್ತಿರದ ಶಾಖೆಗೆ ಭೇಟಿ ನೀಡಿ ಇದರ ಪ್ರಯೋಜನ ಪಡೆಯಬಹುದಾಗಿದೆ ಎಂದು ತಿಳಿಸಿದೆ.

ಬಿಎಂಡಬ್ಲ್ಯು: 7 ಲಕ್ಷಕ್ಕೂ ಅಧಿಕ ಕಾರು ವಾಪಸ್

ವಾಷಿಂಗ್ಟನ್ (ಎಪಿ): ತಾಂತ್ರಿಕ ಸಮಸ್ಯೆಯಿಂದ ಬೆಂಕಿ ಅವಘಡ ಉಂಟಾಗುವ ಸಾಧ್ಯತೆ ಇರುವುದರಿಂದ ಬಿಎಂಡಬ್ಲ್ಯು ಕಂಪನಿ ತಾನು ಮಾರಾಟ ಮಾಡಿದ 7 ಲಕ್ಷಕ್ಕೂ ಅಧಿಕ ಕಾರುಗಳನ್ನು ಹಿಂಪಡೆಯಲಿದೆ.

ಎಕ್ಸ್ 1, ಎಕ್ಸ್ 3 ಮತ್ತು ಎಕ್ಸ್ 5 ಸೇರಿದಂತೆ ಇತರೆ ಮಾದರಿಯ ಕಾರುಗಳನ್ನು ಹಿಂಪಡೆಯುವಂತೆ ರಾಷ್ಟ್ರೀಯ ಹೆದ್ದಾರಿ ಸುರಕ್ಷತಾ ವಿಭಾಗವು (ಎನ್‌ಎಚ್‌ಟಿಎಸ್‌ಎ) ಸೂಚನೆ ನೀಡಿದೆ.

'ಕಾರಿನಲ್ಲಿರುವ ನೀರಿನ ಪಂಪ್ ಅನ್ನು ಸರಿಯಾಗಿ ಮುಚ್ಚಲಾಗಿಲ್ಲ. ಇದರಿಂದ ಬೆಂಕಿ ಅವಘಡ ಸಂಭವಿಸುವ ಸಾಧ್ಯತೆಯಿದೆ' ಎಂದು ಎನ್‌ಎಚ್‌ಟಿಎಸ್‌ಎ ವರದಿ ಸಲ್ಲಿಸಿತ್ತು.

7 ಲಕ್ಷದ 20 ಸಾವಿರಕ್ಕೂ ಅಧಿಕ ವಾಹನಗಳ ಮಾಲೀಕರಿಗೆ ಈ ಬಗ್ಗೆ ಅಕ್ಟೋಬರ್‌ನಲ್ಲಿ ಕಂಪನಿಯು ಮಾಹಿತಿ ನೀಡುವ ಸಾಧ್ಯತೆಗಳಿದ್ದು, ಬಿಎಂಡಬ್ಲ್ಯು ಶೋರೂಮ್‌ಗಳಲ್ಲಿ ಉಚಿತವಾಗಿ ರಿಪೇರಿ ಮಾಡಿಸಿಕೊಳ್ಳುವಂತೆ ಸೂಚಿಸಲಾಗುತ್ತದೆ.

ರಾಮನಗರ ರೇಷ್ಮೆಗೂಡು



ಖಾದ್ಯ ತೈಲ ಮುಂಬೈ



ಕಮಲಾ ಗೆಲುವು ನಿಶ್ಚಿತ ಜೋ ಬೈಡನ್ ವಿಶ್ವಾಸ

ಶಿಕಾಗೊ (ಪಿಟಿಐ): 'ಕಮಲಾ ಹ್ಯಾರಿಸ್ ಅಮೆರಿಕದ 'ಐತಿಹಾಸಿಕ ಅಧ್ಯಕ್ಷೆ' ಆಗಲಿದ್ದಾರೆ' ಎಂದು ಅಧ್ಯಕ್ಷ ಜೋ ಬೈಡನ್ ಹೇಳಿದ್ದಾರೆ.

ಸೋಮವಾರ ರಾತ್ರಿ ಇಲ್ಲಿ ನಡೆದ ಡೆಮಾಕ್ರಟಿಕ್ ಪಕ್ಷದ ರಾಷ್ಟ್ರೀಯ ಸಮಾವೇಶದಲ್ಲಿ ಕಮಲಾ ಅವರಿಗೆ ಪಕ್ಷದ ಉತ್ತರಾಧಿಕಾರ ಹಸ್ತಾಂತರಿಸಿದ ಬೈಡನ್, 'ಪ್ರಜಾಪ್ರಭುತ್ವವನ್ನು ಉಳಿಸಲು ಕಮಲಾ ಅವರನ್ನು ಬೆಂಬಲಿಸಬೇಕು' ಎಂದು ಮತದಾರರಿಗೆ ಮನವಿ ಮಾಡಿದರು.

ಸಮಾವೇಶದ ವೇದಿಕೆಗೆ 81 ವರ್ಷ ವಯಸ್ಸಿನ ಬೈಡನ್ ಬಂದಾಗ, ಎಲ್ಲರೂ ಎದ್ದುನಿಂತು ಗೌರವ ಸಲ್ಲಿಸುವ ಮೂಲಕ ಭಾವನಾತ್ಮಕವಾಗಿ ಬರಮಾಡಿಕೊಂಡರು.

59 ವರ್ಷದ ಕಮಲಾ ಹ್ಯಾರಿಸ್ ಅವರು ಅಧ್ಯಕ್ಷೀಯ ಚುನಾವಣೆಗೆ ಪಕ್ಷದ ಅಭ್ಯರ್ಥಿಯಾಗಿ ಗುರುವಾರ ಅಧಿಕೃತವಾಗಿ ನಾಮನಿರ್ದೇಶಿತರಾಗುವರು. ಈ ಮೂಲಕ ನ. 5ರ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಅವರಿಗೆ ಮುಖಾಮುಖಿ ಆಗಲಿದ್ದಾರೆ.

'ಅಮೆರಿಕ ಅಧ್ಯಕ್ಷೆಯಾಗಿ ಕಮಲಾ ಹ್ಯಾರಿಸ್ ಅವರನ್ನು ಚುನಾಯಿಸಲು ನೀವು ಸಿದ್ಧರಿದ್ದೀರಾ' ಎಂದು ಬೈಡನ್ ಪ್ರಶ್ನಿಸಿದರು. ಸಮಾವೇಶದಲ್ಲಿ ಭಾಗಿಯಾಗಿದ್ದ ಸಾವಿರಾರು ಜನರು ಇದಕ್ಕೆ ಕರತಾಡನದ ಮೂಲಕ ಇದಕ್ಕೆ ಬೆಂಬಲ ವ್ಯಕ್ತಪಡಿಸಿದರು.



ಶಿಕಾಗೊದಲ್ಲಿ ನಡೆದ ಡೆಮಾಕ್ರಟಿಕ್ ಪಕ್ಷದ ಸಮಾವೇಶದಲ್ಲಿ, ಅಧ್ಯಕ್ಷೀಯ ಚುನಾವಣೆಯ ಅಭ್ಯರ್ಥಿ, ಅಮೆರಿಕದ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರ ಕೈ ಎತ್ತಿಹಿಡಿಯುವ ಮೂಲಕ ಅಧ್ಯಕ್ಷ ಜೋ ಬೈಡನ್ ಬೆಂಬಲ ಸೂಚಿಸಿದರು –ಎ.ಪಿ/ಪಿಟಿಐ ಚಿತ್ರ

'ನಾವು ಪ್ರಜಾಪ್ರಭುತ್ವವನ್ನು ರಕ್ಷಿಸಬೇಕಿದೆ. ಅದಕ್ಕಾಗಿ ಡೊನಾಲ್ಡ್ ಟ್ರಂಪ್ ಅವರನ್ನು ಸೋಲಿಸಬೇಕಿದೆ. ಟ್ರಂಪ್ ಈ ಚುನಾವಣೆಯಲ್ಲಿ ಮಹಿಳಾ ಶಕ್ತಿಯನ್ನು ಕಾಣಲಿದ್ದಾರೆ. ಕಮಲಾ ಅಮೆರಿಕದ 47ನೇ ಅಧ್ಯಕ್ಷರಾಗುವುದು ನಿಶ್ಚಿತ' ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಾಂಗ್ಲಾದ ಮಾಜಿ ಪ್ರಧಾನಿ ವಿರುದ್ಧ ಮತ್ತೊಂದು ಪ್ರಕರಣ ದಾಖಲು

ಹಸೀನಾ ಗಡಿಪಾರಿಗೆ ಮನವಿ

ಢಾಕಾ (ಪಿಟಿಐ): ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರನ್ನು ಗಡಿಪಾರು ಮಾಡುವಂತೆ ಬಾಂಗ್ಲಾದೇಶ ನ್ಯಾಷನಲಿಸ್ಟ್ ಪಕ್ಷದ ಪ್ರಧಾನ ಕಾರ್ಯದರ್ಶಿ ಮಿರ್ಜಾ ಫಖ್ರುಲ್ ಇಸ್ಲಾಂ ಅಲಾಂಗಿರ್ ಅವರು ಭಾರತಕ್ಕೆ ಮನವಿ ಮಾಡಿದ್ದಾರೆ.

ದೇಶದ ಕ್ರಾಂತಿಯನ್ನು ನಿಷ್ಫಲಗೊಳಿಸಲು ಶೇಖ್ ಹಸೀನಾ ಅವರು ಸಂಚು ಮಾಡುತ್ತಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

'ಕಾನೂನಾತ್ಮಕ ಮಾರ್ಗದ ಮೂಲಕ ಹಸೀನಾ ಅವರನ್ನು ಬಾಂಗ್ಲಾ ಸರ್ಕಾರಕ್ಕೆ ಹಸ್ತಾಂತರಿಸಿ. ಅವರು ವಿಚಾರಣೆ ಎದುರಿಸಲಿ' ಎಂದು ಫಖ್ರುಲ್ ಹೇಳಿರುವುದಾಗಿ ಸುದ್ದಿಸಂಸ್ಥೆಯೊಂದು ವರದಿ ಮಾಡಿದೆ.

ಮತ್ತೊಂದು ಕೊಲೆ ಪ್ರಕರಣ ದಾಖಲು: 2013ರ ಮೇ ತಿಂಗಳಲ್ಲಿ ಇಸ್ಲಾಮಿಸ್ಟ್ ಗುಂಪುಗಳು ನಡೆಸಿದ ರ‍್ಯಾಲಿಯನ್ನು ಹತ್ತಿಕ್ಕಿ ನರಮೇಧ ನಡೆಸಿದ ಆರೋಪದ ಮೇಲೆ ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಕ್ ಹಸೀನಾ ಹಾಗೂ 23 ಮಂದಿಯ ವಿರುದ್ಧ ಮಂಗಳವಾರ ಬಾಂಗ್ಲಾದೇಶ ಅಂತರರಾಷ್ಟ್ರೀಯ ಅಪರಾಧಗಳ ನ್ಯಾಯಮಂಡಳಿಯಲ್ಲಿ ಮತ್ತೊಂದು ದೂರು ದಾಖಲಾಗಿದೆ.



ಶೇಕ್ ಹಸೀನಾ

'ಹೆಫಾಜತ್–ಎ–ಇಸ್ಲಾಂ (ಶಿಕ್ಷಣ–ಕಾನೂನು) ವಿಭಾಗದ ಜಂಟಿ ಕಾರ್ಯದರ್ಶಿ ಮುಫ್ತಿ ಹರೂನ್ ಇಜಾಹರ್ ಪರವಾಗಿ ಸುಪ್ರೀಂ ಕೋರ್ಟ್ ವಕೀಲ ಘಾಜಿ ಎಂಎಚ್ ತಮೀಮ್ ಅವರು ದೂರು ದಾಖಲಿಸಿದ್ದಾರೆ' ಎಂದು 'ದಿ ಡೈಲಿ ಸ್ಟಾರ್' ಪತ್ರಿಕೆ ವರದಿ ಮಾಡಿದೆ.

'ನಾವು ದೂರು ಸ್ವೀಕರಿಸಿದ್ದು, ಮಂಗಳವಾರದಿಂದಲೇ ತನಿಖೆ ಆರಂಭಗೊಂಡಿದೆ ಎಂದು ತನಿಖಾ ತಂಡ (ಆಡಳಿತ) ವಿಭಾಗದ ಉಪ ನಿರ್ದೇಶಕ ಅತೌರ್ ರಹಮಾನ್ ತಿಳಿಸಿದ್ದಾರೆ' ಎಂದು ಪತ್ರಿಕೆಯು ಉಲ್ಲೇಖಿಸಿದೆ.

'ಪ್ರಾಥಮಿಕ ಹಂತದ ತನಿಖೆ ಮುಕ್ತಾಯಗೊಂಡ ಬಳಿಕ, ಘಟನೆ ನಡೆದ ಸ್ಥಳಕ್ಕೆ ಭೇಟಿ ನೀಡಲಾಗುವುದು. ನ್ಯಾಯಮಂಡಳಿಯನ್ನು ಪುನರ್‌ರಚಿಸಿ, ಆರೋಪಿಗಳ ವಿರುದ್ಧ ಅರೆಸ್ಟ್ ವಾರಂಟ್ ಹೊರಡಿಸಲಾಗುವುದು' ಎಂದು ಅವರು ತಿಳಿಸಿದರು.

2013ರ ಮೇ 5ರಂದು ಮೊತಿಜಹೀಲ್ ಶಾಪ್ಲಾ ಛತ್ತರ್‌ನಲ್ಲಿ ನಡೆದ ಹೆಫಾಜತ್–ಎ–ಇಸ್ಲಾಂ ರ‍್ಯಾಲಿಯನ್ನು ಹತ್ತಿಕ್ಕಿ ಸಾಮೂಹಿಕ ನರಮೇಧ ನಡೆಸಿದ ಆರೋಪವನ್ನು ಹಸೀನಾ ಹಾಗೂ 23 ಮಂದಿ ವಿರುದ್ಧ ಹೊರಿಸಲಾಗಿದೆ.

17 ವರ್ಷದ ಬಳಿಕ ಖಲೀದಾ ಜಿಯಾ ಬ್ಯಾಂಕ್ ಖಾತೆ ಸಕ್ರಿಯ: ಬಾಂಗ್ಲಾದೇಶದ ಮಾಜಿ ಪ್ರಧಾನಿ ಖಲೀದಾ ಜಿಯಾ ಅವರ ಬ್ಯಾಂಕ್ ಖಾತೆಗಳನ್ನು ತೆರಿಗೆ ಇಲಾಖೆ ಅಧಿಕಾರಿಗಳು 17 ವರ್ಷಗಳ ಬಳಿಕ ಸಕ್ರಿಯಗೊಳಿಸಿದ್ದಾರೆ.

ರಾಷ್ಟ್ರೀಯ ಆದಾಯ ಮಂಡಳಿಯು (ಎನ್‌ಬಿಆರ್) ಈ ಬಗ್ಗೆ ಬ್ಯಾಂಕ್‌ನ ಅಧಿಕಾರಿಗಳಿಗೆ ಸೂಚನೆಯನ್ನು ನೀಡಿದೆ ಎಂದು 'ಡೈಲಿ ಸ್ಟಾರ್' ದೈನಿಕವು ವರದಿ ಮಾಡಿದೆ.

ಮಾಜಿ ಪ್ರಧಾನಿಯೂ ಆದ ಖಲೀದಾ ಜಿಯಾ ಅವರ ಬ್ಯಾಂಕ್ ಖಾತೆ ಸ್ಥಗಿತಗೊಳಿಸಲು ಎನ್‌ಬಿಆರ್‌ನ ಕೇಂದ್ರ ಕಣ್ಗಾವಲು ಘಟಕ 2007ರ ಆಗಸ್ಟ್‌ನಲ್ಲಿ ಬ್ಯಾಂಕ್‌ಗಳಿಗೆ ಸೂಚಿಸಿತ್ತು.

ಮೃತರ ಕುಟುಂಬಗಳ ನೆರವಿಗೆ ಪ್ರತಿಷ್ಠಾನ

ಢಾಕಾ (ಪಿಟಿಐ): ವಿದ್ಯಾರ್ಥಿ ಸಂಘಟನೆಗಳು ಪ್ರತಿಭಟನೆ ನಡೆಸಿದ ಸಂದರ್ಭ ಉಂಟಾದ ಹಿಂಸಾಚಾರದಲ್ಲಿ ಮೃತಪಟ್ಟವರ ಕುಟುಂಬದ ಸದಸ್ಯರ ಯೋಗಕ್ಷೇಮ ನೋಡಿಕೊಳ್ಳಲು ಪ್ರತಿಷ್ಠಾನವೊಂದನ್ನು ಸ್ಥಾಪಿಸಲು ಬಾಂಗ್ಲಾದೇಶದ ಸರ್ಕಾರ ತೀರ್ಮಾನಿಸಿದೆ.

ಮುಖ್ಯ ಸಲಹೆಗಾರ ಪ್ರೊಫೆಸರ್ ಮೊಹಮ್ಮದ್ ಯೂನಸ್ ಅವರು ಪ್ರತಿಷ್ಠಾನದ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸುವರು. ಮಧ್ಯಂತರ ಸರ್ಕಾರದ ಸಲಹೆಗಾರರು, ವಿದ್ಯಾರ್ಥಿ ಸಂಘಟನೆಗಳ ಪ್ರತಿನಿಧಿಗಳು, ದುರ್ಘಟನೆಯಲ್ಲಿ ಮೃತಪಟ್ಟ ಕುಟುಂಬಗಳ ಸದಸ್ಯರು ಈ ಪ್ರತಿಷ್ಠಾನದಲ್ಲಿ ಇರುತ್ತಾರೆ ಎಂದು ಯೂನಸ್ ಅವರ ಕಚೇರಿಯ ಪ್ರಕಟಣೆ ಮಂಗಳವಾರ ತಿಳಿಸಿದೆ.

ಸಿನ್ಸಿನಾಟಿ ಓಪನ್ ಟೆನಿಸ್ ಟೂರ್ನಿ: ಅಮೆರಿಕದ ಫ್ರಾನ್ಸಿಸ್ ಟಿಯಾಫೊ, ಜೆಸ್ಸಿಕಾ ಪೆಗುಲಾಗೆ ನಿರಾಸೆ

ಸಿನ್ನರ್, ಸಬಲೆಂಕಾಗೆ ಕಿರೀಟ

ಸಿನ್ಸಿನಾಟಿ (ಎಎಫ್‌ಪಿ): ಇಟಲಿಯ ಯಾನಿಕ್ ಸಿನ್ನರ್ ಮತ್ತು ಬೆಲಾರಸ್‌ನ ಅರಿನಾ ಸಬಲೆಂಕಾ ಅವರು ಮಂಗಳವಾರ ಸಿನ್ಸಿನಾಟಿ ಓಪನ್ ಎಟಿಪಿ ಮಾಸ್ಟರ್ ಟ್ರೋಫಿ ಟೆನಿಸ್ ಟೂರ್ನಿಯಲ್ಲಿ ಕ್ರಮವಾಗಿ ಪುರುಷರ ಮತ್ತು ಮಹಿಳೆಯರ ಸಿಂಗಲ್ಸ್ ಕಿರೀಟವನ್ನು ಮುಡಿಗೇರಿಸಿಕೊಂಡರು.

ವಿಶ್ವದ ಅಗ್ರಮಾನ್ಯ ಆಟಗಾರ ಸಿನ್ನರ್ ಫೈನಲ್ ಹಣಾಹಣಿಯಲ್ಲಿ 7-6 (7/4), 6-2ರ ನೇರ ಸೆಟ್‌ಗಳಿಂದ ಅಮೆರಿಕದ ಫ್ರಾನ್ಸಿಸ್ ಟಿಯಾಫೊ ಅವರನ್ನು ಸೋಲಿಸಿದರು. ಈ ಇಬ್ಬರು ಆಟಗಾರರಿಗೆ ಮೊದಲ ಸಿನ್ಸಿನಾಟಿ ಫೈನಲ್ ಆಗಿತ್ತು. ಈ ಹಿಂದಿನ ಆವೃತ್ತಿಗಳಲ್ಲಿ ಮೂರನೇ ಸುತ್ತು ತಲುಪಲಷ್ಟೇ ಶಕ್ತವಾಗಿದ್ದರು.

2008ರ ಬಳಿಕ ಸಿನ್ಸಿನಾಟಿ ಪ್ರಶಸ್ತಿ ಗೆದ್ದ ಅತ್ಯಂತ ಕಿರಿಯ ವಯಸ್ಸಿನ ಆಟಗಾರ ಎಂಬ ಹೆಗ್ಗಳಿಕೆಗೆ ಸಿನ್ನರ್ ಪಾತ್ರವಾದರು. 16 ವರ್ಷಗಳ ಹಿಂದೆ 21 ವರ್ಷ ವಯಸ್ಸಿನಲ್ಲಿ ಇಂಗ್ಲೆಂಡ್‌ನ ಆ್ಯಂಡಿ ಮರ್ರೆ ಚಾಂಪಿಯನ್ ಆಗಿದ್ದಾರೆ.

23 ವರ್ಷ ವಯಸ್ಸಿನ ಸಿನ್ನರ್ ಅವರಿಗೆ ಪ್ರಸ್ತುತ ಋತುವಿನಲ್ಲಿ ಇದು ಐದನೇ ಕಿರೀಟವಾಗಿದೆ. ಮೆಲ್ಬರ್ನ್‌ನಲ್ಲಿ ಆಸ್ಟ್ರೇಲಿಯಾ ಓಪನ್ ಕಿರೀಟದೊಂದಿಗೆ ಅವರು ಋತುವನ್ನು ಪ್ರಾರಂಭಿಸಿದ್ದರು. ವೃತ್ತಿಜೀವನದಲ್ಲಿ ಇದು 15ನೇ ಪ್ರಶಸ್ತಿಯಾಗಿದೆ. ಈ ಗೆಲುವಿನೊಂದಿಗೆ ಆ.26ರಂದು ಆರಂಭವಾಗುವ ಅಮೆರಿಕ ಓಪನ್‌ಗೆ ಸಿನ್ನರ್ ಭರ್ಜರಿಯಾಗಿ ತಯಾರಿ ಮಾಡಿಕೊಂಡರು. ಜೊತೆಗೆ ಎಟಿಪಿ ರ‍್ಯಾಂಕಿಂಗ್‌ನಲ್ಲಿ ಎರಡನೇ ಸ್ಥಾನದಲ್ಲಿರುವ ನೊವಾಕ್ ಜೊಕೊವಿಚ್ (ಸರ್ಬಿಯಾ) ಅವರಿಗಿಂತ 2000 ಪಾಯಿಂಟ್ಸ್ ಮುಂದಿದ್ದಾರೆ.

ಅಮೆರಿಕದ 26 ವರ್ಷ ವಯಸ್ಸಿನ ಶ್ರೇಯಾಂಕ ರಹಿತ ಆಟಗಾರ ಟಿಯಾಫೊ ಮೊದಲ ಸೆಟ್‌ನಲ್ಲಿ ಸಿನ್ನರ್‌ಗೆ ತೀವ್ರ ಪೈಪೋಟಿ ನೀಡಿ ಗಮನ ಸೆಳೆದರು. ಆದರೆ, ಇಟಲಿಯ ಆಟಗಾರ ಟೈಬ್ರೇಕರ್ ಮೂಲಕ ಮೇಲುಗೈ ಸಾಧಿಸಿದರು. ಎರಡನೇ ಸೆಟ್‌ನಲ್ಲಿ ಎದುರಾಳಿಗೆ ಪ್ರತಿರೋಧಕ್ಕೆ ಅವಕಾಶ ನೀಡದೆ ಸಿನ್ನರ್ ಸುಲಭ ಜಯ ಸಾಧಿಸಿದರು. ಟೂರ್ನಿಯುದ್ದಕ್ಕೂ ಗಮನಾರ್ಹ ಪ್ರದರ್ಶನ ನೀಡಿದ ಟಿಯಾಫೊ ವಿಶ್ವ ರ‍್ಯಾಂಕಿಂಗ್‌ನಲ್ಲಿ ಅಗ್ರ 20ರಲ್ಲಿ ಸ್ಥಾನ ಪಡೆದರು.

ಟೂರ್ನಿಯಲ್ಲಿ ಒಂದೂ ಸೆಟ್ ಸೋಲದ ಬೆಲಾರಸ್ ಆಟಗಾರ್ತಿ: ಮೂರನೇ ಶ್ರೇಯಾಂಕದ ಸಬಲೆಂಕಾ 6-3, 7-5ರಿಂದ ಆರನೇ ಶ್ರೇಯಾಂಕದ ಅಮೆರಿಕದ ಜೆಸ್ಸಿಕಾ ಪೆಗುಲಾ ಅವರನ್ನು ಹಿಮ್ಮೆಟ್ಟಿಸಿದರು. ಅಲ್ಲದೆ, ಟೂರ್ನಿಯಲ್ಲಿ ಒಂದೂ ಸೆಟ್ ಕಳೆದುಕೊಳ್ಳದೆ ಪ್ರಶಸ್ತಿಯನ್ನು ಗೆದ್ದುಕೊಂಡ ಹಿರಿಮೆಗೆ ಪಾತ್ರವಾದರು.

ಜನವರಿಯಲ್ಲಿ ಆಸ್ಟ್ರೇಲಿಯಾ ಓಪನ್‌ನಲ್ಲಿ ತನ್ನ ಎರಡನೇ ಗ್ರ್ಯಾನ್‌ಸ್ಲಾಮ್ ಪ್ರಶಸ್ತಿಯನ್ನು ಗೆದ್ದ ನಂತರ ಮತ್ತೊಂದು ಟ್ರೋಫಿಯನ್ನು ತನ್ನದಾಗಿಸಿಕೊಂಡರು. ಭುಜದ ಗಾಯದ ಕಾರಣಕ್ಕಾಗಿ ಅವರು ವಿಂಬಲ್ಡನ್‌ನಿಂದ ಹೊರಗುಳಿದಿದ್ದರು.

ಫೈನಲ್ ಹಣಾಹಣಿಗೂ ಮೊದಲು ವಿಶ್ವ ರ‍್ಯಾಂಕಿಂಗ್‌ನಲ್ಲಿ ಮೂರರಿಂದ ಎರಡನೇ ಸ್ಥಾನಕ್ಕೆ ಬಡ್ತಿ ಪಡೆದ ಸಬಲೆಂಕಾಗೆ ಇದು ವೃತ್ತಿಜೀವನದಲ್ಲಿ ಆರನೇ ಡಬ್ಲ್ಯುಟಿಎ 1000 ಪ್ರಶಸ್ತಿಯಾಗಿದೆ. ಒಟ್ಟಾರೆಯಾಗಿ 15ನೇ ಕಿರೀಟವಾಗಿದೆ.

26 ವರ್ಷ ವಯಸ್ಸಿನ ಸಬಲೆಂಕಾ ಸಿನ್ಸಿನಾಟಿ ಓಪನ್‌ನಲ್ಲಿ ಇದೇ ಮೊದಲ ಬಾರಿ ಫೈನಲ್ ತಲುಪಿದ್ದರು. ಈ ಹಿಂದೆ ಸೆಮಿಫೈನಲ್ ಪ್ರವೇಶಿಸುವಹಾದಿಯಲ್ಲಿ ಮೂರು ಬಾರಿ ನಿರಾಸೆ ಅನುಭವಿಸಿದ್ದರು.




ಪ್ರಶಸ್ತಿಯೊಂದಿಗೆ ಇಟಲಿಯ ಯಾನಿಕ್ ಸಿನ್ನರ್ (ಎಡಚಿತ್ರ). ಬೆಲಾರಸ್‌ನ ಅರಿನಾ ಸಬಲೆಂಕಾ ಅವರ ಆಟದ ವೈಖರಿ –ಎಎಫ್‌ಪಿ ಚಿತ್ರಗಳು

ಅಮಾನತು ಆತಂಕದಿಂದ ಸಿನ್ನರ್ ಪಾರು

ಇಂಡಿಯನ್ ವೇಲ್ಸ್ (ಎಪಿ): ನಿಷೇಧಿತ ಉದ್ದೀಪನ ಮದ್ದು ಸೇವನೆ ಪರೀಕ್ಷೆಯಲ್ಲಿ ದೃಢಪಟ್ಟರೂ ಯಾನಿಕ್ ಸಿನ್ನರ್ ಅಮಾನತು ಆತಂಕದಿಂದ ಪಾರಾಗಿದ್ದಾರೆ.

ಮಾರ್ಚ್‌ನಲ್ಲಿ ಇಂಡಿಯನ್ ವೇಲ್ಸ್ ಮಾಸ್ಟರ್ ಟೂರ್ನಿಯ ವೇಳೆ ನಡೆಸಲಾಗಿದ್ದ ಎರಡು ಬಾರಿಯ ಪರೀಕ್ಷೆಯಲ್ಲಿ ನಿಷೇಧಿತ ಅನಾಬೊಲಿಕ್ ಸ್ಟೆರಾಯ್ಡ್ ಅಂಶ ಪತ್ತೆಯಾಗಿತ್ತು. ಹೀಗಾಗಿ, ಅವರ ಬಹುಮಾನದ ಮೊತ್ತ ಮತ್ತು ಪಾಯಿಂಟ್‌ಗಳನ್ನು ತಡೆಹಿಡಿದು, ತಾತ್ಕಾಲಿಕವಾಗಿ ಅಮಾನತು ಮಾಡಲಾಗಿತ್ತು. ಅದರ ವಿರುದ್ಧ ಸಿನ್ನರ್ ಅಂತರರಾಷ್ಟ್ರೀಯ ಟೆನಿಸ್ ಇಂಟೆಗ್ರಿಟಿ ಏಜೆನ್ಸಿಗೆ (ಐಟಿಐಎ) ಮೇಲ್ಮನವಿ ಸಲ್ಲಿಸಿ, ಟೂರ್ನಿಗಳಲ್ಲಿ ಸ್ಪರ್ಧಿಸಲು ಅನುಮತಿ ಪಡೆದಿದ್ದರು.

ಪ್ರಕರಣದ ತೀರ್ಪನ್ನು ಐಟಿಐಎ ಮಂಗಳವಾರ ಪ್ರಕಟಿಸಿದೆ. ಸಿನ್ನರ್ ಅವರು ಉದ್ದೇಶಪೂರ್ವಕವಾಗಿ ನಿಷೇಧಿತ ಉದ್ದೀಪನ ಮದ್ದು ಸೇವನೆ ಮಾಡಿಲ್ಲ. ಹೀಗಾಗಿ, ಅಮಾನತು ಅಗತ್ಯವಿಲ್ಲ ಎಂದು ಹೇಳಿದೆ.

ಮಹಾರಾಜ ಟ್ರೋಫಿ: ಪಾಂಡೆ ಪಡೆಯ ಅಜೇಯ ಓಟ

ಟೈಗರ್ಸ್‌ಗೆ ಮಣಿದ ಲಯನ್ಸ್

ಪ್ರಜಾವಾಣಿ ವಾರ್ತೆ

ಬೆಂಗಳೂರು ಮಂಗಳವಾರ ಸಂಜೆ ಸುರಿದ ಮಳೆಯಿಂದಾಗಿ ಅಸ್ತವ್ಯಸ್ತವಾದ ಪಂದ್ಯದಲ್ಲಿ ಹುಬ್ಬಳ್ಳಿ ಟೈಗರ್ಸ್ ತಂಡವು 8 ವಿಕೆಟ್‌ಗಳಿಂದ ಗೆದ್ದಿತು. ಇದರೊಂದಿಗೆ ಮಹಾರಾಜ ಟ್ರೋಫಿ ಕ್ರಿಕೆಟ್ ಟೂರ್ನಿಯಲ್ಲಿ ಸತತ ನಾಲ್ಕನೇ ಜಯ ಸಾಧಿಸಿತು. ಹಾಲಿ ಚಾಂಪಿಯನ್ ಹುಬ್ಬಳ್ಳಿ ತಂಡವು ಶಿವಮೊಗ್ಗ ಲಯನ್ಸ್ ತಂಡವು 8 ವಿಕೆಟ್‌ಗಳಿಂದ ಜಯಿಸಿತು.

ಶಿವಮೊಗ್ಗ ತಂಡಕ್ಕೆ ಜಯದ ಖಾತೆ ತೆರೆಯಲು ಸಾಧ್ಯವಾಗಲಿಲ್ಲ. ತಂಡವು ಇದುವರೆಗೆ ಆಡಿರುವ ಎಲ್ಲ ನಾಲ್ಕು ಪಂದ್ಯಗಳಲ್ಲಿಯೂ ಸೋತಿದೆ.

ಹುಬ್ಬಳ್ಳಿ ತಂಡದ ನಾಯಕ ಮನೀಷ್ ಪಾಂಡೆ ಅವರು ಟಾಸ್ ಗೆದ್ದು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡರು. ಶಿವಮೊಗ್ಗ 17 ಓವರ್‌ಗಳಲ್ಲಿ 9 ವಿಕೆಟ್‌ಗಳಿಗೆ 137 ರನ್ ಗಳಿಸಿತು. ಹಾರ್ದಿಕ್ ರಾಜ್ (35; 21ಎ, 4X3, 6X2) ಮತ್ತು ಎಸ್. ಶಿವರಾಜ್ (24; 6ಎಸೆತ) ಅವರು ತಂಡಕ್ಕೆ ಬಲ ತುಂಬಿದರು. ಆದರೆ, ಮಳೆ ಸುರಿದಿದ್ದರಿಂದ ಬಹಳ ಹೊತ್ತಿನವರೆಗೂ ಪಂದ್ಯ ಸ್ಥಗಿತವಾಯಿತು. ವಿ.ಜಯದೇವನ್ ಪದ್ಧತಿಯಲ್ಲಿ ಗುರಿ ಪರಿಷ್ಕರಿಸಲಾಯಿತು. ಇದರಿಂದಾಗಿ ಹುಬ್ಬಳ್ಳಿ ತಂಡಕ್ಕೆ 5 ಓವರ್‌ಗಳಲ್ಲಿ 51 ರನ್‌ಗಳ ಗುರಿ ನೀಡಲಾಯಿತು.

ತಂಡದ ಆರಂಭಿಕ ಬ್ಯಾಟರ್ ತಿಪ್ಪಾ ರೆಡ್ಡಿ ಬೇಗನೆ ಔಟಾದರು. ಆದರೆ ಆಸರೆಯಾದ ಮೊಹಮ್ಮದ್ ತಾಹ (35; 12ಎ) ತಂಡವನ್ನು ಗೆಲುವಿನ ದಡ ಸೇರಿಸಿದರು. ಮೊಹಮ್ಮದ್ ಅವರು ಐದು ಸಿಕ್ಸರ್ ಸಿಡಿಸಿದರು. ತಂಡವು 3.2 ಓವರ್‌ಗಳಲ್ಲಿ 2 ವಿಕೆಟ್‌ಗಳಿಗೆ ಜಯದ ಗುರಿ ದಾಟಿತು. ಸ್ಪಿನ್ನರ್ ಕೆ.ಸಿ. ಕಾರಿಯಪ್ಪ (30ಕ್ಕೆ2) ಅವರು ಶಿವಮೊಗ್ಗದ ರೋಹಿತ್ ಮತ್ತು ಶಿವರಾಜ್ ವಿಕೆಟ್‌ಗಳನ್ನು ಗಳಿಸಿದರು. ಇದರಿಂದಾಗಿ ತಂಡಕ್ಕೆ ದೊಡ್ಡ ಮೊತ್ತ ಗಳಿಸಲು ಸಾಧ್ಯವಾಗಲಿಲ್ಲ.

ಸಂಕ್ಷಿಪ್ತ ಸ್ಕೋರು: ಶಿವಮೊಗ್ಗ ಲಯನ್ಸ್: 17 ಓವರ್‌ಗಳಲ್ಲಿ 9ಕ್ಕೆ 137 (ಹಾರ್ದಿಕ್ ರಾಜ್ 35, ಕೆ. ರೋಹಿತ್ 19, ಅಭಿನವ್ ಮನೋಹರ್ 17, ಎಸ್. ಶಿವರಾಜ್ 24, ಕೆ.ಸಿ. ಕಾರಿಯಪ್ಪ 30ಕ್ಕೆ2) **ಹುಬ್ಬಳ್ಳಿ ಟೈಗರ್ಸ್:** 3.2 ಓವರ್‌ಗಳಲ್ಲಿ 2 ವಿಕೆಟ್‌ಗಳಿಗೆ 51 (ಮೊಹಮ್ಮದ್ ತಹಾ 35, ಟಿ. ಪ್ರದೀಪ್ 14ಕ್ಕ2) **ಫಲಿತಾಂಶ:** ಹುಬ್ಬಳ್ಳಿ ಟೈಗರ್ಸ್ ತಂಡಕ್ಕೆ 8 ವಿಕೆಟ್‌ಗಳ ಜಯ (ವಿಜೆಡಿ ಪದ್ಧತಿ). **ಪಂದ್ಯದ ಆಟಗಾರ:** ಕೆ.ಸಿ. ಕಾರಿಯಪ್ಪ.

ಪಂದ್ಯ ಮಳೆಗೆ ಆಹುತಿ: ಗುಲ್ಬರ್ಗ ಮಿಸ್ಟಿಕ್ಸ್ ಮತ್ತು ಮಂಗಳೂರು ಡ್ರ್ಯಾಗನ್ಸ್ ನಡುವಿನ ಪಂದ್ಯ ಮಳೆಗೆ ಆಹುತಿಯಾಯಿತು. ಹೀಗಾಗಿ ಉಭಯ ತಂಡಗಳಿಗೆ ತಲಾ ಒಂದೊಂದು ಅಂಕ ನೀಡಲಾಯಿತು.

ಮೊದಲು ಬ್ಯಾಟಿಂಗ್ ಮಾಡಿದ ಗುಲ್ಬರ್ಗ ತಂಡವು ಪೃಥ್ವಿರಾಜ್ (54;19ಎ) ಅವರ ಅರ್ಧಶತಕದ ಬಲದಿಂದ 20 ಓವರ್‌ಗಳಲ್ಲಿ 168 ರನ್ ಗಳಿಸಿತ್ತು. ಮಂಗಳೂರು ತಂಡದ ಇನಿಂಗ್ಸ್ ಆರಂಭಿಸಿ 4.2 ಓವರ್‌ಗಳಲ್ಲಿ 46 ರನ್ ಗಳಿಸಿತ್ತು. ಈ ಮಳೆ ಸುರಿಯಲಾರಂಭಿಸಿತು. ಕೆಲ ಹೊತ್ತು ಕಾದರೂ ಮಳೆ ನಿಲ್ಲದ ಕಾರಣ ಅಂಪೈರ್‌ಗಳು ಪಂದ್ಯವನ್ನು ರದ್ದುಗೊಳಿಸುವ ನಿರ್ಧಾರ ಪ್ರಕಟಿಸಿದರು.



ಕೆ.ಸಿ. ಕಾರಿಯಪ್ಪ ಬೌಲಿಂಗ್ ಶೈಲಿ

ತಂಡಗಳು	ಪಂದ್ಯ	ಗೆಲುವು	ಸೋಲು	ಅಂಕ	ನೆಟ್ ರನ್‌ರೇಟ್
ಹುಬ್ಬಳ್ಳಿ ಟೈಗರ್ಸ್	4	4	0	8	1.198
ಬೆಂಗಳೂರು ಬ್ಲಾಸ್ಟರ್ಸ್	4	3	1	6	1.392
ಮೈಸೂರು ವಾರಿಯರ್ಸ್	4	2	2	4	0.339
ಮಂಗಳೂರು ಡ್ರ್ಯಾಗನ್ಸ್	4	1	2	3	-0.020
ಗುಲ್ಬರ್ಗ ಮಿಸ್ಟಿಕ್ಸ್	4	1	2	3	-1.592
ಶಿವಮೊಗ್ಗ ಲಯನ್ಸ್	4	0	4	0	-1.855

‘ಕ್ರೀಡೆಯಿಂದಲೂ ಸೊಗಸಾದ ಜೀವನ ಸಾಧ್ಯ’

ಚೆನ್ನೈ (ಪಿಟಿಐ): ‘ಸುಂದರವಾದ ಜೀವನ ರೂಪಿಸಿಕೊಳ್ಳಲು ಎಂಜಿನಿಯರ್ ಅಥವಾ ವೈದ್ಯರಾಗಬೇಕಾಗಿಲ್ಲ. ಕ್ರೀಡೆಯ ಮೂಲಕವೂ ಸೊಗಸಾದ ಬದುಕು ಕಟ್ಟಿಕೊಳ್ಳಲು ಸಾಧ್ಯವಿದೆ’–

ಪ್ಯಾರಿಸ್ ಒಲಿಂಪಿಕ್ ಕೂಟದ ಮಹಿಳೆಯರ ಶೂಟಿಂಗ್ ಸ್ಪರ್ಧೆಗಳಲ್ಲಿ ಎರಡು ಕಂಚಿನ ಪದಕ ಗೆದ್ದಿರುವ ಮನು ಭಾಕರ್ ಅವರ ನುಡಿಗಳಿವು.

22 ವರ್ಷದ ಮನು ಅವರು ಪ್ಯಾರಿಸ್ ಒಲಿಂಪಿಕ್ಸ್ ಮುಕ್ತಾಯ ಸಮಾರಂಭದಲ್ಲಿ ಧ್ವಜಧಾರಿಯೂ ಆಗಿದ್ದರು. ತದನಂತರ ಸ್ವದೇಶಕ್ಕೆ ಮರಳಿದ ಮೇಲೆ ಅವರು ಹಲವು ಸನ್ಮಾನ ಸಮಾರಂಭಗಳಲ್ಲಿ ಭಾಗಿಯಾಗುತ್ತಿದ್ದಾರೆ. ಮಂಗಳವಾರ ಅವರು ಚೆನ್ನೈನ ವೇಲಮ್ಮಾಳ್ ನೆಕ್ಸಸ್ ಶಾಲೆಯಲ್ಲಿ ಸತ್ಕಾರ ಸ್ವೀಕರಿಸಿದರು. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

‘ನನ್ನ ಪಯಣದಲ್ಲಿ ಟೋಕಿಯೊ ಒಲಿಂಪಿಕ್ಸ್ ಬಹುದೊಡ್ಡ ಸವಾಲಾಗಿತ್ತು. ಆಗ ಅನುಭವಿಸಿದ್ದ ವೈಫಲ್ಯದಿಂದ ಹೊರಬರಲು ಬಹಳಷ್ಟು ಕಷ್ಟ ಪಡಬೇಕಾಯಿತು. ಆ ಒಲಿಂಪಿಕ್ಸ್‌ನಲ್ಲಿ ನಾನು ವಿಶ್ವದ ಎರಡನೇ ರ‍್ಯಾಂಕ್ ಆಟಗಾರ್ತಿಯಾಗಿ ಕಣಕ್ಕಿಳಿದಿದ್ದೆ. ಆದರೆ ಉತ್ತಮ ಸಾಧನೆ ಮಾಡಲು ಸಾಧ್ಯವಾಗಿರಲಿಲ್ಲ. ಆದರೆ ಸೋಲಿನ ನಂತರ ಮತ್ತೆ ಕಣಕ್ಕಿಳಿದು ಜಯಿಸುವುದೇ ಕ್ರೀಡೆಯ ನಿಜವಾದ ಸೌಂದರ್ಯವಾಗಿದೆ. ಒಂದು ಸ್ಪರ್ಧೆಯಲ್ಲಿ ಸೋಲಬಹುದು. ಆದರೆ ಮತ್ತೊಂದರಲ್ಲಿ ಜಯಿಸಬಹುದು. ಅದಕ್ಕಾಗಿ ಕಠಿಣ ಪರಿಶ್ರಮಪಡುವುದು ಮುಖ್ಯ’ ಎಂದು ಹರಿಯಾಣದ ಮನು ಹೇಳಿದರು.

‘ಜೀವನ ರೂಪಿಸಿಕೊಳ್ಳಲು ಬಹಳಷ್ಟು ಆಯ್ಕೆಗಳಿವೆ. ಬರೀ ವೈದ್ಯ ಅಥವಾ ಎಂಜಿನಿಯರ್ ಆಗಬೇಕೆಂದೇನೂ ಇಲ್ಲ. ಕ್ರೀಡಾ ಜೀವನವೂ ಸುಂದರವಾಗಿದೆ. ಧನಸಹಾಯ ಮತ್ತಿತರ ಸೌಲಭ್ಯಗಳು ಸಿಗುತ್ತಿವೆ’ ಎಂದರು.

‘ತಾಯಿಯೇ ನನ್ನ ಪ್ರೇರಣೆ. ಇವತ್ತು ನಾನು ಏನೇ ಆಗಿದ್ದರೂ ಅವರೇ ಕಾರಣ. ಯಶಸ್ವಿ ವ್ಯಕ್ತಿಗಳ ಸಾಧನೆಯಿಂದ ಪ್ರೇರಣೆಗೊಳ್ಳುವುದು ತಪ್ಪಲ್ಲ. ಆದರೆ ಅವರಂತೆ ಆಗಬಾರದು. ಅವರಿಗಿಂತಲೂ ವಿಭಿನ್ನವಾದ ಉನ್ನತ ಸಾಧನೆ ಮಾಡಬೇಕೆಂದು ಹೇಳಿದ್ದರು. ಪಾಲಕರ ಪ್ರೋತ್ಸಾಹವಿಲ್ಲದೇ ಯಾವ ಮಗುವೂ ದೊಡ್ಡ ಸಾಧನೆ ಮಾಡಲಾಗುವುದಿಲ್ಲ. ಶಾಲೆಯ ದಿನಗಳಿಂದಲೇ ನಾನು ಶೂಟಿಂಗ್ ಕ್ರೀಡೆಯಲ್ಲಿ ಆಸಕ್ತಿ ವಹಿಸಿದೆ. ಪಾಲಕರು ಮತ್ತು ಶಿಕ್ಷಕರಿಂದ ಪ್ರೋತ್ಸಾಹ ದೊರೆಯಿತು’ ಎಂದು ಹೇಳಿದರು.



ಒಲಿಂಪಿಕ್ಸ್‌ನಲ್ಲಿ ಎರಡು ಕಂಚಿನ ಪದಕ ಜಯಿಸಿದ ಶೂಟರ್ ಮನು ಭಾಕರ್ ಅವರನ್ನು ಚೆನ್ನೈನಲ್ಲಿ ನಡೆದ ಕಾರ್ಯಕ್ರಮದಲ್ಲಿ ಗೌರವಿಸಲಾಯಿತು –ಪಿಟಿಐ ಚಿತ್ರ

ಟಿ20 ವಿಶ್ವಕಪ್: 6 ಪಿಚ್‌ಗಳು ‘ತೃಪ್ತಿಕರ’

ದುಬೈ (ಪಿಟಿಐ): ಟಿ20 ವಿಶ್ವಕಪ್ ಟೂರ್ನಿಯಲ್ಲಿ ನ್ಯೂಯಾರ್ಕ್ ಲೆಗ್‌ನಲ್ಲಿ ಬಳಸಲಾದ ಎಂಟು ಪಿಚ್‌ಗಳ ಪೈಕಿ ಆರು ಪಿಚ್‌ಗಳಿಗೆ ಐಸಿಸಿ ‘ತೃಪ್ತಿದಾಯಕ’ ರೇಟಿಂಗ್ ನೀಡಿದೆ.

ಐಸಿಸಿ ಟಿ20 ವಿಶ್ವಕಪ್ ಟೂರ್ನಿಯು ವೆಸ್ಟ್ ಇಂಡೀಸ್ ಮತ್ತು ಅಮೆರಿಕ ಆತಿಥ್ಯದಲ್ಲಿ ನಡೆದಿತ್ತು. ಟೂರ್ನಿಯಲ್ಲಿ ರೋಹಿತ್ ಶರ್ಮಾ ನೇತೃತ್ವದ ಭಾರತ ತಂಡ ಚಾಂಪಿಯನ್ ಆಗಿತ್ತು.

ಟೂರ್ನಿಯ ಡ್ರಾಪ್ ಇನ್ ಪಿಚ್‌ಗಳ ಕಳಪೆ ಗುಣಮಟ್ಟದ ಬಗ್ಗೆ ಟೀಕೆ ವ್ಯಕ್ತವಾಗಿತ್ತು. ಈ ಬಗ್ಗೆ ಪರಿಶೀಲನೆ ನಡೆಸಿ ಐಸಿಸಿಯು ಪಿಚ್‌ಗಳ ವರದಿಯನ್ನು ಬಿಡುಗಡೆ ಮಾಡಿದೆ.

ಐರ್ಲೆಂಡ್ ವಿರುದ್ಧದ ಭಾರತದ ಆರಂಭಿಕ ಪಂದ್ಯವನ್ನು ಒಳಗೊಂಡಂತೆ ನ್ಯೂಯಾರ್ಕ್‌ನ ನಾಸೌ ಕೌಂಟಿ ಕ್ರೀಡಾಂಗಣದಲ್ಲಿ ನಡೆದ ಎರಡು ಪಂದ್ಯಗಳ ಪಿಚ್‌ಗಳಿಗೆ ‘ಅತೃಪ್ತಿಕರ’ ರೇಟಿಂಗ್ ನೀಡಲಾಗಿದೆ. ಮತ್ತೊಂದು ಪಂದ್ಯ ಶ್ರೀಲಂಕಾ – ದಕ್ಷಿಣ ಆಫ್ರಿಕಾ ನಡುವೆ ನಡೆದಿತ್ತು.

ಎಲ್ಲಾ 52 ಪೂರ್ಣಗೊಂಡ ಪಂದ್ಯಗಳನ್ನು ಒಳಗೊಂಡಿರುವ ವರದಿಯಲ್ಲಿ ಮೂರು ಪಿಚ್‌ಗಳಲ್ಲಿ ಅಮೆರಿಕದ ಎರಡು ಮತ್ತು ವೆಸ್ಟ್ ಇಂಡೀಸ್‌ನ ಒಂದನ್ನು ‘ಅತೃಪ್ತಿಕರ’ ಎಂದು ಪರಿಗಣಿಸಲಾಗಿದೆ. ಉಳಿದ ಹೆಚ್ಚಿನವು ‘ತೃಪ್ತಿದಾಯಕ’ ಅಥವಾ ಹೆಚ್ಚಿನ ರೇಟಿಂಗ್‌ಗಳನ್ನು ಪಡೆದಿವೆ.

ಐಸಿಸಿ ಅಧ್ಯಕ್ಷ ಗಾದಿಗೆ ಜಯ್ ಶಾ?

ದುಬೈ (ಪಿಟಿಐ): ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ (ಐಸಿಸಿ) ಅಧ್ಯಕ್ಷ ಗ್ರೆಗ್ ಬರ್ಕ್ಲೆ ಅವರ ಅಧಿಕಾರಾವಧಿ ನವೆಂಬರ್ 30ರಂದು ಕೊನೆಗೊಳ್ಳಲಿದೆ. ಆ ಸ್ಥಾನಕ್ಕೆ ಈಗ ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಅವರ ಹೆಸರು ಮುಂಚೂಣಿಯಲ್ಲಿದೆ.

ನೂತನ ಅಧ್ಯಕ್ಷ ಸ್ಥಾನಕ್ಕೆ ಉಮೇದುವಾರಿಕೆ ಸಲ್ಲಿಸಲು ಆಗಸ್ಟ್ 27 ಕೊನೆಯ ದಿನವಾಗಿದೆ. ಆ ಸ್ಥಾನಕ್ಕೆ ಕಣಕ್ಕೆ ಇಳಿಸಲು ಶಾ ಅವರು ಆಸಕ್ತಿ ಹೊಂದಿದ್ದಾರೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ.

ಐಸಿಸಿ ಅಧ್ಯಕ್ಷರು ತಲಾ ಎರಡು ವರ್ಷಗಳ ಮೂರು ಅವಧಿಗೆ ಆಯ್ಕೆಯಾಗಬಹುದು. ಆದರೆ, ನ್ಯೂಜಿಲೆಂಡ್ ಮೂಲದ ಗ್ರೆಗ್ ಈಗಾಗಲೇ ನಾಲ್ಕು ವರ್ಷಗಳನ್ನು ಪೂರೈಸಿದ್ದಾರೆ.

‘2020ರ ನವೆಂಬರ್‌ನಲ್ಲಿ ಗ್ರೆಗ್ ಅವರು ಐಸಿಸಿ ಸಾರಥ್ಯ ಪಡೆದಿದ್ದರು. 2022ರಲ್ಲಿ ಮರು ಆಯ್ಕೆಯಾಗಿದ್ದರು. ಆದರೆ, ಮೂರನೇ ಅವಧಿಗೆ ಚುನಾವಣೆಗೆ ನಿಲ್ಲುವುದಿಲ್ಲ ಎಂದು ಐಸಿಸಿ ಮಂಡಳಿಗೆ ತಿಳಿಸಿದ್ದಾರೆ’ ಎಂದು ಐಸಿಸಿ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದೆ.

ಮಹಿಳಾ ಟಿ20 ವಿಶ್ವಕಪ್ ಟೂರ್ನಿ: ಐಸಿಸಿ ನಿರ್ಧಾರ

ಬಾಂಗ್ಲಾದೇಶದಿಂದ ಯುಎಇಗೆ ಸ್ಥಳಾಂತರ

ದುಬೈ (ಪಿಟಿಐ): ಬಾಂಗ್ಲಾದೇಶದಲ್ಲಿ ನಡೆಯಲಿದ್ದ ಮಹಿಳೆಯರ ಟಿ20 ವಿಶ್ವಕಪ್ ಕ್ರಿಕೆಟ್ ಟೂರ್ನಿಯನ್ನು ಯುನೈಟೆಡ್ ಅರಬ್ ಎಮಿರೇಟ್ಸ್ (ಯುಎಇ)ಗೆ ಸ್ಥಳಾಂತರಿಸಲಾಗಿದೆ.

ಬಾಂಗ್ಲಾದಲ್ಲಿ ಕಳೆದ ಕೆಲವು ದಿನಗಳಲ್ಲಿ ಗಲಭೆ, ಹಿಂಸಾಚಾರಗಳು ವ್ಯಾಪಕವಾಗಿ ನಡೆದ ಕಾರಣ ಅಂತರರಾಷ್ಟ್ರೀಯ ಕ್ರಿಕೆಟ್ (ಐಸಿಸಿ) ಸಂಸ್ಥೆಯು ಮಂಗಳವಾರ ಈ ನಿರ್ಧಾರ ಕೈಗೊಂಡಿದೆ. ಬಾಂಗ್ಲಾದೇಶವೇ ಆತಿಥ್ಯ ವಹಿಸಲಿದ್ದು, ಟೂರ್ನಿ ಪಂದ್ಯಗಳು ದುಬೈ ಮತ್ತು ಶಾರ್ಜಾದಲ್ಲಿ ಆಯೋಜನೆಯಾಗಲಿದೆ.

ಕೆಲವು ದೇಶಗಳ ಕ್ರಿಕೆಟ್ ಸಂಸ್ಥೆಗಳು ಮತ್ತು ಪ್ರಮುಖ ಆಟಗಾರರು ಬಾಂಗ್ಲಾದಲ್ಲಿ ಆಡಲು ತೆರಳುವ ಬಗ್ಗೆ ಆತಂಕ ವ್ಯಕ್ತಪಡಿಸಿದ್ದರಿಂದ ಐಸಿಸಿ ಈ ತೀರ್ಮಾನ ಮಾಡಿದೆ. ಟೂರ್ನಿಯು ಅ.3 ರಿಂದ 20ರವರೆಗೆ ಟೂರ್ನಿ ನಡೆಯಲಿದೆ.

‘ಮಹಿಳೆಯರ ಟಿ20 ಕ್ರಿಕೆಟ್ ವಿಶ್ವಕಪ್ ಟೂರ್ನಿಯನ್ನು ಬಾಂಗ್ಲಾದೇಶದಲ್ಲಿ ನಡೆಸಲು ಸಾಧ್ಯವಾಗದಿರುವುದು ನಾಚಿಕೆಗೇಡು. ಬಿಸಿಬಿ (ಬಾಂಗ್ಲಾ ಕ್ರಿಕೆಟ್ ಮಂಡಳಿ)ಗೆ ಒಂದು ಅಭೂತಪೂರ್ವವಾದ ಟೂರ್ನಿಯನ್ನು ನಡೆಸುವ ಸಾಮರ್ಥ್ಯ ಇತ್ತು’ ಎಂದು ಐಸಿಸಿ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಜೆಫ್ ಅಲರ್ಡೈಸ್ ಹೇಳಿದರು.

‘ಬಿಸಿಬಿಯು ಎಲ್ಲ ಆಯಾಮಗಳಿಂದಲೂ ಪರಿಶೀಲಿಸಿದ ನಂತರವೇ ಟೂರ್ನಿಯನ್ನು ಬಾಂಗ್ಲಾದಿಂದ ಸ್ಥಳಾಂತರಿಸಲು ಒಪ್ಪಿದೆ. ಯುಎಇಯಲ್ಲಿ ನಡೆಯುವ ಟೂರ್ನಿಗೆ ಬಾಂಗ್ಲಾದೇಶವೇ ಆತಿಥ್ಯ ವಹಿಸಲಿದೆ. ಅದರಿಂದ ಬರುವ ಆದಾಯವೂ ಬಾಂಗ್ಲಾಕ್ಕೆ ಲಭಿಸಲಿದೆ’ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಒಂದೇ ಓವರ್‌ನಲ್ಲಿ 39 ರನ್: ವಿಸೆರ್ ದಾಖಲೆ

ನವದೆಹಲಿ (ಪಿಟಿಐ): ಸಮೋವಾದ ಮಧ್ಯಮ ಕ್ರಮಾಂಕದ ಬ್ಯಾಟರ್ ಡಾರಿಯಸ್ ವಿಸೆರ್ ಟಿ20 ಅಂತರರಾಷ್ಟ್ರೀಯ ಕ್ರಿಕೆಟ್‌ನ ಒಂದೇ ಓವರ್‌ನಲ್ಲಿ 39 ರನ್ ಗಳಿಸಿ ದಾಖಲೆ ಬರೆದಿದ್ದಾರೆ.

ಟಿ20 ವಿಶ್ವಕಪ್ ಪೂರ್ವ ಏಷ್ಯಾ- ಫೆಸಿಫಿಕ್ ವಲಯದ ಕ್ವಾಲಿಫೈಯರ್ ಪಂದ್ಯದಲ್ಲಿ ವನೌಟು ತಂಡದ ವಿರುದ್ಧ 28 ವರ್ಷದ ವಿಸೆರ್ ಅಬ್ಬರಿಸಿದ್ದಾರೆ. ನಳಿನ್ ನಿಪಿಕೊ ಅವರ ಬೌಲಿಂಗ್‌ನಲ್ಲಿ ಆರು ಸಿಕ್ಸರ್ ಸಿಡಿಸಿದ್ದಾರೆ. ಜೊತೆಗೆ ಮೂರು ನೋಬಾಲ್‌ಗಳು ಒಳಗೊಂಡಿವೆ. ಇದು ಒಂದೇ ಓವರ್‌ನಲ್ಲಿ ದಾಖಲಾದ ಗರಿಷ್ಠ ರನ್ ದಾಖಲೆಯಾಗಿದೆ.

ವಿಸೆರ್ ಅವರಿಗೆ ಇದು ಮೂರನೇ ಟಿ20 ಅಂತರರಾಷ್ಟ್ರೀಯ ಪಂದ್ಯವಾಗಿದೆ. ಈ ಪಂದ್ಯದಲ್ಲಿ ಅವರು 62 ಎಸೆತಗಳಲ್ಲಿ ಐದು ಬೌಂಡರಿ ಮತ್ತು 14 ಸಿಕ್ಸರ್ ಸೇರಿದಂತೆ 132 ರನ್ ಗಳಿಸಿದ್ದಾರೆ. ಸಮೋವಾ ಈ ಪಂದ್ಯವನ್ನು 10 ರನ್‌ಗಳಿಂದ ಗೆದ್ದುಕೊಂಡಿದೆ.

ನಿಪಿಕೊ ಒಂದೇ ಓವರ್‌ನಲ್ಲಿ 36 ರನ್ ಕೊಟ್ಟ ಆರನೇ ಬೌಲರ್ ಎಂಬ ಅಪಖ್ಯಾತಿ ಗಳಿಸಿದರು. ಈ ಹಿಂದೆ ಸ್ಟುವರ್ಟ್ ಬ್ರಾಡ್ (2007), ಅಕಿಲಾ ಧನಂಜಯ (2021), ಕರೀಮ್ ಜನ್ನತ್ (2024), ಕಮ್ರಾನ್ ಖಾನ್ (2024) ಮತ್ತು ಅಜ್ಮತುಲ್ಲಾ ಒಮರ್‌ಝೈ (2024) ನೀಡಿದ್ದರು. ಸ್ಟುವರ್ಟ್ ಅವರ ಬೌಲಿಂಗ್‌ನಲ್ಲಿ ಭಾರತದ ಯುವರಾಜ್ ಸಿಂಗ್ ಮೊದಲ ಬಾರಿ 6 ಸಿಕ್ಸರ್ ಸಿಡಿಸಿದ್ದರು.

ಸಂದೀಪ್ ಘೋಷ್‌ಗೆ ಸಮನ್ಸ್ ಸಾಧ್ಯತೆ

ಹಣಕಾಸಿನ ಅವ್ಯವಹಾರ ಎಸ್‌ಐಟಿ ತನಿಖೆ ಆರಂಭ

ಕೋಲ್ಕತ್ತ/ನವದೆಹಲಿ (ಪಿಟಿಐ): ಆರ್.ಜಿ.ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ನಡೆದಿದೆ ಎನ್ನಲಾದ ‘ಹಣಕಾಸಿನ ಅವ್ಯವಹಾರ’ಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ತಂಡ (ಎಸ್‌ಐಟಿ) ಮಂಗಳವಾರ ತನಿಖೆ ಆರಂಭಿಸಿದೆ. ಕಾಲೇಜಿನ ಮಾಜಿ ಪ್ರಾಚಾರ್ಯ ಸಂದೀಪ್ ಘೋಷ್ ಅವರನ್ನು ವಿಚಾರಣೆಗೆ ಒಳಪಡಿಸಲು ಎಸ್‌ಐಟಿ ಸಿದ್ಧತೆ ನಡೆಸಿದೆ.

ಹಣಕಾಸಿನ ಅವ್ಯವಹಾರಗಳ ಬಗ್ಗೆ ತನಿಖೆಗೆ ಪಶ್ಚಿಮ ಬಂಗಾಳ ಸರ್ಕಾರ, ಡಾ.ಪ್ರಣವ್ ಕುಮಾರ್ ನೇತೃತ್ವದಲ್ಲಿ ನಾಲ್ವರು ಸದಸ್ಯರನ್ನೊಳಗೊಂಡ ಎಸ್‌ಐಟಿಯನ್ನು ರಚಿಸಿದೆ.

ಆಸ್ಪತ್ರೆಯಲ್ಲಿ ನಡೆದ ವೈದ್ಯ ವಿದ್ಯಾರ್ಥಿನಿ ಮೇಲಿನ ಅತ್ಯಾಚಾರ, ಕೊಲೆ ಘಟನೆಗೆ ಸಂಬಂಧಿಸಿದಂತೆ ಸಿಬಿಐ ಅಧಿಕಾರಿಗಳು ಘೋಷ್ ಅವರನ್ನು ಶುಕ್ರವಾರದಿಂದ ಸತತ ನಾಲ್ಕು ದಿನ ವಿಚಾರಣೆಗೆ ಒಳಪಡಿಸಿದ್ದರು.

‘ಹಣಕಾಸಿನ ಅವ್ಯವಹಾರದಲ್ಲಿ ಘೋಷ್ ಅವರು ಭಾಗಿಯಾಗಿದ್ದಾರೆ ಎಂಬ ಆರೋಪಗಳಿವೆ. ಎಸ್‌ಐಟಿ ಅಧಿಕಾರಿಗಳು ವಿಚಾರಣೆಗಾಗಿ ಶೀಘ್ರದಲ್ಲೇ ಅವರಿಗೆ ಸಮನ್ಸ್ ನೀಡಲಿದ್ದಾರೆ’ ಎಂದು ಅಧಿಕಾರಿಯೊಬ್ಬರು ಹೇಳಿದರು.

2021ರ ಜನವರಿಯಿಂದ ಈವರೆಗೆ ನಡೆದಿರುವ ಹಣಕಾಸಿನ ಅವ್ಯವಹಾರ ಆರೋಪಗಳಿಗೆ ಸಂಬಂಧಿಸಿದಂತೆ ತನಿಖೆ ನಡೆಯಲಿದೆ. ಘೋಷ್ ಅವರು 2021ರಲ್ಲಿ ಈ ಕಾಲೇಜಿನ ಪ್ರಾಚಾರ್ಯರಾಗಿ ಅಧಿಕಾರ ವಹಿಸಿಕೊಂಡಿದ್ದರು. ವೈದ್ಯ ವಿದ್ಯಾರ್ಥಿನಿ ಹತ್ಯೆ ಘಟನೆ (ಆಗಸ್ಟ್ 9) ನಡೆದ ಎರಡು ದಿನಗಳ ಬಳಿಕ ಅವರು ರಾಜೀನಾಮೆ ನೀಡಿದ್ದರು.

ಭದ್ರತೆ ಹೆಚ್ಚಳಕ್ಕೆ ಕೇಂದ್ರ ಅಸ್ತು: ಕೇಂದ್ರ ಸರ್ಕಾರದ ಅಧೀನದಲ್ಲಿರುವ ಎಲ್ಲ ಆಸ್ಪತ್ರೆಗಳಲ್ಲಿ ಭದ್ರತಾ ಸಿಬ್ಬಂದಿ ನಿಯೋಜನೆಯನ್ನು ಶೇ 25ರಷ್ಟು ಹೆಚ್ಚಿಸಲು ಆರೋಗ್ಯ ಸಚಿವಾಲಯವು ಅನುಮತಿ ನೀಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈಗ ಚಾಲ್ತಿಯಲ್ಲಿರುವ ಭದ್ರತಾ ವ್ಯವಸ್ಥೆಗೆ ಹೊರತಾಗಿ, ಆಸ್ಪತ್ರೆಗಳು ಹೆಚ್ಚುವರಿಯಾಗಿ ಮಾರ್ಷಲ್‌ಗಳ ನಿಯೋಜನೆಗೆ ಬೇಡಿಕೆಯಿಟ್ಟರೆ ಅದಕ್ಕೂ ಒಪ್ಪಿಗೆ ನೀಡಲಾಗುವುದು ಎಂದು ಹೇಳಿದ್ದಾರೆ.



ಕೋಲ್ಕತ್ತದ ಸ್ವಾಸ್ಥ್ಯ ಭವನಕ್ಕೆ ಮುತ್ತಿಗೆ ಹಾಕಲು ಯತ್ನಿಸಿದ ಎಬಿವಿಪಿ ಕಾರ್ಯಕರ್ತೆಯೊಬ್ಬರನ್ನು ಪೊಲೀಸರು ವಶಕ್ಕೆ ತೆಗೆದುಕೊಂಡರು – ಪಿಟಿಐ ಚಿತ್ರ

ಬಿಜೆಪಿ ಧರಣಿಗೆ ಅವಕಾಶ

ವೈದ್ಯ ವಿದ್ಯಾರ್ಥಿನಿ ಕೊಲೆ ಖಂಡಿಸಿ ಕೋಲ್ಕತ್ತದ ಶ್ಯಾಮ್‌ಬಜಾರ್ ಮೆಟ್ರೊ ನಿಲ್ದಾಣದ ಬಳಿ ಆಗಸ್ಟ್ 21ರಿಂದ ಐದು ದಿನ ಧರಣಿ ನಡೆಸಲು ಪಶ್ಚಿಮ ಬಂಗಾಳ ಬಿಜೆಪಿಗೆ ಕಲ್ಕತ್ತ ಹೈಕೋರ್ಟ್ ಅನುಮತಿ ನೀಡಿದೆ.

‘ಜನರಿಗೆ ಸರ್ಕಾರದ ಮೇಲಿನ ವಿಶ್ವಾಸ ಇಲ್ಲ’

ವೈದ್ಯ ವಿದ್ಯಾರ್ಥಿನಿ ಮೇಲಿನ ಅತ್ಯಾಚಾರ, ಕೊಲೆ ಘಟನೆಯು ‘ಅತ್ಯಂತ ನಾಚಿಕೆಗೇಡಿನ ಕೃತ್ಯ’ ಎಂದು ಹೇಳಿರುವ ಪಶ್ಚಿಮ ಬಂಗಾಳದ ರಾಜ್ಯಪಾಲ ಸಿ.ವಿ.ಆನಂದ ಬೋಸ್, ‘ಜನರು ರಾಜ್ಯ ಸರ್ಕಾರದ ಮೇಲಿನ ವಿಶ್ವಾಸ ಕಳೆದುಕೊಂಡಿದ್ದಾರೆ’ ಎಂದಿದ್ದಾರೆ.

‘ಬಂಗಾಳದಲ್ಲಿ ವಿದ್ಯಾರ್ಥಿಗಳು ಸರ್ಕಾರದ ಮೇಲೆ ನಂಬಿಕೆ ಕಳೆದುಕೊಂಡಿದ್ದಾರೆ. ಯುವಜನರು ಭಯಭೀತರಾಗಿದ್ದು, ಮಹಿಳೆಯರು ಹತಾಶರಾಗಿದ್ದಾರೆ. ನಾಗರಿಕರ ರಕ್ಷಣೆ ಮಾಡಬೇಕಾದ ಸರ್ಕಾರ ತನ್ನ ಕರ್ತವ್ಯವನ್ನು ನಿರ್ವಹಿಸುತ್ತಿಲ್ಲ ಎಂಬ ಭಾವನೆ ಜನರಲ್ಲಿ ಇದೆ’ ಎಂದು ಮಂಗಳವಾರ ಹೇಳಿದ್ದಾರೆ.

ಬೋಸ್ ಅವರು ಮಂಗಳವಾರ ನವದೆಹಲಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಿ, ಚರ್ಚಿಸಿದರು.

ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ತರಾಟೆ

ಒಂದನೇ ಪುಟದಿಂದ...

ಅತ್ಯಾಚಾರ ಹಾಗೂ ಹತ್ಯೆ ಪ್ರಕರಣದ ತನಿಖೆಯಲ್ಲಿ ಆಗಿರುವ ಪ್ರಗತಿಯ ಬಗ್ಗೆ ವಸ್ತುಸ್ಥಿತಿ ವರದಿಯನ್ನು ಸಲ್ಲಿಸಬೇಕು ಎಂದು ಸಿಬಿಐಗೆ, ವಿಧ್ವಂಸಕ ಕೃತ್ಯ ನಡೆಸಿದವರ ವಿರುದ್ಧ ಕೈಗೊಂಡ ಕ್ರಮದ ಕುರಿತು ವರದಿ ಸಲ್ಲಿಸುವಂತೆ ಪಶ್ಚಿಮ ಬಂಗಾಳ ಸರ್ಕಾರಕ್ಕೆ ಪೀಠವು ಸೂಚನೆ ನೀಡಿದೆ.

ಸಂತ್ರಸ್ತೆಯ ಹೆಸರು, ಆಕೆಯ ಭಾವಚಿತ್ರ, ಆಕೆಯ ಶವದ ದೃಶ್ಯಗಳು ಕೆಲವು ಮಾಧ್ಯಮಗಳಲ್ಲಿ ಪ್ರಸಾರವಾಗಿರುವುದರ ಬಗ್ಗೆ ಕೋರ್ಟ್ ತೀವ್ರ ಕಳವಳ ವ್ಯಕ್ತಪಡಿಸಿದೆ.

ಆಸ್ಪತ್ರೆಯಲ್ಲಿ ನಡೆದ ಗುಂಪು ಹಿಂಸಾಚಾರ ಹಾಗೂ ಕೋಲ್ಕತ್ತ ಪೊಲೀಸರು ಆ ಸ್ಥಳದಿಂದ ಓಡಿಹೋಗಿದ್ದರು ಎಂಬ ಆರೋಪಗಳನ್ನು ಗಂಭೀರವಾಗಿ ಪರಿಗಣಿಸಿದ ಕೋರ್ಟ್, ವೈದ್ಯರು ಅಲ್ಲಿ ಮತ್ತೆ ಕೆಲಸ ಮಾಡಲು ಸಾಧ್ಯವಾಗುವಂತೆ ಭದ್ರತೆಗೆ ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆಯನ್ನು (ಸಿಐಎಸ್‌ಎಫ್) ನಿಯೋಜಿಸುವಂತೆ ಸೂಚಿಸಿದೆ.

‘ಕ್ರೂರವಾದ ಕೃತ್ಯ ಹಾಗೂ ಅದಕ್ಕೆ ಪ್ರತಿಭಟನೆಗಳು ನಡೆದಾಗ, ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ಎದುರಾಗದಂತೆ ನೋಡಿಕೊಳ್ಳಲು ರಾಜ್ಯ ಸರ್ಕಾರವು ಆಡಳಿತ ಯಂತ್ರವನ್ನು ನಿಯೋಜಿಸಬೇಕಿತ್ತು. ಆಸ್ಪತ್ರೆಯ ಆವರಣದಲ್ಲಿ ನಡೆದ ಅಪರಾಧ ಕೃತ್ಯದ ತನಿಖೆಯು ನಡೆಯುತ್ತಿದ್ದ ಕಾರಣ ಹಾಗೆ ಮಾಡುವುದು ತೀರಾ ಅಗತ್ಯವಾಗಿತ್ತು.

ಆದರೆ, ಆಸ್ಪತ್ರೆಯ ಆವರಣದಲ್ಲಿ ವಿಧ್ವಂಸಕ ಕೃತ್ಯಗಳನ್ನು ನಿಭಾಯಿಸಲು ಸರ್ಕಾರ ಸಜ್ಜಾಗಿಲ್ಲದೆ ಇದ್ದುದು ಹೇಗೆ ಎಂಬುದು ನಮಗೆ ಅರ್ಥವಾಗುತ್ತಿಲ್ಲ’ ಎಂದು ಕೋರ್ಟ್ ಹೇಳಿದೆ.

ಕೋರ್ಟ್ ಮಾತುಗಳನ್ನು ಅಲ್ಲಗಳೆದ ಪಶ್ಚಿಮ ಬಂಗಾಳ ಸರ್ಕಾರದ ಪರ ವಕೀಲ ಕಪಿಲ್ ಸಿಬಲ್, ಕೋಲ್ಕತ್ತ ಪೊಲೀಸರು ಅಗತ್ಯವಾಗಿದ್ದ ಎಲ್ಲ ಕ್ರಮಗಳನ್ನೂ ಕೈಗೊಂಡಿದ್ದರು ಎಂದು ತಿಳಿಸಿದರು. ‘ಮಹಜರು ನಡೆಸಿ, ಅಸಹಜ ಸಾವು ಪ್ರಕರಣವನ್ನು ತಕ್ಷಣವೇ ದಾಖಲಿಸಿಕೊಳ್ಳಲಾಯಿತು’ ಎಂದು ಸಿಬಲ್ ವಿವರಿಸಿದರು.

ಏಳು ಸಾವಿರ ಜನರು ಇದ್ದ ಗುಂಪೊಂದು ಆಸ್ಪತ್ರೆ ಬಳಿ ಸೇರಿತ್ತು. ಪೊಲೀಸರಿಗೆ ಮಾಹಿತಿ ಇಲ್ಲದೆ, ಅವರ ಒಪ್ಪಿಗೆ ಇಲ್ಲದೆ ಹೀಗಾಗಲು ಸಾಧ್ಯವೇ ಇಲ್ಲ ಎಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ದೂರಿದರು. ‘ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯು ಸಂಪೂರ್ಣವಾಗಿ ಕುಸಿದುಬಿದ್ದಿದೆ’ ಎಂದೂ ಅವರು ಹೇಳಿದರು.

ಹಿಂದಿನ ಪ್ರಾಂಶುಪಾಲರ ನಡೆಗೆ ಆಕ್ರೋಶ

ಒಂದನೇ ಪುಟದಿಂದ...

ಪೊಲೀಸರು ಏನು ಮಾಡುತ್ತಿದ್ದರು? ಗಂಭೀರವಾದ ಅಪರಾಧ ನಡೆದಿದೆ, ಅಪರಾಧ ನಡೆದ ಸ್ಥಳವು ಆಸ್ಪತ್ರೆಯ ಆವರಣದಲ್ಲಿದೆ. ಅಪರಾಧ ನಡೆದ ಸ್ಥಳಕ್ಕೆ ಪೊಲೀಸರು ರಕ್ಷಣೆ ಒದಗಿಸಬೇಕಿತ್ತು. ವಿಧ್ವಂಸಕ ಕೃತ್ಯ ನಡೆಸುವವರು ಆಸ್ಪತ್ರೆಯನ್ನು ಪ್ರವೇಶಿಸಲು ಪೊಲೀಸರು ಅವಕಾಶ ನೀಡಿದ್ದು ಹೇಗೆ? ಪ್ರಾಂಶುಪಾಲರು ರಾಜೀನಾಮೆ ನೀಡಿದ ನಂತರ ಅವರನ್ನು ಇನ್ನೊಂದು ಆಸ್ಪತ್ರೆಗೆ ಕಳುಹಿಸಲಾಗಿದೆ. ಅವರ ನಡತೆಯ ಬಗ್ಗೆಯೇ ಪರಿಶೀಲನೆ ನಡೆಯುತ್ತಿರುವಾಗ, ಅವರನ್ನು ಇನ್ನೊಂದು ಸಂಸ್ಥೆಗೆ ತಕ್ಷಣ ನೇಮಕ ಮಾಡಿದ್ದು ಹೇಗೆ’ ಎಂದು ಪೀಠ ಪ್ರಶ್ನಿಸಿತು.

‘ದಯವಿಟ್ಟು ವಿಶ್ವಾಸ ಇರಿಸಿ’

ದೇಶದಾದ್ಯಂತ ಪ್ರತಿಭಟನೆ ನಡೆಸುತ್ತಿರುವ ವೈದ್ಯರು ಪ್ರತಿಭಟನೆಯನ್ನು ಕೈಬಿಟ್ಟು ಕೆಲಸಕ್ಕೆ ಮರಳಬೇಕು ಎಂಬ ಮನವಿ ಮಾಡುವ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್ ‘ದಯವಿಟ್ಟು ನಮ್ಮ ಮೇಲೆ ವಿಶ್ವಾಸ ಇರಿಸಿ’ ಎಂದು ಹೇಳಿದೆ.

‘ವೈದ್ಯರ ರಕ್ಷಣೆ ಹಾಗೂ ಸುರಕ್ಷತೆಯು ದೇಶದ ಪಾಲಿಗೆ ಅತ್ಯಂತ ಮುಖ್ಯವಾದ ಸಂಗತಿ ಎಂಬುದನ್ನು ಖಾತರಿಪಡಿಸಲು ನಾವು ಇಲ್ಲಿದ್ದೇವೆ. ದಯವಿಟ್ಟು ನಮ್ಮ ಮೇಲೆ ವಿಶ್ವಾಸ ಇರಿಸಿ. ಹೀಗಾಗಿಯೇ ನಾವು ಈ ವಿಚಾರವನ್ನು ಹೈಕೋರ್ಟ್‌ಗೇ ಬಿಟ್ಟುಬಿಡುವ ಕೆಲಸ ಮಾಡಿಲ್ಲ’ ಎಂದು ಪೀಠವು ಹೇಳಿದೆ.

ಕಾರ್ಯಪಡೆಯಲ್ಲಿ ಇರುವವರು

ಸರ್ಜನ್ ವೈಸ್ ಅಡ್ಮಿರಲ್ ಆರತಿ ಸರೀನ್, ಡಾ.ಡಿ. ನಾಗೇಶ್ವರ ರೆಡ್ಡಿ, ಡಾ.ಎಂ. ಶ್ರೀನಿವಾಸ್, ಡಾ. ಪ್ರತಿಮಾ ಮೂರ್ತಿ, ಡಾ. ಗೋವರ್ಧನ ದತ್ ಪುರಿ, ಡಾ. ಸೌಮಿತ್ರಾ ರಾವತ್, ಪ್ರೊ. ಅನಿತಾ ಸಕ್ಸೇನಾ, ಪ್ರೊ. ಪಲ್ಲವಿ ಸಪ್ರೆ, ಡಾ. ಪದ್ಮಾ ಶ್ರೀವಾಸ್ತವ

ಕೇಂದ್ರದ ಸಂಪುಟ ಕಾರ್ಯದರ್ಶಿ, ಗೃಹ ಕಾರ್ಯದರ್ಶಿ, ಆರೋಗ್ಯ ಸಚಿವಾಲಯದ ಕಾರ್ಯದರ್ಶಿ, ರಾಷ್ಟ್ರೀಯ ವೈದ್ಯಕೀಯ ಆಯೋಗದ ಅಧ್ಯಕ್ಷ, ರಾಷ್ಟ್ರೀಯ ಪರೀಕ್ಷಾ ಮಂಡಳಿಯ ಅಧ್ಯಕ್ಷ ಪದನಿಮಿತ್ತ ಸದಸ್ಯರಾಗಿರುತ್ತಾರೆ

ಸುರಕ್ಷತೆಯ ಬಗ್ಗೆ ಕೋರ್ಟ್ ಕಳವಳ

ನವದೆಹಲಿ (ಪಿಟಿಐ): ಆರೋಗ್ಯ ಸೇವೆಗಳನ್ನು ಒದಗಿಸುವ ಸಂಸ್ಥೆಗಳಲ್ಲಿನ ಸುರಕ್ಷತಾ ಕ್ರಮಗಳ ಕೊರತೆಯ ಬಗ್ಗೆ ಸುಪ್ರೀಂ ಕೋರ್ಟ್ ಕಳವಳ ವ್ಯಕ್ತಪಡಿಸಿದೆ. ತಳಮಟ್ಟದಲ್ಲಿ ನಿಜವಾದ ಬದಲಾವಣೆಗಳು ಆಗಲು ಇನ್ನೊಂದು ಅತ್ಯಾಚಾರ ಅಥವಾ ಹತ್ಯೆ ನಡೆಯುವವರೆಗೆ ದೇಶವು ಕಾಯುತ್ತ ಕೂರಲು ಸಾಧ್ಯವಿಲ್ಲ ಎಂದು ಆಕ್ರೋಶದಿಂದ ಹೇಳಿದೆ.

‘ಸಮಾನತೆಯು ಬೇರೆ ಏನನ್ನೂ ಕೇಳುವುದಿಲ್ಲ. ಇತರರಿಗೆ ಆರೋಗ್ಯಸೇವೆಗಳನ್ನು ಒದಗಿಸುವವರ ಆರೋಗ್ಯ, ಸುರಕ್ಷತೆಯ ವಿಚಾರದಲ್ಲಿ ಹೊಂದಾಣಿಕೆ ಮಾಡಿಕೊಳ್ಳುವುದನ್ನು ಸಹಿಸಲಾಗದು’ ಎಂದು ಪೀಠ ಹೇಳಿದೆ. ಆಸ್ಪತ್ರೆಗಳು ಹಾಗೂ ಇತರ ಆರೋಗ್ಯಸೇವಾ ಕೇಂದ್ರಗಳು ಯಾವಾಗಲೂ ತೆರೆದಿರುತ್ತವೆ. ಇವುಗಳಿಗೆ ಎಲ್ಲರಿಗೂ ಅನಿಯಂತ್ರಿತ ಪ್ರವೇಶ ಇರುವ ಕಾರಣ ಆರೋಗ್ಯಸೇವಾ ವೃತ್ತಿನಿರತರು ಹಿಂಸಾಚಾರಕ್ಕೆ ಒಳಗಾಗುವಂತೆ ಆಗಿದೆ ಎಂದು ಹೇಳಿದೆ.

ಸಂಜಯ್ ಸಿಂಗ್ ಬಂಧನಕ್ಕೆ ಕೋರ್ಟ್ ಆದೇಶ

ಪ್ರಜಾವಾಣಿ ವಾರ್ತೆ

ಲಖನೌ: 23 ವರ್ಷಗಳಷ್ಟು ಹಳೆಯ ಪ್ರಕರಣಕ್ಕೆ ಸಂಬಂಧಿಸಿ, ಎಎಪಿ ರಾಜ್ಯ ಸಭಾ ಸದಸ್ಯ ಸಂಜಯ್ ಸಿಂಗ್ ಬಂಧನಕ್ಕೆ ಉತ್ತರ ಪ್ರದೇಶದ ನ್ಯಾಯಾಲಯವೊಂದು ಮಂಗಳವಾರ ಆದೇಶಿಸಿದೆ.

ಆ.28ರಂದು ಸಂಜಯ್ ಸಿಂಗ್ ಅವರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸುವಂತೆ ಸುಲ್ತಾನಪುರದ ಸಂಸದರ/ಶಾಸಕರ ನ್ಯಾಯಾಲಯದ ನ್ಯಾಯಾಧೀಶ ಯೋಗೇಶ್ ಯಾದವ್, ಪೊಲೀಸರಿಗೆ ನಿರ್ದೇಶನ ನೀಡಿದ್ದಾರೆ.

ಪರವಾನಗಿ ಪಡೆಯದವರಿಗೂ ವಿದ್ಯುತ್ ಪೂರೈಸಲಾಗುತ್ತಿದೆ ಎಂದು ಆರೋಪಿಸಿ, 2001ರಲ್ಲಿ ಪ್ರತಿಭಟನೆ ನಡೆಸಿ, ರಸ್ತೆ ಬಂದ್ ಮಾಡಲಾಗಿತ್ತು. ಇದಕ್ಕೆ ಸಂಬಂಧಿಸಿ, ಸಂಜಯ್ ಸಿಂಗ್, ಸಮಾಜವಾದಿ ಪಕ್ಷದ ವಕ್ತಾರ ಅನೂಪ್ ಸಂದಾ ಹಾಗೂ ಇತರರ ವಿರುದ್ಧ ಪ್ರಕರಣ ದಾಖಲಿಸಲಾಗಿತ್ತು. ಸಂಜಯ್ ಸಿಂಗ್, ಅನೂಪ್ ಹಾಗೂ ಇತರರಿಗೆ ಮೂರು ತಿಂಗಳು ಜೈಲು ಶಿಕ್ಷೆ ಹಾಗೂ ತಲಾ ₹1,500 ದಂಡ ವಿಧಿಸಿ, ನ್ಯಾಯಾಧೀಶ ಯಾದವ್ 2023ರ ಜನವರಿಯಲ್ಲಿ ಆದೇಶ ನೀಡಿದ್ದರು. ಈ ಆದೇಶದ ವಿರುದ್ಧ ಸಂಜಯ್ ಸಿಂಗ್ ಹಾಗೂ ಇತರರು ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರೂ, ಅವರಿಗೆ ಪರಿಹಾರ ಸಿಕ್ಕಿಲ್ಲ. ಆಗಸ್ಟ್ 9ರಂದು ನ್ಯಾಯಾಲಯದ ಮುಂದೆ ಶರಣಾಗುವಂತೆ ಎಲ್ಲರಿಗೂ ಸೂಚಿಸಲಾಗಿತ್ತು. ಆದರೆ, ಅವರು ಶರಣಾಗಿರಲಿಲ್ಲ.

ಇಂದು ‘ಭಾರತ ಬಂದ್’ಗೆ ಕರೆ


ನವದೆಹಲಿ (ಪಿಟಿಐ): ಹಿಂದುಳಿದ ಸಮುದಾಯಗಳಿಗೆ ರಕ್ಷಣೆ ಒದಗಿಸುವುದೂ ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ದಲಿತ ಮತ್ತು ಆದಿವಾಸಿ ಸಂಘಟನೆಗಳು ಬುಧವಾರ ಭಾರತ ಬಂದ್‌ಗೆ ಕರೆ ನೀಡಿವೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರ ಹಿಂದುಳಿದ ವರ್ಗಗಳಿಗೆ (ಒಬಿಸಿ) ನ್ಯಾಯ ಮತ್ತು ಸಮಾನತೆ ಒದಗಿಸುವುದೂ ಸೇರಿ ಹಲವು ಬೇಡಿಕೆಗಳ ಪಟ್ಟಿಯನ್ನು ದಲಿತ ಮತ್ತು ಆದಿವಾಸಿ ಸಂಘಟನೆಗಳ ರಾಷ್ಟ್ರೀಯ ಒಕ್ಕೂಟವು ಸರ್ಕಾರದ ಮುಂದಿಟ್ಟಿದೆ. ವಿವಿಧೆಡೆ ಆಯೋಜಿಸುವ ಶಾಂತಿಯುತ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ದಲಿತರು, ಆದಿವಾಸಿಗಳು ಮತ್ತು ಒಬಿಸಿಯವರಿಗೆ ಒಕ್ಕೂಟವು ಮನವಿ ಮಾಡಿದೆ.

ಸಿಂಕ್ವೆಫೀಲ್ಡ್ ಕಪ್ ಚೆಸ್ ಟೂರ್ನಿ

‘ಡ್ರಾ’ ಪಂದ್ಯಗಳಲ್ಲಿ ಗುಕೇಶ್


ಆರ್‌. ಪ್ರಜ್ಞಾನಂದ


ಡಿ.ಗುಕೇಶ್

ಸೇಂಟ್ ಲೂಯಿ (ಅಮೆರಿಕ), (ಪಿಟಿಐ): ಭಾರತದ ಗ್ರ್ಯಾಂಡ್‌ಮಾಸ್ಟರ್ ಡಿ.ಗುಕೇಶ್ ಅವರು ಸಿಂಕ್ವೆಫೀಲ್ಡ್ ಕಪ್ ಚೆಸ್ ಟೂರ್ನಿಯ ಮೊದಲ ಸುತ್ತಿನಲ್ಲಿ ಹಾಲಿ ವಿಶ್ವ ಚಾಂಪಿಯನ್ ಡಿಂಗ್ ಲಿರೆನ್ ಅವರೊಡನೆ ‘ಡ್ರಾ’ ಮಾಡಿಕೊಂಡರು.

ಇವರಿಬ್ಬರು ಈ ವರ್ಷಾಂತ್ಯದಲ್ಲಿ ವಿಶ್ವ ಚಾಂಪಿಯನ್‌ಷಿಪ್ ಫೈನಲ್‌ನಲ್ಲಿ ಎದುರಾಗಲಿದ್ದು, ಸೋಮವಾರ ನಡೆದ ಈ ಹಣಾಹಣಿ ಕುತೂಹಲ ಕೆರಳಿಸಿತು. ಕಳೆದ ಏಪ್ರಿಲ್‌ನಲ್ಲಿ ಕೆನಡಾದಲ್ಲಿ ನಡೆದಿದ್ದ ಕ್ಯಾಂಡಿಡೇಟ್ಸ್ ಟೂರ್ನಿ ಗೆಲ್ಲುವ ಮೂಲಕ ಗುಕೇಶ್ ಅವರು ವಿಶ್ವ ಚಾಂಪಿಯನ್‌ಗೆ ಚಾಲೆಂಜರ್ ಆಗುವ ಅರ್ಹತೆ ಸಂಪಾದಿಸಿದ್ದರು.

ಹತ್ತು ಆಟಗಾರರು ಪಾಲ್ಗೊಂಡಿರುವ ಈ ಟೂರ್ನಿ ರೌಂಡ್ ರಾಬಿನ್ ಮಾದರಿಯಲ್ಲಿ ನಡೆಯುತ್ತಿದ್ದು, ಕ್ಲಾಸಿಕಲ್ ಆಟ ಮಾತ್ರ ಇರುತ್ತದೆ. ಟೂರ್ನಿಯು ₹2.93 ಕೋಟಿ ಬಹುಮಾನ ಮೊತ್ತ ಹೊಂದಿದ್ದು, ಆಗಸ್ಟ್ 29ರವರೆಗೆ ನಡೆಯಲಿದೆ. ಈ ಟೂರ್ನಿ ಗ್ರ್ಯಾಂಡ್ ಚೆಸ್ ಟೂರ್ ಸರಣಿಯ ಐದನೇ ಹಾಗೂ ಕೊನೆಯದಾಗಿದೆ.

ಬಿಳಿ ಕಾಯಿಗಳಲ್ಲಿ ಆಡಿದ ಗುಕೇಶ್ ಎದುರು ಸಿದ್ಧಮಾದರಿಯಲ್ಲೇ ಲಿರೆನ್ ಆಡಿದರು. ಲಿರೆನ್ ಕೊನೆಯಲ್ಲಿ ಬಿಷಪ್ ಮತ್ತು ರೂಕ್ ಬಿಟ್ಟುಕೊಟ್ಟರು. ಆದರೆ ಅದರಿಂದ ಹೆಚ್ಚಿನ ಪ್ರಯೋಜನವಾಗ-ಲಿಲ್ಲ. ‘ಪರ್‌ಪೆಚ್ಯುವಲ್ ಚೆಕ್’ ಮೂಲಕ ಪಂದ್ಯ ಮುಗಿಸಲು ಚೀನಾದ ಆಟಗಾರ ಒಲವು ತೋರಿದ್ದರಿಂದ ಪಂದ್ಯ ಡ್ರಾ ಆಯಿತು. ಮುಂದಿನ ಸುತ್ತಿನಲ್ಲಿ ಗುಕೇಶ್, ಫಿಡೆಯನ್ನು ಪ್ರತಿನಿಧಿಸುತ್ತಿರುವ ರಷ್ಯಾದ ಆಟಗಾರ ಇಯಾನ್ ನಿಪೊಮ್‌ನಿಷಿ ಅವರನ್ನು ಎದುರಿಸಲಿದ್ದಾರೆ.

ಕಳೆದ ವಾರ ಸೇಂಟ್ ಲೂಯಿ ರ್‍ಯಾಪಿಡ್ ಮತ್ತು ಬ್ಲಿಟ್ಜ್ ಟೂರ್ನಿಯಲ್ಲಿ ನಿರಾಶೆ ಅನುಭವಿಸಿದ್ದ ಭಾರತದ ಇನ್ನೊಬ್ಬ ತಾರೆ ಆರ್.ಪ್ರಜ್ಞಾನಂದ ಅವರು ಈ ಟೂರ್ನಿಯ ಮೊದಲ ಸುತ್ತಿನಲ್ಲೇ ಸುಧಾರಿತ ಪ್ರದರ್ಶನ ನೀಡಿ ಉಜ್ಬೇಕಿಸ್ತಾನದ ನಾಡಿರ್ಬೆಕ್ ಅಬ್ದುಸತ್ತಾರೋವ್ ಜೊತೆ ‘ಡ್ರಾ’ ಮಾಡಿಕೊಂಡರು.

ಮಧ್ಯಮಹಂತದ ಆರಂಭದಲ್ಲಿ ಇಬ್ಬರೂ ಕ್ವೀನ್‌ಗಳನ್ನು ಕಳೆದುಕೊಂಡರು. ಪಂದ್ಯ 36 ನಡೆಗಳನ್ನು ಕಂಡಿತು. ಪ್ರಜ್ಞಾನಂದ ಎರಡನೇ ಸುತ್ತಿನಲ್ಲಿ ಫ್ರಾನ್ಸ್‌ನ ಮ್ಯಾಕ್ಸಿಂ ವೇಷಿಯರ್ ಲಗ್ರಾವ್ ಅವರನ್ನು ಎದುರಿಸುವರು.

ಕಳೆದ ವಾರ ಸೇಂಟ್ ಲೂಯಿ ಟೂರ್ನಿಯಲ್ಲಿ ಚಾಂಪಿಯನ್ ಆಗಿದ್ದ ಇರಾನ್ ಮೂಲದ ಫ್ರಾನ್ಸ್ ಆಟಗಾರ ಅಲಿರೇಜಾ ಫೀರೋಜ್ ಯಶಸ್ಸಿನ ಓಟ ಮುಂದುವರಿಸಿ, ಅಮೆರಿಕದ ಫ್ಯಾಬಿಯಾನೊ ಕರುವಾನ ಅವರನ್ನು ಮಣಿಸಿದರು. ದಿನದ ಐದು ಪಂದ್ಯಗಳಲ್ಲಿ ಇದೊಂದೇ ಪಂದ್ಯ ನಿರ್ಣಾಯಕ ಫಲಿತಾಂಶ ಕಂಡಿತು.

ಮೊದಲ ಸುತ್ತಿನ ಇತರ ಪಂದ್ಯಗಳಲ್ಲಿ ಅಮೆರಿಕದ ವೆಸ್ಲಿ ಸೊ, ನೆದರ್ಲೆಂಡ್ಸ್‌ನ ಅನೀಶ್ ಗಿರಿ ಜೊತೆ ಡ್ರಾ ಮಾಡಿಕೊಂಡರೆ, ನಿಪೊಮ್‌ನಿಷಿ, ವೇಷಿಯರ್ ಲಗ್ರಾವ್ ಜೊತೆ ಡ್ರಾ ಮಾಡಿಕೊಂಡರು.

ಖಿನ್ನತೆಗೆ ಪರಿಹಾರಗಳಿವೆ ಎಂದ ಉತ್ತಪ್ಪ


ರಾಬಿನ್ ಉತ್ತಪ್ಪ

ನವದೆಹಲಿ (ಪಿಟಿಐ): ‘ಮಾನಸಿಕ ಖಿನ್ನತೆ ಮತ್ತು ಆತ್ಮಹತ್ಯೆ ನಿರ್ಧಾರಗಳಿಂದ ಹೊರಬರಲು ದಾರಿಗಳಿವೆ. ಸ್ವವಿಮರ್ಶೆ ಮತ್ತು ಆಪ್ತರೊಂದಿಗೆ ಮಾತುಕತೆಗಳಿಂದ ಈ ಸಮಸ್ಯೆಗಳಿಂದ ಪರಿಹಾರ ಕಂಡುಕೊಳ್ಳಬಹುದು’ ಎಂದು ಭಾರತ ಕ್ರಿಕೆಟ್ ತಂಡದ ಮಾಜಿ ಆಟಗಾರ, ಕನ್ನಡಿಗ ರಾಬಿನ್ ಉತ್ತಪ್ಪ ಹೇಳಿದ್ದಾರೆ.

ಮಂಗಳವಾರ ರಾಬಿನ್ ಅವರು ತಮ್ಮ ಯೂಟ್ಯೂಬ್ ವಾಹಿನಿಯಲ್ಲಿ ವಿಡಿಯೊ ಹಾಕಿದ್ದು, ‘ನಾನೀಗ ಖಿನ್ನತೆ ಮತ್ತು ಆತ್ಮಹತ್ಯೆಯ ಕುರಿತು ಮಾತನಾಡು-ತ್ತಿರುವೆ. ಇತ್ತೀಚಿನ ದಿನಗಳಲ್ಲಿ ಕೆಲವು ಕ್ರಿಕೆಟಿಗರೂ ಸೇರಿದಂತೆ ಹಲವರು ಖಿನ್ನತೆಯಿಂದಾಗಿ ಆತ್ಮಹತ್ಯೆ ಮಾಡಿಕೊಂಡಿರುವ ಸುದ್ದಿ ಕೇಳಿದ್ದೇವೆ. ಈಹಿಂದೆಯು ಹಲವರು ಇಂತಹ ಖಿನ್ನತೆಯಿಂದ ಬಳಲಿದ ಇತಿಹಾಸವಿದೆ. ನಾನು ಕೂಡ ಅನುಭವಿಸಿದ್ದೇನೆ. ಅದರಿಂದ ಹೊರಬಹುದು ಕಠಿಣ ಸವಾಲಾಗಿದೆ. ಜೀವನ ಹೊರೆಯಾದಂತೆ ಭಾಸವಾಗುತ್ತದೆ. ಈ ಸಮಸ್ಯೆ ಪರಿಹಾರ ಅಷ್ಟು ಸುಲಭವಲ್ಲ’ ಎಂದಿದ್ದಾರೆ.

2009ರಿಂದ 2011ರ ಅವಧಿಯಲ್ಲಿ ತಾವು ಕೂಡ ಗಂಭಿರ ಸಮಸ್ಯೆಗೆ ಒಳಗಾಗಿದ್ದಾಗಿ ರಾಬಿನ್ ಹೇಳಿದ್ದಾರೆ. ರಾಬಿನ್ ಭಾರತ ತಂಡವನ್ನು 46 ಏಕದಿನ ಮತ್ತು 13 ಟಿ20 ಪಂದ್ಯಗಳಲ್ಲಿ ಪ್ರತಿ-ನಿಧಿಸಿದ್ದಾರೆ.

ಈಚೆಗೆ ಇಂಗ್ಲೆಂಡ್ ಕ್ರಿಕೆಟಿಗ ಗ್ರಹಾಂ ಥೋರ್ಪ್ ಮತ್ತು ಕರ್ನಾಟಕದ ಮಾಜಿ ಕ್ರಿಕೆಟಿಗ ಡೇವಿಡ್ ಜಾನ್ಸನ್ ಅವರು ಖಿನ್ನತೆಯ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡ ಪ್ರಕರಣಗಳು ನಡೆದಿದ್ದವು.

‘ಗ್ರಹಾಂ ಥೋರ್ಪ್ ಅವರ ಬಗ್ಗೆ ನನ್ನ ಮನಸ್ಸು ಮಿಡಿಯುತ್ತದೆ. ಅವರ ಕುಟುಂಬಕ್ಕೆ ಇದು ಬಹಳ ದೊಡ್ಡ ಆಘಾತ. ಅವರ ದುಃಖದಲ್ಲಿ ನಾನು ಭಾಗಿಯಾಗಿರುವೆ. ಭಾರತದ ಆಟಗಾರ ಡೇವಿಡ್ ಜಾನ್ಸನ್ ಅವರೂ ಇಂತಹದೇ ಪರಿ-ಸ್ಥಿತಿಯನ್ನು ಅನುಭವಿಸಿದ್ದಾರೆ’ ಎಂದು ರಾಬಿನ್ ಸಂತಾಪ ಸೂಚಿಸಿದ್ದಾರೆ.

‘ನಾನು ಹಲವು ವಾರಗಳು ಮತ್ತು ತಿಂಗಳುಗಳ ಕಾಲ ಖಿನ್ನತೆ ಅನುಭವಿಸಿರುವೆ. ಇರುವ ಸಮಸ್ಯೆಯನ್ನು ಕಡೆಗಣಿಸುವುದು ಅಥವಾ ಅಲ್ಲಗಳೆ-ಯುವುದರಿಂದ ಪರಿಹಾರ ಅಸಾಧ್ಯ‘ ಎಂದಿದ್ದಾರೆ.

‘ಈ ಸಮಸ್ಯೆಯಿಂದ ಹೊರಬರಲು ನಾಲ್ಕು ಬಗೆಯ ದಾರಿಗಳನ್ನು ಅನುಸರಿಸಬಹುದು. ಮೊದಲನೇಯದಾಗಿ; ಸಮಸ್ಯೆ ಇರುವುದನ್ನು ಒಪ್ಪಿಕೊಳ್ಳಬೇಕು. ಆಗ ಕತ್ತಲೆ ಕೂಪದಿಂದ ಹೊರಬರಲು ದಾರಿ ತೋಚುತ್ತದೆ. ಈ ಹಂತದಲ್ಲಿ ನಮ್ಮ ಮನದ ಭಾವನೆಗಳನ್ನು ಬರೆದಿಡಲು ಆರಂಭಿಸಬೇಕು. ಎರಡನೇಯದಾಗಿ, ನಮ್ಮ ತಪ್ಪು ಅರಿವಿಗೆ ಬರುತ್ತದೆ. ನಾವು ವಿಶ್ವಾಸವಿಡುವ ವ್ಯಕ್ತಿಗಳ ಮುಂದೆ ಭಾವನೆಗಳನ್ನು ಮುಕ್ತವಾಗಿ ಹಂಚಿಕೊಳ್ಳಬೇಕು. ಮೂರನೇಯದಾಗಿ ವೃತ್ತಿಪರ ಮನೋಶಾಸ್ತ್ರಜ್ಞರ ನೆರವು ಪಡೆಯಬೆಕು. ನಾಲ್ಕನೇಯದಾಗಿ ಉತ್ತಮವಾದ ಆಪ್ತಸಮಾಲೋಚಕರು ಯಾರು ಎಂಬುದನ್ನು ಗುರುತಿಸಬೇಕು. ನಮಗೆ ಸೂಕ್ತವಾದ ಪ್ರಶ್ನೆಗಳನ್ನು ಕೇಳುವವರೇ ಸರಿಯಾದ ವೃತ್ತಿಪರರು. ನಾವೇ ನಮ್ಮ ಸಮಸ್ಯೆಗಳಿಗೆ ಉತ್ತರ ಕಂಡುಕೊಳ್ಳಲು ಅವರು ನೆರವಾಗುತ್ತಾರೆ. ಇದರಿಂದಾಗಿ ನಮ್ಮಲ್ಲಿ ವಿಶ್ವಾಸ ಹೆಚ್ಚುತ್ತದೆ’ ಎಂದು ಉತ್ತಪ್ಪ ಸಲಹೆ ನೀಡಿದ್ದಾರೆ.

ತೆರೆಗೆ ಬರಲಿದೆ ಯುವರಾಜ್ ಸಿಂಗ್ ಬಯೋಪಿಕ್


ಯುವರಾಜ್

ಮುಂಬೈ (ಪಿಟಿಐ): ಭಾರತ ಕ್ರಿಕೆಟ್ ತಂಡದ ಮಾಜಿ ಆಲ್‌ರೌಂಡರ್ ಯುವರಾಜ್ ಸಿಂಗ್ ಅವರ ಜೀವನ ಗಾಥೆಯು ಚಲನಚಿತ್ರವಾಗಲಿದೆ.

ಭೂಷಣ್ ಕುಮಾರ್ ಅವರ ಟಿ ಸಿರೀಸ್ ಸಂಸ್ಥೆ ಮತ್ತು ರವಿ ಭಾಗಚಂದಕಾ ಅವರ ಸಹನಿರ್ಮಾಣದಲ್ಲಿ ಈ ಬಯೋಪಿಕ್ ನಿರ್ಮಾಣವಾಗಲಿದೆ. ಇದೇ ಸಂಸ್ಥೆಯು ‘ಸಚಿನ್; ಎ ಬಿಲಿಯನ್ ಡ್ರೀಮ್ಸ್’ ಮತ್ತು ಮುಂಬರಲಿರುವ ಆಮೀರ್ ಖಾನ್ ನಟನೆಯ ‘ಸಿತಾರೆ ಝಮೀನ್ ಪರ್’ ಚಿತ್ರ ನಿರ್ಮಾಣ ಮಾಡಿದೆ.

‘ಯುವರಾಜ್ ಸಿಂಗ್ ಅವರು ತಮ್ಮ 13ನೇ ವಯಸ್ಸಿನಲ್ಲಿ ಕ್ರಿಕೆಟ್ ಆಡಲು ಆರಂಭಿಸಿದ್ದರು. ಪಂಜಾಬ್ ರಾಜ್ಯದ ಎಡಗೈ ಆಲ್‌ರೌಂಡರ್ ಯುವಿ, 2007ರ ಟಿ20 ವಿಶ್ವಕಪ್ ಮತ್ತು 2011ರ ಏಕದಿನ ವಿಶ್ವಕಪ್ ಟೂರ್ನಿಗಳಲ್ಲಿ ಭಾರತವು ಪ್ರಶಸ್ತಿ ಜಯಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಆದರೆ ಕ್ಯಾನ್ಸರ್ ಅವರನ್ನು ಕಾಡಿತ್ತು. ಆದರೂ ಛಲಬಿಡದೇ ಹೋರಾಡಿ ಗುಣ-ಮುಖರಾಗಿದ್ದ ಅವರು 2012ರಲ್ಲಿ ಮತ್ತೆ ಕ್ರಿಕೆಟ್‌ಗೆ ಮರಳಿದ್ದರು. ಅವರ ದಿಟ್ಟತನದ ಜೀವನವು ಯುವಜನತೆಗೆ ಸ್ಫೂರ್ತಿಯಾಗಲಿದೆ’ ಎಂದು ಸಂಸ್ಥೆಯು ಪ್ರಕಟಣೆಯಲ್ಲಿ ತಿಳಿಸಿದೆ.

ಕುಮಾರ್ ಅವರ ನಿರ್ಮಾಣದಲ್ಲಿ ದೃಶ್ಯಂ 2, ಎನಿಮಲ್, ಭೂಲ್ ಭೂಲಯ್ಯಾ 2, ಕಬೀರ್ ಸಿಂಗ್ ಮತ್ತು ತಾನಾಜಿ; ದ ಅನ್‌ಸಂಗ್ ವಾರಿಯರ್ಸ್ ಚಿತ್ರಗಳು ಪ್ರಮುಖವಾಗಿವೆ.

‘ಲಕ್ಷಾಂತರ ಜನರಿಗೆ ನನ್ನ ಜೀವನಗಾಥೆಯನ್ನು ಸಿನಿಮಾದ ಮೂಲಕ ತಲುಪಿಸುತ್ತಿರುವುದು ಸಂತಸ ತಂದಿದೆ. ಭೂಷಣ್ ಮತ್ತು ರವಿ ಅವರ ಕ್ರಿಕೆಟ್ ಪ್ರೀತಿ ಶ್ಲಾಘನೀಯ’ ಎಂದು ಯುವಿ ಹೇಳಿದ್ದಾರೆ.

ಬಿಟಿಸಿಯಲ್ಲಿ ಕಮ್ಯುನಿಟಿ ಔಟ್ ರೀಚ್ ಇಂದು

ಬೆಂಗಳೂರು: ವಾರಾಂತ್ಯದಲ್ಲಿ ನಡೆಯಲಿರುವ ಡರ್ಬಿ ರೇಸ್ ಅಂಗವಾಗಿ ಬೆಂಗಳೂರು ಟರ್ಫ್ ಕ್ಲಬ್‌ನಲ್ಲಿ ಬುಧವಾರ ಕಮ್ಯುನಿಟಿ ಔಟ್ ರೀಚ್ ಕಾರ್ಯಕ್ರಮ ಆಯೋಜಿಸಲಾಗಿದೆ.

ರಕ್ತದಾನ, ನೇತ್ರ ತಪಾಸಣೆ, ಆರೋಗ್ಯ ತಪಾಸಣೆ ಹಾಗೂ ಗಾಲಿಕುರ್ಚಿ ವಿತರಣೆ ನಡೆಯಲಿದೆ. ಬಿಟಿಸಿಯಲ್ಲಿ ಬೆಳಿಗ್ಗೆ 9ರಿಂದ ಸಂಜೆ 5ರವರೆಗೆ ನಡೆಯಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.